ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 21, ಸಂಚಿಕೆ: 133, ಪುಟಗಳು: 8, ಗುರುವಾರ, 22 ಫೆಬ್ರವರಿ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ


ವೇಣು ಸಾರಥ್ಯದಲ್ಲಿ...

ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಗುರುವಾರ 22, ಫೆಬ್ರವರಿ -2024)

- ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಮಾಘ ಮಾಸ, ಶುಕ್ಲ ಪಕ್ಷ,
- ಪುನರ್ವಸು ನಕ್ಷತ್ರ
- ದ್ವಾದಶಿ: ತಿಥಿ
- ರಾಹುಕಾಲ- 01:57 PM 03:28 PM
- ಗುಳಿಕಕಾಲ - 09:24 AM 10:55 AM
- ಯಮಗಂಡಕಾಲ - 06:22 AM 07:53 AM

## ಸಮವಸ್ತ್ರ ಧರಿಸಿದ ಪೊಲೀಸರೇ ಅಗ್ನಿಕುಂಡದಲ್ಲಿ ಹೆಜ್ಜೆ ಹಾಕಿದರು
# ಇದೆಂಥಾ ಮೌಢ್ಯ!

**ತೆಲಂಗಾಣ:** ತೆಲಂಗಾಣ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಇಂತಹ ದುಸ್ಸಾಹಸಕ್ಕೆ ಯಾಕೆ ಕೈಹಾಕಿದರೋ ಆ ದೇವರೇ ಹೇಳಬೇಕು. ತೆಲಂಗಾಣ ಪೊಲೀಸ್ ಸಿಬ್ಬಂದಿ ಯಾವುದೇ ಆತಂಕ, ಉದ್ವೇಗವಿಲ್ಲದೆ, ಸಮರ್ಪಣಾಭಾವದಿಂದ ನಿಗಿನಿಗಿ ಕೆಂಡಗಳಿರುವ ಬೆಂಕಿಯಲ್ಲಿ ಹೆಜ್ಜೆ ಹಾಕುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ನಲ್ಲಗೊಂಡ ಜಿಲ್ಲೆಯ ನಾರ್ಕಟ್ ಪಲ್ಲಿ ಮಂಡಲದಲ್ಲಿ ವಾರ್ಷಿಕ ಚೆರುವುಗುತ್ತು ಜಾತ್ರೆಯ ಅಂಗವಾಗಿ ಸಮವಸ್ತ್ರ ಧರಿಸಿದ ಪೊಲೀಸರು ಈ ಕಾರ್ಯದಲ್ಲಿ ಭಾಗವಹಿಸಿದ್ದರು. ಗಮನಾರ್ಹವೆಂದರೆ ಈ ಘಟನೆಗೂ ತನ್ನ ಇಲಾಖೆಗೂ ಯಾವುದೇ ಸಂಬಂಧವಿಲ್ಲ ಎಂದು ತೆಲಂಗಾಣ ಪೊಲೀಸ್ ಇಲಾಖೆ ಸ್ಪಷ್ಟಪಡಿಸಿದೆ. ಪುಟ 2



## ಪ್ಯಾಂಟ್ ಒಳಗಡೆ ಪೌಡರ್ ರೂಪದ ಚಿನ್ನ ಸಾಗಟ
# ಪ್ರಯಾಣಿಕ ವಶಕ್ಕೆ

**ಬೆಂಗಳೂರು:** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಬಳಿಯ ಕೆಂಪೇಗೌಡ ಏರ್ ಪೋರ್ಟ್ ನಲ್ಲಿ 22.5 ಲಕ್ಷ ಮೌಲ್ಯದ ಚಿನ್ನ ಜಪ್ತಿ ಮಾಡಲಾಗಿದೆ. ಏರ್ಪೋರ್ಟ್ ಕಸ್ಟಮ್ಸ್ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ ಪ್ಯಾಂಟ್ ಒಳಗಡೆ ಪೌಡರ್ ರೂಪದ ಚಿನ್ನ ಸಾಗಿಸುತ್ತಿದ್ದ ಪ್ರಯಾಣಿಕನಿಂದ ಚಿನ್ನ ಜಪ್ತಿ ಮಾಡಿದ್ದಾರೆ. ಹಾಗೂ ಪ್ರಯಾಣಿಕನನ್ನು ವಶಕ್ಕೆ ಪಡೆಯಲಾಗಿದೆ. ಶಾರ್ಜಾದಿಂದ ಕೆಐಎಬಿಗೆ ವಿಮಾನದಲ್ಲಿ ಬಂದಿಳಿದಿದ್ದ ಆರೋಪಿ ಕಸ್ಟಮ್ ಅಧಿಕಾರಿಗಳ ಕಣ್ತಪ್ಪಿಸಲು ಡಿಸೈನ್ ಪ್ಯಾಂಟ್ ಮಾಡಿಸಿದ್ದ. ಪ್ಯಾಂಟ್ ಒಳಗಡೆ



ಲೇಯರ್‌ಗಳನ್ನ ಮಾಡಿ ಚಿನ್ನ ಅಡಗಿಸಿಟ್ಟಿದ್ದ. ಪೌಡರ್ ರೂಪದ ಚಿನ್ನವನ್ನ ಅಡಗಿಸಿ ಸಾಗಾಟ ಮಾಡಲು ಯತ್ನಿಸಿದ್ದ. ಸದ್ಯ ಕಸ್ಟಮ್ಸ್ ಅಧಿಕಾರಿಗಳ ಚಾಣಾಕ್ಷತನದಿಂದ 22.5 ಲಕ್ಷ ಮೌಲ್ಯದ 367 ಗ್ರಾಂ ಚಿನ್ನ ಜಪ್ತಿಯಾಗಿದೆ. ಆರೋಪಿಯನ್ನು ವಶಕ್ಕೆ ಪಡೆಯಲಾಗಿದೆ. ಪುಟ 2

## ದೆಹಲಿ ಚಲೋ: ರೈತ ಸಾವು
# 2 ದಿನ ತಾತ್ಕಾಲಿಕ ಸ್ಥಗಿತ

**ನವದೆಹಲಿ:** ಮಾರ್ಗಮಧ್ಯೆ ರೈತರೊಬ್ಬರು ಸಾವನ್ನಪ್ಪಿರುವ ಹಿನ್ನೆಲೆಯಲ್ಲಿ ರೈತರ ಪ್ರತಿಭಟನೆ ಯನ್ನು ಎರಡು ದಿನಗಳ ಕಾಲ ಸ್ಥಗಿತಗೊಳಿಸಲಾಗಿದೆ. ಪಂಜಾಬ್ -ಹರ್ಯಾಣದ ಎರಡು ಪ್ರತಿಭಟನಾ ಸ್ಥಳಗಳಲ್ಲಿ ಒಂದಾದ ಖಾನೌರಿ ಗಡಿಯಲ್ಲಿ ನಡೆದ ಘರ್ಷಣೆಯಲ್ಲಿ ಪ್ರತಿಭಟನಾಕಾರರೊಬ್ಬರು ಸಾವನ್ನಪ್ಪಿದ್ದಾರೆ. ಶುಭ್ ಕರಣ್ ಸಿಂಗ್ ಅವರನ್ನು ಪಟಿಯಾಲಾ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು, ಅವರಿಗೆ ಬುಲೆಟ್ ಗಳು ತಗುಲಿತ್ತು ಎಂದು ವೈದ್ಯರು ಹೇಳಿದ್ದಾರೆ. ದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ.

ಖಾನೌರಿಯಿಂದ ನಮ್ಮ ಬಳಿಗೆ ಮೂವರು ರೋಗಿಗಳು ಬಂದಿದ್ದರು. ಅವರಲ್ಲಿ ಒಬ್ಬರು ಬರುವಾಗಲೇ ಮೃತಪಟ್ಟಿದ್ದರು, ಇನ್ನಿಬ್ಬರ ಆರೋಗ್ಯ ಸ್ಥಿರವಾಗಿದೆ ಬುಲೆಟ್ ಗಾಯಗಳಾಗಿವೆ ಎಂದು ವೈದ್ಯರು ತಿಳಿಸಿದ್ದಾರೆ. ರೈತ ಮುಖಂಡ ಬಲದೇವ್ ಸಿಂಗ್ ಸಿರ್ಸಾ ಮಾತನಾಡಿ, ಮೃತರನ್ನು ಪಂಜಾಬ್‌ನ ಬಟಿಂಡಾ ಜಿಲ್ಲೆಯ ಬಲೋಕೆ ಗ್ರಾಮದ ನಿವಾಸಿ ಶುಭಕರಣ್ ಸಿಂಗ್ (21) ಎಂದು ಗುರುತಿಸಲಾಗಿದೆ.

ಪಟಿಯಾಲ ಮೂಲದ ರಾಜಿಂದರ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಎಚ್ ಎಸ್ ರೇಖಿ ಮಾತನಾಡಿ, ಖಾನೌರಿಯಿಂದ ಮೂವರನ್ನು ಆಸ್ಪತ್ರೆಗೆ ಕರೆತರಲಾಗಿದ್ದು, ಅವರಲ್ಲಿ ಒಬ್ಬರು ಸಾವನ್ನಪ್ಪಿದ್ದಾರೆ. ಮೃತರ ತಲೆಗೆ ಗಾಯವಾಗಿದ್ದು, ಉಳಿದ ಇಬ್ಬರ ಸ್ಥಿತಿ ಸ್ಥಿರವಾಗಿದೆ ಎಂದು ಅವರು ತಿಳಿಸಿದ್ದಾರೆ.



ಹರ್ಯಾಣ ಪೊಲೀಸರು ಗಡಿಯಲ್ಲಿನ ಬ್ಯಾರಿಕೇಡ್‌ಗಳನ್ನು ಭೇದಿಸುವ ಪ್ರಯತ್ನವನ್ನು ವಿಫಲಗೊಳಿಸಲು ಮುಂದಾದ ರೈತರ ಮೇಲೆ ಅಶ್ರುವಾಯು ಶೆಲ್‌ಗಳನ್ನು ಹಾರಿಸಿದ್ದಾರೆ ಎಂದು ರೈತರು ತಿಳಿಸಿದ್ದಾರೆ. ಯಾವುದೇ ಸಾವು ಸಂಭವಿಸಿಲ್ಲ ಎಂದು ಹರಿಯಾಣ ಪೊಲೀಸರು ಹೇಳಿದ್ದಾರೆ.

ಕೃಷಿ ಸಚಿವ ಅರ್ಜುನ್ ಮುಂಡಾ ಮಾತನಾಡಿ, ಪ್ರತಿಭಟನಾ ನಿರತ ರೈತರನ್ನು ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಸೇರಿದಂತೆ ಎಲ್ಲಾ ವಿಷಯಗಳ ಕುರಿತು ಐದನೇ ಸುತ್ತಿನ ಮಾತುಕತೆಗೆ ಆಹ್ವಾನಿಸಿದ್ದಾರೆ. ಎಂಎಸ್ ಪಿಯಾಗಲಿ, ಬೆಳೆ ವೈವಿಧ್ಯತೆಯಾಗಲಿ ಎಲ್ಲ ವಿಷಯಗಳ ಕುರಿತು ಚರ್ಚಿಸಲು ನಾವು ಸಿದ್ಧರಿದ್ದೇವೆ ಎಂದರು. ಸಂವಾದದ ಮೂಲಕವೇ ಪರಿಹಾರ ಕಂಡುಕೊಳ್ಳಬಹುದು. ಅವರನ್ನು ಚರ್ಚೆಗೆ ಆಹ್ವಾನಿಸಿದ್ದೇನೆ ಎಂದರು.

**ರೈತರ ಪ್ರತಿಭಟನೆಯ ಉದ್ದೇಶವೇನು**

- ಕನಿಷ್ಠ ಬೆಂಬಲ ಬೆಲೆಗೆ ಕಾನೂನು ರೂಪಿಸುವುದು ರೈತರ ಬಹುಮುಖ್ಯ ಬೇಡಿಕೆಯಾಗಿದೆ. ಸ್ವಾಮಿನಾಥನ್ ಆಯೋಗದ ಶಿಫಾರಸುಗಳ ಅನುಷ್ಠಾನ -ಲಖಿಂಪುರ ಖೇರಿ ಹಿಂಸಾಚಾರದ ಸಂತ್ರಸ್ತರಿಗೆ ನ್ಯಾಯ ಸಿಗಬೇಕು
- ಭಾರತವನ್ನು ಡಬ್ಲ್ಯೂಟಿಒದಿಂದ ಹೊರತೆಗೆಯಬೇಕು
- ಕೃಷಿ ಸರಕುಗಳು, ಹಾಲು ಉತ್ಪನ್ನಗಳು, ಹಣ್ಣುಗಳು,ತರಕಾರಿಗಳು ಮತ್ತು ಮಾಂಸದ ಮೇಲಿನ ಆಮದು ಸುಂಕವನ್ನು ಕಡಿಮೆ ಮಾಡಲು ಭತ್ಯೆ ಹೆಚ್ಚಿಸಬೇಕು. ಪುಟ 2

## ಉತ್ತರ ಕರ್ನಾಟಕ ಭಾಗದ 8 ಜಿಲ್ಲೆಗಳಿಗೆ ಕೇಂದ್ರದಿಂದ ಭರ್ಜರಿ ಗಿಫ್ಟ್
# 376 ಕಿ.ಮೀ. ರಾಷ್ಟ್ರೀಯ ಹೆದ್ದಾರಿ ನಿರ್ಮಾಣ

**ಬೆಳಗಾವಿ:** ಲೋಕಸಭಾ ಸಮರಕ್ಕೂ ಮುನ್ನ ಉತ್ತರ ಕರ್ನಾಟಕ ಭಾಗದ 8 ಜಿಲ್ಲೆಗಳಿಗೆ ಕೇಂದ್ರ ಸರ್ಕಾರ ಭರ್ಜರಿ ಗಿಫ್ಟ್ ನೀಡಿದೆ. 376 ಕಿ.ಮೀ. ಉದ್ದದ ರಾಷ್ಟ್ರೀಯ ಹೆದ್ದಾರಿ ನಿರ್ಮಾಣಕ್ಕೆ 6,975 ಕೋಟಿ ರೂ.ಗಳ ಪ್ಯಾಕೇಜ್ ನ ನೂತನ ಕಾಮಗಾರಿಗಳಿಗೆ ಇಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಬೆಳಗಾವಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಮಧ್ಯಾಹ್ನ 12 ಗಂಟೆಗೆ ಕಾರ್ಯಕ್ರಮ ನಡೆಯಲಿದೆ.



ಬೆಳಗಾವಿ, ವಿಜಯಪುರ, ಬಾಗಲಕೋಟೆ, ಉತ್ತರ ಕನ್ನಡ, ಕೊಪ್ಪಳ, ರಾಯಚೂರು, ಕಲಬುರಗಿ, ಬೀದರ್ ಸೇರಿ 8 ಜಿಲ್ಲೆಗಳಲ್ಲಿ ಹೆದ್ದಾರಿ ಕಾಮಗಾರಿಗಳಿಗೆ ಇಂದು ಚಾಲನೆ ಸಿಗಲಿದೆ. ಈ ಎಲ್ಲಾ ಜಿಲ್ಲೆಗಳ 376 ಕಿ.ಮೀ ಉದ್ದದ ರಸ್ತೆಗಳಿಗೆ 6,975 ಕೋಟಿ ರೂ.ಗಳ ಪ್ಯಾಕೇಜ್ ಬಿಡುಗಡೆ ಮಾಡಲಾಗಿದೆ. ಬೆಳಗಾವಿ ನಗರದಲ್ಲಿ 34 ಕಿ.ಮೀ ಉದ್ದದ 1,600 ಕೋಟಿ ವೆಚ್ಚದ ರಿಂಗ್ ರೋಡ್. ಚಿಕ್ಕೋಡಿ ಬೈಪಾಸ್‌ನಿಂದ -ಗೋಟೂರುವರೆಗೆ 941.61 ಕೋಟಿ ವೆಚ್ಚದಲ್ಲಿ 27.12 ಕಿ.ಮೀ ಉದ್ದದ ಚತುಷ್ಪಥ ರಸ್ತೆ ನಿರ್ಮಾಣ ಮಾಡಲಾಗುತ್ತೆ. ಪುಟ 2

## ಸಂಕ್ಷಿಪ್ತ ಸುದ್ದಿ

### ಮರಳಿ 'ಕೈ' ಹಿಡಿಯುತ್ತಾರಾ ಮಾಜಿ ಸಚಿವ
# ಸುಧಾಕರ್

**ಬೆಂಗಳೂರು:** ಮಾಜಿ ಸಚಿವ ಡಾ. ಕೆ ಸುಧಾಕರ್ ಕಾಂಗ್ರೆಸ್‌ಗೆ ವಾಪಸಾಗುವ ಬಗ್ಗೆ 'ಕೈ' ಪಾಳೆಯದಲ್ಲಿ ಚರ್ಚೆ ಜೋರಾಗಿದೆ. ಈ ವಿಚಾರವಾಗಿ ಕೆಲ ದಿನಗಳ ಹಿಂದೆ ಚಿಕ್ಕಬಳ್ಳಾಪುರ ನಾಯಕರ ಜೊತೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಚರ್ಚೆ ನಡೆಸಿದ್ದಾರೆ ಎನ್ನಲಾಗಿದೆ. ಸುಧಾಕರ್ ಅವರನ್ನು ಮರಳಿ ಪಕ್ಷಕ್ಕೆ ಕರಿಸಿಕೊಳ್ಳುವ ಬಗ್ಗೆ ಚಿಕ್ಕಬಳ್ಳಾಪುರ ನಾಯಕರಿಂದ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ಅಭಿಪ್ರಾಯ ಸಂಗ್ರಹಿಸಿದ್ದಾರೆ. ಆದರೆ ಶಾಸಕ ಪ್ರದೀಪ್ ಈಶ್ವರ್ ತಟಸ್ಥ ನಿಲುವು ಕಾಯ್ದುಕೊಂಡಿದ್ದಾರೆ. ಪುಟ 2



### ರಾಮ ದೇವರಲ್ಲ ಎಂದ
# ಉಗ್ರಪ್ಪ!

**ವಿಜಯನಗರ:** ಅಯೋಧ್ಯೆ ರಾಮಮಂದಿರದ ಬಗ್ಗೆ, ಭಗವಾನ್ ಶ್ರೀರಾಮನ ಬಗ್ಗೆ ಕಾಂಗ್ರೆಸ್ ನಾಯಕರು ದಿನಕ್ಕೊಂದು ವಿವಾದಾತ್ಮಕ ಹೇಳಿಕೆ ನೀಡುತ್ತಲೇ ಇದ್ದಾರೆ. ಇದೀಗ ರಾಜ್ಯದ ಹಿರಿಯ ಕಾಂಗ್ರೆಸ್ ನಾಯಕ, ಮಾಜಿ ಸಂಸದ ವಿಎಸ್ ಉಗ್ರಪ್ಪ ಕೂಡ ರಾಮನ ಬಗ್ಗೆ ಸ್ಫೋಟಕ ಹೇಳಿಕೆ ನೀಡಿದ್ದಾರೆ. ಕೋಟ್ಯಾಂತರ ಹಿಂದೂಗಳು ಶ್ರದ್ಧಾ ಭಕ್ತಿಯಿಂದ ಆರಾಧಿಸುವ, ಪೂಜಿಸುವ ಶ್ರೀರಾಮ ದೇವರಲ್ಲ ಅಂತ ಉಗ್ರಪ್ಪ ಹೇಳಿದ್ದಾರೆ. ಪುಟ 2



### ವಂದೇ ಭಾರತ್ ಎಕ್ಸ್‌ಪ್ರೆಸ್ ಮಂಗಳೂರಿಗೂ
# ವಿಸ್ತರಣೆ

**ಮಂಗಳೂರು:** ತಿರುವನಂತಪುರಂ-ಕಾಸರಗೋಡು ನಡುವೆ ಸಂಚರಿಸುತ್ತಿದ್ದ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲನ್ನು ದಕ್ಷಿಣ ಕನ್ನಡ ಸಂಸದ ನಳಿನ್ ಕುಮಾರ್ ಕಟೀಲ್ ಅವರ ಮನವಿಯ ಮೇರೆಗೆ ಮಂಗಳೂರಿನವರೆಗೆ ವಿಸ್ತರಣೆ ಮಾಡಲಾಗಿದೆ. ಪುಟ 2

# ಚಿನ್ನದ ಆಸೆಗಾಗಿ ಗಣಿ ತೋಡುವಾಗ ಗುಡ್ಡ ಕುಸಿದು 30 ಮಂದಿ ಸಾವು!

**ವೆನೆಜುವೆಲಾ:** ವೆನೆಜುವೆಲಾದಲ್ಲಿ ತೆರೆದ ಚಿನ್ನದ ಗಣಿ ಕುಸಿದು ಕನಿಷ್ಠ 30 ಮಂದಿ ಸಾವನ್ನಪ್ಪಿದ್ದಾರೆ. ಬೊಲಿವರ್ ರಾಜ್ಯದಲ್ಲಿ ಅಕ್ರಮವಾಗಿ ಕಾರ್ಯನಿರ್ವಹಿಸುತ್ತಿದ್ದ ಗಣಿಯಲ್ಲಿ ಕಾರ್ಮಿಕರ ಮೇಲೆ ಮಣ್ಣಿನ ಗೋಡೆ ಕುಸಿದು 23 ಮೃತದೇಹಗಳನ್ನು ರಕ್ಷಕರು ಹೊರತೆಗೆದಿದ್ದಾರೆ. ಕೇಂದ್ರ ವೆನೆಜುವೆಲಾದಲ್ಲಿ ನೂರಾರು ಜನರು ಕೆಲಸ ಮಾಡುತ್ತಿದ್ದಾಗ ಅಕ್ರಮವಾಗಿ ನಿರ್ವಹಿಸುತ್ತಿದ್ದ ಚಿನ್ನದ ಗಣಿಯಲ್ಲಿ ಮಣ್ಣಿನ ಗೋಡೆ ಕುಸಿದಿದೆ. ಬೊಲಿವರ್ ರಾಜ್ಯದ ಕಾಡಿನಲ್ಲಿರುವ ಬುಲ್ಲಾ ಲೋಕಾ ಎಂದು ಕರೆಯಲ್ಪಡುವ ತೆರೆದ ಗಣಿಯಿಂದ ಸುಮಾರು 23 ಶವಗಳನ್ನು ಮಣ್ಣಿನಡಿಯಿಂದ ಹೊರತೆಗೆಯಲಾಗಿದೆ ಎಂದು ಸ್ಥಳೀಯ ಅಧಿಕಾರಿ ಯೋರ್ಗಿ ಆರ್ಸಿನಿಗಾ ಬುಧವಾರ ಎಎಫ್‌ಪಿ ಸುದ್ದಿ ಸಂಸ್ಥೆಗೆ ತಿಳಿಸಿದರು. ಪುಟ 2



## ಕಾರು ಮರಕ್ಕೆ ಡಿಕ್ಕಿ, ಪೊಲೀಸ್ ಅಧಿಕಾರಿ, ನವವಿವಾಹಿತ ಸೇರಿ
# 3 ಮಂದಿ ಸಾವು

**ತೆಲಂಗಾಣ:** ರಭಸದಿಂದ ಬಂದ ಕಾರು ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ ಪೊಲೀಸ್ ಅಧಿಕಾರಿ ಹಾಗೂ ನವವಿವಾಹಿತ ಸೇರಿ 3 ಮಂದಿ ಸಾವನ್ನಪ್ಪಿರುವ ಘಟನೆ ತೆಲಂಗಾಣದಲ್ಲಿ ನಡೆದಿದೆ. ಪೊಲೀಸ್ ಅಧಿಕಾರಿ ಫೆಬ್ರವರಿ 15 ರಂದು ಅಂದರೆ ಒಂದು ವಾರದ ಹಿಂದೆ ಮದುವೆಯಾದ ಅವರ ಮಗಳು ಹಾಗೂ ಅಳಿಯನನ್ನು ಔತಣಕೂಟಕ್ಕೆ ಕರೆದೊಯ್ಯುತ್ತಿದ್ದರು. ಅಪಘಾತದಲ್ಲಿ ತೀವ್ರ ಗಾಯಗೊಂಡು ಮಹಬೂಬ್‌ನಗರ ಸರ್ಕಾರಿ ಆಸ್ಪತ್ರೆಯಲ್ಲಿ ಆಸ್ಪತ್ರೆಗೆ ದಾಖಲಾಗಿದ್ದಾರೆ.ಅಪಘಾತದಲ್ಲಿ ಮೃತಪಟ್ಟವರು ನಂದ್ಯಾಲ ಜಿಲ್ಲೆಯ ಸಬ್ ಇನ್ಸ್‌ಪೆಕ್ಟರ್ ವೆಂಕಟರಮಣ (57), ಅವರ ಅಳಿಯ ಪವನ್ ಸಾಯಿ (25), ಚಾಲಕ ಚಂದ್ರು (23). ಪುಟ 2



## ಜಿಲ್ಲೆಯಲ್ಲಿ ದಾಖಲಾಯ್ತು ಮೊದಲ ಸಾವು ಪ್ರಕರಣ
# ಮಂಗನ ಕಾಯಿಲೆಗೆ ಮಹಿಳೆ ಸಾವು

**ಕಾರವಾರ:** ಉತ್ತರ ಕನ್ನಡ ಜಿಲ್ಲೆಯಲ್ಲಿ ಮಂಗನ ಕಾಯಿಲೆ ಹೆಚ್ಚಾಗುತ್ತಿದ್ದು, ಇದೀಗ ಮೊದಲ ಸಾವು ಪ್ರಕರಣ ದಾಖಲಾಗಿದೆ. ಮಂಗನ ಕಾಯಿಲೆಗೆ ತುತ್ತಾಗಿ ಗಂಭೀರ ಸ್ಥಿತಿಯಲ್ಲಿದ್ದ ಸಿದ್ದಾಪುರದ ಜಿಡ್ಡಿ ಗ್ರಾಮದ 65 ವರ್ಷದ ಮಹಿಳೆ ಇದೀಗ ಮೃತಪಟ್ಟಿದ್ದಾರೆ.

ಈವರೆಗೆ ಉತ್ತರ ಕನ್ನಡ ಜಿಲ್ಲೆಯಲ್ಲಿ 43 ಮಂಗನ ಕಾಯಿಲೆ ಪ್ರಕರಣಗಳು ದಾಖಲಾಗಿವೆ. ಎಲ್ಲಾ ಪ್ರಕರಣಗಳು ಸಿದ್ದಾಪುರ ತಾಲೂಕಿನಲ್ಲೇ ಪತ್ತೆಯಾಗಿವೆ. ಈ ತಾಲೂಕಿನಲ್ಲಿ ಮಂಗನ ಕಾಯಿಲೆ ದಿನೇ ದಿನೇ ಹೆಚ್ಚಳವಾಗುತ್ತಿದ್ದು, ಸೂಕ್ತ ಲಸಿಕೆ ಇಲ್ಲದೆ ಆರೋಗ್ಯ ಸಿಬ್ಬಂದಿ ಆತಂಕದಲ್ಲೇ ಕಾರ್ಯ ನಿರ್ವಹಿಸುತ್ತಿದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಸಿದ್ಧಾಪೂರ ತಾಲೂಕಿನಲ್ಲಿ ಮಂಗನ ಕಾಯಿಲೆ ಆತಂಕ ಹೆಚ್ಚಾಗಿದೆ. ಜನವರಿ ತಿಂಗಳ ಅಂತ್ಯದ ವಾರ ಹಾಗೂ ಫೆಬ್ರವರಿ ತಿಂಗಳ ಮೊದಲ ವಾರದ ನಡುವೆ 37 ಜನರಲ್ಲಿ ಮಂಗನ ಕಾಯಿಲೆ ಪತ್ತೆಯಾಗಿತ್ತು. 6 ಜನ ತಾಲೂಕು ಆಸ್ಪತ್ರೆ ಹಾಗೂ 6 ಜನ ಮಂಗಳೂರು ಮಣಿಪಾಲ ಆಸ್ಪತ್ರೆಗೆ ದಾಖಲಿಸಲಾಗಿತ್ತು.



ರೋಗ ಉಲ್ಬಣಗೊಳ್ಳುತ್ತಿರುವ ಬೆನ್ನಲ್ಲೆ ಮಂಗನ ಸಾವಿನ ಆತಂಕದಲ್ಲಿ ಸಿದ್ಧಾಪೂರದ ಜನರಿದ್ದಾರೆ. ಸಿದ್ಧಾಪೂರದಲ್ಲಿ ಮಂಗನ ಕಾಯಿಲೆ ಆರಂಭ ಆದ ಬಳಿಕ ಇದುವರೆಗೆ ಮೂರು ಮಂಗಗಳು ಸಾವನ್ನಪ್ಪಿವೆ. ಪುಟ 2

## ಚಿಕ್ಕಮಗಳೂರು ಲೋಕಸಭಾ ಕ್ಷೇತ್ರ
# ಶೋಭಾ ಹಠಾವೋ ಬಿಜೆಪಿ ಬಚಾವೋ ಅಭಿಯಾನ ತೀವ್ರ

**ಚಿಕ್ಕಮಗಳೂರು:** ಲೋಕಸಭೆ ಚುನಾವಣೆ ಸಮೀಪಿಸುತ್ತಿರುವಂತೆಯೇ ಉಡುಪಿ ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ನಾಯಕರ ಟಿಕೆಟ್ ಪೈಪೋಟಿ ಜೋರಾಗಿದೆ. ಹಾಲಿ ಸಂಸದೆ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹಾಗೂ ಮಾಜಿ ಶಾಸಕ ಸಿಟಿ ರವಿ ಬಣಗಳ ನಡುವಣ ಸಂಘರ್ಷ ತಾರಕಕ್ಕೇರಿದೆ. ಈ ಮಧ್ಯೆ, ಬಿಜೆಪಿ ಕಾರ್ಯಕರ್ತರ ಒಂದು ಬಣದ 'ಶೋಭಾ ಹಠಾವೋ ಬಿಜೆಪಿ ಬಚಾವೋ' ಅಭಿಯಾನ ತೀವ್ರಗೊಂಡಿದೆ. ಪಕ್ಷದ ಕಾರ್ಯಕರ್ತರು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಹೈಕಮಾಂಡ್ ನಾಯಕರಿಗೆ ಪತ್ರ ಬರೆದು ಶೋಭಾ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

ಶೋಭಾ ಕರಂದ್ಲಾಜೆ ವಿರುದ್ಧ 'ಗೋ ಬ್ಯಾಕ್ ಶೋಭಾ' ಅಭಿಯಾನದ ಮುಂದುವರಿದ ಭಾಗವಾಗಿ ಇದೀಗ 'ಹಠಾವೋ ಅಭಿಯಾನ' ಆರಂಭಗೊಂಡಿದೆ.



ಪತ್ರ ಅಭಿಯಾನ, ಗೋ ಬ್ಯಾಕ್ ಶೋಭಾ ಅಭಿಯಾನದ ಜೊತೆ ಬಿಜೆಪಿ ಬಚಾವೋ ಅಭಿಯಾನ ಆರಂಭವಾಗಿದೆ.

3583 ದಿನಗಳಲ್ಲಿ 100 ದಿನವೂ ಕ್ಷೇತ್ರಕ್ಕೆ ಬಾರದ ಸಂಸದೆ ನಮಗೆ ಬೇಕೇ? ಕ್ಷೇತ್ರಕ್ಕೆ ಬಾರದ ಸಂಸದೆ ನಮಗೆ ಬೇಡವೇ ಬೇಡ ಎಂದು ಬಿಜೆಪಿ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪುಟ 2

## 'ಎಕ್ಸ್' ಖಾತೆಗಳ ಅಮಾನತು ಆದೇಶದ ಬಗ್ಗೆ ಎಲಾನ್ ಮಸ್ಕ್
# ಅಸಮಾಧಾನ

**ನವದೆಹಲಿ:** ರೈತರ ಪ್ರತಿಭಟನೆಯೊಂದಿಗೆ ಸಂಬಂಧ ಹೊಂದಿರುವವರ 'ಎಕ್ಸ್ ' ಖಾತೆಗಳನ್ನು ಅಮಾನತುಗೊಳಿಸುವ ಕೇಂದ್ರ ಸರ್ಕಾರದ ಆದೇಶವನ್ನು ಸ್ಪೇಸ್ ಎಕ್ಸ್ ಮುಖ್ಯಸ್ಥ ಎಲಾನ್ ಮಸ್ಕ್ ಒಪ್ಪಿಕೊಂಡರೂ ಕೂಡ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅಮಾನತುಗೊಂಡ ಖಾತೆಗಳಲ್ಲಿ ಹಲವು ಪ್ರಮುಖ ರೈತ ಮುಖಂಡರು ಮತ್ತು ಅವರ ಬೆಂಬಲಿಗರ ಖಾತೆಗಳೂ ಇವೆ. ವಾಸ್ತವವಾಗಿ, ರೈತರ ಪ್ರತಿಭಟನೆಗೆ ಸಂಬಂಧಿಸಿದ ಖಾತೆಗಳು ಮತ್ತು ಪೋಸ್ಟ್‌ಗಳನ್ನು ಅಮಾನತುಗೊಳಿಸಲು ಭಾರತ ಸರ್ಕಾರವು ಎಕ್ಸ್‌ಗೆ ಸೂಚನೆ ನೀಡಿತ್ತು. ರೈತರ 'ದೆಹಲಿ ಚಲೋ ಪ್ರತಿಭಟನೆ'ಗೆ ಸಂಬಂಧಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಈ ಆದೇಶ ಹೊರಡಿಸಿತ್ತು.



ಪುಟ 2

# ಲೋಕಸಭಾ ಚುನಾವಣೆ ಸ್ಪರ್ಧೆ ಬಗ್ಗೆ ಯೋಚನೆ ಮಾಡಿ ಹೇಳ್ತೀನಿ

**ಮಂಡ್ಯ:** ಜನರು ನನ್ನ ಲೋಕಸಭಾ ಚುನಾವಣೆ ಸ್ಪರ್ಧೆ ಬಗ್ಗೆ ಮಾತನಾಡುತ್ತಾ ಇದ್ದಾರೆ. ನಾನು ಇನ್ನೂ ಅದರ ಬಗ್ಗೆ ತೀರ್ಮಾನ ಮಾಡಿಲ್ಲ ಎಂದು ಜಯದೇವ ಹೃದ್ರೋಗ ಆಸ್ಪತ್ರೆಯ ನಿವೃತ್ತ ನಿರ್ದೇಶಕ ಡಾ.ಸಿ.ಎನ್ ಮಂಜುನಾಥ್ ಹೇಳಿದ್ದಾರೆ.



ಲೋಕಸಭಾ ಚುನಾವಣೆ ಸ್ಪರ್ಧೆ ಬಗ್ಗೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜಕೀಯಕ್ಕೆ ಬರಬೇಕಾ?, ಲೋಕಸಭಾಗೆ ನಿಲ್ಲಬೇಕೆಂದು ನಿರ್ಧಾರ ಮಾಡಿಲ್ಲ. ಹಲವು ಕಡೆ ಜನರು ಒತ್ತಡ ಹಾಕುತ್ತಾ ಇದ್ದಾರೆ. ರಾಜ್ಯಮಟ್ಟದಲ್ಲಿ ಹೃದ್ರೋಗ ಚಿಕಿತ್ಸಾ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆ ತಂದಿದ್ದೀರಾ. ಇದೇ ರೀತಿ ರಾಷ್ಟ್ರಮಟ್ಟದಲ್ಲೂ ಈ ರೀತಿಯ ಸುಧಾರಣೆ ಯಾಕೆ ತರಬಾರದು ಎಂದು ಹೇಳುತ್ತಿದ್ದಾರೆ. ಮುಂದೆ ಸ್ಪರ್ಧೆಯ ಬಗ್ಗೆ ತೀರ್ಮಾನ ಮಾಡಿದರೆ ಹೇಳುತ್ತೀನಿ ಎಂದು ಸ್ಪಷ್ಟನೆ ನೀಡಿದರು.

ನಾನು ಈಗಲೂ ಆಲೋಚನೆಯಲ್ಲಿಯೇ ಇದ್ದೀನಿ. ಲೋಕಸಭೆ ಪ್ರವೇಶ ಕೇವಲ ರಾಜಕೀಯ ಮೂಲಕವೇ ಅಲ್ಲ. ನನ್ನ ಅರ್ಥದಲ್ಲಿ ಲೋಕಸಭೆನೇ ಬೇರೆ, ರಾಜಕೀಯವೇ ಬೇರೆ. ಸದ್ಯ ಆಲೋಚನೆಯಲ್ಲಿ ಇದ್ದೀನಿ. ಮುಂದೆ ಈ ಬಗ್ಗೆ ಸ್ಪಷ್ಟ ನಿಲುವು ಹೇಳುತ್ತೇನೆ ಎಂದರು.

ಆರೋಗ್ಯ ಕ್ಷೇತ್ರದಲ್ಲಿ ಮಾಡಿರೋದು ಜನ ಸೇವೆ. ರಾಷ್ಟ್ರಮಟ್ಟದಲ್ಲಿ ಜನಸೇವೆಗೆ ಅವಕಾಶವಿದೆ ಹೋಗಿ ಎನ್ನುತ್ತಿದ್ದಾರೆ. ಒಂದು ಜಿಲ್ಲೆಗೆ ಹೋದಾಗ ಆ ಜಿಲ್ಲೆಯವರು ಹೇಳುತ್ತಾರೆ. ನಾಳೆ ಮೈಸೂರಿಗೆ ಹೋಗುತ್ತಿದ್ದೇನೆ. ಹೋದಲ್ಲಿ ಎಲ್ಲಾ ಅಲ್ಲಿ ನಿಲ್ಲುತ್ತೀರಾ ಎಂದು ಜನರು ಕೇಳುತ್ತಿದ್ದಾರೆ. ಈ ರಾಜಕೀಯ ಕ್ಷೇತ್ರಕ್ಕೆ ಹೋಗಬೇಕಾ ಬೇಡವಾ ಎಂಬ ನಿರ್ಧಾರವೇ ಮಾಡಿಲ್ಲ ಎಂದು ತಿಳಿಸಿದರು.

# ಹಿಂದೂ ಧಾರ್ಮಿಕ ಸಂಸ್ಥೆಗಳು ಧರ್ಮದಾಯ ದತ್ತಿಗಳ ವಿಧೇಯಕ ಅಂಗೀಕಾರ

**ಬೆಂಗಳೂರು:** ಮುಜರಾಯಿ ಇಲಾಖೆಗೆ ದೇವಸ್ಥಾನಗಳು ಸಲ್ಲಿಕೆ ಮಾಡುವ ಆದಾಯ ಮೊತ್ತದಲ್ಲಿ ಏರಿಕೆ ಮತ್ತು ಇನ್ನಿತರೆ ತಿದ್ದುಪಡಿ ಇರುವ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳ ಮತ್ತು ಧರ್ಮದಾಯ ದತ್ತಿಗಳ ವಿಧೇಯಕ-2024 ಅನ್ನು ವಿಧಾನಸಭೆಯಲ್ಲಿ ಇಂದು ಅಂಗೀಕಾರ ಮಾಡಲಾಗಿದೆ.

ಮುಜರಾಯಿ ಇಲಾಖೆಗೆ ದೇವಸ್ಥಾನಗಳು ಕೊಡುತ್ತಿದ್ದ ಆದಾಯದ ಹಣವನ್ನು ದ್ವಿಗುಣಗೊಳಿಸಲಾಗಿದೆ. ಇನ್ಮುಂದೆ 10 ಲಕ್ಷದಿಂದ 1 ಕೋಟಿ ಆದಾಯದ ದೇವಸ್ಥಾನಗಳು ಆದಾಯದ 5% ರಷ್ಟು ಹಣ ಇಲಾಖೆಗೆ ಸಲ್ಲಿಸಬೇಕು. ಇನ್ನು 1 ಕೋಟಿಗೂ ಆದಾಯ ಮೀರಿದ ದೇವಸ್ಥಾನಗಳು ಆದಾಯದ 10% ರಷ್ಟು ಹಣ ಸಲ್ಲಿಕೆ ಮಾಡಬೇಕು. ಇದರ ಜೊತೆಗೆ ಸಿ ಗ್ರೇಡ್ ದೇಗುಲದ ಅರ್ಚಕರು, ಸಿಬ್ಬಂದಿಗೆ ಇನ್ಶೂರೆನ್ಸ್ ಸೌಕರ್ಯ ಒದಗಿಸಲು ವಿಧೇಯಕದಲ್ಲಿ ಅವಕಾಶ ಕೊಡಲಾಗಿದೆ.

ದೇವಸ್ಥಾನಗಳ ಅರ್ಚಕರು, ದೇಗುಲ ಸಿಬ್ಬಂದಿ ಮೃತಪಟ್ಟಾಗ 5 ಲಕ್ಷ ಪರಿಹಾರ ಕೊಡಲಾಗುತ್ತದೆ. ಈ ಮುಂಚೆ ಮೃತಪಟ್ಟವರಿಗೆ ಕೇವಲ 35 ಸಾವಿರ ರೂ. ಕೊಡಲಾಗ್ತಿತ್ತು. ಜೊತೆಗೆ ಅರ್ಚಕರು, ದೇಗುಲ ಸಿಬ್ಬಂದಿ ಮಕ್ಕಳ ವಿದ್ಯಾಭ್ಯಾಸಕ್ಕೆ 5 ಸಾವಿರ ರೂ.ನಿಂದ 50 ಸಾವಿರ ರೂ. ವರೆಗೆ ಸ್ಕಾಲರ್‌ಶಿಪ್ ಕೊಡಲು ವಿಧೇಯಕದಲ್ಲಿ ಅವಕಾಶ ಮಾಡಿಕೊಡಲಾಗಿದೆ.

# 24 ಜಿಲ್ಲೆಗಳ 106 ತಾಲೂಕುಗಳಲ್ಲಿ 'ಕೃಷಿ ಭಾಗ್ಯ' ಯೋಜನೆ ಜಾರಿ

**ಬೆಂಗಳೂರು:** ಕರ್ನಾಟಕದ ಮಳೆಯಾಶ್ರಿತ ಪ್ರದೇಶಗಳಲ್ಲಿ ಸುಸ್ಥಿರ ಕೃಷಿಗೆ ಮಳೆ ನೀರನ್ನು ಒದಗಿಸಿ ಕೃಷಿ ಉತ್ಪಾದನೆ ಹೆಚ್ಚಿಸಲು 2023-24ನೇ ಸಾಲಿನ ಆಯವ್ಯಯದಲ್ಲಿ ರಾಜ್ಯದ 24 ಜಿಲ್ಲೆಗಳ 106 ತಾಲೂಕುಗಳಲ್ಲಿ (2014ರ ಅವಿಭಜಿತ ತಾಲೂಕುಗಳು) ಕೃಷಿ ಭಾಗ್ಯ ಯೋಜನೆ ಮರು ಜಾರಿಗೊಳಿಸಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದರು.

ಕರ್ನಾಟಕ ವಿಧಾನಸಭೆಯಲ್ಲಿ ಶಿರಹಟ್ಟಿ ಶಾಸಕರಾದ ಡಾ. ಚಂದ್ರು ಲಮಾಣಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯ ಮಳೆಯಾಶ್ರಿತ ಕೃಷಿ ನೀತಿ, 2014ರ ಅನ್ವಯ 100 ಕೋಟಿ ರೂ.ಗಳ ಅನುದಾನದಲ್ಲಿ ಸದರಿ ಯೋಜನೆಯನ್ನು 2023-24ನೇ ಸಾಲಿನಲ್ಲಿ ಪ್ಯಾಕೇಜ್ ಮಾದರಿಯಲ್ಲಿ (ಕ್ಷೇತ್ರ ಬದು, ಕೃಷಿ ಹೊಂಡ, ಪಾಲಿಥೀನ್ ಹೊದಿಕೆ, ತಂತಿಬೇಲಿ, ಪಂಪ್ ಸೆಟ್, ಸೂಕ್ಷ್ಮ ನೀರಾವರಿ ಘಟಕಗಳು) ಮಾರ್ಗಸೂಚಿ ಹಾಗೂ ಕ್ರಿಯಾ ಯೋಜನೆಯನ್ವಯ ಕಾರ್ಯಕ್ರಮ ಅನುಷ್ಠಾನ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.



ಮುಂಗಾರು 2023ನೇ ಸಾಲಿನ ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳು ಸೇರ್ಪಡೆಯಾಗಿದ್ದರೂ ಸಹ 2023-24ನೇ ಸಾಲಿನಲ್ಲಿ ರಾಜ್ಯ ಮಳೆಯಾಶ್ರಿತ ಕೃಷಿ ನೀತಿ, 2014ರ ಅನ್ವಯ ಕೃಷಿ ಭಾಗ್ಯ ಯೋಜನೆ ರಾಜ್ಯದ ಒಣ ಕೃಷಿ ಹವಾಮಾನ ವಲಯಗಳಲ್ಲಿ ಇರುವ ತಾಲೂಕುಗಳಲ್ಲಿ ಮಾತ್ರ ಅನುಷ್ಠಾನ ಮಾಡಲಾಗುತ್ತಿದೆ. ಹಾಗಾಗಿ ಗದಗ ಜಿಲ್ಲೆಯ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳು ಒಣ ಕೃಷಿ ಹವಾಮಾನ ವಲಯದಲ್ಲಿ ಇಲ್ಲದಿರುವ ಕಾರಣ ಸೇರ್ಪಡೆ ಮಾಡಲಾಗಿಲ್ಲ ಎಂದು ತಿಳಿಸಿದರು.

2023-24ನೇ ಸಾಲಿನ ಆಯವ್ಯಯದಲ್ಲಿ ಕೃಷಿ ಭಾಗ್ಯ ಯೋಜನೆಯನ್ನು ಮರು ಜಾರಿಗೊಳಿಸಲಾಗಿದ್ದು, ರಾಜ್ಯದ ಮಳೆಯಾಶ್ರಿತ ಕೃಷಿ ನೀತಿ, 2014ರ ಅನ್ವಯ ರಾಜ್ಯದ 24 ಜಿಲ್ಲೆ 106 ತಾಲೂಕುಗಳಲ್ಲಿ (2014ರ ಅವಿಭಜಿತ ತಾಲೂಕುಗಳು) ಅನುಷ್ಠಾನ ಮಾಡಲು ಮಾರ್ಗಸೂಚಿ ಹಾಗೂ ಕ್ರಿಯಾ ಯೋಜನೆಯನ್ನು ಈಗಾಗಲೇ ಜಿಲ್ಲೆಗಳಿಗೆ ನೀಡಲಾಗಿದೆ. ಅದರಂತೆ ಕಾರ್ಯಕ್ರಮ ಅನುಷ್ಠಾನ ಮಾಡಲಾಗುತ್ತಿದೆ ಎಂದು ಹೇಳಿದರು.

ಪ್ರಸಕ್ತ ಸಾಲಿನ ಆರ್ಥಿಕ ವರ್ಷಾಂತ್ಯಕ್ಕೆ ಕೇವಲ ಒಂದು ತಿಂಗಳು ಬಾಕಿ ಇದ್ದು, ಈ ಹಂತದಲ್ಲಿ ಯಾವುದೇ ಸೇರ್ಪಡೆ/ಬದಲಾವಣೆ ಹಾಗೂ ಅದರಂತೆಯೇ ಅನುಷ್ಠಾನ ಕಷ್ಟಸಾಧ್ಯವಾಗಿರುತ್ತದೆ ಎಂದು ತಿಳಿಸಿದರು.

# 21 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ ಸಿಗರೇಟ್ ಮಾರಾಟ ಮಾಡುವಂತಿಲ್ಲ

**ಬೆಂಗಳೂರು:** ವಿಧಾನಸಭೆಯಲ್ಲಿ ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ (ಜಾಹೀರಾತು ನಿಷೇಧ ಮತ್ತು ವ್ಯಾಪಾರ ಮತ್ತು ವಾಣಿಜ್ಯ, ಉತ್ಪಾದನೆ, ಸರಬರಾಜು ಮತ್ತು ವಿತರಣೆಯ ವಿನಿಯಮನ) (ಕರ್ನಾಟಕ ತಿದ್ದುಪಡಿ) ವಿಧೇಯಕ ಅಂಗೀಕರಿಸಲಾಯಿತು.

ಈ ಕುರಿತು ಸದನದಲ್ಲಿ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಇನ್ಮುಂದೆ 21 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ ಸಿಗರೇಟ್ ಮಾರಾಟ ಮಾಡುವಂತಿಲ್ಲ ಎಂದು ತಾಕೀತು ಮಾಡಿದರು. ಈ ಹಿಂದೆ ಸಿಗರೇಟು ಮಾರಾಟ ವಯೋಮಿತಿಯನ್ನು 18 ವರ್ಷಕ್ಕೆ ನಿಗದಿಪಡಿಸಲಾಗಿತ್ತು, ಈಗ ವಯಸ್ಸಿನ ಮಿತಿಯನ್ನು 21 ವರ್ಷಕ್ಕೆ ಹೆಚ್ಚಿಸಿದ್ದೇವೆ ಎಂದು ತಿಳಿಸಿದರು.

ಅಲ್ಲದೇ ಶಾಲೆಗಳಿಂದ 100 ಮೀಟರ್ ವ್ಯಾಪ್ತಿಯಲ್ಲಿ ಸಿಗರೇಟ್ ಮಾರಾಟ ಮಾಡುವಂತಿಲ್ಲ. ಒಂದು ವೇಳೆ ಮಾರಾಟ ಮಾಡುವರಿಗೆ ದಂಡದ ಪ್ರಮಾಣ 100 ರೂ. ನಿಂದ 1000 ರೂ. ಗೆ ಏರಿಕೆ ಮಾಡಿದ್ದೇವೆ ಎಂದು ತಿಳಿಸಿದರು. ಈ ವೇಳೆ ಮಧ್ಯಪ್ರವೇಶಿಸಿದ ಪ್ರತಿಪಕ್ಷ ನಾಯಕ ಆರ್.ಅಶೋಕ್, ನಿಮ್ಮ ನಿಲುವು ಸ್ವಾಗತಾರ್ಹವಾಗಿದೆ. ಆದ್ರೆ ಈ ಕಾನೂನು ಇನ್ನೂ 5 ವರ್ಷ ಹೀಗೇ ಇರುತ್ತೆ. ಆದ್ದರಿಂದ ದಂಡದ ಮೊತ್ತವನ್ನು 10,000 ರೂ.ಗೆ ಹೆಚ್ಚಿಸಬೇಕು ಎಂದು ಒತ್ತಾಯಿಸಿದರು.



ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ದಿನೇಶ್ ಗುಂಡೂರಾವ್, ಸಿಗರೇಟ್ ಮಾಡುವವರು ಅದೊಂದನ್ನೇ ಮಾರಲ್ಲ, ಸಣ್ಣಪುಟ್ಟ ವ್ಯಾಪಾರಿಗಳಿರುತ್ತಾರೆ, ದಿನಸಿಯನ್ನೂ ಮಾರಾಟ ಮಾಡ್ತಿರ್ತಾರೆ. 10 ಸಾವಿರ ದಂಡ ಹಾಕಿದ್ರೆ ಸಮಸ್ಯೆಯಾಗುತ್ತೆ. ಆದ್ದರಿಂದ 1 ಸಾವಿರಕ್ಕೆ ಮಿತಿಗೊಳಿಸಿದ್ದೇವೆ. ಹುಕ್ಕಾ ಬಾರ್ ನಡೆಸೋರು ಶ್ರೀಮಂತರಿರ್ತಾರೆ. ಆದ್ದರಿಂದ ಅವರಿಗೆ 50,000 ರೂ. ನಿಂದ 1 ಲಕ್ಷ ರೂ.ವರೆಗೆ ದಂಡ ವಿಧಿಸುತ್ತೇವೆ ಎಂದು ಎಚ್ಚರಿಸಿದರು.

**ಹುಕ್ಕಾ ಬಾರ್‌ಗೆ ನಿಷೇಧ:** ಅಲ್ಲದೇ ಯಾವುದೇ ಬಾರ್ ರೆಸ್ಟೋರೆಂಟ್ ಹಾಗೂ ಇತರ ಕಡೆಗಳಲ್ಲಿ ಹುಕ್ಕಾ ಬಾರ್‌ಗೆ ನಿಷೇಧ ಹೇರಿದ್ದೇವೆ. ಹುಕ್ಕಾ ಬಾರ್ ಅನಧಿಕೃತವಾಗಿ ನಡೆಸಿದರೆ ಒಂದು ವರ್ಷಕ್ಕೆ ಕಡಿಮೆ ಇಲ್ಲದಂತೆ ಹಾಗೂ 3 ವರ್ಷಕ್ಕೆ ವಿಸ್ತರಣೆ ಮಾಡುವ ಜೈಲು ಶಿಕ್ಷೆ ಮತ್ತು 50 ಸಾವಿರದಿಂದ 1 ಲಕ್ಷ ರೂ. ವರೆಗೆ ದಂಡ ವಿಧಿಸಲು ಅವಕಾಶವಿದೆ ಎಂದು ಹೇಳಿದರು.

# ಟಿಕೆಟ್‌ಗಾಗಿ ನಾನು ಲಾಬಿ ಮಾಡಿಲ್ಲ

**ಮಂಡ್ಯ:** ಜಿಲ್ಲೆಯಲ್ಲಿ ಬಿಜೆಪಿ ಸಂಘಟನೆ ಚೆನ್ನಾಗಿದೆ. ಬಿಜೆಪಿಗೆ ಮಂಡ್ಯ ಉಳಿಸಿಕೊಂಡರೆ ಪಕ್ಷ ಕಟ್ಟಲು ಸಹಕಾರಿಯಾಗಿದ್ದು, ನಾನು ಯಾವತ್ತೂ ನನಗಾಗಿ ಟಿಕೆಟ್ ಕೊಡಿ ಎಂದು ಲಾಬಿ ಮಾಡಿಲ್ಲ ಎಂದು ಸಂಸದೆ ಸುಮಲತಾ ಅಂಬರೀಶ್ ಹೇಳಿದ್ದಾರೆ.

ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಪಕ್ಷ ಸೇರ್ಪಡೆಗೆ ತಾಂತ್ರಿಕವಾಗಿ ಅಡ್ಡಿಯಾಗಿದೆ. ಆ ಕಾರಣಕ್ಕಾಗಿ ನಾನು ಬಾಹ್ಯ ಬೆಂಬಲ ನೀಡಿದ್ದು, ಇದು



ಬಿಜೆಪಿ ರಾಷ್ಟ್ರೀಯ ನಾಯಕರೆ ನನಗೆ ಹೇಳಿದ್ದಾರೆ. ನಾನು ಮೋದಿ ಹಾಗೂ ಜೆ.ಪಿ.ನಡ್ಡಾ ಅವರನ್ನು ಭೇಟಿಯಾದಾಗಲೂ ಮಂಡ್ಯದಲ್ಲಿ ಪಕ್ಷ ಸಂಘಟನೆ ಬಗ್ಗೆ ಮಾತನಾಡಿದ್ದೇನೆ. ಬಿಜೆಪಿಯೇ ಮಂಡ್ಯ ಟಿಕೆಟ್ ಉಳಿಸಿಕೊಳ್ಳಬೇಕು ಎಂದು ಕೇಳಿದ್ದಾರೆ. ನನಗೆ ಟಿಕೆಟ್ ನೀಡಬೇಕೆಂದು ನಾನು ಲಾಬಿ ಮಾಡಿಲ್ಲ ಎಂದರು.

ಕಾಂಗ್ರೆಸ್‌ಗೆ ಯಾರು ಆಹ್ವಾನ ಕೊಟ್ಟರು ಹೇಳಲಿ ಎಂದು ಚಲುವರಾಯಸ್ವಾಮಿ ಹೇಳಿಕೆ ವಿಚಾರವಾಗಿ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿ 25 ವರ್ಷ ಅಂಬರೀಶ್ ಇದ್ದರು. ಪರಿಚಯಸ್ಥರು ಇರುವ ಪಕ್ಷ ಅದು ಯಾವುದಾದರೂ ಕಾರ್ಯಕ್ರಮಗಳಲ್ಲಿ ಸಿಕ್ಕಾಗ ಪಕ್ಷಕ್ಕೆ ಕರೆದಿದ್ದಾರೆ. ಆದರೆ ಅದನ್ನ ಅಧಿಕೃತ ಆಹ್ವಾನ ಎನ್ನಲು ಆಗಲ್ಲ. ಚಲುವರಾಯಸ್ವಾಮಿ ನನ್ನನ್ನು ವೈಯಕ್ತಿಕವಾಗಿ ಕೇಳಿದ್ರೆ ನಾನು ಹೇಳ್ತೀನಿ. ಆದರೆ ಕರೆದವರ ಹೆಸರು ಬಹಿರಂಗ ಮಾಡಿ ಮುಜುಗರ ಮಾಡಲ್ಲ ಎಂದರು.

ಸದ್ಯ ಸ್ವಾಭಿಮಾನ ಪದ ಕಳೆದ ಚುನಾವಣೆಯಿಂದ ಟ್ರೆಂಡ್ ಆಗಿದೆ ಒಳ್ಳೆಯದು. ಯಾವುದೇ ನಿರೀಕ್ಷೆಗಳಿಲ್ಲದೆ ರಾಜಕೀಯಕ್ಕೆ ಬಂದವಳು ನಾನು ಜನರ ಒತ್ತಾಯದ ಮೇರೆಗೆ ರಾಜಕೀಯಕ್ಕೆ ಬಂದೆ. ಅಂಬರೀಶ್ ಅವರ ಮೇಲಿನ ಜನರ ಅಭಿಮಾನ ನನ್ನ ರಾಜಕೀಯಕ್ಕೆ ಕರೆದುಕೊಂಡು ಬಂತು. ನನ್ನ ಗಮನಕ್ಕೆ ಬಂದ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತಿದ್ದೇನೆ ನನ್ನ ಕೈಲಾದಷ್ಟು ಪ್ರಯತ್ನ ಮಾಡಿದ್ದೇನೆ. ನನ್ನ ಸ್ಪರ್ಧೆ ಬಗ್ಗೆ ಕನ್ಫರ್ಮ್ ಮಾಡಬೇಕಿರುವುದು ಜನ, ಪಕ್ಷ. ನಾನು ನನ್ನ ನಿಲುವು ತಿಳಿಸಿದ್ದೇನೆ ಅಷ್ಟೇ. ನನ್ನ ಸ್ಪರ್ಧೆಗೆ ಊಹಾಪೋಹ ಇದೆ. ಬೇರೆ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಿದ್ರೆ ಇಷ್ಟು ಚಾಲೆಂಜಸ್ ಇರಲ್ಲ ಆದರೆ ನಾನು ಯಾಕೆ ಮಂಡ್ಯ ಅಂತಾನೆ ಸ್ಟಿಕ್ ಆಗಿದ್ದೀನಿ ಅಂತ ಹೇಳಿ ಎಂದರು.

# ದೇಶದಲ್ಲಿ ಮೋದಿಯಿಂದ ಸರ್ವಾಧಿಕಾರಿ ಧೋರಣೆ

**ಕಲಬುರಗಿ:** ಪ್ರಧಾನಿ ನರೇಂದ್ರ ಮೋದಿ ಅವರು ಸರ್ವಾಧಿಕಾರಿ ಧೋರಣೆಯನ್ನು ಅನುಸರಿಸುತ್ತಿದ್ದು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮತ್ತೊಮ್ಮೆ ಏನಾದರೂ ಅಧಿಕಾರಕ್ಕೆ ಬಂದರೆ ಇವೆಲ್ಲವೂ ಮೀರಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಕಿಡಿಕಾರಿದ್ದಾರೆ.

ಬುಧವಾರ ನಗರದ ಲುಂಬಿನಿ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಈಗಾಗಲೇ ಮೋದಿ ಸ್ವಾಯತ್ತತೆ ಸಂಸ್ಥೆಗಳನ್ನು ದುರುಪಯೋಗ ಪಡಿಸಿಕೊಂಡಿದ್ದಾರೆ. ಈ ಬಾರಿ 400ಕ್ಕೂ ಅಧಿಕ ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ಹೇಳುತ್ತಿದ್ದಾರೆ. ಬೇರೆಯವರಿಗೆ ಏನೂ ಸಿಗುವುದಿಲ್ಲ, ದೇಶದ 543 ಸ್ಥಾನಗಳನ್ನು ತಾವೇ ಗೆಲ್ಲುವುದಾಗಿ ಹೇಳುತ್ತಿದ್ದು, ಒಂದು ವೇಳೆ ಹೀಗಾದರೆ ದೇಶಕ್ಕೆ ಒಳ್ಳೆಯ ಬೆಳವಣಿಗೆ ಅಲ್ಲ ಎಂದರು.

ಲೋಕಸಭಾ ಚುನಾವಣೆಗೆ ಈಗಾಗಲೇ ಕಾಂಗ್ರೆಸ್ ಪಕ್ಷ ಎಲ್ಲಾ ಆಯಾಮಗಳಲ್ಲಿ ಸಿದ್ಧತೆಗಳನ್ನು ನಡೆಸಿದೆ. ದಿನಕ್ಕೊಂದು ರಾಜ್ಯದ ಪ್ರಮುಖರ ಸಭೆ ನಡೆಸಿ, ಎಲ್ಲವನ್ನೂ ಪರಾಮರ್ಶೆ ಮಾಡಲಾಗುತ್ತಿದೆ. ಆಯಾ ರಾಜ್ಯಗಳ ಸಭೆ ನಡೆಸುವುದರ ಜೊತೆಜೊತೆಗೆ ಇಂಡಿಯಾ ಒಕ್ಕೂಟದ ಜೊತೆಗೆ ನಿರಂತರವಾಗಿ ಮಾತುಕತೆ ಹಾಗೂ ದಿನದ ಬೆಳವಣಿಗೆಗಳ ಮೇಲೆ ನಿಗಾಯಿರಿಸಲು ತಂಡಗಳ ರಚನೆ ಮಾಡಲಾಗಿದೆ ಎಂದು ತಿಳಿಸಿದರು. ಮುಕುಲ್ ವಾಸನಿಕ್ ನೇತೃತ್ವದಲ್ಲಿ ಆರು ಜನರ ತಂಡವು ಒಕ್ಕೂಟದ ಮುಖಂಡರೊಂದಿಗೆ ಲೋಕಸಭಾ ಚುನಾವಣೆ ಕುರಿತು ಚರ್ಚೆ, ಸಮಾಲೋಚನೆ



ನಿರಂತರವಾಗಿ ನಡೆಯುತ್ತಿದೆ ಎಂದರು.

ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕೇವಲ ಜಾಹೀರಾತಿನ ಸರ್ಕಾರವಾಗಿದ್ದು, ಮಾಧ್ಯಮಗಳಲ್ಲಿ ದಿನನಿತ್ಯ ನಿರಂತರ ಬರುತ್ತಿರುವ ಜಾಹೀರಾತುಗಳೇ ಹಿಡಿದ ಕನ್ನಡಿಯಾಗಿವೆ. ಟಿವಿ, ಪತ್ರಿಕೆಯಲ್ಲಿ ದಿನಬೆಳಗ್ಗೆಯಾದರೇ ಸಾಕು, ನರೇಂದ್ರ ಮೋದಿ ಅವರದ್ದೇ ಜಾಹೀರಾತು ಬರುತ್ತದೆ. ಮೋದಿ ಇಲ್ಲದೆ ದೇಶ ನಡೆಯುವುದಿಲ್ಲ ಎಂಬ ರೀತಿಯಲ್ಲಿ ಅವರನ್ನು ಬಿಂಬಿಸಲಾಗುತ್ತಿದೆ ಎಂದು ಆರೋಪಿಸಿದರು.

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಯಾವ ರೀತಿಯಲ್ಲಿ ಹಣೆಯಬೇಕು ಎಂಬ ಕಾರಣಕ್ಕೆ ಬಿಜೆಪಿ ನಾಯಕರು ಪದೇ ಪದೇ ಕಲಬುರಗಿ ಜಿಲ್ಲೆಗೆ ಅವರ ಅಭ್ಯರ್ಥಿ ನೋಡುವ ನೆಪದಲ್ಲಿ ಬಂದು ಹೋಗುತ್ತಿದ್ದಾರೆ. ಕಳೆದ 2019ರ ಲೋಕಸಭಾ ಚುನಾವಣೆಯಲ್ಲಿ ರಾಷ್ಟ್ರೀಯ ನಾಯಕರು ಇಲ್ಲೇ ಬಿಡಾರ ಹೂಡಿದ್ದರು ಎಂದು ಹೇಳಿದರು.

# ಬಿಜೆಪಿ, ಜೆಡಿಎಸ್‌ಗೆ ಅಲ್ಪಸಂಖ್ಯಾತರನ್ನು ಕಂಡರೆ ಆಗಲ್ಲ

**ರಾಮನಗರ:** ವಕೀಲರ ಪ್ರತಿಭಟನೆ ವಿಚಾರವಾಗಿ, ಪಿಎಸ್‌ಐ ತಪ್ಪಿದ್ದರೆ ಕಾನೂನು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದೆ. ಇಲ್ಲಿ ಯಾರಿಗೂ ಅನ್ಯಾಯ ಆಗಬಾರದು ಎಂದು ಸೂಚಿಸಿದ್ದೆ. ಈ ವಿಚಾರದಲ್ಲಿ ಬಿಜೆಪಿ ಹಾಗೂ ಜೆಡಿಎಸ್‌ನವರು ರಾಜಕೀಯ ಮಾಡುತ್ತಿದ್ದಾರೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ವಾಗ್ದಾಳಿ ನಡೆಸಿದ್ದಾರೆ. ಕನಕಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಹಾಗೂ ಜೆಡಿಎಸ್ ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿದ್ದಾರೆ. ಬಿಜೆಪಿಯವ್ರು ಅಶಾಂತಿ ಸೃಷ್ಟಿಸೋದು ಮಾಮೂಲಿ. ಕಮ್ಯೂನಲ್ ವಿಚಾರ ತೆಗೆದುಕೊಂಡು ರಾಜಕೀಯ ಮಾಡುತ್ತಾರೆ. ಅವರಿಗೆ ಮೈನಾರಿಟಿ ಅವರನ್ನು ಕಂಡರೆ ಆಗಲ್ಲ. ಸ್ಥಳೀಯ ಶಾಸಕ ಹಾಗೂ ಅಧಿಕಾರಿ ಮೈನಾರಿಟಿ ಇರುವುದರಿಂದ ರಾಜಕೀಯ ಮಾಡಿದ್ದಾರೆ. ಅಸೆಂಬ್ಲಿಯಲ್ಲೇ ಮೈನಾರಿಟಿ ಅಧಿಕಾರಿ ಬೇಡ ಎನ್ನುತ್ತಿದ್ದರು ಎಂದು ಅವರು ಕಿಡಿಕಾರಿದ್ದಾರೆ. ರಾಮನಗರದಲ್ಲಿ ಡಿಕೆ ಸಹೋದರರಿಂದ ಅಶಾಂತಿ ಸೃಷ್ಟಿ ಎಂಬ ಆರೋಪಕ್ಕೆ, ರಾಮನಗರದಲ್ಲಿ ಗಲಾಟೆ ಮಾಡಿಸುತ್ತಿರುವುದೇ ಜೆಡಿಎಸ್. ಆ ಎಲ್ಲಾ ಗಲಾಟೆಗೆ ಕುಮಾರಸ್ವಾಮಿ ಹಾಗೂ ಬಿಜೆಪಿಯೇ ಕಾರಣ ಎಂದು ಆರೋಪಿಸಿದ್ದಾರೆ.

## ಇದೆಂಥಾ ಮೌಢ್ಯ!

ನಲ್ಲಗೊಂಡ ಜಿಲ್ಲೆಯ ಪಾರ್ವತಿ ಜಡೆ ರಾಮಲಿಂಗೇಶ್ವರ ಸ್ವಾಮಿ ಜಾತ್ರೆ ಉತ್ಸವಗಳಲ್ಲಿ ಭಕ್ತರು ಅಗ್ನಿಗುಂಡದ ಮೇಲೆ ನಡೆದುಕೊಂಡು ಹೋಗುವ ಸಂಪ್ರದಾಯವಿದೆ. ಹಲವು ವರ್ಷಗಳಿಂದ ಈ ಕಾರ್ಯಕ್ರಮ ನಡೆಯುತ್ತಿದೆ. ಆದರೆ ಮೌಢ್ಯಾಚರಣೆ ನಿಲ್ಲಿಸಬೇಕಾದ ಪೊಲೀಸರೇ ಸಾಮಾನ್ಯ ಭಕ್ತರ ಜತೆಗೆ ಅಗ್ನಿಕುಂಡದಲ್ಲಿ ಹೆಜ್ಜೆ ಹಾಕುವ ಮೂಲಕ ಚರ್ಚೆಗೆ ಆಸ್ಪದ ನೀಡಿದ್ದಾರೆ.

ಚೆರುವುಗಟ್ಟು ದೇಗುಲ ಹೈದರಾಬಾದ್‌ನಿಂದ 60 ಕಿಲೋಮೀಟರ್ ದೂರದಲ್ಲಿದೆ. ಈ ದೇವಾಲಯವು ಬಹಳ ಪ್ರಸಿದ್ಧವಾಗಿದೆ. ಶಕ್ತಿಶಾಲಿ ಶಿವ ದೇವಾಲಯ ಇಲ್ಲಿದೆ. ಪ್ರತಿ ತಿಂಗಳ ಅಮವಾಸ್ಯೆ ರಾತ್ರಿಯಲ್ಲಿ ಜನರು ಈ ದೇವಾಲಯಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭೇಟಿ ನೀಡುತ್ತಾರೆ. ಈ ಸ್ಥಳವನ್ನು ಅತ್ಯಂತ ಪವಿತ್ರವೆಂದು ಪರಿಗಣಿಸಲಾಗಿದೆ. ದೇಗುಲದಲ್ಲಿ ಸೇವೆ ಮಾಡುತ್ತಾ ಸ್ನಾನ ಮಾಡಿದರೆ ಪವಾಡ ನಡೆಯುತ್ತೆ ಎಂಬುದು ಜನರ ನಂಬಿಕೆ. ಮದುವೆಯಾಗದಿರುವವರು ಅಥವಾ ಮಕ್ಕಳನ್ನು ಹೊಂದಲು ಪ್ರಯತ್ನಿಸುತ್ತಿರುವವರು ಇಲ್ಲಿನ ಶಿವನಿಗೆ ಮೊರೆಹೋಗುತ್ತಾರೆ. ಈ ಬಾರಿಯೂ ದೇವಾಲಯದ ಅರ್ಚಕರ ವೈದಿಕ ಸ್ತೋತ್ರ ಪಠಣಗಳ ನಡುವೆ ಬೆಟ್ಟದ ದೇಗುಲದಲ್ಲಿ ಮುಂಜಾನೆ ಧಾರ್ಮಿಕ ವಿಧಿವಿಧಾನಗಳು ಜರುಗಿದವು.

## ಪ್ರಯಾಣಿಕ ವಶಕ್ಕೆ

ಶೇರ್ ಮಾರ್ಕೆಟ್ ಟ್ರೇಡಿಂಗ, IPO ಪರ್ಚೇಸ್, ಸೆಲ್ಲಿಂಗ್ ಹೆಸರಲ್ಲಿ ಬೆಂಗಳೂರಿನ ಉದ್ಯಮಿಗಳಿಗೆ ಬರೋಬ್ಬರಿ 16 ಕೋಟಿ ಒಂದು ಲಕ್ಷ ಹಣ ವಂಚಿಸಿರೋ ಬಗ್ಗೆ ಎರಡು ಪ್ರತ್ಯೇಕ ಪ್ರಕರಣ ದಾಖಲಾಗಿದೆ. ಹರಿಪಾಲ್ ಸಿಂಗ್ ಎಂಬುವವರಿಗೆ ಮತ್ತು ಕೋಟಿ ಸಿಸ್ಟಮ್ ಮಾಲೀಕರರಿಗೆ ಫೇಸ್ಬುಕ್ ಮೂಲಕ ಪರಿಚಿತರಾದ ಈ ಜಾಲ ಶೇರ್ ಟ್ರೇಡಿಂಗ್ ಕಂಪನಿ ಹೆಸರಲ್ಲಿ ಬಲೆಬೀಸಿತ್ತು. ಫೇಸ್ಬುಕ್ ಅಡ್ವರ್ಟೈಸ್ಮೆಂಟ್ ನೋಡಿ ಉದ್ಯಮಿಗಳು ವಂಚಕ ಜಾಲವನ್ನ ಸಂಪರ್ಕಿಸಿದ್ರು. ಗೋಲ್ಡ್ಸ್ ಮೆನ್ ಸಾಚಸ್ ಈಕ್ವಿಟಿ ಅಸೆಟ್ ಮ್ಯಾನೇಜ್ಮೆಂಟ್ ಗ್ರೂಪ್ 109 ಹಾಗೂ ಸ್ಕೈ ರಿಮ್ ಕ್ಯಾಪಿಟಲ್ ಇಮಿಲಿ ಕುನಾಲ್ ಎಂಬ ಶೇರ್ ಟ್ರೇಡಿಂಗ್ ಕಂಪನಿಗಳ ಪರಿಚಯವಾಗಿತ್ತು. ಕಂಪನಿಯ ಶೇರುಗಳನ್ನ ಖರೀದಿಸಿದ್ರೆ, ಸ್ಟಾಕ್ ಮಾರ್ಕೆಟ್ ನಲ್ಲಿ ಕಂಪನಿಗಳ ಷೇರುಗಳ ಮೇಲೆ ಇನ್ವೆಸ್ಟ್ ಮಾಡಿದ್ರೆ ಹೆಚ್ಚಿನ ಲಾಭ ಬರೋದಾಗಿ ನಂಬಿಸಿದ್ರು. ಅಲ್ಲದೇ ಫೇಸ್ಬುಕ್ ಪರಿಚಿತರಾದ ಆರೋಪಿಗಳು ತಮ್ಮ ವಾಟ್ಸಾಫ್ ಗ್ರೂಪ್ ಗೆ ಹರಿಪಾಲ್ ಸಿಂಗ್ ರನ್ನ ಸೇರಿಸಿದ್ರು. ಗ್ರೂಪ್ ನ ಸದಸ್ಯರಿಗೆ ಹೆಚ್ಚಿನ ಲಾಭ ದೊರೆಯುತ್ತಿರೋದಾಗಿ ಸುಳ್ಳು ಸುಳ್ಳು ಮೆಸೇಜ್ ಗಳನ್ನ ಗ್ರೂಪ್‌ನಲ್ಲಿ ಹಾಕಿ ಹರಿಪಾಲ್ ಸಿಂಗ್ ರನ್ನು ನಂಬಿಸಿ ಇನ್ವೆಸ್ಟ್ ಮಾಡುವಂತೆ ಮಾಡಿದ್ರು.

ಹೆಚ್ಚಿನ ಲಾಭ ದೊರೆಯುವ ನಿರೀಕ್ಷೆಯಲ್ಲಿ ಹರಿಪಾಲ್ ಸಿಂಗ್ ಕಳೆದ ಡಿಸೆಂಬರ್ ನಿಂದ ಫೆಬ್ರವರಿ ಮೊದಲ ವಾರದ ವರೆಗೂ ಆರೋಪಿಗಳ ಸುಮಾರು 26 ಅಕೌಂಟ್ ಗಳಿಗೆ ಬರೋಬ್ಬರಿ 6 ಕೋಟಿ 1 ಲಕ್ಷ ಹಣ ಸಂದಾಯ ಮಾಡಿ ಕಂಪನಿ ಷೇರು ಖರೀದಿ ಮಾಡಿದ್ರು. ನಂತರ ಕಂಪನಿ ಷೇರು ಮಾರಾಟ ಮಾಡಿ ಹಣ ಹಿಂದುರಿಗಿಸಿ ಲಾಭಾಂಶ ಪಡೆಯಲು ಹರಿಪಾಲ್ ಸಿಂಗ್ ಯತ್ನಿಸಿದ ವೇಳೆ ಆರೋಪಿಗಳು ನಾನಾ ಕಾರಣ ನೀಡಿ ಹಣ ಹಿಂದಿರುಗಿಸದೇ ವಿಳಂಬ ಮಾಡ್ತಿದ್ರು. ಇದೇ ವೇಳೆ ಹರಿಪಾಲ್ ಸಿಂಗ್ ಹೂಡಿಕೆ ಮಾಡಿದ್ದ ಕಂಪನಿ ಹೆಸರಲ್ಲಿ ಕೇರಳದ ಉದ್ಯಮಿಯೊಬ್ಬನಿಗೂ ಇದೇ ರೀತಿ ವಂಚನೆ ಆಗಿರೋದು ಹರಿಪಾಲ್ ಸಿಂಗ್ ರಿಗೆ ಗೊತ್ತಾಗಿತ್ತು. ಕಡೆಗೆ ಎಚ್ಚೆತ್ತ ಹರಿಪಾಲ್ ಸಿಂಗ್ ಬೆಂಗಳೂರು ಸೈಬರ್ ಕ್ರೈಂ ಪೊಲೀಸರಿಗೆ ದೂರು ನೀಡಿದ್ದಾರೆ. ಕೋಟಿ ಸಿಸ್ಟಮ್ ಮಾಲಿಕರಿಗೂ ಇದೇ ರೀ ಫೇಸ್ ಬುಕ್ ಮೂಲಕ ತಲುಪಿ ವಾಟ್ಸಪ್ ಹಾಗು ಟೆಲಿಗ್ರಾಮ್ ನಲ್ಲಿ ಪೋಸ್ಟ್ ಮಾಡಿಸಿ ಹಂತ ಹಂತವಾಗಿ ಹತ್ತು ಕೋಟಿ ವಂಚನೆ ಮಾಡಿದ್ದಾರೆ.

## 2 ದಿನ ತಾತ್ಕಾಲಿಕ ಸ್ಥಗಿತ

● 58 ವರ್ಷ ಮೇಲ್ಪಟ್ಟ ರೈತರು ಮತ್ತು ಕೃಷಿ ಕೂಲಿಕಾರರಿಗೆ ಪಿಂಚಣಿ ಯೋಜನೆ ಜಾರಿಗೊಳಿಸಿ ಮಾಸಿಕ 10 ಸಾವಿರದವರೆಗೆ ಪಿಂಚಣಿ ನೀಡಬೇಕು. -ಕೀಟನಾಶಕಗಳು, ಬೀಜಗಳು ಮತ್ತು ರಸಗೊಬ್ಬರ ಕಾಯ್ದೆಗೆ ತಿದ್ದುಪಡಿ ಮಾಡುವ ಮೂಲಕ ಹತ್ತಿ ಸೇರಿದಂತೆ ಎಲ್ಲಾ ಬೆಳೆಗಳ ಬೀಜಗಳ ಗುಣಮಟ್ಟ ಸುಧಾರಿಸಬೇಕು.

## ಹೆದ್ದಾರಿ ನಿರ್ಮಾಣ

ಶಿರಗುಪ್ಪಿಯಿಂದ ಅಂಕಲಿವರೆಗೆ 887.32 ಕೋಟಿ ವೆಚ್ಚದಲ್ಲಿ 10 ಕಿ.ಮೀ ಉದ್ದದ ರಸ್ತೆ ಅಗಲೀಕರಣ. ಹಾಗೂ ಮುರಗುಂಡಿಯಿಂದ ಚಿಕ್ಕೋಡಿ ಹತ್ತಿರವರೆಗೆ 785.79 ಕೋಟಿ ವೆಚ್ಚದಲ್ಲಿ 50.2 ಕಿ.ಮೀ ಉದ್ದದ ರಸ್ತೆ ಅಗಲೀಕರಣ ಮಾಡಲಾಗುತ್ತೆ. ಬೆಳಗಾವಿ ಜಿಲ್ಲೆಯಲ್ಲಿ 4,237.12 ಕೋಟಿ ರೂ. ವೆಚ್ಚದ 121.8 ಕಿ.ಮೀ ಉದದ್ದ ರಸ್ತೆಗಳ ಶಂಕು ಸ್ಥಾಪನೆಯನ್ನು ನಿತಿನ್ ಗಡ್ಕರಿ ನೆರವೇರಿಸಲಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಅರಬೈಲ್‌ನಿಂದ ಇಡಗುಂಡಿ ವಿಭಾಗದವರೆಗೆ 31.9 ಕೋಟಿ ವೆಚ್ಚದಲ್ಲಿ 16 ಕಿ.ಮೀ ಉದ್ದದ ರಸ್ತೆ ನಿರ್ಮಾಣ ಮಾಡಲಾಗುತ್ತೆ. ವಿಜಯಪುರ ಐಬಿ ಸರ್ಕಲ್ ನಿಂದ ಮಹಾರಾಷ್ಟ್ರದ ಮುರ್ರುಮ್ ಗಡಿಯವರೆಗೆ 657.09 ಕೋಟಿ ವೆಚ್ಚದಲ್ಲಿ 102.31 ಕಿ.ಮೀ ಉದ್ದದ ದ್ವಿಪಥ ರಸ್ತೆ ಅಗಲೀಕರಣ. ಕನಮಡಿಯಿಂದ ಬಿಜ್ಜೋಡಿ ಮತ್ತು ತಿಕೋಟಾವರೆಗೆ 23.31 ಕಿ.ಮೀ ದ್ವಿಪಥ ರಸ್ತೆ ರೂ.196.5 ಕೋಟಿ ಹಣದಲ್ಲಿ ವಿಸ್ತರಣೆ ಮಾಡಲಾಗುತ್ತೆ.

ಬಾಗಲಕೋಟೆ ಜಿಲ್ಲೆಯ ಸರ್ಜಾಪುರದಿಂದ ಪಟ್ಟದಕಲ್ಲುವರೆಗೆ 26 ಕಿ.ಮೀ ಉದ್ದರ ಹೆದ್ದಾರಿ ದ್ವಿಪಥಕ್ಕೆ 340.641 ಕೋಟಿ ಬಿಡುಗಡೆ ಮಾಡಲಾಗಿದೆ.406.73 ಕೋಟಿ ವೆಚ್ಚದಲ್ಲಿ ರಾಷ್ಟ್ರೀಯ ಹೆದ್ದಾರಿ 150 ಎ ಮಸ್ಕಿ, ಸಿಂದೂರು ಬೈಪಾಸ್ 20.1 ಕಿ.ಮೀ ಉದ್ದದ ಬೈಪಾಸ್ ನಿರ್ಮಾಣ ಮಾಡಲಾಗುತ್ತಿದೆ. 146.64 ಕೋಟಿ ವೆಚ್ಚದಲ್ಲಿ 13.8 ಕಿ.ಮೀ ಉದ್ದದ ವೆಂಕಟೇಶ್ವರ ಕ್ಯಾಂಪ್ ನಿಂದ ದಡೇಸುಗೂರು ಕ್ಯಾಂಪ್‌ವರೆಗೆ ದ್ವಿಪಥ ರಸ್ತೆ ಅಗಲೀಕರಣ. ರಾಷ್ಟ್ರೀಯ ಹೆದ್ದಾರಿ 367ರಲ್ಲಿ ಭಾನಾಪುರ-ಗದ್ದನಕೇರಿ ವಿಭಾಗದ ಕುಕನೂರು, ಯಲಬುರ್ಗಾ ಹಾಗೂ ಗಜೇಂದ್ರಗಡದಲ್ಲಿ 253.75 ಕೋಟಿ ವೆಚ್ಚದಲ್ಲಿ 17.3 ಕಿ.ಮೀ ಉದ್ದದ ಬೈಪಾಸ್ ನಿರ್ಮಾಣ ಮಾಡಲಾಗುತ್ತೆ.

ಯಾದಗಿರಿ ಹತ್ತಿರದ ರಾಷ್ಟ್ರೀಯ ಹೆದ್ದಾರಿ 150ರ 8.75 ಕಿ.ಮೀ ಉದ್ದದ 136.29 ಕೋಟಿ ವೆಚ್ಚದಲ್ಲಿ ಬೈಪಾಸ್ ನಿರ್ಮಾಣ ಮಾಡಲಾಗುತ್ತೆ. ಬೀದರ ಜಿಲ್ಲೆ ಚಿಂಚೋಳಿಯಿಂದ ತೆಲಂಗಾಣದ ಗಡಿ ಮಿರಿಯಾಣ ತನಕ 405.3 ಕೋಟಿ ವೆಚ್ಚದಲ್ಲಿ 15.8 ಕಿ. ಮೀ ಉದ್ದದ ರಸ್ತೆ ನಿರ್ಮಾಣ ಮಾಡಲಾಗುತ್ತೆ. ಇನ್ನು ಕಲಬುರಗಿ ಜಿಲ್ಲೆಯಲ್ಲಿ 125.15 ಕೋಟಿ ರೂ.ಗಳ ವೆಚ್ಚದಲ್ಲಿ ರಸ್ತೆ ನಿರ್ಮಾಣ. ಈ ಎಲ್ಲ ಕಾಮಗಾರಿಗಳಿಗೆ ಇಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ನಿತಿನ್ ಗಡ್ಕರಿಗೆ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ, ಸ್ಥಳೀಯ ನಾಯಕರು ಸಾಥ್ ನೀಡಲಿದ್ದಾರೆ.

## 30 ಮಂದಿ ಸಾವು!

ಬೊಲಿವರ್ ಪ್ರದೇಶವು ಚಿನ್ನ, ವಜ್ರಗಳು, ಕಬ್ಬಿಣ, ಬಾಕ್ಸೈಟ್, ಸ್ಫಟಿಕ ಶಿಲೆ ಮತ್ತು ಕೋಲ್ಟಾನ್ಗಳಿಂದ ಸಮೃದ್ಧವಾಗಿದೆ. ರಾಜ್ಯದ ಗಣಿಗಳ ಹೊರತಾಗಿ, ಅಕ್ರಮವಾಗಿ ನೈಸರ್ಗಿಕ ಸಂಪನ್ಮೂಲ ಹೊರತೆಗೆಯುವ ಉದ್ಯಮವೂ ಸಹ ನಡೆಯುತ್ತಿದೆ.

ಭಾರಿ ಪ್ರಮಾಣದ ಈ ದುರಂತದ ಬಗ್ಗೆ ನಾಗರಿಕ ರಕ್ಷಣೆಯ ಉಪ ಮಂತ್ರಿ ಕಾರ್ಲೋಸ್ ಪೆರೆಜ್ ಆಂಪ್ಯೂಡಾ ಅವರು X ಟ್ವಿಟ್ಟರ್ ಖಾತೆಯಲ್ಲಿ ಘಟನೆಯ ವೀಡಿಯೊವನ್ನು ಹಂಚಿಕೊಂಡಿದ್ದಾರೆ. ತೆರೆದ ಗಣಿಯಲ್ಲಿ ನೀರಿಲ್ಲದ ಬೃಹತ್ ಹೊಂಡದಲ್ಲಿ ಕೆಲಸ ಮಾಡುತ್ತಿದ್ದ ಜನರ ಮೇಲೆ ನೆಲದ ಗೋಡೆಯು ನಿಧಾನವಾಗಿ ಕುಸಿಯುತ್ತಿರುವುದು ವೀಡಿಯೊದಲ್ಲಿ ಕಂಡುಬಂದಿದೆ. ಇದ ಕಂಡು ಕೆಲವರು ಸ್ಥಳದಿಂದ ಪರಾರಿಯಾಗುವಲ್ಲಿ ಯಶಸ್ವಿಯಾಗಿದ್ದರೆ, ಅನೇಕ ಮಂದಿ ಮಣ್ಣಿನಡಿ ಸಿಲುಕಿ ಪ್ರಾಣ ಕಳೆದುಕೊಂಡಿದ್ದಾರೆ.

ಅಧಿಕಾರಿಗಳ ಪ್ರಕಾರ, ಹತ್ತಿರದ ಪಟ್ಟಣವಾದ ಲಾ ಪರಾಗ್ವಾದಿಂದ ಏಳು ಗಂಟೆಗಳ ದೋಣಿ ವಿಹಾರ ದೂರದ ಗಣಿಯಲ್ಲಿ ಸುಮಾರು 200 ಜನರು ಕೆಲಸ ಮಾಡುತ್ತಿದ್ದರು ಎಂದು ಭಾವಿಸಲಾಗಿದೆ. ರಾಜಧಾನಿ ಕ್ಯಾರಕಾಸ್‌ನ ಆಗ್ನೇಯಕ್ಕೆ 750 ಕಿಲೋಮೀಟರ್ (460 ಮೈಲುಗಳು) ದೂರದಲ್ಲಿರುವ ಲಾ ಪರಾಗ್ವಾದಿಂದ ನಾಲ್ಕು ಗಂಟೆಗಳ ಪ್ರಾದೇಶಿಕ ರಾಜಧಾನಿ ಸಿಯುಡಾಡ್ ಬೊಲಿವರ್‌ನಲ್ಲಿರುವ ಆಸ್ಪತ್ರೆಗೆ ಗಾಯಾಳುಗಳನ್ನು ಸಾಗಿಸಲಾಗುತ್ತಿದೆ ಎಂದು ಬೊಲಿವರ್ ರಾಜ್ಯದ ನಾಗರಿಕ ಭದ್ರತೆಯ ಕಾರ್ಯದರ್ಶಿ ಎಡ್ಗರ್ ಕೊಲಿನಾ ರೆಯೆಸ್ ಹೇಳಿದ್ದಾರೆ. ಪರಿಸ್ಥಿತಿಯನ್ನು ನಿಭಾಯಿಸಲು ಮಿಲಿಟರಿ, ಅಗ್ನಿಶಾಮಕ ದಳಗಳು ಮತ್ತು ಇತರ ಸಂಸ್ಥೆಗಳು ವಾಯು ಪ್ರದೇಶದ ಮೂಲಕ ಸ್ಥಳಕ್ಕೆ ತಲುಪಿವೆ. ಬದುಕುಳಿದವರ ಹುಡುಕಾಟದಲ್ಲಿ ಸಹಾಯ ಮಾಡಲು ರಕ್ಷಣಾ ತಂಡಗಳನ್ನು ಕ್ಯಾರಕಾಸ್‌ನಿಂದ ವಾಯುಮಾರ್ಗದಲ್ಲಿ ಕರೆದೊಯ್ಯಲಾಗುತ್ತಿದೆ ಎಂದು ಅವರು ಹೇಳಿದರು.

ಮೊದಲ ಪುಟದಿಂದ...

## 3 ಮಂದಿ ಸಾವು

ಕುಟುಂಬವು ಹೈದರಾಬಾದ್‌ನಿಂದ ಅನಂತಪುರಕ್ಕೆ ತೆರಳುತ್ತಿತ್ತು, ಅಲ್ಲಿ ಅವರು ಪವನ್ ಸಾಯಿ ಅವರ ನಿವಾಸದಲ್ಲಿ ಔತಣಕೂಟದಲ್ಲಿ ಭಾಗವಹಿಸಿದ್ದರು. ಅವರ ಮಾರುತಿ ಸ್ವಿಫ್ಟ್ ಡಿಜೈರ್ ಅವರು ಅಣ್ಣಾಸಾಗರ್ ಪ್ರದೇಶವನ್ನು ತಲುಪಿದಾಗ ರಸ್ತೆ ಬದಿಯ ಮರಕ್ಕೆ ಡಿಕ್ಕಿ ಹೊಡೆದಿದೆ. ಅಪಘಾತದ ಕುರಿತು ಪೊಲೀಸರು ತನಿಖೆ ಆರಂಭಿಸಿದ್ದಾರೆ. ಅಪಘಾತಕ್ಕೆ ಕಾರಣ ಇನ್ನೂ ಪತ್ತೆಯಾಗಿಲ್ಲ.

**ಆಟೋಗೆ ಅಪರಿಚಿತ ವಾಹನ ಡಿಕ್ಕಿ, 9 ಮಂದಿ ಸಾವು:** ಅಪರಿಚಿತ ವಾಹನವೊಂದು ಆಟೋರಿಕ್ಷಾಗೆ ಡಿಕ್ಕಿ ಹೊಡೆದ ಪರಿಣಾಮ 9 ಮಂದಿ ಮೃತಪಟ್ಟಿದ್ದು, ಆರು ಜನರು ಗಾಯಗೊಂಡಿರುವ ಘಟನೆ ಬಿಹಾರದ ಲಖಿಸರಾಯ್ ಜಿಲ್ಲೆಯಲ್ಲಿ ನಡೆದಿದೆ. ಗಾಯಗೊಂಡವರಲ್ಲಿ ಕೆಲವರ ಸ್ಥಿತಿ ಗಂಭೀರವಾಗಿದೆ ಎನ್ನಲಾಗಿದೆ. ಲಖಿಸರಾಯ್-ಸಿಕಂದ್ರ ರಸ್ತೆಯಲ್ಲಿ ಈ ಅಪಘಾತ ಸಂಭವಿಸಿದ್ದು, ಆಟೋ ಲಖಿಸರಾಯ್‌ನಿಂದ ಸಿಕಂದ್ರ ಕಡೆಗೆ ಹೋಗುತ್ತಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಅಪಘಾತದ ವೇಳೆ ಆಟೋರಿಕ್ಷಾದಲ್ಲಿ 15 ಮಂದಿ ಇದ್ದರು. ಅಪಘಾತದ ರಭಸಕ್ಕೆ ಆಟೋರಿಕ್ಷಾ ಜಖಂಗೊಂಡಿತ್ತು.

ಮೃತ ಒಂಬತ್ತು ಮಂದಿಯಲ್ಲಿ ಒಬ್ಬನನ್ನು ಚಾಲಕ ಮನೋಜ್ ಕುಮಾರ್ ಎಂದು ಗುರುತಿಸಲಾಗಿದೆ. ಅಪಘಾತದ ಮಾಹಿತಿ ಪಡೆದ ಪೊಲೀಸ್ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿದ್ದಾರೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಸದರ್ ಆಸ್ಪತ್ರೆಗೆ ಮೊದಲು ಕಳುಹಿಸಲಾಯಿತು, ಆದರೆ ಅವರ ಸ್ಥಿತಿ ಗಂಭೀರವಾದ ಕಾರಣ ಪಾಟ್ನಾ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ಕಳುಹಿಸಲಾಗಿದೆ. ಉಳಿದ ಎಂಟು ಮಂದಿ ಬಲಿಪಶುಗಳು ಮತ್ತು ಗಾಯಗೊಂಡವರ ಗುರುತು ಪತ್ತೆ ಹಚ್ಚಲಾಗುತ್ತಿದೆ. ಅಪರಿಚಿತ ವಾಹನ ಪತ್ತೆಗೆ ತನಿಖೆ ಮುಂದುವರೆದಿದೆ.

ಜೈನ ಸನ್ಯಾಸಿ ವಿದ್ಯಾಸಾಗರ ಅಂತ್ಯಕ್ರಿಯೆಗೆ ತೆರಳುತ್ತಿದ್ದ ವೇಳೆ ಕಾರು ಅಪಘಾತ ಮಹಾರಾಷ್ಟ್ರದ ಗೊಂಡಿಯಾದ ಅಮ್ಗಾಂವ್ ಮತ್ತು ಸಲೇಕಾ ನಡುವಿನ ಕಾಲುವೆಗೆ ಕಾರು ಬಿದ್ದು ಮೂವರು ಸಾವನ್ನಪ್ಪಿದ ಆಘಾತಕಾರಿ ಘಟನೆ ಭಾನುವಾರ ನಡೆದಿದೆ. ಅವರು ಸಲ್ಲೇಖನ ವ್ರತದಿಂದ ದೇಹ ತ್ಯಜಿಸಿದ ಜೈನ ಧರ್ಮಗುರು ಆಚಾರ್ಯ ವಿದ್ಯಾಸಾಗರ ಮಹಾರಾಜರ ಅಂತಿಮ ದರ್ಶನಕ್ಕೆ ತೆರಳುತ್ತಿದ್ದರು. ಈ ವೇಳೆ ಆರು ಜನರಿದ್ದ ಎರ್ಟಿಗಾ ಕಾರು ಕಾಲುವೆಗೆ ಬಿದ್ದು ಅಪಘಾತಕ್ಕೀಡಾಗಿದೆ. ಘಟನೆಯಲ್ಲಿ ಮೂವರು ಸಾವನ್ನಪ್ಪಿದ್ದರೆ, ಇತರರು ಸುರಕ್ಷಿತವಾಗಿದ್ದಾರೆ ಎಂದು ಹೇಳಲಾಗಿದೆ.

## ಅಸಮಾಧಾನ

ರೈತರ ಪ್ರತಿಭಟನೆಗೆ ಸಂಬಂಧಿಸಿದ ಖಾತೆಗಳು ಮತ್ತು ಪೋಸ್ಟ್ ಗಳನ್ನು ಅಮಾನತುಗೊಳಿಸುವ ಭಾರತ ಸರ್ಕಾರದ ಆದೇಶಗಳನ್ನು ಎಕ್ಸ್ ಒಪ್ಪಿಕೊಂಡಿತು, ಆದರೆ ಈ ಕ್ರಮವನ್ನು ತೆಗೆದುಕೊಳ್ಳುವಲ್ಲಿ ತನ್ನ ಅಸಮ್ಮತಿಯನ್ನು ವ್ಯಕ್ತಪಡಿಸಿತು. ಸರ್ಕಾರದ ಸೂಚನೆಗಳನ್ನು ಅನುಸರಿಸಿ ಕ್ರಮ ಕೈಗೊಂಡಿರುವುದಾಗಿ ಮತ್ತು ಈ ಕ್ರಮದ ಬಗ್ಗೆ ಬಳಕೆದಾರರಿಗೆ ತಿಳಿಸಲಾಗಿದೆ ಎಂದು ಎಕ್ಸ್ ಹೇಳಿದೆ.

ಅಭಿವ್ಯಕ್ತಿ ಸ್ವಾತಂತ್ರದ ಬಗ್ಗೆ ಮಾತನಾಡಿರುವ ಎಲಾನ್ ಮಸ್ಕ್ , ಭಾರತ ಸರ್ಕಾರದ ನಿರ್ಧಾರವನ್ನು ನಾವು ಒಪ್ಪಿದ್ದೇವೆ ಆದರೆ ಯಾರ ಹಕ್ಕುಗಳನ್ನು ಕಸಿದುಕೊಳ್ಳಬಾರದು ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಗೃಹ ಸಚಿವಾಲಯದ ಕೋರಿಕೆಯ ಮೇರೆಗೆ ಐಟಿ ಕಾಯ್ದೆಯ ಸೆಕ್ಷನ್ 69 ಎ ಅಡಿಯಲ್ಲಿ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ಫೆಬ್ರವರಿ 14 ಮತ್ತು 19 ರಂದು ಆದೇಶಗಳನ್ನು ಹೊರಡಿಸಿದೆ.

ಫೇಸ್‌ಬುಕ್, ಇನ್‌ಸ್ಟಾಗ್ರಾಮ್, ಟ್ವಿಟರ್, ಸ್ನ್ಯಾಪ್‌ಚಾಟ್ ಮತ್ತು ಇತರ ಕೆಲವು ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್‌ಗಳ ಖಾತೆಗಳು ಮತ್ತು ಲಿಂಕ್‌ಗಳನ್ನು ನಿರ್ಬಂಧಿಸಲು ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ. ದೇಶದಲ್ಲಿ ರೈತರ ಆಂದೋಲನ, ಪ್ರತಿಭಟನೆಗಳು ನಡೆಯುತ್ತಿವೆ. ಫೆ.13ರಂದು ರೈತರ ಪ್ರತಿಭಟನೆ ಆರಂಭವಾಗಿದ್ದು, ಇಂದು 10ನೇ ದಿನಕ್ಕೆ ಕಾಲಿಟ್ಟ ರೈತರು ಪಂಜಾಬ್-ಹರಿಯಾಣ ಗಡಿಯಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ.

ಎಂಎಸ್‌ಪಿ ಖಾತರಿಗಾಗಿ ರೈತರು ದೇಶಾದ್ಯಂತ ಪ್ರತಿಭಟನೆ ನಡೆಸುತ್ತಿದ್ದಾರೆ ಮತ್ತು ರೈತ ಸಂಘಗಳು ಮತ್ತು ಸರ್ಕಾರಗಳ ನಡುವೆ ಹಲವಾರು ಸುತ್ತಿನ ಮಾತುಕತೆಗಳು ನಡೆಯುತ್ತಿವೆ. ಹಾಗೆಯೇ ಬುಧವಾರ ಪ್ರತಿಭಟನೆಯಲ್ಲಿ ನಿರತರಾಗಿದ್ದ 21 ವರ್ಷದ ಯುವಕನೊಬ್ಬ ಬುಲೆಟ್ ತಗುಲಿ ಸಾವನ್ನಪ್ಪಿರುವ ಹಿನ್ನೆಲೆಯಲ್ಲಿ ಎರಡು ದಿನಗಳ ಕಾಲ ಪ್ರತಿಭಟನೆಯನ್ನು ಸ್ಥಗಿತಗೊಳಿಸಿದ್ದಾರೆ.

## ಬಚಾವೋ ಅಭಿಯಾನ ತೀವ್ರ

ಈ ಎಲ್ಲ ಬೆಳವಣಿಗೆಗಳ ಮಧ್ಯೆ, ಸಿಟಿ ರವಿಗೆ ಲೋಕಸಭೆ ಚುನಾವಣೆಗೆ ಟಿಕೆಟ್ ನೀಡುವಂತೆ ಅವರ ಬೆಂಬಲಿಗರು ಹಾಗೂ ಬಿಜೆಪಿ ಕಾರ್ಯಕರ್ತರು ನರೇಂದ್ರ ಮೋದಿ, ಅಮಿತ್ ಶಾ ಸೇರಿದಂತೆ ಬಿಜೆಪಿ ನಾಯಕರಿಗೆ ಪತ್ರ ಬರೆದಿದ್ದಾರೆ. ಒಂದು ಕಡೆ ಶೋಭಾ ವಿರುದ್ಧ ಹಠಾವೋ ಅಭಿಯಾನ ನಡೆಯುತ್ತಿದ್ದು, ಮತ್ತೊಂದು ಕಡೆ ಸಿಟಿ ರವಿಗೆ ಟಿಕೆಟ್ ನೀಡುವಂತೆ ಪತ್ರ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಈ ವಿದ್ಯಮಾನ ಬಿಜೆಪಿ ನಾಯಕರಿಗೆ ಮುಜುಗರ ತರಿಸಿದೆ.

ಬಿಜೆಪಿಗೆ ರಾಜ್ಯದ ಕೆಲವು ಕ್ಷೇತ್ರಗಳಲ್ಲಿ ಆಡಳಿತ ವಿರೋಧಿ ಅಲೆಯ ಬಿಸಿ ತಟ್ಟುತ್ತಿದೆ. ವಿಶೇಷವೆಂದರೆ, ಸ್ವಪಕ್ಷದ ಕಾರ್ಯಕರ್ತರಿಂದಲೇ ಹಾಲಿ ಸಂಸದರ ವಿರುದ್ಧ ವಿರೋಧ ಹೆಚ್ಚಾಗುತ್ತಿದೆ. ಪ್ರಧಾನಿ ಮೋದಿ ಪರ ಅಲೆ, ಒಲವು ಇದ್ದರೂ ಕ್ಷೇತ್ರದ ಸಂಸದರನ್ನು ಕಾರ್ಯಕರ್ತರು ಒಪ್ಪದ ಸ್ಥಿತಿ ಇದೆ. ಉಡುಪಿ ಚಿಕ್ಕಮಗಳೂರು ಕ್ಷೇತ್ರದ ಸಂಘರ್ಷ ಒಂದು ರೀತಿಯದ್ದಾದರೆ ನೆರೆಯ ದಕ್ಷಿಣ ಕನ್ನಡದಲ್ಲಿಯೂ ಹಾಲಿ ಸಂಸದ ನಳಿನ್ ಕುಮಾರ್ ಕಟೀಲ್ ವಿರುದ್ಧ ಅನೇಕ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

## ಸುಧಾಕರ್

ಇಂಥ ವಿಚಾರಗಳ ಬಗ್ಗೆ ನಿರ್ಧಾರ ಕೈಗೊಳ್ಳುವಷ್ಟು ದೊಡ್ಡವನಲ್ಲ. ಪಕ್ಷದ ವರಿಷ್ಠರು ಮತ್ತು ಮುಖ್ಯಮಂತ್ರಿಗಳು ತೆಗೆದುಕೊಳ್ಳುವ ನಿರ್ಧಾರಕ್ಕೆ ಬದ್ಧನಾಗಿರುತ್ತೇನೆ ಎಂದು ಪ್ರದೀಪ್ ಈಶ್ವರ್ ಹೇಳಿದ್ದಾರೆ.

ಯಶವಂತಪುರ ಬಿಜೆಪಿ ಶಾಸಕ ಎಸ್‌ಟಿ ಸೋಮಶೇಖರ್ ಹಾಗೂ ಇತರ ನಾಯಕರ ಜೊತೆ ಚರ್ಚಿಸಿರುವ ಸುಧಾಕರ್, ನಿರಂತರವಾಗಿ ಕಾಂಗ್ರೆಸ್ ಬಾಗಿಲು ತಟ್ಟುತ್ತಿದ್ದಾರೆ ಎನ್ನಲಾಗಿದೆ. ಮೂರು ದಿನಗಳ ಹಿಂದಷ್ಟೇ ಸೋಮಶೇಖರ್ ಜೊತೆ ಸುಧಾಕರ್ ಮಾತುಕತೆ ನಡೆಸಿದ್ದರು. ಇದಕ್ಕೆ ಹೊಸಕೋಟೆ ನಾಯಕನಿಂದ ವೀರಸ ಪ್ರತಿಕ್ರಿಯೆ ವ್ಯಕ್ತವಾಗಿತ್ತು ಎಂದೂ ಹೇಳಲಾಗುತ್ತಿದೆ.

ಮತ್ತೊಂದಡೆ, ಸುಧಾಕರ್ ಅವರನ್ನು ಮರಳಿ ಪಕ್ಷಕ್ಕೆ ಕರೆಸಿಕೊಳ್ಳುವ ಬಗ್ಗೆ ಡಿಸಿಎಂ ಡಿಕೆ ಶಿವಕುಮಾರ್ ಗ್ರೀನ್ ಸಿಗ್ನಲ್ ನೀಡಿದ್ದಾರೆ ಎನ್ನಲಾಗಿದೆ. ಆದರೆ ಸಿಎಂ ಸಿದ್ದರಾಮಯ್ಯ ಅಳೆದು ತೂಗಿ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಸುಧಾಕರ್ ಅವರು ಲೋಕಸಭೆ ಚುನಾವಣೆ ಸಂಬಂಧ ಚಿಕ್ಕಬಳ್ಳಾಪುರ ಕ್ಷೇತ್ರದ ಬಿಜೆಪಿ ಟಿಕೆಟ್‌ಗೆ ಲಾಬಿ ಮಾಡುತ್ತಿದ್ದಾರೆ ಎಂದು ಇತ್ತೀಚೆಗೆ ವರದಿಯಾಗಿತ್ತು. ವಿಧಾನಸಭೆ ಚುನಾವಣೆ ಸೋಲಿನ ಬಳಿಕ ಅಷ್ಟೇನೂ ಸಕ್ರಿಯವಾಗಿ ಇರದಿದ್ದ ಸುಧಾಕರ್ ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆಯೇ ಮತ್ತೆ ಸಕ್ರಿಯರಾಗಿದ್ದಾರೆ. ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆಯೇ ಬಿಜೆಪಿಗೆ ಮತ್ತೊಂದು ಶಾಕ್ ಎದುರಾಗಿದೆ. ಮಾಜಿ ಸಂಸದ ಮುದ್ದಹನುಮೇಗೌಡ ಇಂದು ಸಂಜೆ 4 ಗಂಟೆಗೆ ಕೆಪಿಸಿಸಿ ಕಚೇರಿಯಲ್ಲಿ ಪಕ್ಷ ಸೇರ್ಪಡೆಯಾಗಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಸಚಿವರಾದ ಜಿ.ಪರಮೇಶ್ವರ್, ರಾಜಣ್ಣ ಸಮ್ಮುಖದಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಯಾಗಲಿದ್ದಾರೆ.

ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಟಿಕೆಟ್ ಕೈತಪ್ಪಿದ ಹಿನ್ನೆಲೆ ಮುದ್ದಹನುಮೇಗೌಡ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ್ದರು. ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯಲ್ಲೂ ಟಿಕೆಟ್ ವಂಚಿತರಾಗಿದ್ದರು. ಇದೀಗ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯಲ್ಲಿ ಟಿಕೆಟ್ ಕೈತಪ್ಪುವ ಭೀತಿ ಹಿನ್ನೆಲೆಯಲ್ಲಿ ವಾಪಸ್ ಕಾಂಗ್ರೆಸ್‌ನತ್ತ ಮುಖ ಮಾಡಿದ್ದಾರೆ.

## ಉಗ್ರಪ್ಪ!

ವಿಜಯನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಉಗ್ರಪ್ಪ, ರಾಮ ದೇವರಲ್ಲ, ರಾಮ ದೇವರಲ್ಲ ಅಂತ ಒತ್ತಿ ಒತ್ತಿ ಹೇಳಿದ್ರು. ರಾಮ ದೇವರಲ್ಲ, ರಾಮ ಮನುಷ್ಯ, ಆತ ರಾಜ, ರಾಜಕುಮಾರ ಅಂತ ಉಗ್ರಪ್ಪ ಹೇಳಿದ್ದಾರೆ.

ರಾಮನ ಆದರ್ಶಗಳು ಇಲ್ಲದಿದ್ದರೆ ನೀನು ಹೇಗಪ್ಪ ರಾಮನ ಭಕ್ತನಾಗುತ್ತೀಯಾ? ಅಂತ ಉಗ್ರಪ್ಪ ಪ್ರಶ್ನಿಸಿದ್ರು. ಪಾಪ ನಿಮ್ಮ ಶ್ರೀಮತಿ ಇಲ್ಲಿ ಅಂಜನಾದ್ರಿಗೆ, ಹಂಪಿಗೆ ಬಂದು ಹೋಗಿದ್ದಾರೆ. ಮೊದಲು ರಾಮಭಕ್ತನಾಗಿ ಆ ಹೆಣ್ಣು ಮಗಳ ರಕ್ಷಣೆ ಮಾಡಪ್ಪ ಅಂತ ಮಾತಿನ ಭರದಲ್ಲಿ ಪ್ರಧಾನಿ ಬಗ್ಗೆ ಏಕವಚನ ಪ್ರಯೋಗಿಸಿದ್ರು.

ರಾಮಾಯಣದಲ್ಲಿ ಅಶ್ವಮೇಧ ಯಾಗ ಮಾಡಬೇಕಾದ್ರೆ ಸತಿ ಪತಿ ಸೇರಿ ಮಾಡ್ಬೇಕು ಅಂತ ಗುರು ವಶಿಷ್ಠರು, ವಿಶ್ವಾಮಿತ್ರರು ಹೇಳುತ್ತಾರೆ. ಹಾಗಾಗಿ ಚಿನ್ನದ ಸೀತೆಯನ್ನು ಮಾಡಿ ರಾಮ ಪೂಜೆ ಮಾಡ್ತಾರೆ ಎಂದ ಉಗ್ರಪ್ಪ, ನೀನೇನು ಮಾಡಿದ್ಯಪ್ಪಾ ಮೊನ್ನೆ? ಧರ್ಮವಿರೋಧಿ, ರಾಮನ ವಿಚಾರಕ್ಕೆ ವಿರೋಧಿ ಅಲ್ವಾ ಅಂತ ಮೋದಿಯವರನ್ನು ಪ್ರಶ್ನಿಸಿದ್ರು.

ಕಳೆದ ಬಾರಿ ಪುಲ್ವಾಮಾ ಹೆಸರಲ್ಲಿ ಚುನಾವಣೆ ಮಾಡಿದ್ದಿರಿ, ಈ ಬಾರಿ ರಾಮನ ಹೆಸರಲ್ಲಿ ಎಲೆಕ್ಷನ್‌ಗೆ ಹೊರಟಿದ್ದಿರಿ. ಆದರೆ ರಾಮನ ಹೆಸರು ಹೇಳೋದಕ್ಕೆ ನಿಮಗೆ ಯೋಗ್ಯತೆ ಇಲ್ಲ. ರಾಮನ ಹೆಸರು ಹೇಳೋದಕ್ಕೆ ಯೋಗ್ಯರಿರುವರು ಕಾಂಗ್ರೆಸ್‌ನವರು. ರಾಮ ಕೊಟ್ಟ ವಚನವನ್ನು ಈಡೇರಿಸಿದನು, ಆದರೆ ನರೇಂದ್ರ ಮೋದಿ ವಚನ ಭ್ರಷ್ಟ ಇದ್ದಾರೆ ಅಂತ ಉಗ್ರಪ್ಪ ಗುಡುಗಿದ್ರು.

ಕಾಂಗ್ರೆಸ್‌ನವರೇ ನಿಜವಾದ ರಾಮ ಭಕ್ತರು, ನೀವಲ್ಲ ಅಂತ ಬಿಜೆಪಿ ನಾಯಕರಿಗೆ ಉಗ್ರಪ್ಪ ತಿರುಗೇಟು ಕೊಟ್ಟರು. ಶಿಲಾನ್ಯಾಸ ಮಾಡಿದ್ದು ಕಾಂಗ್ರೆಸ್‌ನವರೇ, ಇದೀಗ ಟ್ರಸ್ಟ್ ಅನ್ನೇ ಹೈಜಾಕ್ ಮಾಡಿದ್ದಾರೆ ಅಂತ ಉಗ್ರಪ್ಪ ಆರೋಪಿಸಿದ್ರು.

## ವಿಸ್ತರಣೆ

ನಿನ್ನೆ ರೈಲ್ವೆ ಮಂಡಳಿ ಹೊರಡಿಸಿರುವ ಆದೇಶದ ಪ್ರಕಾರ, ವಂದೇ ಭಾರತ್ ರೈಲು ಇನ್ನು ಮುಂದೆ ತಿರುವನಂತಪುರ-ಮಂಗಳೂರು ನಡುವೆ ಸಂಚರಿಸಲಿದೆ. ಹೊಸ ರೈಲ್ವೆ ವೇಳಾ ಪಟ್ಟಿಯಂತೆ ಈ ರೈಲು ಮಂಗಳೂರಿನಿಂದ ಬೆಳಗ್ಗೆ 06:15ಕ್ಕೆ ಹೊರಟು ಅಪರಾಹ್ನ 3:05ಕ್ಕೆ ತಿರುವನಂತಪುರಂ ಅನ್ನು ತಲುಪಲಿದೆ. ಹಾಗೆಯೇ ತಿರುವನಂತಪುರಂನಿಂದ ಸಂಜೆ 4:05ಕ್ಕೆ ಹೊರಟು ಮಂಗಳೂರನ್ನು ರಾತ್ರಿ 12:40ಕ್ಕೆ ತಲುಪಲಿದೆ.

ಬುಧವಾರ ಹೊರತು ಪಡಿಸಿ ವಾರದ 6 ದಿನಗಳೂ ವಂದೇ ಭಾರತ್ ರೈಲು ಸಂಚರಿಸಲಿದೆ. ಸಂಸದರ ಮನವಿ ಪುರಸ್ಕರಿಸಿ ವಂದೇ ಭಾರತ್ ರೈಲನ್ನು ಮಂಗಳೂರುವರೆಗೆ ವಿಸ್ತರಿಸಿದ ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಅವರಿಗೆ ಸಂಸದ ನಳಿನ್ ಕುಮಾರ್ ಕಟೀಲ್ ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

## ಮಹಿಳೆ ಸಾವು

ಆದರೆ ಆ ಬಗ್ಗೆ ಹೇಳಿಕೆ ನೀಡಲು ಜಿಲ್ಲಾಡಳಿತ ಹಿಂದೇಟು ಹಾಕಿದೆ. ಮಂಗ ಸಾವನಪ್ಪಿದೆ, ಆದರೆ ಯಾವುದರಿಂದ ಸತ್ತಿದೆ ಎಂಬ ಖಚಿತ ಮಾಹಿತಿ ಇಲ್ಲ ಎಂದಿದ್ದರು. ರೋಗ ಉಲ್ಬಣ ಜೊತೆಗೆ ಮಂಗನ ಸಾವು ಹೆಚ್ಚಿನ ಆತಂಕ ಸೃಷ್ಟಿಸಿದೆ.

ರಾಜ್ಯದಲ್ಲಿ ಮಂಗನ ಖಾಯಿಲೆ ಆತಂಕ ಶುರುವಾಗಿದೆ. ನವೆಂಬರ್ ನಿಂದ ಮೇ ತಿಂಗಳ ಅವಧಿಯಲ್ಲಿ ಮಂಗನ ಕಾಯಿಲೆ ಕಾಣಿಸಿಕೊಳ್ಳುತ್ತದೆ. ಹಠಾತ್ ಜ್ವರ, ಶರೀರದಲ್ಲಿ ತೀವ್ರ ಸ್ನಾಯುಗಳ ನೋವು, ತಲೆ ನೋವು ಇತ್ಯಾದಿ ರೋಗ ಲಕ್ಷಣಗಳಾಗಿವೆ.

ರೋಗ ಹರಡುವಿಕೆಯನ್ನು ತಡೆಗಟ್ಟಲು ಸಾರ್ವಜನಿಕರು ಸಹಕರಿಸುವಂತೆ ಆರೋಗ್ಯ ಇಲಾಖೆ ಮನವಿ ಮಾಡಿದ್ದಾರೆ. ರೋಗ ಲಕ್ಷಣ ಕಂಡು ಬಂದ ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ. ಪ್ರಾಥಮಿಕ ಚಿಕಿತ್ಸೆ ಪಡೆದು KFD ಪರೀಕ್ಷೆಗೆ ರಕ್ತ ಮಾದರಿಯನ್ನು ನೀಡುವಂತೆ ಆರೋಗ್ಯ ಇಲಾಖೆ ಸೂಚನೆ ನೀಡಿದೆ. ಕಾಡಿಗೆ ಹೋಗುವ ಮುನ್ನ ಇಲಾಖೆ ಉಚಿತವಾಗಿ ನೀಡುವ DEPA ತೈಲವನ್ನು ಲೇಪಿಸಿಕೊಂಡು ಹೋಗುವಂತೆ ಸೂಚನೆ ನೀಡಿದ್ದಾರೆ. ಈ ಬಗ್ಗೆ ಡಿಹೆಚ್‌ಓ ಗಳು ಎಚ್ಚರಿಕೆ ವಹಿಸುವಂತೆ ಆರೋಗ್ಯ ಇಲಾಖೆ ತಿಳಿಸಿದೆ.

# ಲೋಕಸಭಾ ಚುನಾವಣೆ- 2024: ಜಿಲ್ಲಾಡಳಿತ ರೆಡಿ



**ಮೈಸೂರು:** 2024 ರ ಲೋಕಸಭಾ ಚುನಾವಣೆ ಸುಗಮವಾಗಿ ನಡೆಯಲು ಜಿಲ್ಲಾಡಳಿತ ಸರ್ವರೀತಿಯಲ್ಲೂ ಸಜ್ಜಾಗಿದೆ ಎಂದು ಜಿಲ್ಲಾಧಿಕಾರಿ ಡಾ.ರಾಜೇಂದ್ರ ಕೆ.ವಿ ಹೇಳಿದರು

ಜಿಲ್ಲಾಡಳಿತ ಭವನದಲ್ಲಿ ರಾಜಕೀಯ ಪಕ್ಷಗಳ ಮುಖಂಡರುಗಳೊಂದಿಗೆ ನಡೆದ ಮಾದರಿ ನೀತಿ ಸಂಹಿತೆ ಹಾಗೂ ಇತರೆ ಚುನಾವಣಾ ವಿಷಯಗಳ ಸಭೆಯಲ್ಲಿ ಮಾತನಾಡಿದ ಅವರು, ಭಾರತ ಚುನಾವಣಾ ಆಯೋಗದ ಸೂಚನೆಯಂತೆ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಎಲ್ಲಾ ಅಗತ್ಯ ಸಿದ್ದತೆಗಳಾಗಿದ್ದು, ಮತಗಟ್ಟೆಗಳು ,ಇವಿಎಂ,ವಿವಿಪ್ಯಾಟ್ಗಳು, ಕ್ರಮಬದ್ದ ಮತದಾರರ ಪಟ್ಟಿಗಳು ಹಾಗೂ ಮಾನವ ಸಂಪನ್ಮೂಲ ಸಿದ್ದವಿದ್ದು, ಸುಗಮ ಹಾಗೂ ನಿರ್ಭೀತ ಚುನಾವಣೆ ನಡೆಸಲು ಆಡಳಿತ ಯಂತ್ರ ಸಿದ್ದವಿದೆ ಎಂದರು.

ಚುನಾವಣೆ ಘೋಷಣೆಯಾದ ನಂತರ ಯಾವುದೇ ಹೊಸ ಯೋಜನೆ ಅಥವ ಕಾಮಗಾರಿಯನ್ನು ಘೋಷಣೆ ಮಾಡುವುದು ಅಥವ ಘೋಷಣೆಯಾಗಿ ಕಾರ್ಯಾರಂಭವಾಗಿಲ್ಲದ ಕಾಮಗಾರಿಯನ್ನು ಪ್ರಾರಂಭಿಸುವುದು ನೀತಿ ಸಂಹಿತೆ ಉಲ್ಲಂಘನೆಯಾಗುತ್ತದೆ. ಈಗಾಗಲೇ ಘೋಷಣೆಗೊಂಡು ಪ್ರಾರಂಭಗೊಂಡು ಚಾಲ್ತಿಯಲ್ಲಿರುವ ಕಾಮಗಾರಿಗಳನ್ನು ಮುಂದುವರೆಸಬಹುದಾಗಿರುತ್ತದೆ.

ರಾಜಕೀಯ ಪಕ್ಷಗಳು ಫ್ಲೆಕ್ಸ್, ಬ್ಯಾನರ್, ಕಟೌಟ್ಗಳನ್ನು ಹಾಕುವ ಮುನ್ನ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯ ಅನುಮತಿ ಪಡೆಯುವುದು ಕಡ್ಡಾಯ.

ಅನುಮತಿ ಕೋರಿ ಸಲ್ಲಿಕೆಯಾಗುವ ಅರ್ಜಿಗಳನ್ನು ಸ್ಥಳೀಯ ಸಂಸ್ಥೆಗಳು ಪರಿಶೀಲಿಸಿ ಅನುಮತಿ ನೀಡಲಿವೆ. ಅನುಮತಿ ಪಡೆಯದೇ ಅಳವಡಿಸಿದರೆ ಅಂತಹವುಗಳನ್ನು ತೆರವುಗೊಳಿಸಲಾಗುವುದು ಹಾಗೂ ನಿಯಮಾನುಸಾರ ದಂಡ ವಿಧಿಸಲಾಗುವುದು.

ಜಿಲ್ಲಾಡಳಿತ ಎಲ್ಲಾ ಮಾಹಿತಿಯನ್ನು ಮುಕ್ತವಾಗಿರಿಸಿದೆ, ಯಾವುದೇ ಮಾಹಿತಿಯನ್ನು ಮುಚ್ಚಿಟ್ಟಿಲ್ಲ, ತಮಗೆ ಯಾವುದೇ ನ್ಯೂನ್ಯತೆ ಕಂಡುಬಂದಲ್ಲಿ ಪ್ರಶ್ನಿಸಬಹುದಾಗಿದೆ

ಮತದಾರರ ಪಟ್ಟಿಯಲ್ಲಿ ಗೊಂದಲಗಳಿದ್ದರೆ ತಾವು ಬೂತ್ ಹಂತದ ಏಜೆಂಟರನ್ನು ನೇಮಿಸಿಕೊಂಡು ಪರೀಕ್ಷಿಸಿಕೊಳ್ಳಿ, ಸೇರ್ಪಡೆ,ತಿದ್ದುಪಡಿಗಳಿದ್ದರೆ ನಾಮಪತ್ರ ಸಲ್ಲಿಸುವ ಹತ್ತು ದಿನಗಳ ಮುಂಚಿನವರೆಗೂ ಅರ್ಜಿ ಸಲ್ಲಿಸಬಹುದು.

80 ತುಂಬಿದವರಿಗೆ ಮನೆಯಿಂದಲೇ ಮತದಾನ : 80 ವರ್ಷ ಮೇಲ್ಪಟ್ಟವರಿಗೆ ಹಾಗೂ ಶೇ,40ಕ್ಕಿಂತ ಹೆಚ್ಚು ಅಂಗವೈಕಲ್ಯ ಇರುವವರಿಗೆ ಮನೆಯಿಂದಲೇ ಮತದಾನ ಮಾಡಲು ಆಯೋಗ ಅವಕಾಶ ಕಲ್ಪಿಸಿದ್ದು ಮನೆಯಲ್ಲೇ ಮತದಾನ ಮಾಡಬಹುದಾಗಿದೆ, ಒಂದು ವೇಳೆ ಆರೋಗ್ಯವಾಗಿದ್ದು ಮತಗಟ್ಟೆಗೆ ಬರುವುದಾದರೂ ಬಂದು ಮತದಾನ ಮಾಡಬಹುದೆಂದರು.

ಈ ಹಿಂದೆ 2905 ಇದ್ದ ಮತಗಟ್ಟೆಗಳ ಸಂಖ್ಯೆ 2915 ಕ್ಕೆ ಹೆಚ್ಚಳವಾಗಿವೆ ಹಾಗೂ ಪ್ರತಿ ಮತಗಟ್ಟೆಗಳಲ್ಲೂ ಮೂಲಭೂತ ಸೌಲಭ್ಯಗಳಾದ ನೀರು, ರ?ಯಾಂಪ್, ವಿದ್ಯುತ್, ಶೌಚಾಲಯ ಹಾಗೂ ನೆರಳಿನ ವ್ಯವಸ್ಥೆ ಮಾಡಲಾಗಿದೆ ಎಂದರು.

ಮತದಾರರ ಪಟ್ಟಿಯ ಪರಿಷ್ಕರಣೆ ಸಲುವಾಗಿ ಆರಂಭಿಸಿರುವ ಮತದಾರರ ಸಹಾಯವಾಣಿ- 1950 ನ್ನು ಸಾರ್ವಜನಿಕರು, ರಾಜಕೀಯ ಪಕ್ಷಗಳು ಸದುಪಯೋಗಪಡಿಸಿಕೊಳ್ಳಬೇಕೆಂದರು.

ಸಭೆಯಲ್ಲಿ, ಜೆಡಿಎಸ್ ಪಕ್ಷದ ಪಾಲ್ಕನ್ ಬೋರೇಗೌಡ, ಕಾಂಗ್ರೆಸ್ ಪಕ್ಷದ ಕೆ.ಸಿ.ಶೌಕತ್,ಬಿಜೆಪಿ ಪಕ್ಷದ ಪಾಪಣ್ಣ ಎಎಪಿ ಪಕ್ಷದ ವಿಶ್ವನಾಥ್ ಕುಲಕರ್ಣಿ, ಬಿ.ಎಸ್.ಪಿ ಪಕ್ಷದ ಚೇತನ್, ಮತ್ತಿತರರಿದ್ದರು

## ಅನಧಿಕೃತ ಗೈರು; ಏಳು ದಿನಗಳೊಳಗಾಗಿ ಸಮಜಾಯಿಷಿ ನೀಡತಕ್ಕದ್ದು

**ಮಂಡ್ಯ:** ನಾಗಮಂಗಲ ಪುರಸಭೆಯ ಪೌರಕಾರ್ಮಿಕ ರಮೇಶ್ ಅವರು 2022ನೇ ಜನವರಿ 1 ರಿಂದ ಈವರೆಗೂ ಹಾಗೂ ಪುರಸಭೆಯ ಕ್ಷೇಮಾಭಿವೃದ್ಧಿ ನೌಕರ ಜಯರಾಮ ಅವರು 2020ನೇ ಇಸವಿ ಆಗಸ್ಟ್ 20 ರಿಂದ ಅನಧಿಕೃತವಾಗಿ ಗೈರು ಹಾಜರಿಯಾಗುವ ಮೂಲಕ ಕರ್ತವ್ಯ ಲೋಪ ಮಾಡಿರುತ್ತಾರೆ. ಅನಧಿಕೃತ ಗೈರುಹಾಜರಿ ಬಗ್ಗೆ ಸರ್ಕಾರಿ ಸುತ್ತೋಲೆ ರೀತ್ಯಾ ಕ್ರಮವಹಿಸುವುದರ ಜೊತೆಗೆ ಬಗ್ಗೆ ಸೂಕ್ತ ದಾಖಲಾತಿಗಳೊಂದಿಗೆ ಲಿಖಿತ ಸಮಜಾಯಿಷಿಯನ್ನು ನೀಡಲು ಸಾಕಷ್ಟು ಬಾರಿ ನೋಟಿಸ್ ಜಾರಿ ಮಾಡಿದ್ದರೂ ಕೂಡ ಈವರೆವಿಗೂ ಕಛೇರಿಯ ಕರ್ತವ್ಯಕ್ಕೆ ಹಾಜರಾಗಿ ತಮ್ಮ ಲಿಖಿತ ಸಮಜಾಯಿಷಿಯನ್ನು ನೀಡಿರುವುದಿಲ್ಲ. ಜನವರಿ 16, 2024 ರಂದು ಅಂತಿಮ ನೋಟಿಸ್‌ಗಳನ್ನು ನಾಗಮಂಗಲ ಪುರಸಭೆ ಕಛೇರಿಯು ರಿಜಿಸ್ಟರ್ ಪೋಸ್ಟನ್ನು ಪಡೆದಿರುವುದಿಲ್ಲ. ತಾವುಗಳು ಕಚೇರಿಗೆ ಖುದ್ದು ಹಾಜರಾಗಿ ಲಿಖಿತ ಸಮಜಾಯಿಷಿಯನ್ನು ಸುದ್ದಿ ಪ್ರಕಟಣೆಗೊಂಡ ಏಳು ದಿನಗಳೊಳಗಾಗಿ ನೀಡತಕ್ಕದ್ದು. ತಪ್ಪಿದ್ದಲ್ಲಿ ನಿಯಮಾವಳಿ ಪ್ರಕಾರ ನಿಯಮಾನುಸಾರ ಸರ್ಕಾರಿ ಸುತ್ತೋಲೆ ರೀತ್ಯಾ ಕ್ರಮವಹಿಸಲಾಗುವುದು ಎಂದು ನಾಗಮಂಗಲ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು, ನಾಳೆ ನೀರು ಸರಬರಾಜಿನಲ್ಲಿ ವ್ಯತ್ಯಯ

**ಮಂಡ್ಯ:** ಶ್ರೀರಂಗಪಟ್ಟಣ ತಾಲ್ಲೂಕು ವ್ಯಾಪ್ತಿಗೆ ಸೇರಿದ 66/11 ಕೆವಿ ವಿದ್ಯುತ್ ಉಪ ವಿತರಣಾ ಕೇಂದ್ರದ ನಿರ್ವಹಣಾ ಕಾಮಗಾರಿಯನ್ನು ಸೆಸ್ಕ್ ವತಿಯಿಂದ ಹಮ್ಮಿಕೊಂಡಿರುವುದರಿಂದ ಫೆಬ್ರವರಿ 22 ರಂದು ಬೆಳಿಗ್ಗೆ 10 ರಿಂದ ಸಂಜೆ 6 ರವರೆಗೆ ವಿದ್ಯತ್ ಸರಬರಾಜನ್ನು ಕಡಿತಗೊಳಿಸುವುದಾಗಿ ತಿಳಿಸಿರುತ್ತಾರೆ. ಆದ್ದರಿಂದ ಫೆಬ್ರವರಿ 22 ರಂದು ಮಂಡ್ಯ ನಗರಕ್ಕೆ ನೀರನ್ನು ಪಂಪು ಮಾಡಲು ಸಾಧ್ಯವಾಗುವುದಿಲ್ಲ ನಗರದ ಸಾರ್ವಜನಿಕರಿಗೆ ಫೆಬ್ರವರಿ 22 ಮತ್ತು 23 ರಂದು ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ನೀರು ಬಂದ ವೇಳೆ ಶೇಖರಿಸಿಟ್ಟುಕೊಂಡು ಜಲಮಂಡಳಿಯೊಂದಿಗೆ ಸಹಕರಿಸುವಂತೆ ಮಂಡ್ಯ ಉಪ ವಿಭಾಗ ಕನನೀಸ ಮತ್ತು ಒಚ ಮಂಡಳಿಯ ನಿರ್ವಹಣಾ ಸಹಾಯಕ ಕಾರ್ಯಪಾಲಕ ಅಭಿಯಂತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 28ರಂದು ವಿಜ್ಞಾನ ದಿನಾಚರಣೆ

**ಮಂಡ್ಯ.**ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು Indigenous Technologies for Societal Development ಎಂಬ ವಿಷಯದ ಮೇಲೆ ಫೆಬ್ರವರಿ 28 ರಂದು ಅಕಾಡೆಮಿ ಕಚೇರಿಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಪದವಿ ಹಾಗೂ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದ್ದು, Drawing & Painting ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನವನ್ನು ವಿತರಿಸಲಾಗುತ್ತದೆ. ಆಸಕ್ತ ವಿದ್ಯಾರ್ಥಿಗಳು google form - https://forms.gle/e5UbmGWkkaC1utgLA ಮೂಲಕ ನೋಂದಾಯಿಸಿಕೊಳ್ಳಬಹುದಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ವೆಬ್ ಸೈಟ್ http://www.kstacademy.in ನ್ನು ವೀಕ್ಷಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಬಹಿರಂಗ ಹರಾಜು ಪ್ರಕಟಣೆ

**ಮಂಡ್ಯ:** ಮಳವಳ್ಳಿ ಪಟ್ಟಣದ ಸಂತೆ ಮೈದಾನದಲ್ಲಿ ಪ್ರತಿ ಶುಕ್ರವಾರ ನಡೆಯುವ ವಾರದ ಸಂತೆ ಸುಂಕ ವಸೂಲಿ ಮಾಡುವ ಹಕ್ಕು ಹಾಗೂ ಮಳವಳ್ಳಿ ಪುರಸಭಾ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ಸ್ಥಳ ಹಾಗೂ ರಸ್ತೆ ಬದಿಯಲ್ಲಿ ಸಣ್ಣಪುಟ್ಟ ವ್ಯಾಪಾರಸ್ತರಿಂದ ನೆಲ ಸುಂಕ ವಸೂಲಿ ಮಾಡುವ ಹಕ್ಕು ಮತ್ತು ಪುರಸಭಾ ಮುಂಭಾಗ ಇರುವ 6 ತೆಂಗಿನ ಮರದ ಫಸಲಿನ ಹರಾಜಿನ ಹಕ್ಕನ್ನು ಫೆಬ್ರವರಿ 29 ರಂದು ಬೆಳಿಗ್ಗೆ 11 ಗಂಟೆಗೆ ಬಹಿರಂಗ ಹರಾಜು ನಡೆಯಲಿದೆ ಎಂದು ಪುರಸಭೆ ಮಳವಳ್ಳಿ ಮುಖ್ಯಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಂದು ದಿನದ ಸಂಶೋಧನಾ ಕಾರ್ಯಾಗಾರ

**ಮೈಸೂರು:** ನಗರದ ಎಂ.ಎಂ.ಕೆ ಮತ್ತು ಎಸ್.ಡಿ.ಎಂ ಮಹಿಳಾ ಮಹಾ ವಿದ್ಯಾಲಯ ಗ್ರಂಥಾಲಯ ವಿಭಾಗ ಮತ್ತು ಆಂತರಿಕ ಗುಣಮಟ್ಟಕೋಶದ ವತಿಯಿಂದ ಸಂಶೋಧನಾ ವಿಧಾನ ಸಂಶೋಧನಾ ಲೇಖನಗಳ ಪ್ರಕಟಣೆ ಬಗ್ಗೆ ಕಾರ್ಯಾಗಾರವನ್ನು ಆಯೋಜಿಸಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ಮೈಸೂರು ವಿಶ್ವವಿದ್ಯಾನಿಲಯ ಕಾಲೇಜು ಅಭಿವೃದ್ಧಿ ಸಮಿತಿ ಆದ ಪ್ರೊ. ಡಿ.ಆನಂದ ಅವರು ದೀಪ ಬೆಳಗುವುದರ ಮೂಲಕ ಉದ್ಘಾಟಿಸಿದರು. ಕಾರ್ಯಕ್ರಮವನ್ನು ಉದ್ಘಾಟಿಸಿ ವಿದ್ಯಾರ್ಥಿಗಳು ರಚನಾತ್ಮಕವಾಗಿ ಚಿಂತಿಸಿ ತಮ್ಮ ಅಭಿವೃದ್ಧಿಗೆ ತಮ್ಮನ್ನು ತೊಡಗಿಸಿಕೊಳ್ಳುವಂತೆ ಪ್ರೇರೇಪಿಸಿದರು.

ವಿದ್ಯಾರ್ಥಿನಿಯರು ಪ್ರತಿಯೊಂದನ್ನು ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಸಂಶೋಧನಾ ಬರಹಗಳು ವಸ್ತುನಿಷ್ಟತೆ ನಿಖರತೆ ಸರಳತೆ, ಮತ್ತು ಪ್ರಸ್ತುತಪಡಿಸುವಂತಿರಬೇಕು. ಕೃತಕಬುದ್ಧಿಮತ್ತೆಯ ಪ್ರಯೋಜನವನ್ನು ವಿವರಿಸಿ, ಅದರ ಮಿತಿಗಳನ್ನು ಕೂಡಾ ಅರಿತುಕೊಳ್ಳುವಂತೆ ಸಲಹೆ ನೀಡಿದರು. ಸುಸ್ಥಿರ ಸಂಶೋಧನಾ ಬರಹವು ಈಗಿನ ಅಗತ್ಯವಾಗಿದೆ ಎಂದು ತಿಳಿಸಿದರು. ಸಂಶೋಧನೆಯು ಯಾವಾಗಲೂ ಗೊಂದಲದ ವಿಷಯಕ್ಕೆ ಪರಿಹಾರವನ್ನು ಕೊಡುವಂತೆ ಇರಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನ ಕಾಲೇಜಿನ ಪ್ರಾಂಶುಪಾಲರಾದ ಪ್ರೊ ಸಾಯಿನಾಥ್ ಮಲ್ಲಿಗೆಮಾಡು ವಹಿಸಿ ಮಾತನಾಡುತ್ತಾ ಯುವ ವಿದ್ಯಾರ್ಥಿಗಳು ಈಗಿನಿಂದಲೇ ಸಂಶೋಧನೆಯ ಕಡೆಗೆ ಒಲವು ಬೆಳೆಸಿಕೊಂಡು ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಂಡ್ಯದ ಸ್ನಾತಕೋತ್ತರ ಅರ್ಥಶಾಸ್ತ್ರ ವಿಭಾಗದ ಪ್ರೊ. ಜಿ.ಎಸ್ ಪ್ರೇಮಕುಮಾರ ಮತ್ತು ಎಸ್.ಡಿ.ಎಂ ಐ.ಎಂ.ಡಿಯ ಅರ್ಥಶಾಸ್ತ್ರ ವಿಭಾಗದ ಪ್ರೊಫೆಸರ್ ಬಿ. ವೆಂಕಟರಾಜ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ವಿದ್ಯಾರ್ಥಿಗಳಿಗೆ ಸಂಶೋಧನಾ ಪ್ರಬಂಧ ರಚನೆ ಮತ್ತು ಪ್ರಕಟಣೆಯ ವಿಧಾನಗಳನ್ನು ತಿಳಿಸಿದರು. ಕಾರ್ಯಕ್ರಮದಲ್ಲಿ ಐ.ಕ್ಯು.ಎ.ಸಿ. ಸಂಚಾಲಕರಾದ ಗಣಕ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಸುಕೃತ ಕೆ.ಎಸ್,ಗ್ರಂಥಾಪಾಲಕರಾದ ಶ್ರೀಮತಿ ಪದ್ಮಾ ಬಿ.ಎಸ್, ಕಾರ್ಯಕಾರಿ ಸಮಿತಿಯ ಶ್ರೀಮತಿ ಬೃಂದಾ, ಬಿ ಬಿ ಎಂ ವಿಭಾಗದ ಮುಖ್ಯಸ್ಥ ಶಿವ ಬೀರಪ್ಪ ಕುಮಾರಿ ಸುಪ್ರದಾ ಜೈನ್ ಮತ್ತು ಶ್ರೀಮತಿ ರಾಜೇಶ್ವರಿ ಹೆಚ್. ಆರ್ ಮತ್ತು ವಿದ್ಯಾರ್ಥಿನಿಯರು, ಅಧ್ಯಾಪಕರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿನಿಯರಿಗೆ ಪ್ರಮಾಣ ಪತ್ರವನ್ನು ವಿತರಿಸಲಾಯಿತು.



# ಮಕ್ಕಳ ಆರೈಕೆ ತಾಣ ಕೂಸಿನ ಮನೆ

**ಮೈಸೂರು:** ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಗ್ರಾಮೀಣ ಭಾಗದಲ್ಲಿ ಸರ್ಕಾರ ಆರಂಭಿಸಿರುವ ಕೂಸಿನ ಮನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರಲ್ಲಿ ಕಾರ್ಮಿಕ ಮಹಿಳೆಯರ ಪಾಲಿಗೆ ವರದಾನವಾಗಿ ಪರಿಣಮಿಸಿದೆ.

ಮ-ನರೇಗಾ ಕೆಲಸದಲ್ಲಿ ತೊಡಗಿಸಿಕೊಳ್ಳುವ ಕಾರ್ಮಿಕ ಮಹಿಳೆಯರ ಮೂರು ವರ್ಷದ ಒಳಗಿನ ಮಕ್ಕಳನ್ನು ಆರೈಕೆ ಮಾಡುವ ಕೂಸಿನ ಮನೆ ಕೇಂದ್ರ ಜನ ಮೆಚ್ಚುಗೆಗೂ ಪಾತ್ರವಾಗಿದೆ. ಕೂಲಿ ಕಾರ್ಮಿಕ ಮಹಿಳೆಯರ ಮಕ್ಕಳ ಪೋಷಣೆ, ರಕ್ಷಣೆ, ಪಾಲನೆ ಹಾಗೂ ಪೌಷ್ಠಿಕತೆ ಹೆಚ್ಚಳಕ್ಕೆ ಈ ಕೇಂದ್ರ ಬಹುದೊಡ್ಡ ಹೆಜ್ಜೆಯನ್ನಿರಿಸಿದೆ. ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೆ ತಮ್ಮ ಮಕ್ಕಳನ್ನು ಕೂಸಿನ ಮನೆಯಲ್ಲಿ ಇರಿಸಿ ನೆಮ್ಮದಿಯಿಂದ ಕೂಲಿ ಮಾಡಲು ಕೂಸಿನ ಮನೆಯ ಕೇಂದ್ರ ನೆರವಿಗೆ ನಿಂತಿದೆ.

ಮೈಸೂರು ಜಿಲ್ಲೆಯಲ್ಲಿ ಈಗಾಗಲೇ 80 ಕಡೆಗಳಲ್ಲಿ ಕೇಂದ್ರ ಪ್ರಾರಂಭವಾಗಿದೆ. ಎಚ್.ಡಿ.ಕೋಟೆಯಲ್ಲಿ 7, ಹುಣಸೂರಿನಲ್ಲಿ 16, ಕೆ.ಆರ್.ನಗರದಲ್ಲಿ 6, ಮೈಸೂರು 12, ನಂಜನಗೂಡು 11, ಪಿರಿಯಾಪಟ್ಟಣ 12, ಸರಗೂರು 6, ತಿ.ನರಸೀಪುರ 10 ಕಡೆಗಳಲ್ಲಿ ಕೂಸಿನ ಮನೆ ಕಾರ್ಯಾರಂಭ ಮಾಡಿ ಮಕ್ಕಳ ಪಾಲನೆ, ಪೋಷಣೆಗೆ ಶ್ರಮಿಸುತ್ತಿವೆ. ಮುಂದಿನ ಮಾರ್ಚ್ ಒಳಗೆ ಜಿಲ್ಲೆಗೆ ನಿಗಧಿಪಡಿಸಿರುವ 109 ಗುರಿಯನ್ನು ತಲುಪುವ ನಿಟ್ಟಿನಲ್ಲಿ ಮೈಸೂರು ಜಿಲ್ಲಾ ಪಂಚಾಯಿತಿ ಸನ್ನದ್ಧವಾಗಿದೆ.

ಕೂಸಿನ ಮನೆ ನಿರ್ವಹಣೆಗಾಗಿ ಸರ್ಕಾರದಿಂದ ಮೈಸೂರು ಜಿಲ್ಲೆಗೆ 1 ಕೋಟಿ 9 ಲಕ್ಷ ರೂ. ಅನುದಾನ ಬಿಡುಗಡೆ ಮಾಡಲಾಗಿದ್ದು, ಗ್ರಾಮ ಪಂಚಾಯಿತಿಗಳಿಗೆ ಮರುಬಿಡುಗಡೆ ಮಾಡಲಾಗಿದೆ.

### ಮನೆಯಲ್ಲಿ ಏನೇನಿವೆ?

ಇನ್ನು, ಶಿಶು ಪಾಲನಾ ಕೇಂದ್ರಗಳನ್ನು ಮಕ್ಕಳ ಸ್ನೇಹಿ ಕೇಂದ್ರಗಳನ್ನಾಗಿ ಮಾಡಿದ್ದು, ಈಗಾಗಲೇ ಕೇಂದ್ರದ ಗೋಡೆಗಳಿಗೆ ಮಕ್ಕಳ ಸ್ನೇಹಿ ಪೇಂಟಿಂಗ್ ಮಾಡಿಸುವ ಮೂಲಕ ಅಂದ ಚೆಂದವನ್ನು ಹೆಚ್ಚಿಸಲಾಗಿದೆ. ಜೊತೆಗೆ ಮಕ್ಕಳ ಆಟೋಟಕ್ಕೆ ಆಟಿಕೆಗಳನ್ನು ಒದಗಿಸಲಾಗಿದ್ದು, ಮಕ್ಕಳು ಕೂಡ ಖುಷಿಯಿಂದ ಆಟವಾಡುತ್ತಿವೆ. ಚಿಕ್ಕ ಮಕ್ಕಳಿಗೆ ಭದ್ರವಾದ ಭಾವನಾತ್ಮಕ ವಾತಾವರಣವನ್ನು ನಿರ್ಮಿಸಿ ಉಳಿಸಿಕೊಳ್ಳುವಲ್ಲಿ ಕೂಸಿನ ಮನೆಯ ಪಾತ್ರವು ಅತ್ಯಂತ ಮಹತ್ವದ್ದಾಗಿದೆ.




### ಸರ್ಕಾರಿ ಕಟಡಗಳಲ್ಲೇ ಕೂಸಿನ ಮನೆ ಆರಂಭ

ಎಲ್ಲೆಲ್ಲಿ ಮ-ನರೇಗಾ ಕಾಮಗಾರಿ ಹೆಚ್ಚೆಚ್ಚು ನಡೆಯುತ್ತಿದ್ದೆಯೂ ಆಯಾ ಭಾಗದಲ್ಲಿನ ಸರ್ಕಾರಿ ಕಟ್ಟಡಗಳಲ್ಲೆ ಕೂಸಿನ ಮನೆ ಸಿದ್ದಗೊಂಡಿದೆ. ಶಾಲಾ ಕಟ್ಟಡ, ಸಮುದಾಯ ಭವನ, ಗ್ರಾ.ಪಂ ಕಟ್ಟಡ ಸೇರಿ ಇನ್ನಿತರೆ ಸರ್ಕಾರಿ ಕಟ್ಟಡಗಳನ್ನು ಗುರುತಿಸಿ, ಕಟ್ಟಡಗಳಿಗೆ ಹೊಸ ಸ್ವರೂಪ ನೀಡುವ ಮೂಲಕ ಸುಂದರಗೊಳಿಸಲಾಗಿದೆ. ಅಲ್ಲದೇ ಮಕ್ಕಳ ಸ್ನೇಹಿ ಚಿತ್ರಗಳನ್ನು ಬಿಡಿಸಿ ಮಕ್ಕಳನ್ನು ಆಕರ್ಷಿಸಲಾಗುತ್ತಿದೆ.

### ಜಾಬ್ ಕಾರ್ಡ್ದಾರರೇ ಆರೈಕೆದಾರರು

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಜಾಬ್ ಕಾರ್ಡ್ ಪಡೆದಿರುವ 10ನೇ ತರಗತಿ ಪಾಸಾಗಿರುವ ಮಹಿಳಾ ಕಾರ್ಮಿಕರೇ ಕೇರ್ ಟೇಕರ್ಸ್ ಆಗಿ ಕೂಸಿನ ಮನೆ ಕೇಂದ್ರದಲ್ಲಿ ಕಾರ್ಯ ನಿರ್ವಹಿಸಲಿದ್ದಾರೆ. ಕೂಸಿನ ಮನೆಯಲ್ಲಿ ಮಕ್ಕಳ ಲಾಲನೆ ಪಾಲನೆ ಕುರಿತು ಈಗಾಗಲೇ ಮೊದಲನೇ ಹಂತದಲ್ಲಿ 351 ಆರೈಕೆದಾರರಿಗೆ ತರಬೇತಿ ನೀಡಲಾಗಿದೆ. ಪ್ರತಿ ಕೇಂದ್ರಕ್ಕೆ ಸುಮಾರು 25 ಮಕ್ಕಳಿಗೆ ಅವಕಾಶವಿದ್ದು, ಪ್ರತಿದಿನ ಕನಿಷ್ಠ 6-7 ಗಂಟೆ ಮಕ್ಕಳನ್ನು ನೋಡಿಕೊಳ್ಳುವ ಜವಾಬ್ದಾರಿ ಆರೈಕೆದಾರರದ್ದಾಗಿದೆ. ಮಕ್ಕಳಿಗೆ ಬೆಳಗ್ಗೆ ಉಪಾಹಾರ, ಮಧ್ಯಾಹ್ನ ಊಟ, ಸಂಜೆ ಲಘು ಉಪಾಹಾರ ನೀಡಲಾಗುತ್ತಿದ್ದು, ಮಕ್ಕಳ ಹಾಜರಾತಿಯನ್ನೂ ನಿರ್ವಹಿಸಲಾಗುತ್ತಿದೆ. ಪ್ರತಿ ಕೇಂದ್ರಕ್ಕೆ ಆಯಾ ಗ್ರಾಪಂ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ 11 ಜನರ ಸಮಿತಿಯೂ ಇರುತ್ತದೆ.

### ಮಕ್ಕಳಿಗೆ ಪೌಷ್ಟಿಕ ಆಹಾರ ವಿತರಣೆ

ಸೋಮವಾರ: ಹಾಲು, ದಾಲ್ ಕಿಚಡಿ, ನ್ಯೂಟ್ರಿಮಿಕ್ಸ್, ಮಂಗಳವಾರ: ಹಾಲು, ಸಿಹಿ ಪೊಂಗಲ್, ನ್ಯೂಟ್ರಿಮಿಕ್ಸ್, ಬುಧವಾರ: ಹಾಲು, ಮೊಳಕೆ ಬರಿಸಿದ ಗೋದಿ ಪಾಯಸ, ಶೇಂಗಾ ಲಾಡು, ಗುರುವಾರ: ಹಾಲು, ದಾಲ್ ಕಿಚಡಿ, ನ್ಯೂಟ್ರಿಮಿಕ್ಸ್, ಶುಕ್ರವಾರ: ಹಾಲು, ಸಿಹಿ ಪೊಂಗಲ್, ನ್ಯೂಟ್ರಿಮಿಕ್ಸ್, ಶನಿವಾರ: ಮೊಳಕೆ ಬರಿಸಿದ ಗೋದಿ ಪಾಯಸ, ನ್ಯೂಟ್ರಿಮಿಕ್ಸ್ ವಿತರಣೆ ಮಾಡಲಾಗುತ್ತಿದೆ. ಮಕ್ಕಳಿಗೆ ಈ ರೀತಿಯ ಆರೋಗ್ಯಕರ ಪೌಷ್ಟಿಕ ಆಹಾರವನ್ನು ಒದಗಿಸುತ್ತಿರುವುದರಿಂದ ಹಾಗೂ ಆರೋಗ್ಯ ತಪಾಸಣೆ ಕೈಗೊಳ್ಳುವುದರಿಂದ ಗ್ರಾಮೀಣ ಭಾಗದ ಮಕ್ಕಳು ಪದೇ ಪದೇ ಅನಾರೋಗ್ಯಕ್ಕೆ ತುತ್ತಾಗುವುದನ್ನು ತಪ್ಪಿಸಲು ಸಹಕಾರಿಯಾಗಿದೆ.

“ ಮ-ನರೇಗಾ ಯೋಜನೆಯಲ್ಲಿ ಮಹಿಳಾ ಕೂಲಿಕಾರರಿಗೆ ಸಹಕಾರಿಯಾಗಲು ಈ ಯೋಜನೆ ಜಾರಿಗೆ ತರಲಾಗಿದೆ. ಚಿಕ್ಕ ಮಕ್ಕಳ ತಾಯಂದಿರು ಮಕ್ಕಳ ಲಾಲನೆ-ಪಾಲನೆಯಲ್ಲಿ ತೊಡಗುವುದರಿಂದ ಮ-ನರೇಗಾ ಯೋಜನೆಯ ಪ್ರಯೋಜನ ಪಡೆಯಲು ಸಾಧ್ಯವಾಗುತ್ತಿರಲಿಲ್ಲ. ಪ್ರಸ್ತುತ ಈ ಯೋಜನೆಯು ಮಕ್ಕಳಿಗೆ ಆಶ್ರಯ ಹಾಗೂ ಮಹಿಳಾ ಕೂಲಿಕಾರರಿಗೆ ಕೂಲಿ ಕೆಲಸ ಹಾಗೂ ಆರ್ಥಿಕ ಸ್ವಾವಲಂಭಿಯಾಗಲು ಸಹಕಾರಿಯಾಗುತ್ತದೆ.

। ಕೆ.ಎಂ.ಗಾಯಿತ್ರಿ,ಜಿ.ಪಂ ಸಿಇಒ

“ ಮೈಸೂರು ಜಿಲ್ಲೆಯಲ್ಲಿ ಮ-ನರೇಗಾ ಕೂಲಿ ಜಾಬ್ ಕಾರ್ಡ್ ಹೊಂದಿರುವವರ ಪೈಕಿ ಮೂರು ವರ್ಷದ ಒಳಗಿನ ಮಕ್ಕಳನ್ನು ಗುರುತಿಸಿ ಅವರನ್ನು ಕೂಸಿನ ಮನೆಗೆ ಕರೆತರುವ ಪ್ರಯತ್ನ ನಿರಂತರವಾಗಿ ಸ್ಥಳೀಯ ಸಹಕಾರದಿಂದ ನಡೆಯುತ್ತಿದೆ. ಈಗಾಗಲೇ 80 ಕಡೆಗಳಲ್ಲಿ ಯಶಸ್ವಿಯಾಗಿ ನಡೆಯುತ್ತಿದ್ದು, ಉಳಿದ ಕಡೆಗಳಲ್ಲಿಯೂ ಶೀಘ್ರವಾಗಿ ಜನ ಸೇವೆಗೆ ಕೇಂದ್ರ ತೆರೆದುಕೊಳ್ಳಲಿವೆ.

। ಡಾ.ಎಂ.ಕೃಷ್ಣರಾಜು, - ಜಿ.ಪಂ. ಉಪಕಾರ್ಯದರ್ಶಿ(ಅಭಿವೃದ್ಧಿ) ಹಾಗೂ ಕೂಸಿನ ಮನೆಯ ಜಿಲ್ಲಾ ನೋಡಲ್ ಅಧಿಕಾರಿ

# ಕೃಷಿಕ್ ಸರ್ವೋದಯ ಫೌಂಡೇಶನ್‌ನಿಂದ ಶೈಕ್ಷಣಿಕ ಕಟ್ಟಡಕ್ಕೆ ಶಂಕುಸ್ಥಾಪನೆ

**ಮೈಸೂರು:** ಕೃಷಿಕ್ ಸರ್ವೋದಯ ಫೌಂಡೇಶನ್ (ಕೆಎಸ್ ಎಫ್), ಮೈಸೂರು ವತಿಯಿಂದ ನೂತನ ಶೈಕ್ಷಣಿಕ ಕಟ್ಟಡದ ಶಂಕು ಸ್ಥಾಪನೆ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿ ಮಾತನಾಡಿದ ಕೃಷಿಕ್ ಸರ್ವೋದಯ ಫೌಂಡೇಶನ್, ಮೈಸೂರು ಶಾಖೆ ಅಧ್ಯಕ್ಷರಾದ ನಿವೃತ್ತ ಐಎಎಸ್ ಅಧಿಕಾರಿ ಎಂ ಕೆ ಶಂಕರಲಿಂಗೇಗೌಡ ಮಾತನಾಡಿ, 1992 ರಲ್ಲಿ ನಿವೃತ್ತ ಐಎಎಸ್ ಅಧಿಕಾರಿ ಡಾ. ವೈ ಕೆ ಪುಟ್ಟ ಸೋಮೇಗೌಡ ಯವರ ದೂರದೃಷ್ಟಿ ಫಲವಾಗಿ ಬೆಂಗಳೂರಿನಲ್ಲಿ ಶುರುವಾದ ಸಂಸ್ಥೆ ಇಂದು ಮೈಸೂರು, ಹಾಸನ, ತುಮಕೂರು ಜಿಲ್ಲೆಗಳಲ್ಲಿ ಶಾಖೆಗಳನ್ನು ಹೊಂದಿದ್ದು, ಗ್ರಾಮೀಣ ಪ್ರದೇಶದ ವಿದ್ಯಾವಂತ ಯುವಕ ಯುವತಿಯರಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯಶಸ್ವಿಯಾಗಿ ಎದುರಿಸುವ ಸಾಮರ್ಥ್ಯವನ್ನು ಬೆಳೆಸಲು ವೃತ್ತಿ ಮಾರ್ಗದರ್ಶನ ಮತ್ತು ತರಬೇತಿಯನ್ನು ನೀಡಲಾಗುತ್ತಿದೆ. ಕೇಂದ್ರ ಮತ್ತು ರಾಜ್ಯ ಲೋಕಸೇವಾ ಆಯೋಗಗಳು ನಡೆಸುತ್ತಿರುವ ನಾಗರೀಕ ಸೇವಾ ಪರೀಕ್ಷೆಯ ಪಠ್ಯ ವಿಷಯ ಮತ್ತು ಪರೀಕ್ಷಾ ವಿಧಾನಗಳಲ್ಲಿ ಆಗಿರುವ ಬದಲಾವಣೆಯನ್ನು ನಮ್ಮ ಸಂಸ್ಥೆಯು ಗಮನಿಸಿ ತಜ್ಞರ ಜೊತೆ ಸಮಾಲೋಚನೆ ಮಾಡಿ ಗುಣಾತ್ಮಕ ಬದಲಾವಣೆಗಳನ್ನು ಕಾಲಕಾಲಕ್ಕೆ ನಮ್ಮ ತರಬೇತಿ ಕಾರ್ಯಕ್ರಮಗಳಲ್ಲಿ ಅಳವಡಿಸಿಕೊಂಡು ಎಲ್ಲ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ನಿರಂತರವಾಗಿ ತರಬೇತಿಗಳನ್ನು ನೀಡುತ್ತಿದೆ. ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕೆಎಸ್ಎಫ್ ಮೈಸೂರು ಶಾಖೆಯ ಮಾಸಿಕ ವಾರ್ತಾ ಪತ್ರ, ವಿದ್ಯಾರ್ಥಿಗಳಿಗೆ ಸ್ಟಡಿ ಕ್ಯೂಬಿಕಲ್ಸ್ ಹಾಗೂ ನೂತನ ವೆಬ್ ಸೈಟ್ ಅನಾವರಣ ಮಾಡಲಾಯಿತು.

ಕೆಎಸ್ಎಫ್, ಮೈಸೂರು ಕಾರ್ಯದರ್ಶಿ ಹೆಚ್. ಕಿಶೋರ್ ಚಂದ್ರ ಮಾತನಾಡಿ, 1998 ರಲ್ಲಿ ಮೈಸೂರು ಶಾಖೆ ಪ್ರಾರಂಭವಾಗಿ ಇಲ್ಲಿಯವರಗೆ ನೂರಕ್ಕೂ ಹೆಚ್ಚು ತರಬೇತಿ ಕಾರ್ಯಕ್ರಮಗಳು ನಡೆದು, ಸಾವಿರಾರು ವಿದ್ಯಾರ್ಥಿಗಳಿಗೆ ನೆರವಾಗಿದೆ ಎಂದು ತಿಳಿಸಿದರು.

ಮುಖ್ಯ ಶೈಕ್ಷಣಿಕ ಸಂಯೋಜಕರಾದ ಡಾ. ಜಿ. ಗೋವಿಂದರಾಜು ಮಾತನಾಡಿ, ಕೃಷಿಕ್ ಸಂಸ್ಥೆಯಲ್ಲಿ ತರಬೇತಿಗಾಗಿ ಬರುವ ಗ್ರಾಮೀಣ ವಿದ್ಯಾರ್ಥಿಗಳಿಗೆ ಅನುಕೂಲವಾಗಲೆಂದು ವಿದ್ಯಾರ್ಥಿನಿಲಯ ಹಾಗೂ ವಿದ್ಯಾರ್ಥಿ ವೇತನದ ಸೌಲಭ್ಯವಿದ್ದು, ಯುಪಿಎಸ್ಸಿ, ಕೆಪಿಎಸ್ಸಿ, ಹಾಗೂ ಬ್ಯಾಂಕಿಂಗ್ ಪರೀಕ್ಷೆಗಳಲ್ಲಿ ನೂರಾರು ಯುವಕ ಯುವತಿಯರು ಇಲ್ಲಿ ತರಬೇತಿ ಪಡೆದು ಸಫಲತೆ ಕಂಡಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಮೈಸೂರು ನಗರ ಪಾಲಿಕೆ ಆಯುಕ್ತರಾದ ಆಸಾದ್ ಉರ್ ರೆಹಮಾನ್ ಷರೀಫ್, ಕೆಎಸ್ಎಫ್, ಮೈಸೂರು ಶಾಖೆಯ ಆಡಳಿತ ವರ್ಗದ, ಎನ್. ನಂಜೇಗೌಡ, ಹೆಚ್. ಕಿಶೋರ್ ಚಂದ್ರ, ಕೆ. ಎಂ. ಚಂದ್ರೇಗೌಡ, ವೈ. ಕೆ. ಕೆಂಚೇಗೌಡ, ಎಸ್.ವಿ ಗೌಡಪ್ಪ, ಡಾ. ಜಿ. ಗೋವಿಂದರಾಜು, ವೆಬ್ ಸೈಟ್ ನಿರ್ಮಾಣದ ಹೊಣೆಹೊತ್ತ ಕಾಮೆಂಜರ್ ಸಂಸ್ಥೆಯ ಶಶಿಧರ್ ಗೌಡ, ಸಂಜಯ್ ಆರೋರ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



**ನಗರಸಭಾ ಕಾರ್ಯಾಲಯ, ಮಂಡ್ಯ.**
**ಸಂಖ್ಯೆ:ನಸಮಂ/ಕಾಮಗಾರಿ ವಿಭಾಗ/ಟೆಂಡರ್-29/2023-24**
**ದಿನಾಂಕ: 16-02-2024**

**ಇ-ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ**

2011-12 ರಿಂದ 2014-15ನೇ ಸಾಲಿನ ಕೇಂದ್ರ ಹಣಕಾಸು ಉಳಿತಾಯ ಮೊತ್ತ ಮತ್ತು 2022-23ನೇ 15ನೇ ಹಣಕಾಸು ಉಳಿತಾಯ ಮೊತ್ತ ಅನುದಾನ ಅಡಿಯಲ್ಲಿ ಕಾಮಗಾರಿಯನ್ನು ಕೈಗೊಳ್ಳಲು KTTP Act -1999 & 2000ರಂತೆ, ಲೋಕೋಪಯೋಗಿ ಇಲಾಖೆಯಲ್ಲಿ ಮತ್ತು ಇ-ಪ್ರೊಕ್ಯೂರ್‌ಮೆಂಟ್‌ನಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರಿಂದ ಇ-ಪೋರ್ಟಲ್ ಮುಖಾಂತರ ಟೆಂಡರ್‌ನ್ನು KW-1ರ ದಾಸ್ತಾವೇಜು ಮೂಲಕ ಆಹ್ವಾನಿಸಲಾಗಿದ್ದು, ಆಸಕ್ತ ಗುತ್ತಿಗೆದಾರರು https://kppp.karnataka.gov.in ಆನ್‌ಲೈನ್‌ನಲ್ಲಿ ಟೆಂಡರ್ ಸಲ್ಲಿಸಬಹುದಾಗಿದೆ. ಕೊನೆಯ **ದಿನಾಂಕ: 02-03-2024 ಅಪರಾಹ್ನ 4.30 ಗಂಟೆಯೊಳಗೆ** ಸಲ್ಲಿಸುವುದು. (1) ಇಂಡೆಂಟ್ ಸಂಖ್ಯೆ: **DMA/2023-24/BD/WORK_INDENT15335,** ಅಂದಾಜು ಮೊತ್ತ **ರೂ. 7.00 ಲಕ್ಷ,** ಇಂ.ಎಂ.ಡಿ. **ಮೊತ್ತ ರೂ. 15,000/-, 4ನೇ ದರ್ಜೆ ಹಾಗೂ ಮೇಲ್ಪಟ್ಟ (ಸಿವಿಲ್),** (2) ಇಂಡೆಂಟ್ ಸಂಖ್ಯೆ: **DMA/2023-24/RD/WORK_INDENT15200,** ಅಂದಾಜು ಮೊತ್ತ ರೂ. **20.00 ಲಕ್ಷ,** ಇಂ.ಎಂ.ಡಿ. **ಮೊತ್ತ ರೂ. 42,500/-, 4ನೇ ದರ್ಜೆ ಹಾಗೂ ಮೇಲ್ಪಟ್ಟ (ಸಿವಿಲ್),** (3) ಇಂಡೆಂಟ್ ಸಂಖ್ಯೆ: **DMA/2023-24/RD/WORK_INDENT15202,** ಅಂದಾಜು ಮೊತ್ತ ರೂ. **8.68 ಲಕ್ಷ,** ಇಂ.ಎಂ.ಡಿ. **ಮೊತ್ತ ರೂ. 18,500/-, 4ನೇ ದರ್ಜೆ ಹಾಗೂ ಮೇಲ್ಪಟ್ಟ (ಸಿವಿಲ್),** ವಿವರ ಹಾಗೂ ಟೆಂಡರ್ ಪ್ರಕಟಣೆ ವಿವರವನ್ನು ಕಛೇರಿಯ ಸೂಚನಾ ಫಲಕದಲ್ಲಿ ಮತ್ತು ವೆಬ್‌ಸೈಟ್ **www.mandyacity.mrc.gov.in** ನಲ್ಲಿ ಪಡೆಯಬಹುದು.

**ಸಹಿ/-ಪೌರಾಯುಕ್ತರು,**
**ನಗರಸಭೆ, ಮಂಡ್ಯ.**

ವಾಸಾಸಂಇ/ಸನಿ-ಮಂ/ಕೆಎಸ್‌ಎಂಸಿ&ಎ/570/2023-24

## ಕರ್ನಾಟಕ ಜನರಂಗ ಸಂಘಟನೆಯಿಂದ ಅಹೋರಾತ್ರಿ ಧರಣಿ

# ರಾಜ್ಯಕ್ಕೆ ತೆರಿಗೆ ಅನ್ಯಾಯ ಆರೋಪ

**ಮೈಸೂರು:** ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ತೆರಿಗೆ ಹಂಚಿಕೆಯಲ್ಲಿ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿ ಇತ್ತೀಚೆಗೆ ಕಾಂಗ್ರೆಸ್ ದೆಹಲಿಯಲ್ಲಿ ಪ್ರತಿಭಟನೆ ನಡೆಸಿತ್ತು. ಈ ಬೆನ್ನಲ್ಲೆ ಇದೀಗ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಕರ್ನಾಟಕ ಜನರಂಗ ವೇದಿಕೆಯು ಎರಡು ದಿನಗಳ ಅಹೋರಾತ್ರಿ ಧರಣಿ ಕೈಗೊಂಡಿದೆ.

ಕರ್ನಾಟಕಕ್ಕೆ ಬರಬೇಕಾದ 1.87 ಲಕ್ಷ ಕೋಟಿ ಹಣವನ್ನ ಕೂಡಲೇ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಆಗ್ರಹಿಸಿ ಕರ್ನಾಟಕ ಜನರಂಗ ವೇದಿಕೆಯು ನಗರದ ಚಿಕ್ಕ ಗಡಿಯಾರದ ಬಳಿ ಅಹೋರಾತ್ರಿ ಧರಣಿ ಆರಂಭಿಸಿದೆ.

ಸತತ 48 ಗಂಟೆಗಳ ಶಾಂತಿಯುತ ಅಹೋರಾತ್ರಿ ಧರಣಿಗೆ ಪ್ರಗತಿಪರ ಚಿಂತಕ ಕೋಟಗಾನಹಳ್ಳಿ ರಾಮಯ್ಯ ನಗಾರಿ ಬಾರಿಸುವ ಮೂಲಕ ಚಾಲನೆ ಕೊಟ್ಟಿದ್ದಾರೆ. ಕರ್ನಾಟಕಕ್ಕೆ ಆಗುತ್ತಿರುವ ಅನ್ಯಾಯವನ್ನ ಪ್ರಶ್ನಿಸಿ ಅಹೋರಾತ್ರಿ ಧರಣಿ ಸತ್ಯಾಗ್ರಹ ನಡೆಸುತ್ತಿದ್ದು, ಧರಣಿಗೆ ವಿವಿಧ ಕನ್ನಡಪರ, ರೈತಪರ, ದಲಿತಪರ ಮತ್ತು ಪ್ರಗತಿಪರ ಸಂಘಟನೆಗಳು ಬೆಂಬಲ ವ್ಯಕ್ತಪಡಿಸಿವೆ. ಉರಿ ಬಿಸಿಲ ನಡುವೆಯಲ್ಲೂ ನೂರಾರು ಪ್ರತಿಭಟನಾಕಾರರು ಜಮಾಯಿಸಿದ್ದು, ಪ್ರತಿಭಟನೆಯಲ್ಲಿ ಮಳವಳ್ಳಿ ಮಾಜಿ ಸಚಿವ ಬಿ.ಸೋಮಶೇಖರ್, ಕಾಂಗ್ರೆಸ್ ಗ್ರಾಮಾಂತರ ಜಿಲ್ಲಾಧ್ಯಕ್ಷ ಬಿ.ಜೆ ವಿಜಯ ಕುಮಾರ್, ಇತಿಹಾಸ ತಜ್ಞ ಪ್ರೊ. ನಂಜರಾಜ ಅರಸ್ ಸೇರಿದಂತೆ ಕನ್ನಡಪರ, ರೈತಪರ, ದಲಿತಪರ ಸಂಘಟನೆಗಳ ಮುಖಂಡರು ಭಾಗಿಯಾಗಿದ್ದರು.

ಇಂದಿನಿಂದ ನಿರಂತರ 48 ಗಂಟೆಗಳ ಕಾಲ ಪ್ರತಿಭಟನಾ ಧರಣಿ ಸತ್ಯಾಗ್ರಹ ನಡೆಯಲಿದ್ದು, ಧರಣಿ ಸತ್ಯಾಗ್ರಹಕ್ಕೆ ಮೈಸೂರಿನ ನಾಗರಿಕರಿಂದ ವ್ಯಾಪಕ ಬೆಂಬಲ ವ್ಯಕ್ತವಾಗಿದೆ. ತೆರಿಗೆ ವಿಚಾರದಲ್ಲಿ ಕೇಂದ್ರ ಸರ್ಕಾರದ ತಾರತಮ್ಯ ವಿರುದ್ಧ ಜನಾಕ್ರೋಶ ವ್ಯಕ್ತವಾಗಿದೆ.



**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ**
ನಂ. 333/1, 1ನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಸಂ: ಬಿಐಎಎಪಿಎ/ಟಿಪಿ/ಭೂಉನಿ/17/2023-24/2436 ದಿನಾಂಕ: 19.02.2024

**ಪ್ರಕಟಣೆ**

**ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69ರ ತಿದ್ದಪಡಿ ಕಾಯ್ದೆಯಂತೆ)**

ಬೆಂಗಳೂರು ಅತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾದಿಕಾರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಸರ್ಕಾರದ ಆದೇಶ ಸಂಖ್ಯೆ : ನಅಇ 157 ಬಿಎಂಆರ್ 2005 ದಿನಾಂಕ : 27.01.2009 ಮತ್ತು ತಿದ್ದುಪಡಿ ಆದೇಶ ದಿನಾಂಕ : 29.01.2009 ರಂದು ಅನುಮೋದನೆ ನೀಡಲಾಗಿದ್ದು, ಐದು ವರ್ಷಗಳ ಅವಧಿಯು ಈಗಾಗಲೇ ಪೂರ್ಣಗೊಂಡಿದ್ದು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69 (2) ರಂತೆ ಭೂಉಪಯೋಗ ರದ್ದಾಗಿರುತ್ತದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69 (4) ರನ್ವಯ ಈ ಕೆಳಕಂಡಂತೆ ವಾಣಿಜ್ಯ ಭೂ ಉಪಯೋಗ ನಿಗದಿಪಡಿಸಲು ಅರ್ಜಿದಾರರು ಕೋರಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69 (3) ರ ಅಡಿಯಲ್ಲಿ ಈ ಕೆಳಕಂಡಂತೆ ಭೂ ಉಪಯೋಗ ನಿಗದಿಪಡಿಸುವ ಸಂಬಂಧ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ದೇವನಹಳ್ಳಿ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸರ್ವೆ ನಂ. | ವಿಸ್ತೀರ್ಣ ಎ-ಗು | ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಭೂ ಉಪಯೋಗ ನಿಗದಿಪಡಿಸಲು ಕೋರಿರುವ ಉದ್ದೇಶ |
|---|---|---|---|---|---|---|---|---|
| 1 | ಶ್ರೀ ವಿನೋದ್ ಕುಮಾರ್ ಸಭರ್‌ವಾಲ್ ಬಿನ್ ಲೇ॥ ಸತ್ಪಾಲ್ ಸಭರ್‌ವಾಲ್ | ದೇವನಹಳ್ಳಿ | ಕಸಬಾ | ದೇವನಹಳ್ಳಿ | 156/2 | 3-08 | ಉದ್ಯಾನವನ / ಬಯಲುಜಾಗ | ವಾಣಿಜ್ಯ |
| 2 | ಶ್ರೀಮತಿ ಕುಲ್ದೀಪ್ ಕೌರ್ ಕೋಂ ಕುಲ್‌ಬೀರ್ ಸಿಂಗ್ | ದೇವನಹಳ್ಳಿ | ಕಸಬಾ | ದೇವನಹಳ್ಳಿ | 156/3 | 2-17ರ ಪೈಕಿ 2-02 | ಉದ್ಯಾನವನ / ಬಯಲುಜಾಗ | ವಾಣಿಜ್ಯ |

**ಷರಾ :** ಪ್ರಶ್ನಿತ ಜಮೀನುಗಳಲ್ಲಿ ಅನುಮೋದಿತ ಮಹಾಯೋಜನೆಯ ಪ್ರಸ್ತಾಫಿತ 15.00 ಮೀ ಅಗಲದ ರಸ್ತೆ ಪಂಕ್ತೀಕರಣವಿದ್ದು, ಯಥಾವತ್ತಾಗಿ ಕಾಯ್ದಿರಿಸಬೇಕಾಗಿರುತ್ತದೆ.

ಸಹಿ/- ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಎ.ಪಿ.ಎ, ದೇವನಹಳ್ಳಿ

ವಾಸಾಸಂಇ/ವಾಪ್ರ/ಜಿಎ/3759/2023-24

## ಸದಸ್ಯರ ನಾಮನಿರ್ದೇಶನಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಕರ್ನಾಟಕ ರಾಜ್ಯ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯ ಸರ್ವ ಸದಸ್ಯರ ಸಭೆಗೆ ಸದಸ್ಯರನ್ನು ನಾಮನಿರ್ದೇಶನ ಮಾಡುವ ಸಲುವಾಗಿ ಚಿಕ್ಕಬಳ್ಳಾಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸಮಾಜ ಸೇವಕರು (ಇಬ್ಬರು), ಪರಿಶಿಷ್ಟ ಜಾತಿ/ಪಂಗಡ (ಒಬ್ಬರು), ಮಹಿಳಾ ಪ್ರತಿನಿಧಿಗಳು (ಇಬ್ಬರು) ಹಾಗೂ ಅಲ್ಪಸಂಖ್ಯಾತ ಪ್ರತಿನಿಧಿಗಳು (ಒಬ್ಬರು) ತಮ್ಮ ವಿವರಗಳನ್ನೊಳಗೊಂಡ ಸಂಪೂರ್ಣ ದಾಖಲಾತಿಗಳೊಂದಿಗೆ 2024 ಫೆಬ್ರವರಿ 29 ರ ಸಂಜೆ 4.30 ರೊಳಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ, ಕೊ.ಸಂ. ಜಿಎ-3, ಜಿಲ್ಲಾಡಳಿತ ಭವನ, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ ಇಲ್ಲಿಗೆ ಪ್ರಸ್ತಾವನೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂ.08156-277119/120 ಗೆ ಸಂಪರ್ಕಿಸಬಹುದೆಂದು ತಿಳಿಸಲಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮಕ್ಕಳ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಿರಬೇಕು. ಮುಖ್ಯವಾಗಿ ಬಾಲಕಾರ್ಮಿಕ ಪದ್ಧತಿಯ ನಿರ್ಮೂಲನೆಯಡಿ ಕಾರ್ಯನಿರ್ವಹಿಸಿದವರು ಮತ್ತು ಮಕ್ಕಳ ಕ್ಷೇತ್ರದಲ್ಲಿ ಕರ್ತವ್ಯ ನಿರ್ವಹಿಸಿರುವವರಿಗೆ ಪ್ರಥಮ ಆದ್ಯತೆ ನೀಡಲಾಗುವುದು. ಸಂಸ್ಥೆಯು ಟ್ರಸ್ಟ್ / ಸೊಸೈಟಿ ಕಾಯ್ದೆಯಡಿ ನೋಂದಣಿಯಾಗಿ ಕನಿಷ್ಟ 05 ವರ್ಷಗಳ ಅನುಭವವನ್ನು ಹೊಂದಿರಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘದ ಅಧ್ಯಕ್ಷರಾದ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

## ಪಿಯು-ಸಿಇಟಿ/ನೀಟ್ ಪರೀಕ್ಷೆಗಳಿಗೆ ತರಬೇತಿ

**ಚಿಕ್ಕಬಳ್ಳಾಪುರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಮೈಸೂರಿನ ವಿಜಯ ವಿಠ್ಠಲ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ಪಿಯುಸಿ ನಂತರದ ವೃತ್ತಿಪರ ಉನ್ನತ ಶಿಕ್ಷಣಕ್ಕಾಗಿ ಕರ್ನಾಟಕ ಸರ್ಕಾರ ನಡೆಸಲಿರುವ ಸಾಮಾನ್ಯ ಪ್ರವೇಶ ಪರೀಕ್ಷೆಗೆ (ಕೆ-ಸಿಇಟಿ ಮತ್ತು ನೀಟ್) 30 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಚೇರಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಮತ್ತು ಪೋಷಕರು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಕಚೇರಿಯಲ್ಲಿ ದಿನಾಂಕ: 27.02.2024 ರೊಳಗಾಗಿ ಬೆಳಗ್ಗೆ 10.00 ಗಂಟೆಯಿಂದ ಸಂಜೆ 4.30 ಗಂಟೆಯವರೆಗೆ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು 0821-2515944 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದೆಂದು ಕರಾಮುವಿ ಕುಲಸಚಿವ ಪ್ರೊ. ಕೆ.ಎಲ್. ಎನ್ ಮೂರ್ತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ನನ್ನ ಒಳಿತಿಗಾಗಿ ಗ್ರಂಥಾಲಯ

**ರಾಮನಗರ:** ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ, ರಾಮನಗರ ಜಿಲ್ಲಾ ಪಂಚಾಯತ್ ಗ್ರಂಥಪಾಲಕರ ನೇತೃತ್ವದಲ್ಲಿ ನನ್ನ ಒಳಿತಿಗಾಗಿ ಗ್ರಂಥಾಲಯ ಎಂಬ ಕಾರ್ಯಕ್ರಮವನ್ನು ಇದೇ ಫೆ. 23ರ ಶುಕ್ರವಾರ ಬೆಳಿಗ್ಗೆ 10.30ಕ್ಕೆ ಚನ್ನಪಟ್ಟಣ ತಾಲ್ಲೂಕಿನ ದಶವಾರ ಗ್ರಾಮಪಂಚಾಯತಿ ಗ್ರಂಥಾಲಯ ಹಾಗೂ ಮಧ್ಯಾಹ್ನ 12.30ಕ್ಕೆ ಕನಕಪುರ ತಾಲ್ಲೂಕಿನ ಶಿವನಹಳ್ಳಿ ಗ್ರಾಮಪಂಚಾಯತಿ ಗ್ರಂಥಾಲಯದಲ್ಲಿ ಆಯೋಜಿಸಲಾಗಿದೆ.

## ಸಂತರ ಜ್ಞಾನಾಮೃತ ಬಾಳಿಗೊಂದು ಬೆಳಕು ವಿಶೇಷ

**ವಿಜಯಪುರ:** ಪಟ್ಟಣದ 14 ನೇ ವಾರ್ಡಿನ ತೋಟದ ಮನೆಗಳ ಬಳಿಯಿರುವ ಶ್ರೀ ಮಹೇಶ್ವರಮ್ಮ ದೇವಿ ಸೇವಾ ಅಭಿವೃದ್ದಿ ಟ್ರಸ್ಟ್ ವತಿಯಿಂದ ಇದೇ ತಿಂಗಳು 23 ತಾರೀಕು ಬೆಳಗ್ಗೆ 9.30 ರಿಂದ ಮಧ್ಯಾಹ್ನ 1 ಗಂಟೆಗೆ ಬಾಲ ಹುಣ್ಣಿಮೆ ಅಂಗವಾಗಿ ಸಂತರ ಜ್ಞಾನಾಮೃತ ಬಾಳಿಗೊಂದು ಬೆಳಕು ಕಾರ್ಯಕ್ರಮವನ್ನು ನಡೆಸಲಾಗುವುದು ಎಂದು ಶ್ರೀ ಕೃಷ್ಣ ಯತೀಂದ್ರ ಟ್ರಸ್ಟ್ ಸಂಚಾಲಕ ವಿ.ಎನ್. ವೆಂಕಟೇಶ್ ತಿಳಿಸಿದರು. ಸುದ್ದಿಗಾರ ಜೊತೆ ಮಾತನಾಡಿ, ಪ್ರತಿ ವರ್ಷವು ಶ್ರೀ ಮಹೇಶ್ವರಮ್ಮದೇವಿಯ ದೇವಾಲಯದಲ್ಲಿ ಎಲ್ಲಾ ಭಕ್ತಧಿಗಳ ಸಹಕಾರದೊಂದಿಗೆ ಅಮ್ಮನವರ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದ್ದು ಈ ಬಾರಿಯು ವಿಶೇಷವಾಗಿ ಸದ್ಗುರು ಶ್ರೀ ಯೋಗಿನಾರೇಯಣ ಯತೀಂದ್ರರ ಪ್ರೇರಣೆಯೊಂದಿಗೆ ಶ್ರೀಮದ್ ಭಗವದ್ಗೀತಾ ದೇವಿ ಪಾರಾಯಣ, ದಾಸರ ಪದಗಳ ಹಾಗೂ ಶರಣರ ವಚನಗಳ ಕಾರ್ಯಕ್ರಮವು



ಆಯೋಜಿಸಲಾಗಿದೆ ಎಂದರು. ಬೆಳಗ್ಗೆ 11.30ಕ್ಕೆ ಅಮ್ಮನವರ ದೇವಾಲಯದಲ್ಲಿ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ಹಾಗೂ ಶ್ರೀ ಸರೋವರ ಗಣಪತಿ ಸೇವಾ ಸಮಿತಿವತಿಯಿಂದ ಲಲಿತ ಸಹಸ್ರನಾಮ ಪಠಣೆ ಕಾರ್ಯಕ್ರಮ ನಡೆಯಲಿದೆ ಎಂದರು. ಈ ಕಾರ್ಯಕ್ರಮದ ಸಾನಿಧ್ಯವನ್ನು ಎಸ್.ರಮೇಶ ಸ್ವಾಮಿ, ಉದ್ಘಾಟನೆ ಪುರಸಭಾ ಸದಸ್ಯೆ ರಾಧಮ್ಮ ಪ್ರಕಾಶ್ ನಡೆಸಿಕೊಡುವರು, ಶ್ರೀ ಮಹೇಶ್ವರಮ್ಮ ದೇವಿ ಸೇವಾ ಅಭಿವೃದ್ದಿ ಟ್ರಸ್ಟ್ ಅಧ್ಯಕ್ಷ ಆರ್.ನಾಗರಾಜು ಅಧ್ಯಕ್ಷತೆ ವಹಿಸಿಕೊಳ್ಳುವರು. ಈ ಕಾರ್ಯಕ್ರಮದಲ್ಲಿ ಬಾಳಿಗೊಂದು ಬೆಳಕು ಬಗ್ಗೆ ಜೆ.ಎಸ್ ರಾಮಚಂದ್ರಪ್ಪ ನಡೆಸಿಕೊಳ್ಳುವರು. ಪ್ರತಿ ಮಾಸವು ಐದು ಜನ ಮುತ್ತೈದೆಯರಿಗೆ ಸೀರೆ ಸೇವೆ, ಬಡ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕಗಳ ಸೇವೆಯನ್ನು ನಡೆಸಿಕೊಂಡು ಬರುತ್ತಿದ್ದು ಭಕ್ತಧಿಗಳು ಈ ಕಾರ್ಯಕ್ರಮಕ್ಕೆ ಹೆಚ್ಚು ಕೈ ಜೋಡಿಸುವುದರೊಂದಿಗೆ ಬಂದು ಅಮ್ಮನವರ ದರ್ಶನ ಪಡೆಯಬೇಕು ಎಂದರು.

# ಪಲ್ಸ್ ಪೋಲಿಯೋ ಕಾರ್ಯಕ್ರಮದ ಯಶಸ್ಸಿಗೆ ಎಲ್ಲರ ಸಹಕಾರ ಮುಖ್ಯ

ಮಂಡ್ಯ: ಜಿಲ್ಲೆಯಲ್ಲಿ ಮಾರ್ಚ್ 3 ರಿಂದ 6 ರವರೆಗೆ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದ ಯಶಸ್ವಿಗೆ ಎಲ್ಲರ ಸಹಕಾರ ಮುಖ್ಯ ಎಂದು ತಹಶಿಲ್ದಾರ್ ಶಿವಕುಮಾರ್ ಬಿರಾದರ್ ಅವರು ತಿಳಿಸಿದರು.

ಮಂಗಳವಾರದಂದು ತಹಶಿಲ್ದಾರ್ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣ ಘಟಕ ಹಾಗೂ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಇವರ ಸಹಯೋಗದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಿರ್ವಹಿಸುವ ಬಗ್ಗೆ ಹಾಗೂ ಇಲಿ ಜ್ವರ ನಿಯಂತ್ರಣ ಹಾಗೂ ತಡೆಗಟ್ಟುವಿಕೆಯನ್ನು ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಚೆಸ್ಕಾಂ( ವಿದ್ಯುಚ್ಛಕ್ತಿ ಮಂಡಳಿ), ಪ್ರಾದೇಶಿಕ ಸಾರಿಗೆ ಇಲಾಖೆ, ವಾರ್ತಾ ಇಲಾಖೆ, ಪೌರಾಡಳಿತ ಇಲಾಖೆ, ಇತರೆ ಸ್ವಯಂಸೇವಾ ಸಂಸ್ಥೆಗಳು, ಸರ್ಕಾರಿ ಹಾಗೂ ಖಾಸಗಿ ನರ್ಸಿಂಗ್ ಶಾಲೆಗಳು ಹಾಗೂ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಜವಾಬ್ದಾರಿಯುತವಾಗಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಜವರೇಗೌಡ ಅವರು ಮಾತನಾಡಿ ಪೋಲಿಯೋ ವೈರಾಣುಗಳು ನೀರು, ಆಹಾರದ ಮೂಲಕ ವ್ಯಕ್ತಿಯಿಂದ ವ್ಯಕ್ತಿಗೆ ಲೋಳೆಯಿಂದ ಬಾಯಿ, ಮೂಗು ಮೂಲಕ ಹರಡಬಹುದು. ಅಲ್ಲದೆ ಸೋಂಕು ಪೀಡಿತ ರೋಗಿಯ ಸಾಮಿಪ್ಯದಿಂದಲೂ ಹರಡಬಹುದಾಗಿದೆ. ಪೋಲಿಯೋ ವೈರಾಣುಗಳು ದೇಹಕ್ಕೆ ಪ್ರವೇಶವಾದ ಬಳಿಕ ರಕ್ತ, ರಕ್ತನಾಳಗಳ ಮೂಲಕ ಹರಡುತ್ತವೆ ಹಾಗೂ ಹೆಚ್ಚು ವೃದ್ದಿಸಲಾರಂಭಿಸುತ್ತದೆ. ವೈರಾಣು ದೇಹ ಸೇರಿದ ಬಳಿಕ ಸಾಮಾನ್ಯವಾಗಿ 7-14 ದಿನಗಳಲ್ಲಿ ಜ್ವರ, ಬಳಲಿಕೆ, ತಲೆನೋವು, ವಾಂತಿ ಹಾಗೂ ಕೈಕಾಲು ನೋವು ಕಾಣಿಸಲಾರಂಭಿಸುತ್ತದೆ ಎಂದರು.

ಮಾರ್ಚ್ 3 ಭಾನುವಾರದಂದು ಐದು ವರ್ಷದೊಳಗಿನ ಮಕ್ಕಳಿಗೆ ಎಲ್ಲಾ ಶಾಲೆಗಳಲ್ಲಿಯೂ ಪಲ್ಸ್ ಪೋಲಿಯೋ ಲಸಿಕೆಯನ್ನು ಹಾಕಲಾಗುವುದು. ಮಾ.4 ರಿಂದ 6 ವರೆಗೆ ಮನೆ ಮನೆಗೆ ಭೇಟಿ ನೀಡಿ ಲಸಿಕೆ ಪಡೆಯದಿರುವ ಮಕ್ಕಳನ್ನು ಹುಡುಕಿ ಪೋಲಿಯೋ ಲಸಿಕೆಯನ್ನು ನೀಡಲಾಗುವುದು. ಮಾರ್ಚ್ 2 ಶನಿವಾರದಂದು ಎಲ್ಲಾ ಶಾಲೆಗಳಲ್ಲಿಯೂ ಪಲ್ಸ್ ಪೋಲಿಯೋ ಕಾರ್ಯಕ್ರಮ ಕುರಿತು ಜಾಥಾ ಹೊರಡಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಯಾವುದೇ ಮಕ್ಕಳು ಪಲ್ಸ್ ಪೋಲಿಯೋ ಲಸಿಕೆಯಿಂದ ವಂಚಿತರಾಗಬಾರದೆಂದು ಅನಕ್ಷರಸ್ಥ ಕುಟುಂಬಗಳು, ಕೂಲಿ ಕಾರ್ಮಿಕರು ಹಾಗೂ ಸ್ಲಂ ಕುಟುಂಬಗಳನ್ನು ಹುಡುಕಿ ಅಲ್ಲಿರುವಂತಹ ಐದು ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆಯನ್ನು ಹಾಕುವುದು. ಲಸಿಕೆ ಹಾಕದೆ ಇರುವ ಮನೆಗೆ 'ಪಿ' ಎಂದು ಮಾರ್ಕ್ ಮಾಡಲಾಗುವುದು ಎಂದರು.

ಅನಂತರ ಇಲಿಜ್ವರ ರೋಗದ ಬಗ್ಗೆ ಮಾತನಾಡಿದ ಅವರು ಇಲಿ ಜ್ವರವು ಸಾಮಾನ್ಯವಾಗಿ ಜ್ವರ, ಚಳಿ, ತಲೆನೋವು, ಮಾಂಸ ಖಂಡಗಳಲ್ಲಿ ನೋವು ಕಾಣಿಸಿಕೊಳ್ಳುವ ಲಕ್ಷಣಗಳನ್ನು ಹೊಂದಿದ್ದು, ತೀವ್ರತರ ರೋಗಗಳಲ್ಲಿ ಜಾಂಡಿಸ್( ಕಾಮಾಲೆ) ಕಾಣಿಸಿಕೊಳ್ಳುವ ಸಾಧ್ಯತೆ ಇದೆ. ಕಡಿಮೆ ಮೂತ್ರ ವಿಸರ್ಜನೆ ಹಾಗೂ ಮೂತ್ರ ವಿಸರ್ಜನೆ ಮಾಡುವಾಗ ರಕ್ತ ಸ್ರಾವವಾಗುವುದು ಇಲಿ ಜ್ವರ ರೋಗದ ಲಕ್ಷಣವಾಗಿದೆ.

ಈ ರೋಗಕ್ಕೆ ಯಾವುದೇ ಲಸಿಕೆ ಇಲ್ಲ. ರೋಗ ದೃಢ ಪಟ್ಟಲ್ಲಿ ನಿರ್ದಿಷ್ಟ ಚಿಕಿತ್ಸೆ ಇದೆ. ರೋಗಲಕ್ಷಣಗಳು ಕಾಣಿಸಿದ ಮೊದಲ ಏಳು ದಿನಗಳಲ್ಲಿ ಪಡೆದ ರಕ್ತದ ಸಿರೋಲಜಿಕಲ್ ಪರೀಕ್ಷೆಯಿಂದ ಹಾಗೂ ಲಕ್ಷಣ ಕಾಣಿಸಿದ 10 ದಿನದ ನಂತರ ಪಡೆದ ಮೂತ್ರದ ಪರೀಕ್ಷೆಯಿಂದ ಈ ರೋಗವನ್ನು ದೃಢೀಕರಿಸಬಹುದು. 4 ರಿಂದ 19 ದಿನ ಇನ್ ಕ್ಯೂಬೇಶನ್ ನ ಅವಧಿಯುವಾಗಿದೆ ಎಂದರು.

### ಇಲಿ ಜ್ವರದ ನಿಯಂತ್ರಣ

ಇಲಿ ಜ್ವರವನ್ನು ನಿಯಂತ್ರಿಸಲು ಮನೆಯ ಸುತ್ತಲೂ ನೀರು ನಿಲ್ಲದಂತೆ ನೋಡಿಕೊಳ್ಳುವುದು ಹಾಗೂ ತ್ಯಾಜ್ಯ ವಸ್ತುಗಳನ್ನು ಸರಿಯಾಗಿ ವಿಲೇವಾರಿ ಮಾಡುವುದು. ಮನೆ ಸುತ್ತಲೂ ಗದ್ದೆ ಬದಿಗಳಲ್ಲಿ ಇಲಿಬಿಲಗಳಿದ್ದರೆ ಅವುಗಳನ್ನು ಮುಚ್ಚಬೇಕು. ಕುಡಿಯುವ ನೀರು ಆಹಾರ ಸಾಮಗ್ರಿಗಳು ಇಲಿಗಳ ಸಂಪರ್ಕಕ್ಕೆ ಬಾರದಂತೆ ನಿರ್ವಹಿಸುವುದು. ಹೊಲಗದ್ದೆಗಳಲ್ಲಿ ಓಡಾಡುವಾಗ ಕಾಲಿಗೆ ಗಮ್ ಬೂಟ್ ಧರಿಸುವುದು, ಮನೆಗೆ ಬಂದ ನಂತರ ಕೈಕಾಲುಗಳನ್ನು ಸೋಪ್ ನೀರಿನಿಂದ ಸ್ವಚ್ಛವಾಗಿ ತೊಳೆದುಕೊಳ್ಳುವುದು. ಕುಡಿಯುವ ನೀರನ್ನು ಬ್ಲೀಚಿಂಗ್ ಪುಡಿಯಿಂದ ಶುದ್ಧೀಕರಿಸುವುದು. ಆದಷ್ಟು ಕುದಿಸಿ ಆರಿಸಿದ ನೀರನ್ನು ಕುಡಿಯುವುದು ಉತ್ತಮ. ಮನೆ, ಅಂಗನವಾಡಿ, ಹಾಸ್ಟೆಲ್ ಹಾಗೂ ವಸತಿ ಶಾಲೆಗಳಲ್ಲಿ ಆಹಾರ ಪದಾರ್ಥಗಳನ್ನು ತೆರೆದಿಡಬಾರದು ಹಾಗೂ ಇಲಿ/ಹೆಗ್ಗಣಗಳಿಗೆ ಸಿಗದಂತೆ ಸೂಕ್ತ ಜಾಗದಲ್ಲಿ ನಿರ್ವಹಣೆ ಮಾಡಬೇಕು. ಜಾನುವಾರುಗಳ ಕೊಟ್ಟಿಗೆ ಹಾಗೂ ಎಲ್ಲಾ ಸಾಕು ಪ್ರಾಣಿಗಳ ಫಾರಂ( ಕೋಳಿ ಸಾಕಾಣಿಕೆ, ಕುರಿ ಸಾಕಾಣಿಕೆ, ಹಂದಿ ಸಾಕಾಣಿಕೆ)ಗಳಿಗೆ ಹೋಗುವಾಗ ಗಮ್ ಬೂಟ್ ಧರಿಸುವುದು ಹಾಗೂ ಬಂದ ನಂತರ ಕೈಕಾಲುಗಳನ್ನು ಸೋಪಿನಿಂದ ಸ್ವಚ್ಛವಾಗಿ ತೊಳೆಯುವುದು. ಇಲಿ ಜ್ವರದ ರೋಗ ಲಕ್ಷಣ ಕಂಡು ಬಂದಲ್ಲಿ ಹತ್ತಿರದ ಸರ್ಕಾರಿ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ವೈದ್ಯರ ಸಲಹೆಯಂತೆ ಚಿಕಿತ್ಸೆ ಪಡೆಯುವುದು. ಇದೇ ಸಂದರ್ಭದಲ್ಲಿ ಇಲಿ ಜ್ವರ ನಿಯಂತ್ರಣ ಹಾಗೂ ತಡೆಗಟ್ಟುವಿಕೆಯ ಕುರಿತಂತೆ ಪೋಸ್ಟರ್ ಅನ್ನು ಬಿಡುಗಡೆ ಮಾಡಲಾಯಿತು. ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಉಪಾಧ್ಯಕ್ಷೆ ಮೀರಾ ಶಿವಲಿಂಗಯ್ಯ, ರೋಟರಿ ಅಧ್ಯಕ್ಷರು ಅನುಪಮ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿಗಳಾದ ಮಂಗಳ ಹಾಗೂ ಶಶಾಂಕ್ ಉಪಸ್ಥಿತರಿದ್ದರು.

### ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮಾಹಿತಿ

# 25ಕ್ಕೆ ರಾಜ್ಯಮಟ್ಟದ ಸಂವಿಧಾನ ಜಾಗೃತಿ

**ಚಿಕ್ಕಬಳ್ಳಾಪುರ:** ಫೆ. 25 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುವ ರಾಜ್ಯ ಮಟ್ಟದ ಸಂವಿಧಾನ ಜಾಗೃತಿ ಜಾಥದ ಕಾರ್ಯಕ್ರಮಕ್ಕೆ ಜಿಲ್ಲೆಯಿಂದ ಭಾಗವಹಿಸುವ ಸಾರ್ವಜನಿಕರು ಮತ್ತು ಜನಪ್ರತಿನಿಧಿಗಳಿಗೆ ಸಾರಿಗೆ ವ್ಯವಸ್ಥೆ ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳನ್ನು ಸಮರ್ಪಕವಾಗಿ ಒದಗಿಸುವ ಮೂಲಕ ಕಾರ್ಯಕ್ರಮದ ಯಶಸ್ವಿಗೆ ಶ್ರಮಿಸುವಂತೆ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ''ಸಂವಿಧಾನ ಜಾಗೃತಿ ಜಾಥಾದ ಬೃಹತ್ ಐಕ್ಯತಾ ಸಮಾವೇಶ'' ಕಾರ್ಯಕ್ರಮದ ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ನಮ್ಮ ಜಿಲ್ಲೆಯಲ್ಲಿ ಕಳೆದ ಜನವರಿ 26 ರಿಂದ ಸಂವಿಧಾನ ಜಾಗೃತಿ ಜಾಥಾವು ಜಿಲ್ಲೆಯ 7 ತಾಲ್ಲೂಕುಗಳ ಗ್ರಾಮಪಂಚಾಯ್ತಿಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಯಶಸ್ವಿಯಾಗಿ ಮುಕ್ತಾಯವಾಗಿರುತ್ತದೆ. ಕೊನೆಯದಾಗಿ ಶಿಡ್ಲಘಟ್ಟ ತಾಲ್ಲೂಕಿನ ವ್ಯಾಪ್ತಿಯಲ್ಲಿ ಕಾರ್ಯಕ್ರಮದ ಸ್ತಬ್ಧ ಚಿತ್ರದ ಜಾಥಾ ಸಂಚರಿಸುತ್ತಿದೆ, ಫೆಬ್ರವರಿ 23 ಕ್ಕೆ ಶಿಡ್ಲಘಟ್ಟ ತಾಲ್ಲೂಕಿನಲ್ಲಿಯೂ ಈ ಕಾರ್ಯಕ್ರಮ ಕೊನೆಗೊಳ್ಳಲಿದೆ ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ಐಕ್ಯತಾ ಸಮಾವೇಶ ಮುಂದೂಡಿಕೆ: ಸಂವಿಧಾನ ಜಾಗೃತಿ ಸಮಾವೇಶದ ಜಿಲ್ಲಾಮಟ್ಟದ ಐಕ್ಯತಾ ಸಮಾವೇಶವನ್ನು ಫೆಬ್ರವರಿ 23 ರಂದು ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಜಿಲ್ಲಾ ಮಟ್ಟದ ಐಕ್ಯತಾ ಕಾರ್ಯಕ್ರಮವನ್ನು ಸದ್ಯಕ್ಕೆ ಸರ್ಕಾರ ಮೂಂದೂಡಿರುತ್ತದೆ ಮುಂದೆ ಸದರಿ ಕಾರ್ಯ ಕ್ರಮದ ದಿನಾಂಕವನ್ನು ಸರ್ಕಾರ ನಿಗದಿಪಡಿಸಿದಾಗ ಕಾರ್ಯಕ್ರಮವನ್ನು ಏರ್ಪಡಿಸಲಾಗುವುದು. ಆದರೆ ಬೆಂಗಳೂರಿನಲ್ಲಿ ನಡೆಯುವ ರಾಜ್ಯಮಟ್ಟದ ಸಂವಿಧಾನ ಜಾಗೃತಿ ಜಾಥಾದ ಕಾರ್ಯಕ್ರಮಕ್ಕೆ ಜಿಲ್ಲೆಯ ಸಾರ್ವಜನಿಕರು ಮತ್ತು ಜನ ಪ್ರತಿನಿಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಬೆಂಗಳೂರಿನಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಸಾರ್ವಜನಿಕರನ್ನು, ಜನಪ್ರತಿನಿಧಿಗಳನ್ನು ಕರೆದುಕೊಂಡು ಹೊಗಿ ಬರಲು 70 ಕೆ.ಎಸ್.ಆರ್ .ಟಿ.ಸಿ ಬಸ್ ಗಳ ವ್ಯವಸ್ಥೆಯನ್ನು ಮಾಡಲಾಗಿದೆ. 6 ಜನ ಕಾರ್ಯನಿರ್ವಹಣಾಧಿಕಾರಿಗಳನ್ನು ತಾಲ್ಲೂಕುದಾರು ಉಸ್ತುವಾರಿ ಅಧಿಕಾರಿಗಳು ಮತ್ತು 6 ಸಹಾಯಕ ಉಸ್ತುವಾರಿ ಅಧಿಕಾರಿಗಳನ್ನು ನೇಮಕಮಾಡಲಾಗಿದೆ, ಈ ಉಸ್ತುವಾರಿ ಅಧಿಕಾರಿಗಳು ತಮ್ಮ ಅಧೀನದಲ್ಲಿ ಸಭೆ ನಡೆಸಿ ಸ್ಥಳೀಯ ಮಟ್ಟದಲ್ಲಿ ಅಗತ್ಯ ಕ್ರಮ ತೆಗೆದುಕೊಳ್ಳಬೇಕು.ಕಾರ್ಯಕ್ರಮದಂದು ಬಸುಗಳು ಸಂಚರಿಸುವ, ನಿಲುಗಡೆ ನೀಡುವ, ಕಾರ್ಯಕ್ರಮಕ್ಕೆ ಹೂಗಿ ಬರಲು ಮಾರ್ಗನಕ್ಷೆಗಳನ್ನು ಯೋಜಿತ ರೀತಿಯಲ್ಲಿ ಮಾಡಿಕೊಂಡು ಸಾರಿಗೆ ವ್ಯವಸ್ಥೆ ಕಲ್ಪಿಸಲು ಸ್ಥಳೀಯಯವಾಗಿ ಮಾಹಿತಿ ನೀಡಬೇಕು. ಕಾರ್ಯಕ್ರಮದಲ್ಲಿ ಭಾಗವಹಿಸವವರಿಗೆ ಕುಡಿಯುವ ನೀರಿನ ವ್ಯವಸ್ಥೆ ಊಟ,ತಿಂಡಿ,ಸಾರಿಗೆ ವ್ಯವಸ್ಥೆಗಳನ್ನು ಸಮರ್ಪಕವಾಗಿ ಕಲ್ಪಿಸಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ಕಾರ್ಯಭಾರ ಹಂಚಿಕೆ ಮಾಡಿ ಸರ್ಮಪಕವಾಗಿ ಕಾರ್ಯನಿರ್ವಹಿಸಲು ಜಿಲ್ಲಾಧಿಕಾರಿಗಳು ಕಟ್ಟು ನಿಟ್ಟಿನ ಸೂಚನೆಗಳನ್ನು ಅಧಿಕಾರಿಗಳಿಗೆ ನೀಡಿದರು.

ಸಭೆಯಲ್ಲಿಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ.ನಿಟ್ಟಾಲಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಡಾ॥ ಎನ್.ಭಾಸ್ಕರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ತೇಜಾನಂದ ರೆಡ್ಡಿ, ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಿದ್ದರು.

## 26, 27ಕ್ಕೆ ಬೃಹತ್ ಉದ್ಯೋಗ ಮೇಳ



**ಇದೇ ತಿಂಗಳ 26,27ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುವ ರಾಜ್ಯಮಟ್ಟದ ಬೃಹತ್ ಉದ್ಯೋಗ ಮೇಳದಲ್ಲಿ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯ ಉದ್ಯೋಗಾಕಾಂಕ್ಷಿಗಳು ಭಾಗವಹಿಸುವಂತೆ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ಮನವಿ ಮಾಡಿದರು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಉದ್ಯೋಗ ಮೇಳದ ಜಾಗೃತಿಯ ಕರಪತ್ರಗಳನ್ನು ಬಿಡುಗಡೆ ಮಾಡಿ ಅವರು ಮಾತನಾಡಿದರು. ಕರ್ನಾಟಕ ಕೌಶಲ್ಯಾಭಿವೃದ್ದಿ ನಿಗಮದಿಂದ ರಾಜ್ಯದ ಉದ್ಯೋಗಕಾಂಕ್ಷಿ ಯುವಕ,ಯುವತಿಯರಿಗಾಗಿ ಉದ್ಯೋಗವಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ರಾಜ್ಯ ಮಟ್ಟದ ಯುವ ಸಮೃದ್ದಿ ಸಮ್ಮೇಳನ ಹಾಗೂ ಬೃಹತ್ ಉದ್ಯೋಗ ಮೇಳವನ್ನು ಫೆಬ್ರವರಿ 26 ಮತ್ತು 27 ರಂದು ಅರಮನೆ ಮೈದಾನ, ಬೆಂಗಳೂರು ಇಲ್ಲಿ ಆಯೋಜಿಸಿದೆ. ಜಿಲ್ಲೆಯ ಎಲ್ಲಾ ಅರ್ಹ ಉದ್ಯೋಗಾಕಾಂಕ್ಷಿ ಯುವಕ,ಯುವತಿಯರು ಈ ಅವಕಾಶವನ್ನು ಹೆಚ್ಚಿನ ಮಟ್ಟದಲ್ಲಿ ಸದು ಉಪಯೋಗ ಪಡೆಸಿಕೊಳ್ಳಬೇಕು. ನೋಂದಣಿ ಆಗಲು ಹಾಗೂ ಪೂರಕ ಮಾಹಿತಿಗಾಗಿ ಸಾಮಾಜಿಕ ಜಾಲತಾಣ https:// skillconnect.kaushalkar.com ನ್ನು ಸಂಪರ್ಕ ಮಾಡುವಂತೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ :1800 599 9918 ಅಥವಾ 8310004823 ಗೆ ಸಂಪರ್ಕಿಸಲು ಅವರು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ದಿ ಅಧಿಕಾರಿ ಪ್ರಸಾದ್, ಕೌಶಲ್ಯಾಭಿವೃದ್ಧಿ ಇಲಾಖೆಯ ಸಿಬ್ಬಂದಿ ಮಂಜುನಾಥ್, ಬಾಲರಾಜು ಮತ್ತಿತರರು ಉಪಸ್ಥಿತರಿದ್ದರು.**

# ನಾವೆಲ್ಲರೂ ಸಂಪ್ರದಾಯಗಳನ್ನು ಮರೆಯದೆ ಉಳಿಸಿ ಬೆಳೆಸಬೇಕಿದೆ



**ಪಿರಿಯಾಪಟ್ಟಣ:** ಆಧುನಿಕ ಭರಾಟೆಯಲ್ಲಿ ನಾವೆಲ್ಲರೂ ಸಂಪ್ರದಾಯಗಳನ್ನು ಮರೆಯದೆ ಉಳಿಸಿ ಬೆಳೆಸಬೇಕಿದೆ ಎಂದು ಕೃಷ್ಣರಾಜನಗರದ ಶ್ರೀ ಕನಕ ಗುರುಪೀಠದ ಸ್ವಾಮೀಜಿ ಶ್ರೀ ಶ್ರೀ ಶ್ರೀ ಶಿವಾನಂದಪುರಿ ಮಹಾಸ್ವಾಮೀಜಿರವರು ತಿಳಿಸಿದರು. ಪಟ್ಟಣದ ಕನಕ ಸಮುದಾಯ ಆವರಣದಲ್ಲಿ ತಾಲೂಕು ಕುರುಬರ ಸಂಘ, ಶ್ರೀ ಕನಕ ಅಭಿವೃದ್ಧಿ ಸಹಕಾರ ಸಂಘ ಹಾಗೂ ಕನಕ ನೌಕರರ ಸಂಘದ ಸಹಯೋಗದೊಂದಿಗೆ ಶ್ರೀ ಅಭಯ ಗಣಪತಿ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ದೇವರು ಎಲ್ಲರಿಗೂ ಬೇಕು

ಆದರೆ ಇತ್ತೀಚಿನ ದಿನಗಳಲ್ಲಿ ದೇವರ ಮೇಲಿನ ಭಕ್ತಿ ಕಡಿಮೆಯಾಗುತ್ತಿದೆ. ನಮ್ಮ ಕೆಲಸ ಕಾರ್ಯಗಳು ನೆರವೇರಿಸಬೇಕು ಎಂದರೆ ಅದಕ್ಕೆ ದೇವರ ಅನುಗ್ರಹ ಅವಶ್ಯಕವಾಗಿದೆ ಎಲ್ಲರೂ ಹೊಂದಾಣಿಕೆ ಮನೋಭಾವನೆಯಿಂದ ಗೌರವಯುತ ಜೀವನ ನಡೆಸಿದಾಗ ಮಾತ್ರ ನಾವೆಲ್ಲರೂ ಅಭಿವೃದ್ಧಿ ಪಥದಲ್ಲಿ ಸಾಗಬಹುದು ಎಂದು ಹೇಳಿದರು.

ಕೃಷ್ಣರಾಜನಗರ ಶಾಸಕ ರವಿಶಂಕರ್ ಮಾತನಾಡಿ ಪಿರಿಯಾಪಟ್ಟಣದಲ್ಲಿ ಅಭಯ ಗಣಪತಿ ದೇವಸ್ಥಾನ ನಿರ್ಮಾಣ ಮಾಡಿರುವುದು ಸಂತಸದ ವಿಷಯ ನಿರ್ಮಾಣಕ್ಕೆ ಕಾರಣರಾದ ಎಲ್ಲರಿಗೂ ಧನ್ಯವಾದಗಳನ್ನು ಸಲ್ಲಿಸುತ್ತೇನೆ

ನಾನು ಶಾಸಕನಾಗಲು ಪಿರಿಯಾಪಟ್ಟಣದ ಹಲವಾರು ಜನರು ಕಾರಣವಾಗಿದ್ದಾರೆ ನಾನು ರಾಜಕೀಯವಾಗಿ ಸೋಲನ್ನು ಅನುಭವಿಸಿದ್ದ ಸಂದರ್ಭದಲ್ಲಿ ನನಗೆ ನೈತಿಕವಾಗಿ ನನ್ನ ಬೆನ್ನುಲುಬಾಗಿ ನಿಂತಿದ್ದರು ಅವರೆಲ್ಲರಿಗೂ ನಾನು ಋಣಿಯಾಗಿರುತ್ತೇನೆ ಎಂದು ಹೇಳಿದರು.

ತಾಲೂಕು ಬಿಜೆಪಿ ಅಧ್ಯಕ್ಷ ಎಂ.ಎಂ.ರಾಜೇಗೌಡ ಮಾತನಾಡಿ ಸಂಘಟನೆಗಳು ಸಮಾಜಮುಖಿ ಕಾರ್ಯಕ್ರಮಗಳನ್ನು ಮಾಡಿದಾಗ ಸಮಾಜದ ಬೆಳವಣಿಗೆಯಾಗುತ್ತದೆ ಆ ನಿಟ್ಟಿನಲ್ಲಿ ಸಂಘಟನೆಗಳು ಸಮಾಜದ ಜೊತೆಗೂಡಿ ಸಮಾಜದ ಬೆಳವಣಿಗೆಗೆ ಶ್ರಮಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಕುಂಞಿ ಅಹಮದ್, ಬೆಟ್ಟದಪುರ ಪಿಎಸ್ಐ ಪ್ರಕಾಶ್, ತಾಲೂಕು ಕುರುಬರ ಸಂಘದ ಅಧ್ಯಕ್ಷ ಹೆಚ್ .ಡಿ. ಗಣೇಶ್, ತಾಲೂಕು ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್, ರಾಜ್ಯ ಕುರುಬರ ಸಂಘದ ಮಾಜಿ ಅಧ್ಯಕ್ಷ ಸುಬ್ರಮಣ್ಯ, ತಾಲೂಕು ಕುರುಬರ ಸಂಘದ ಗೌರವಾಧ್ಯಕ್ಷ ಜವರಪ್ಪ, ಕಾರ್ಯದರ್ಶಿ ಸುನೀಲ್, ಪ್ರಾಧ್ಯಾಪಕ ಎನ್. ನಂಜುಂಡಸ್ವಾಮಿ, ಮಂಜುನಾಥ್, ಡಾ. ಲೋಹಿತ್ ಸೇರಿದಂತೆ ಇತರರು ಇದ್ದರು.

## ರಾಜ್ಯ ಮಟ್ಟದ ಉದ್ಯೋಗ ಮೇಳ

**ಚಿಕ್ಕಬಳ್ಳಾಪುರ:** ಕರ್ನಾಟಕ ಕೌಶಲ್ಯಾಭಿವೃದ್ದಿ ನಿಗಮದಿಂದ ರಾಜ್ಯದ ನಿರುದ್ಯೋಗಿ ಯುವಕ ಯುವತಿಯರಿಗಾಗಿ ಉದ್ಯೋಗವಾಕಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ರಾಜ್ಯ ಮಟ್ಟದಲ್ಲಿ ಯುವ ಸಮೃದ್ದಿ ಸಮ್ಮೇಳನ ಹಾಗೂ ಬೃಹತ್ ಉದ್ಯೋಗ ಮೇಳವನ್ನು ದಿನಾಂಕ: 26/02/2024 ಮತ್ತು 27/02/2024 ರಂದು ಅರಮನೆ ಮೈದಾನ, ಬೆಂಗಳೂರಿನಲ್ಲಿ ಆಯೋಜಿಸಿದ್ದು, ಜಿಲ್ಲೆಯ ಎಲ್ಲಾ ಅರ್ಹ ಉದ್ಯೋಗಾಕಾಂಕ್ಷಿ ಯುವಕ/ಯುವತಿಯರು ಈ ಅವಕಾಶವನ್ನು ಸದುಪಯೋಗ ಪಡೆಸಿಕೊಳ್ಳಬೇಕಾಗಿ ಈ ಮೂಲಕ ಕೋರಲಾಗಿದೆ. ಉದ್ಯೋಗಾಕಾಂಕ್ಷಿಗಳು https://skillconnect.kaushalkar.com ಲಿಂಕ್ ಮೂಲಕ ನೋಂದಣಿಯಾಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ :18005999918 ಅಥವಾ 8310004823 ಗೆ ಸಂಪರ್ಕಿಸಬಹುದಾಗಿರುತ್ತದೆ.



# ಕಟ್ಟಡ ಕಾರ್ಮಿಕರಲ್ಲದವರು ಗುರುತಿನ ಚೀಟಿ ಹಿಂತಿರುಗಿಸುವ ಮೂಲಕ ಇಲಾಖೆಗೆ ಸಹಕರಿಸಿ

**ಕೋಲಾರ :** ಜಿಲ್ಲೆಯಲ್ಲಿ ನಕಲಿ ದಾಖಲೆಗಳನ್ನು ನೀಡಿ ಕಟ್ಟಡ ಕಾರ್ಮಿಕರೆಂದು ಗುರುತಿನ ಚೀಟಿ ಪಡೆದು ಸರ್ಕಾರಿ ಸೌಲಭ್ಯಗಳನ್ನು ಪಡೆಯುತ್ತಿರುವುದು ಶಿಕ್ಷಾರ್ಹ ಅಪರಾಧ ಹಾಗಾಗಿ ಕಟ್ಟಡ ಕಾರ್ಮಿಕರಲ್ಲದವರು ತಮ್ಮ ಗುರುತಿನ ಚೀಟಿಯನ್ನು ತಾವೇ ಖುದ್ದಾಗಿ ಹಿರಿಯ ಕಾರ್ಮಿಕ ನಿರೀಕ್ಷಕರು,ಕಾರ್ಮಿಕ ನಿರೀಕ್ಷಕರ ಕಛೇರಿಗೆ ತೆರಳಿ ಗುರುತಿನ ಚೀಟಿಯನ್ನು ನೀಡುವ ಮೂಲಕ ತಮ್ಮ ನೋಂದಣಿಯನ್ನು ರದ್ದುಪಡಿಸಿಕೊಳ್ಳಿ ಎಂದು ಜಿಲ್ಲಾ ಕಟ್ಟಡ ಕಾರ್ಮಿಕ ಇಲಾಖೆ ಅಧಿಕಾರಿ ಶಬಾನಾ ಅಜ್ಮಿ ಅವರು ತಿಳಿಸಿದರು. ನಗರ ಹೊರವಲಯದ ಜಿಲ್ಲಾ ಕಛೇರಿ ಆವರಣದಲ್ಲಿ ಬುಧವಾರದಂದು ಕಟ್ಟಡ ಕಾರ್ಮಿಕ ಇಲಾಖೆಯಿಂದ ಜಾಗೃತಿ ವಾಹನಗಳಿಗೆ ಚಾಲನೆ ನೀಡಿ ಅವರು ಮಾತನಾಡಿ ಸರ್ಕಾರ ನಿಜವಾದ ಬಡವರ ಮನೆಗೆ ಸೌಲಭ್ಯ ಒದಗಿಸುವ ಮುಖಾಂತರ ಬಡ ಜನರ ಆರ್ಥಿಕ ಪರಿಸ್ಥಿತಿ ನಿಭಾಯಿಸಿ ಅವರನ್ನು ಒಂದು ಉತ್ತಮ ದರ್ಜೆಗೆ ತರುವ ಉದ್ದೇಶದಿಂದ ಕಟ್ಟಡ ಕಾರ್ಮಿಕ ಇಲಾಖೆಯ ವತಿಯಿಂದ ಹಲವಾರು ಯೋಜನೆಗಳನ್ನು ನೀಡುತ್ತಿದೆ. ಈ ಯೋಜನೆಗಳು ನಿಜವಾದ ಬಡವರಿಗೆ ಸಿಕ್ಕಾಗಲೇ ಜಿಲ್ಲೆಯಲ್ಲಿ ಬಡತನ ನಿವಾರಣೆಯಾಗುವುದು. ಹಾಗಾಗಿ ನಕಲಿ ಕಾರ್ಡುದಾರರು ನೋಂದಣಿ ರದ್ದುಪಡಿಸಿದರೆ ಬಡವರಿಗೆ ಇನ್ನು ಹೆಚ್ಚಿನ ಸೌಲಭ್ಯಗಳು ಸರ್ಕಾರ ನೀಡಬಹುದು ಎಂದರು. ಇನ್ನು ಈ ಪ್ರಚಾರದ ವಾಹನಗಳು ಜಿಲ್ಲೆಯಾದ್ಯಂತ ಪ್ರವಾಸ ಮಾಡಿ ಸಾರ್ವಜನಿಕರಿಗೆ ವಿಶೇಷವಾಗಿ ಕೂಲಿ ಕಾರ್ಮಿಕರಿಗೆ ಇಲಾಖೆವಾರು ಸಿಗುವ ಸೌಲಭ್ಯಗಳ ಮಾಹಿತಿ ಮತ್ತು ನಕಲಿ ಗುರುತಿನ ಚೀಟಿ ರದ್ದುಪಡಿಸುವ ಬಗ್ಗೆ ಧ್ವನಿವರ್ಧಕ ಹಾಗೂ ಕೈಪಿಡಿ ನೀಡುವ ಮುಖೇನ ಅರಿವು ಮೂಡಿಸಲಾಗುವುದು ಎಂದರು. ಶಬಾನಾ ಅಜ್ಮಿ ಅವರು ಜಿಲ್ಲೆಗೆ ಆಗಮಿಸಿದಾಗಿನಿಂದ ಕಾರ್ಮಿಕರಿಗೆ ಸಂಬಂಧಪಟ್ಟ ಕಾರ್ಯಕ್ರಮಗಳನ್ನು ಹಂತ ಹಂತವಾಗಿ ನಡೆಸಿಕೊಂಡು ಬರುವುದರ ಜೊತೆಗೆ ಮುಗ್ಧ ಚರ್ಚೆಗೆ ಅವಕಾಶ ಮಾಡಿ ಕೊಟ್ಟಿರುವ ವಿಷಯಗಳಿಂದ ಜಿಲ್ಲಾ ಕಾರ್ಮಿಕ ವಲಯದಲ್ಲಿ ಉತ್ತಮ ಪ್ರಶಂಸೆಗೆ ಪಾತ್ರರಾಗಿರುತ್ತಾರೆ.

### ಗ್ರಾಮದಲ್ಲಿ ನೀರಿನ ಸಮಸ್ಯೆ ಉಲ್ಬಣಿಸಿದ್ದರು ಇವರ ತಲೆ ಕೆಡಿಸಿಕೊಳ್ಳುತ್ತಿಲ್ಲ

# ತಗಚಗೆರೆ ಗ್ರಾಮ ಪಂಚಾಯಿತಿ ಮುಂಭಾಗ ರೈತರಿಂದ ಬೇಹತ್ ಪ್ರತಿಭಟನೆ

**ಚನ್ನಪಟ್ಟಣ:** ಗ್ರಾಮದಲ್ಲಿ ಚರಂಡಿಗಳ ಸ್ವಚ್ಚತೆ, ನೀರಿನ ವ್ಯವಸ್ಥೆ, ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ಮಾಡುತ್ತಿಲ್ಲ. ದನದ ಕೊಟ್ಟಿಗೆ ನಿರ್ಮಿಸಿಕೊಳ್ಳಲು ರೈತರಿಗೆ ನರೇಗಾ ಯೋಜನೆಯಲ್ಲಿ ಅವಕಾಶ ಕಲ್ಪಿಸುತ್ತಿಲ್ಲ, ಪ್ರವರ್ಗ 1ರಲ್ಲಿ ಅನುದಾನವನ್ನು ಬೇಕಾಬಿಟ್ಟಿ ಬಳಸಿಕೊಳ್ಳಲಾಗುತ್ತಿದ್ದು, ಗ್ರಾಪಂ ಅಧ್ಯಕ್ಷರು ಹಾಗೂ ಪಿಡಿಒ ತಮಗಿಷ್ಟ ಬಂದಂತೆ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿ ಕೆಲ ಗ್ರಾಪಂ ಸದಸ್ಯರು ಹಾಗೂ ಗ್ರಾಮಸ್ಥರು ತಗಚಗೆರೆ ಗ್ರಾಮ ಪಂಚಾಯಿತಿ ಮುಂಭಾಗ ಪ್ರತಿಭಟನೆ ನಡೆಸಿದರು.

ತಗಚಗೆರೆ ಗ್ರಾಮದ ಪಂಚಾಯಿತಿ ಕಚೇರಿಯ ಎದುರು ಜಮಾಯಿಸಿದ ಪ್ರತಿಭಟನಾನಿರತರು, ಗ್ರಾಪಂ ಅಧ್ಯಕ್ಷರು ಹಾಗೂ ಪಿಡಿಒ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮದಲ್ಲಿ ನೀರಿನ ಸಮಸ್ಯೆ ಉಲ್ಬಣಿಸಿದ್ದರು ಇವರ ತಲೆ ಕೆಡಿಸಿಕೊಳ್ಳುತ್ತಿಲ್ಲ. ಬೀದಿ ದೀಪಗಳ ನಿರ್ವಹಣೆಯನ್ನು ಸರಿಯಾಗಿ ನಿರ್ವಹಿಸದ ಕಾರಣ ಸಮಸ್ಯೆಯಾಗಿದೆ. ಚರಂಡಿಗಳು ಕಟ್ಟಿ ನಿಂತಿದ್ದು, ಅವುಗಳನ್ನು ಸ್ವಚ್ಚಗೊಳಿಸುವ ಕೆಲಸ ಮಾಡುತ್ತಿಲ್ಲ. ಪಂಚಾಯಿತಿಯಲ್ಲಿ ಸಾಕಷ್ಟು ಅವ್ಯವಹಾರ ನಡೆದಿದ್ದು, ಸಾರ್ವಜನಿಕರೊಂದಿಗೆ ಉದ್ದಟತನದಿಂದ ವರ್ತಿಸುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಮೃತ ಯೋಜನೆಯ ಅನುದಾನವನ್ನು ಸಾಕಷ್ಟು ದುರ್ಬಳಕೆ ಮಾಡಿಕೊಳ್ಳಲಾಗಿದೆ. ಜಲಜೀವನ್ ಯೋಜನೆಯ



ಕಾಮಗಾರಿಯನ್ನು ಬೇಕಾಬಿಟ್ಟಿಯಾಗಿ ನಿರ್ವಹಿಸಲಾಗಿದ್ದು, ರಸ್ತೆಗಳನ್ನು ಅಗೆದು ಪೈಪ್ ಹಾಗೂ ನಲ್ಲಿಯನ್ನು ಸರಿಯಾಗಿ ಅಳವಡಿಸಲಾಗಿಲ್ಲ. ಕೆಲ ಸದಸ್ಯರ ಕೈಗೊಂಬೆಯಂತೆ ವರ್ತಿಸುತ್ತಾ, ಬೇಕಾದವರು ಕೆಲಸ ಮಾಡಿಕೊಡಲು ಆದ್ಯತೆ ನೀಡುತ್ತಿದ್ದು, ಪಂಚಾಯಿತಿಯ ಸಮಗ್ರ ಅಭಿವೃದ್ಧಿಯನ್ನು ನಿರ್ಲಕ್ಷಿಸಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪಂಚಾಯಿತಿಯಲ್ಲಿ ಕೈಗೊಂಡಿರುವ ಕೆಲವು ಕಾಮವಾರಿಗಳ ವಿವರ ಕೇಳಿದರೆ ನೀಡುತ್ತಿಲ್ಲ. ಮಾಹಿತಿ ಹಕ್ಕಿನಲ್ಲಿ ದಾಖಲೆ ಕೇಳಿದರೂ ನೀಡದೇ ಸತಾಯಿಸುತ್ತಿದ್ದರೆ. ಗ್ರಾಮ ಪಂಚಾಯಿತಿ ಆವರಣದಲ್ಲಿರುವ ಹಳೇ ಕಟ್ಟಡವನ್ನು ಕೆಡವಿ ಅದೇ ಜಾಗದಲ್ಲಿ ಹೊಸ ಕಟ್ಟಡ ಕಟ್ಟಬೇಕು. ರೈತರಿಗೆ ದನದಕೊಟ್ಟಿಗೆ ನಿರ್ಮಾಣಕ್ಕೆ ಅವಕಾಶ ಕಲ್ಪಿಸಬೇಕು. ಬೀದಿ ದೀಪಗಳ ನಿರ್ವಹಣೆ ಸರಿಯಾಗಿ ಮಾಡಬೇಕು. ಚರಂಡಿಗಳನ್ನು ಸ್ವಚ್ಛಗೊಳಿಸಿ, ಸ್ಥಗಿತಗೊಂಡಿರುವ ಅಮೃತ ಯೋಜನೆಯನ್ನು ಶೀಘ್ರವಾಗಿ ಕೈಗೆತ್ತಿಕೊಳ್ಳುವುದು, ಸರಕಾರದ ಯೋಜನೆಗಳನ್ನು ಅರ್ಹರಿಗೆ ತಲುಪಿಸುವುದು, ಜಲಜೀವನ ಯೋಜನೆಯಿಂದ ಆಗಿರುವ ಸಮಸ್ಯೆಗಳ ನಿವಾರಣೆ ಸೇರಿ ವಿವಿಧ ಸಮಸ್ಯೆಗಳನ್ನು ಬಗೆಹರಿಸುವಂತೆ ಒತ್ತಾಯಿಸಿದರು.

ಈ ವೇಳೆ ಗ್ರಾಪಂ ಅಧ್ಯಕ್ಷೆ ಗೀತಾ ಹಾಗೂ ಪಿಡಿಒ ಶ್ವೇತಾ ಅಹವಾಲು ಆಲಿಸಿ ಉತ್ತರಿಸಲು ಮುಂದಾದರೂ ಇದಕ್ಕೆ ಒಪ್ಪದ ಪ್ರತಿಭಟನಾನಿರತರು ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಸಮಸ್ಯೆ ಪರಿಹರಿಸಬೇಕು ಎಂದು ಪಟ್ಟುಹಿಡಿದರು.

ಪರಿಹರಿಸುವ ಭರವಸೆ: ಈ ವೇಳೆ ಸ್ಥಳಕ್ಕೆ ಆಗಮಸಿದ ಅಕ್ಷರ ದಾಸೋಹದ ಅಧಿಕಾರಿ ಸಿದ್ದರಾಜು ಪ್ರತಿಭಟನಾನಿರತರ ಅಹವಾಲು ಆಲಿಸಿದರು. ತಾಪಂ ಇಒ ಉಪ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಹೋಗಿರುವ ಕಾರಣ ಅವರ ಪರವಾಗಿ ನಾನು ಬಂದಿದ್ದೇನೆ. ಇಲ್ಲಿ ಕಂಡು ಬಂದಿರುವ ಸಮಸ್ಯೆಗಳ ಕುರಿತು ಇಒ ಗಮನಕ್ಕೆ ತರಲಾಗುವುದು. ಪಂಚಾಯಿತಿ ಮಟ್ಟದ ಸಮಸ್ಯೆಗಳನ್ನು ಇಲ್ಲೇ ಪರಿಹರಿಸಲಾಗುವುದು, ಮಿಕ್ಕ ಸಮಸ್ಯೆಗಳನ್ನು ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಒಂದು ತಿಂಗಳ ಒಳಗೆ ಪರಿಹರಿಸಲು ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಹಿಂದಕ್ಕೆ ಪಡೆಯಲಾಯಿತು.

ಪ್ರತಿಭಟನೆಯಲ್ಲಿ ತಗಚಗೆರೆ ಗ್ರಾಮದ ಜೆಡಿಎಸ್ ಮುಖಂಡ ಪ್ರಸನ್ನ, ಗ್ರಾಪಂ ಸದಸ್ಯರಾದ ಶಿವರಾಮು, ಭುವನೇಶ್ವರಿ, ಮಾಜಿ ಅಧ್ಯಕ್ಷ ಶಿವು, ಅಂದಾನಯ್ಯ, ವೆಂಕಟಸ್ವಾಮಿ, ಪವನ್‌ಕುಮಾರ್, ನವೀನ್, ಯೋಗ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

### ಗ್ರಾಪಂ ಕಚೇರಿಗೆ ಹಸು ನುಗ್ಗಿಸಲು ಯತ್ನಿಸಿದ ರೈತ!

ದನದ ಕೊಟ್ಟಿಗೆ ನಿರ್ಮಾಣಕ್ಕೆ ಹತ್ತಾರು ಬಾರಿ ಅರ್ಜಿ ಸಲ್ಲಿಸಿದ್ದರೂ ಸಹ ಅವಕಾಶ ನೀಡುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ ಗ್ರಾಮದ ರೈತರೊಬ್ಬರು ತಮ್ಮ ಸೀಮೆ ಹಸುವನ್ನು ಗ್ರಾಮಪಂಚಾಯಿತಿಯೊಳಗೆ ನುಗ್ಗಿಸಿ ಕಟ್ಟಲು ಪ್ರಯತ್ನಿಸಿದರು. ದನದಕೊಟ್ಟಿಗೆ ನಿರ್ಮಾಣಕ್ಕೆ ನಾನು ಸಾಕಷ್ಟು ಬಾರಿ ಅರ್ಜಿ ಸಲ್ಲಿಸಿದ್ದರು, ಪಂಚಾಯಿತಿಯಿಂದ ಅನುದಾನ ದೊರೆಯುತ್ತಿಲ್ಲ. ಈ ಹಿನ್ನೆಲೆಯಲ್ಲಿ ಹಸುವನ್ನು ಗ್ರಾಮ ಪಂಚಾಯತಿಯಲ್ಲಿ ಕಟ್ಟುತ್ತೇನೆ ಎಂದು ಹಸುವನ್ನು ಪಂಚಾಯಿತಿ ಕಚೇರಿಗೆ ಒಳಗೆ ನುಗ್ಗಿಸಲು ಯತ್ನಿಸಿದರು. ಈ ವೇಳೆ ಸ್ಥಳದಲ್ಲಿದ್ದ ಪೊಲೀಸರು ರೈತನನ್ನು ತಡೆದು ಸಮಾಧಾನಪಡಿಸಿದರು.

### ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ಕರೆ

# ಉದ್ಯೋಗಿಗಳಾಗುವುದಕ್ಕಿಂತ ಉದ್ಯಮಿಗಳಾಗಿ

**ರಾಮನಗರ:** ಉದ್ಯೋಗ ಪಡೆಯುವುದಷ್ಟೇ ನಿಮ್ಮ ಗುರಿಯಾಗಬಾರದು. ಉದ್ಯಮಿಗಳಾಗಿ ಹತ್ತಾರು ಉದ್ಯೋಗ ಸೃಷ್ಟಿ ಮಾಡುವತ್ತ ಆಲೋಚಿಸಿ ಎಂದು ಉಪಮುಖ್ಯಮಂತ್ರಿಗಳು, ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ. ಶಿವಕುಮಾರ್ ಕರೆ ನೀಡಿದರು.

ಅವರು ಫೆ. 21ರ ಬುಧವಾರ ಕನಕಪುರದ ಆರ್.ಇ.ಎಸ್ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದರು.

ನೀವೆಲ್ಲರೂ ಉದ್ಯೋಗ ಹುಡುಕಿಕೊಂಡು ಇಲ್ಲಿಗೆ ಬಂದಿದ್ದೀರಿ. ಸದ್ಯಕ್ಕೆ ನೀವು ಉದ್ಯೋಗ ಪಡೆದುಕೊಳ್ಳಿ. ಉದ್ಯೋಗ ಪಡೆದುಕೊಂಡು ಕೆಲ ವರ್ಷಗಳ ಕಾಲ ತರಬೇತಿ ಪಡೆದ ನಂತರ ಉದ್ಯಮಿಗಳಾಗುವತ್ತ ಗಮನಹರಿಸಿ. ನೀವು ಯಶಸ್ಸು ಸಾಧಿಸಲು ಕನಸು ಕಾಣಬೇಕು, ಅದಕ್ಕಾಗಿ ಶಿಸ್ತು, ಬದ್ಧತೆ ಹೊಂದಿರಬೇಕು ಎಂದರು.

ಬೆಂಗಳೂರು ಜಾಗತಿಕ ಕೇಂದ್ರವಾಗಿದೆ. ಹೊರಗಿನಿಂದ ಬಂದು ಇಲ್ಲಿ ಉದ್ಯೋಗ ಪಡೆಯುತ್ತಿದ್ದಾರೆ. ಹೀಗಾಗಿ ನೀವು ಕೇವಲ ಕನಕಪುರಕ್ಕೆ ಸೀಮಿತದ ಆಲೋಚನೆ ಇಟ್ಟುಕೊಳ್ಳಬೇಡಿ. ಜಾಗತಿಕ ಮಟ್ಟದಲ್ಲಿ ಸ್ಪರ್ಧೆ ಮಾಡಲು ನೀವು ತಯಾರಾಗಬೇಕು ಎಂದು ತಿಳಿಸಿದರು. ನೀವೆಲ್ಲರೂ ಬೆಂಗಳೂರಿನವರು. ಆಡಳಿತ ದೃಷ್ಟಿಯಿಂದ ಮಾತ್ರ ಈ ಭಾಗವನ್ನು ಬೇರೆ ಜಿಲ್ಲೆಯಾಗಿ ಮಾಡಲಾಗಿದೆ ಅಷ್ಟೇ ಎಂದು ಹೇಳಿದರು.

ಆರ್‌ಇಎಸ್ ಸಂಸ್ಥೆಗೆ ಹೊಸ ರೂಪ ನೀಡಲು ಪ್ರಯತ್ನ ಮಾಡುತ್ತಿದ್ದೇವೆ. ಈ ಭಾಗದಲ್ಲಿ ಕೃಷಿ ವಿವಿ ತರಲು ಪ್ರಯತ್ನಿಸುತ್ತಿದ್ದೇವೆ. ಕನಕಪುರ, ರಾಮನಗರದಲ್ಲಿ ಹೆಚ್ಚು ರೇಷ್ಮೆ ಬೆಳೆಯುತ್ತಿದ್ದರು. ಇಲ್ಲಿಗಿಂತ ಉತ್ತರ ಕರ್ನಾಟಕದಲ್ಲಿ ಹೆಚ್ಚು ಬೆಳೆಯುತ್ತಿದ್ದಾರೆ. ಇಲ್ಲಿನ ಕೃಷಿ ಉತ್ಪನ್ನಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಫ್ತು ಆಗುತ್ತಿದೆ. ಹೀಗಾಗಿ ಈ ಭಾಗದಲ್ಲಿ ಕೃಷಿ ವಿವಿ ತರಲು ಪ್ರಯತ್ನಿಸುತ್ತಿದ್ದೇವೆ ಎಂದು ತಿಳಿಸಿದರು.

ನಮ್ಮ ಜಿಲ್ಲೆಯ ಪ್ರತಿ ಎರಡು ಮೂರು ಪಂಚಾಯತಿ ಮಟ್ಟದಲ್ಲಿ ಜಾಗತಿಕ ಗುಣಮಟ್ಟದ ಶಿಕ್ಷಣ ನೀಡಲು ಕರ್ನಾಟಕ ಪಬ್ಲಿಕ್ ಶಾಲೆ ಆರಂಭಿಸಲು ಮುಂದಾಗಿದ್ದೇವೆ. ಈಗಾಗಲೇ ನಮ್ಮ ಜಿಲ್ಲೆಯಲ್ಲಿ ಟೊಯೋಟಾ ಸಂಸ್ಥೆ ನಾಲ್ಕು ಶಾಲೆ ನಿರ್ಮಿಸಲು ಮುಂದೆ ಬಂದಿದ್ದಾರೆ. ಈ ಶಾಲೆಗಳನ್ನು ಖಾಸಗಿ ಶಾಲೆಗಳು ಜವಾಬ್ದಾರಿ ಪಡೆದುಕೊಂಡು ಶಿಕ್ಷಣ ನೀಡಬೇಕು ಎಂದರು.

ನಾವೆಲ್ಲರೂ ಈ ಸಂಸ್ಥೆಯ ಸಂಸ್ಥಾಪಕರಾದ ಕರಿಯಪ್ಪನವರನ್ನು ಸದಾ ಸ್ಮರಿಸಬೇಕು. ಕರಿಯಪ್ಪ ನವರು ಶಾಸಕರಾಗಿದ್ದಾಗ ಶಾಲೆಯಲ್ಲಿ ಸೀಟು ಪಡೆಯಲು ಅವರ ಬಳಿ ಹೋಗಿದ್ದೆ. ನಂತರ ಮುಖ್ಯಮಂತ್ರಿ ಬಳಿ ಹೋದರೂ ನನಗೆ ಆ ಶಾಲೆಯಲ್ಲಿ ಸೀಟು ಕೊಡಲಿಲ್ಲ, ನಮ್ಮ ಮಕ್ಕಳಿಗೆ ಅಂತಹ ಸ್ಥಿತಿ ಬರಬಾರದು ಎಂದು ಶಾಲೆಗಳನ್ನು ತೆರೆಯಲು ಮುಂದಾಗಿದ್ದೇವೆ ಎಂದು ಹೇಳಿದರು. ವಿದ್ಯಾ ದದಾತಿ ವಿನಯಂ ವಿನಯಾದ್ಯಾತಿ ಪಾತ್ರತಾಂ? ಪಾತ್ರತ್ವಾದ್ಧನ ಮಾಪ್ನೋತಿ ಧನಾದ್ಧರ್ಮಂ ತತಃ ಸುಖಂ ಅಂದರೆ ವಿದ್ಯೆಯಿಂದ ವಿನಯ, ಯೋಗ್ಯತೆ, ಜ್ಞಾನ ಹಾಗೂ ಹಣ ಸಿಗುತ್ತದೆ. ಹೀಗಾಗಿ ವಿದ್ಯೆ ಎಲ್ಲದಕ್ಕೂ ಮೂಲವಾಗಿದೆ ಎಂದರು.

ನಮ್ಮ ಜಿಲ್ಲೆಗೆ ಮೆಡಿಕಲ್ ಕಾಲೇಜು ತರಲು ಪ್ರಯತ್ನಿಸಿದೆ. ಆದರೆ ಯಡಿಯೂರಪ್ಪ ನವರು ನಮ್ಮ ಮೆಡಿಕಲ್ ಕಾಲೇಜನ್ನು ಚಿಕ್ಕಬಳ್ಳಾಪುರಕ್ಕೆ ತೆಗೆದುಕೊಂಡು ಹೋದರು. ಈಗ ದಯಾನಂದ ಸಾಗರ ಸಂಸ್ಥೆ ಜತೆ ಚರ್ಚೆ ಮಾಡಿ ಖಾಸಗಿ ಕಾಲೇಜು ತಂದೆವು. ಕನಕಪುರದಲ್ಲಿ ಹಾಗೂ ರಾಮನಗರದಲ್ಲಿ ಒಂದು ಸರ್ಕಾರಿ ಮೆಡಿಕಲ್ ಕಾಲೇಜು ಆರಂಭಿಸಲಾಗುವುದು ಎಂದು ಹೇಳಿದರು.

ಇತ್ತೀಚೆಗೆ ರಾಮನಗರದಲ್ಲಿ 100 ಹೊಸ ಸರ್ಕಾರಿ ಬಸ್ ಗಳನ್ನು ಲೋಕಾರ್ಪಣೆ ಮಾಡಿದೆವು. ಇನ್ನು ಕನಕಪುರ ರಸ್ತೆ ಕಾಮಗಾರಿ ಸಾಗುತ್ತಿದೆ. ಆದಷ್ಟು ಕನಕಪುರ ಸಮೀಪಕ್ಕೆ ಮೆಟ್ರೋ ತರುವ ಪ್ರಯತ್ನ ಮಾಡುತ್ತಿದ್ದೇವೆ. ನೀವು ನನ್ನನ್ನು ಶಾಸಕನಾಗಿ, ಸುರೇಶ್ ಅವರನ್ನು ಸಂಸದರಾಗಿ ಆಯ್ಕೆ ಮಾಡಿದ್ದೀರಿ. ನಾವು ಈ ಕ್ಷೇತ್ರಕ್ಕೆ ಹೊಸ ರೂಪ ಕೊಟ್ಟಿದ್ದೇವೆ ಎಂದವರು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಬೆಂಗಳೂರು ಗ್ರಾಮಾಂತರ ಸಂಸದ ಡಿ.ಕೆ. ಸುರೇಶ್ ಅವರು ಮಾತನಾಡಿ, ಸರ್ಕಾರದಂತೆಯೇ ಖಾಸಗಿ ಸಂಸ್ಥೆಗಳಲ್ಲಿಯೂ ಪಾರದರ್ಶಕ ನೇಮಕಾತಿಯಿದ್ದು, ಆಯಾ ಸಂಸ್ಥೆಗಳು ನಿರ್ದಿಷ್ಟ ಮಾನದಂಡಗಳನ್ನು ಹೊಂದಿರುತ್ತವೆ. ಅವುಗಳ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳುತ್ತದೆ. ಅಲ್ಲಿ ದಾಖಲಾಗುವ ವಿದ್ಯಾರ್ಥಿಗಳು ಬುದ್ಧಿವಂತಿಕೆ, ಕೌಶಲ್ಯ ಹಾಗೂ ಚಾಕಚಕ್ಯತೆಯಿಂದ ಕೆಲಸ ಮಾಡುವ ಗುಣ ಬೆಳೆಸಿಕೊಳ್ಳಬೇಕು. ಉದ್ಯೋಗ ಭವಿಷ್ಯವನ್ನು ಆಯ್ಕೆ ಮಾಡಿಕೊಳ್ಳುವ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಗೂಗಲ್ ಮೂಲಕವೂ ಅವಕಾಶಗಳಿವೆ, ಅವುಗಳನ್ನು ಮೊಬೈಲ್ ಮೂಲಕ ಹುಡುಕುವ ಯತ್ನವನ್ನು ಮಾಡಬೇಕು, ಅನಗತ್ಯವಾಗಿ ಮೊಬೈಲ್ ಹಿಡಿದು ಕಾಲಹರಣ ಮಾಡದಂತೆ ಅವರು ಕಿವಿ ಮಾತು ಹೇಳಿದರು.

ಉದ್ಯೋಗ ಮೇಳದಲ್ಲಿ ಟೊಯೋಟಾ ಸೇರಿದಂತೆ ನೂರಾರು ಕಂಪನಿಗಳು ಸಾವಿರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ರೂರಲ್ ಎಜುಕೇಶನ್ ಸೊಸೈಟಿಗೆ 1.75 ಕೋಟಿ ರೂ.ಗಳ ದೇಣಿಗೆ ನೀಡಿದ ಟೊಯೋಟಾ ಕಂಪನಿಯ ಸಿಎಸ್ ಆರ್ ವಿಭಾಗದ ಮುಖ್ಯಸ್ಥರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಕನಕಪುರದ ರೂರಲ್ ಎಜುಕೇಶನ್ ಸೊಸೈಟಿ ಆವರಣದಲ್ಲಿ ಶಾಲೆ ಸಂಸ್ಥಾಪಕ ಅಧ್ಯಕ್ಷ, ಮಾಜಿ ಶಾಸಕರಾದ ಕರಿಯಪ್ಪ ಅವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಿ, ಡಿಜಿಟಲ್ ಲೈಬ್ರರಿ ವೀಕ್ಷಿಸಿದರು. ರೂರಲ್ ಎಜುಕೇಶನ್ ಸೊಸೈಟಿಯ ಅಧ್ಯಕ್ಷರಾದ ಶ್ರೀಕಂಠಯ್ಯ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಗೌರವ ಕಾರ್ಯದರ್ಶಿ ಪುಟ್ಟಸ್ವಾಮಿ ಸ್ವಾಗತಿಸಿದರು.

ವಿಧಾನ ಪರಿಷತ್ ಸದಸ್ಯರಾದ ರವಿ, ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ದಿಗ್ವಿಜಯ್ ಬೋಡ್ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ ಸೇರಿದಂತೆ ಹಲವು ಮುಖಂಡರು ವೇದಿಕೆಯಲ್ಲಿದ್ದರು.

ಇದಕ್ಕೂ ಮುನ್ನ ಉಪ ಮುಖ್ಯಮಂತ್ರಿಗಳು ಮಾಧ್ಯಮದವರಿಗೆ ಪತ್ರಿಕ್ರಿಯೆ ನೀಡಿದರು. ಅದರ ಸಾರಾಂಶ:

ಕನಕಪುರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯೆ ನೀಡಿದ ಶಿವಕುಮಾರ್ ಅವರು ಹೇಳಿದ್ದಿಷ್ಟು; ನಿರುದ್ಯೋಗಿ ಯುವಕರಿಗೆ ಉದ್ಯೋಗ ಅವಕಾಶ ಕಲ್ಪಿಸಲು ಕನಕಪುರದಲ್ಲಿ ಉದ್ಯೋಗ ಮೇಳ ಆಯೋಜಿಸಲಾಗಿದೆ. ರಾಜ್ಯ ಸರ್ಕಾರದ ವತಿಯಿಂದ ಇದೇ ತಿಂಗಳು 26, 27ರಂದು ಬೆಂಗಳೂರಿನಲ್ಲಿ ಉದ್ಯೋಗ ಮೇಳ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಕಾಡಾನೆ ದಾಳಿ ತಡೆಯಲು ಕ್ರಮ: ಕನಕಪುರದಲ್ಲಿ ಕಾಡಾನೆ ದಾಳಿಗೆ ಜನ ಸಾಯುತ್ತಿರುವ ಬಗ್ಗೆ ಕೇಳಿದಾಗ, ಕಾಡಾನೆ ದಾಳಿಗೆ 9 ಜನ ಸತ್ತಿದ್ದಾರೆ. ಈ ಬಗ್ಗೆ ಅರಿವಿದೆ. ಅರಣ್ಯ ಸಚಿವರ ಜತೆ ಚರ್ಚಿಸಿ, ರೈಲ್ವೆ ಕಂಬಿಗಳ ಮೂಲಕ ತಡೆಗೋಡೆ ನಿರ್ಮಾಣ ಮಾಡಲು ಸೂಚಿಸಿದ್ದೇನೆ. ಇತ್ತೀಚೆಗೆ ಈ ಭಾಗದಲ್ಲಿ 50 ಆನೆಗಳ ಹಿಂಡು ಹೋಗುತ್ತಿರುವ ವಿಡಿಯೋ ನೋಡಿದೆ. ಆದಷ್ಟು ಕಾಡಾನೆ ದಾಳಿ ನಿಯಂತ್ರಿಸಲು ಪ್ರಯತ್ನಿಸುತ್ತೇವೆ ಎಂದು ತಿಳಿಸಿದರು.

ರಾಮನಗರದಲ್ಲಿ ವಕೀಲರ ಪ್ರತಿಭಟನೆ ಹಿನ್ನೆಲೆಯಲ್ಲಿ ಪಿಎಸ್ಐ ಅಮಾನತು ಮಾಡುವ ಆದೇಶದ ಬಗ್ಗೆ ಕೇಳಿದಾಗ, ನಾನು ಶಾಸಕರ ಜೊತೆ ಚರ್ಚೆ ಮಾಡಿದೆ. ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳುವಂತೆ ಹೇಳಿದರು. ಹೀಗಾಗಿ ಪ್ರಕರಣದ ತನಿಖೆ ಮಾಡಿ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಿ ಎಂದು ಪರಮೇಶ್ವರ್ ಅವರಿಗೆ ತಿಳಿಸಿದ್ದೇನೆ ಎಂದರು.




### ಲೋಕಸಭೆ ಚುನಾವಣೆಗೆ ತಯಾರಿ

**ಲೋಕಸಭೆ ಚುನಾವಣೆ ತಯಾರಿ ವಿಚಾರವಾಗಿ ಕೇಳಿದಾಗ, ವಿಧಾನಸಭೆ ಚುನಾವಣೆ ಮುಗಿದ ಮರುದಿನದಿಂದಲೇ ನಾವು ಲೋಕಸಭೆ ಚುನಾವಣೆ ಸಿದ್ಧತೆ ಆರಂಭಿಸಿದ್ದೇವೆ ಎಂದು ತಿಳಿಸಿದರು. ನಿಮ್ಮನ್ನು ಕಟ್ಟಿ ಹಾಕಲು ಮೈತ್ರಿ ನಾಯಕರು ಪ್ರಯತ್ನಿಸುತ್ತಿರುವ ಬಗ್ಗೆ ಕೇಳಿದಾಗ, ವಿಧಾನ ಪರಿಷತ್ ಚುನಾವಣೆಯಲ್ಲಿ ಪುಟ್ಟಣ್ಣ ಅವರನ್ನು ಕಟ್ಟಿಹಾಕಲು ಪ್ರಯತ್ನಿಸಿದ್ದರು. ಇಲ್ಲೂ ಅದೇ ರೀತಿ ಕಟ್ಟಿ ಹಾಕುತ್ತಾರೆ ಎಂದು ತಿಳಿಸಿದರು.**

## ಕುಡಿಯುವ ನೀರು, ರಾಸುಗಳಿಗೆ ಮೇವಿನ ಕೊರತೆಯಾಗದಂತೆ ಕ್ರಮ ವಹಿಸಲು ಡಿಸಿಎಂ ಸೂಚನೆ

**ರಾಮನಗರ:** ಕೆಲಸಗಳ ನಿಮಿತ್ತ ಸರ್ಕಾರದ ಕಚೇರಿಗಳಿಗೆ ಸಾರ್ವಜನಿಕರು ಬಂದಾಗ ಅಧಿಕಾರಿಗಳು ಸೂಕ್ತವಾಗಿ ಸ್ಪಂದಿಸಬೇಕು. ಇಲ್ಲವಾದರೇ ಸಂಬಂಧಿಸಿದವರ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿಗಳು, ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ. ಶಿವಕುಮಾರ್ ತಿಳಿಸಿದರು. ಅವರು ಫೆ.21ರ ಬುಧವಾರ ಕನಕಪುರದ ನಗರಸಭೆ ಕಾರ್ಯಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಕನಕಪುರ ತಾಲ್ಲೂಕು ಕೆಡಿಪಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇದೀಗ ಬೇಸಿಗೆ ಆರಂಭವಾಗಿದ್ದು, ಮುಂದಿನ ದಿನಗಳಲ್ಲಿ ಅತಿ ಹೆಚ್ಚು ತಾಪಮಾನ ಇರುವುದರಿಂದ, ಕುಡಿಯುವ ನೀರು ಹಾಗೂ ರಾಸುಗಳಿಗೆ ಮೇವು ಪೂರೈಕೆಯಲ್ಲಿ ಯಾವುದೇ ಸಮಸ್ಯೆಯಾಗದಂತೆ ಸಂಬಂಧಿಸಿದ ಅಧಿಕಾರಿಗಳು ಎಚ್ಚರಿಕೆಯ ಕ್ರಮವಹಿಸಬೇಕು, ಮುಂಬರುವ ದಿನಗಳಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯತ್ ಚುನಾವಣೆಗಳು ಜರುಗಲಿವೆ, ಅದಕ್ಕೆ ಅಧಿಕಾರಿಗಳು ಸಿದ್ದಗೊಳ್ಳಬೇಕೆಂದರು. ಅಧಿಕಾರಿಗಳು ಸಾರ್ವಜನಿಕ ಸಮಸ್ಯೆಗಳು, ಅಹವಾಲುಗಳಿಗೆ ಸ್ಪಂದಿಸದ ಕುರಿತು ದೂರು ಬಂದಲ್ಲಿ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು, ಜಿಲ್ಲೆಯಲ್ಲಿ ಜೂಜು, ಮಟ್ಕಾ ಇತ್ಯಾದಿ ಅಕ್ರಮ ಚಟುವಟಿಕೆಗಳು ಜರುಗದಂತೆ ಎಚ್ಚರ ವಹಿಸಬೇಕು, ನಿಯಮಗಳನ್ನು ಮೀರಿ ಯಾವುದೇ ರೀತಿಯ ಕೆಲಸಗಳನ್ನು ಮಾಡಬಾರದು, ಕಾನೂನಿನ ಚೌಕಟ್ಟಿನಲ್ಲಿಯೇ ಅವುಗಳನ್ನು ಮಾಡಬೇಕು ಎಂದವರು ಹೇಳಿದರು. ಬೆಂಗಳೂರು ಗ್ರಾಮಾಂತರ ಸಂಸದರಾದ ಡಿ.ಕೆ. ಸುರೇಶ್, ವಿಧಾನಪರಿಷತ್ ಸದಸ್ಯರಾದ ರವಿ, ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್, ಜಿಪಂ ಸಿಇಒ ದಿಗ್ವಿಜಯ್ ಬೋಡ್ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ, ಅಪರ ಜಿಲ್ಲಾಧಿಕಾರಿ ಶಿವಾನಂದ ಮೂರ್ತಿ ವೇದಿಕೆಯಲ್ಲಿದ್ದರು.

## ಪ್ರಗತಿ ಸೈನ್ಸ್ ಅಕಾಡೆಮಿಯ ಲಿಖಿತ್ ಕುಮಾರ್ ಸಾಧನೆ

**ವಿಜಯಪುರ:** ಪ್ರಗತಿ ಪ್ರೌಢಶಾಲೆಯಲ್ಲಿ ವ್ಯಾಸಾಂಗ ಮಾಡಿ, ಎಸ್.ಎಸ್.ಎಲ್.ಸಿ. ಪಬ್ಲಿಕ್ ಪರೀಕ್ಷೆಯಲ್ಲಿ, ರಾಜ್ಯ ಮಟ್ಟದಲ್ಲಿ 5 ನೇ ರಾಂಕ್ ಪಡೆದು, ಪ್ರಸ್ತುತ ಪ್ರಗತಿ ಸಂಯುಕ್ತ ಪದವಿಪೂರ್ವ ಕಾಲೇಜಿನಲ್ಲಿ ವ್ಯಾಸಾಂಗ ಮಾಡುತ್ತಾ, ಜೆ.ಇ.ಇ ಮುಖ್ಯಪರೀಕ್ಷೆಯನ್ನು ಉತ್ತಮ ಅಂಕಗಳೊಂದಿಗೆ ಪೂರ್ಣಗೊಳಿಸಿ, ಅಡ್ವಾನ್ಸ್ ಪರೀಕ್ಷೆಗೆ ಆಯ್ಕೆಯಾಗಿರುವ



, ಪ್ರಗತಿ ಸೈನ್ಸ್ ಅಕಾಡೆಮಿಯ ವಿದ್ಯಾರ್ಥಿ ಲಿಖಿತ್ ಕುಮಾರ್ ಜೆ.ಇ ಇ ಮೇನ್ಸ್ ಪರೀಕ್ಷೆಯಲ್ಲಿ ಶೇಕಡ 92 ಅಂಕ ಗಳಿಸಿರುವ ವಿದ್ಯಾರ್ಥಿ ಲಿಖಿತ್ ಕುಮಾರ್ ಕಾಲೇಜಿಗೆ ಕೀರ್ತಿಯನ್ನು ತಂದಿರುತ್ತಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು ಪ್ರಗತಿ ಸೈನ್ಸ್ ಅಕಾಡೆಮಿ ಮತ್ತು ಪ್ರಗತಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ತರಬೇತಿಯಿಂದ ಉತ್ತಮ ಸಾಧನೆ ಮಾಡಲು ಸಾಧ್ಯವಾಯಿತೆಂದು, ತಮ್ಮ ಖುಷಿಯನ್ನು ವ್ಯಕ್ತಪಡಿಸಿದರು. ಪ್ರಗತಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಎಸ್.ಕೃಪಾಶಂಕರ್, ಪ್ರಾಂಶುಪಾಲರಾದ ಸುರೇಶ್ ಅಭಿನಂದಿಸಿದ್ದಾರೆ.

## ಜೆಇಇ ಪರೀಕ್ಷೆಯಲ್ಲಿ ಎಸ್‌ಎಸ್ ಪಿಯು ಕಾಲೇಜು ಸಾಧನೆ

ತಿಪಟೂರು: ನಗರದ ಎಸ್‌ಎಸ್ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿ ಜಿತಿನ್ ಕೆ. ರಾಷ್ಟ್ರ ಮಟ್ಟದ ಜೆಇಇ ಮೇನ್ಸ್ ಪರೀಕ್ಷೆಯಲ್ಲಿ 98.01 ಪರ್ಸಂಟೇಲ್ ಸಾಧನೆಯೊಂದಿಗೆ ಜಿಲ್ಲೆಗೇ ಪ್ರಥಮ ಸ್ಥಾನ ಪಡೆದು ಹೊರಹೊಮ್ಮಿದ್ದಾನೆ ಎಂದು ಸಂಸ್ಥೆಯ ಕಾರ್ಯದರ್ಶಿ ಯಮುನಾ ತಿಳಿಸಿದರು. ಕಾಲೇಜಿನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು ಈ ಬಾರಿ ನಡೆದ ಪರೀಕ್ಷೆಯಲ್ಲಿ ನಮ್ಮ ಕಾಲೇಜಿನ 55 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು ಅದರಲ್ಲಿ 15 ವಿದ್ಯಾರ್ಥಿಗಳು ಜೆಇಇ ಮೇನ್ಸ್ ತೇರ್ಗಡೆ ಹೊಂದಿ ಜೆಇಇ ಅಡ್ವಾನ್ಸ್ ಪರೀಕ್ಷೆ ತೆಗೆದುಕೊಳ್ಳಲು ಉತ್ತೀರ್ಣರಾಗಿ ನಮ್ಮ ಕಾಲೇಜಿಗೆ ಕೀರ್ತಿ ತಂದಿದ್ದಾರೆ ಎಂದು ತಿಳಿಸಿದರು. ನಮ್ಮ ಕಾಲೇಜಿನ ವಿದ್ಯಾರ್ಥಿಗಳನ್ನು ಶೈಕ್ಷಣಿಕ ವರ್ಷದ ಪ್ರಾರಂಭದಿಂದಲೇ ಜೆಇಇ, ನೀಟ್, ಸಿಇಟಿ ಮುಂತಾದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಿ ಅಣಿಗೊಳಿಸಲಾಗುತ್ತದೆ. ಇದಕ್ಕಾಗಿಯೇ ಶಿಕ್ಷಕರ ತಂಡವನ್ನು ರಚಿಸಿ ಪ್ರತಿ ಹಂತದಲ್ಲಿಯೂ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲಾಗುತ್ತದೆ. ಪ್ರತಿ 10-12 ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕರನ್ನು ನೇಮಿಸಿ ಅವರ ವಿದ್ಯಾಭ್ಯಾಸದ ಕಡೆ ಗಮನ ಹರಿಸುವುದಲ್ಲದೇ ವೈಯಕ್ತಿಕವಾಗಿಯೂ ಕೌನ್ಸಿಲಿಂಗ್ ಮೂಲಕ ಪ್ರತಿ ವಿದ್ಯಾರ್ಥಿಯಲ್ಲಿಯೂ ಸ್ಫೂರ್ತಿ ತುಂಬಿ ಪರೀಕ್ಷೆಗಳಲ್ಲಿ ಉತ್ತಮ ಅಂಕ ಸಂಪಾದಿಸುವಂತೆ ಮಾಡಲಾಗುತ್ತದೆ. ಪ್ರತಿ ವಾರವೂ ಟೆಸ್ಟ್‌ಗಳು, ಕಿರು ಪರೀಕ್ಷೆ, ಪ್ರಿಪರೇಟರಿ, ಮಾಕ್ ಟೆಸ್ಟ್ ಮುಂತಾದ ವಿವಿಧ ಪರೀಕ್ಷೆಗಳನ್ನು ನಡೆಸಿ ವಿದ್ಯಾರ್ಥಿಗಳನ್ನು ಅಂತಿಮ ಪರೀಕ್ಷೆಗೆ ಸಿದ್ದಗೊಳಿಸುವುದರಿಂದ ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ ಉತ್ತಮ ಫಲಿತಾಂಶ ಪಡೆಯಲು ಸಹಕಾರಿಯಾಗಿದೆ ಎಂದು ತಿಳಿಸಿದರು. ಸಂಸ್ಥೆಯ ಶೈಕ್ಷಣಿಕ ಮುಖ್ಯಸ್ಥ ಎಂ.ಬಿ.ಶಿವಣ್ಣ ಮಾತನಾಡಿ ನಮ್ಮ ಕಾಲೇಜು 2017-18ನೇ ಸಾಲಿನಲ್ಲಿ ಪ್ರಾರಂಭವಾಗಿದ್ದು ಪ್ರತಿವರ್ಷ ಶೇ. ನೂರು ಫಲಿತಾಂಶ ದಾಖಲಿಸುತ್ತಾ ಬಂದಿದೆ. 3 ವರ್ಷಗಳಿಂದ ಜೆಇಇ ಪರೀಕ್ಷೆಗಳಲ್ಲಿ ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುತ್ತಾ ಬಂದಿದ್ದು 2020 ಮತ್ತು 2023ರಲ್ಲಿಯೂ ನಮ್ಮ ಕಾಲೇಜಿನ ವಿದ್ಯಾರ್ಥಿ ಜಿಲ್ಲೆಗೆ ಟಾಪರ್ ಆಗಿದ್ದರು. ಈ ವರ್ಷ 15 ವಿದ್ಯಾರ್ಥಿಗಳು ಈ ಸಾಧನೆ ಮಾಡಿದ್ದು ಅವರನ್ನು ಸಂಸ್ಥೆಯ ಪರವಾಗಿ ಅಭಿನಂದಿಸುತ್ತೇನೆ ಎಂದು ತಿಳಿಸಿದರು. ಶೇ 90ಕ್ಕೂ ಹೆಚ್ಚು ಪರ್ಸೆಂಟೈಲ್ ಪಡೆದ ವಿದ್ಯಾರ್ಥಿಗಳು: - ಅರ್ಜುನ್.ಜಿ -92.22, ಪ್ರಮುಕ್.ಕೆ.ಹೆಬ್ಬಾರ್ -91.75, ಪುನೀತ್ ಗುರು-91.11, ಜೀವನ್ ಪಟೇಲ್ ಎಂ-90.47, ಮೋಹನ್ ಎನ್.ಎಸ್. 90.18 ಶೈಕ್ಷಣಿಕ ಮುಖ್ಯಸ್ಥ ಎಂ.ಬಿ.ಶಿವಣ್ಣ ಕಾಲೇಜಿನ ಪ್ರಾಂಶುಪಾಲೆ ವೀಣಾ, ಶಿಕ್ಷಕರು ಉಪಸ್ಥಿತರಿದ್ದರು.

# ನೀರಾವರಿ ಹೋರಾಟ ನಿರಂತರವಾಗಿರಲಿ

**ಚನ್ನಪಟ್ಟಣ:** ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ರಮೇಶ್‌ಗೌಡರು ನಡೆಸುತ್ತಿರುವ ಹೋರಾಟಕ್ಕೆ ಎಲ್ಲರ ಬೆಂಬಲ ಅಗತ್ಯವಾಗಿದ್ದು, ಹೋರಾಟ ನಿರಂತರವಾಗಿರಲಿ ಎಂದು ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡರು(ಎನ್‌ಜಿ) ಅಭಿಪ್ರಾಯಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್ ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಬುಧವಾರ ನಡೆದ 140 ನೇ ದಿನದ ಹೋರಾಟದಲ್ಲಿ ಮಾತನಾಡಿದ ಅವರುಕಾವೇರಿ ನೀರು ಉಳಿಸಿಕೊಂಡು ಮೇಕೆದಾಟು ಅಣೆಕಟ್ಟೆಯಲ್ಲಿ ಸಂಗ್ರಹಿಸಿ ಬರದ ವೇಳೆ ಸದ್ಬಳಕೆ ಮಾಡಿಕೊಳ್ಳುವಂತೆ ರಮೇಶ್‌ಗೌಡರು ನಡೆಸುತ್ತಿರುವ ಹೋರಾಟ ಜನರ ಹಿತಕ್ಕಾಗಿ ನಡೆಸುತ್ತಿದ್ದು, ಇಂತಹ ಹೋರಾಟಗಳಿಗೆ ಫಲಸಿಗುವುದರಲ್ಲಿ ಯಾವುದೆ ಅನುಮಾನ ಇಲ್ಲ. ಈಗಾಗಲೆ ಸರ್ಕಾರವು ಮೇಕೆದಾಟು ಯೋಜನೆಗೆ ಮುಳುಗಡೆಯಾಗುವ ಗ್ರಾಮಗಳ ಜಮೀನು ಮತ್ತು ಅರಣ್ಯ ಪ್ರದೇಶದ ಸರ್ವೇ ಮಾಡಲು ಸೂಚನೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಯೋಜನೆಗೆ ಅಡಿಗಲ್ಲು ಹಾಕುವಲ್ಲಿ ಯಾವುದೇ ಶಂಸಯ ಇಲ್ಲ. ಈ ನಿಟ್ಟಿನಲ್ಲಿ ಈ ಹೋರಾಟ ನಿರಂತರವಾಗಿರಲಿ ಎಂದರು.



ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡ ಮಾತನಾಡಿ, ರಾಜ್ಯದಲ್ಲಿ ಜುಲೈವರೆಗೆ ಮಳೆಯ ಅಭಾವ ಇರುತ್ತದೆ. ಈಗಾಗಲೆ ಬಿಸಿಲಿನ ತಾಪ ಹೆಚ್ಚಾಗಿದ್ದು, ಮುಂಜಾನೆಯೇ ಮನೆಯಿಂದ ಹೊರಬಾರದಷ್ಟು ಬಿಸಲಿನ ತಾಪ ಹೆಚ್ಚಾಗಿದೆ. ಇವೆಲ್ಲವೂ ಮುಂದಿನ ಪೀಳಿಗೆಗೆ ಎಚ್ಚರಿಕೆಯ ಗಂಟೆಯಾಗಿದ್ದು, ಇದನ್ನು ಮನಗಂಡು ಸರ್ಕಾರವು ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ಕೊಡಗಿನ ಮಳೆ ಆಧಾರಿತ ಸಂಕಷ್ಟ ಸೂತ್ರ ರಚಿಸಬೇಕು. ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕಲು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಪ್ರತಿಭಟನೆಯಲ್ಲಿ ವೇದಿಕೆ ಗೌರವಾಧ್ಯಕ್ಷ ಚಿಕ್ಕಣ್ಣಪ್ಪ, ಮೆಣಸಿಗನಹಳ್ಳಿ ರಾಮಕೃಷ್ಣ, ಸಯ್ಯದ್, ಇತರರು ಇದ್ದರು.

# ಕನ್ನಡ ನಾಮ ಫಲಕಗಳನ್ನು 28ರೊಳಗೆ ಕಡ್ಡಾಯಗೊಳಿಸಬೇಕು

**ಕೋಲಾರ:** ರಾಜ್ಯದಲ್ಲಿ ಸರ್ಕಾರದ ನಿಯಮದಂತೆ ಶೇ.60ರಷ್ಟು ಕನ್ನಡ ನಾಮ ಫಲಕಗಳನ್ನು ಫೆ, 28ರೊಳಗೆ ಕಡ್ಡಾಯಗೊಳಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ನಗರದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು.

ನಗರದ ಗಾಂಧಿವನದ ಸಮೀಪ ಜಮಾಯಿಸಿದ ಕಾರ್ಯಕರ್ತರು ಎಂಜಿ ರಸ್ತೆ, ಬಸ್‌ನಿಲ್ದಾಣ, ಎಂಬಿ ರಸ್ತೆ, ಮೆಕ್ಕೆ ವೃತ್ತದ ಮೂಲಕ ತಹಶೀಲ್ದಾರ್ ಕಚೇರಿ ವರೆಗೆ ಮೆರವಣಿಗೆ ನಡೆಸಿ ಪ್ರತಿಭಟಿಸಿದರು. ವೇದಿಕೆಯ ಜಿಲ್ಲಾಧ್ಯಕ್ಷ ಮೇಡಿಹಾಳ ರಾಘವೇಂದ್ರ ಮಾತನಾಡಿ, ಮೂರು ಸಾವಿರ ವರ್ಷಗಳ ಇತಿಹಾಸ ಇರುವ ಕನ್ನಡ ನುಡಿ ಕರ್ನಾಟಕದಲ್ಲಿ ಸೊರಗಿ ಹೋಗುವಂತಾಗಿದೆ. ಇದಕ್ಕೆ ಮುಖ್ಯ ಕಾರಣ ಹೊಟ್ಟೆ ಪಾಡಿಗಾಗಿ ಗುಳೆ ಬಂದಿರುವ ಪರಭಾಷಿಕರು, ಬೆಂಗಳೂರು ಸೇರಿದಂತೆ ನಗರಗಳು, ಪಟ್ಟಣಗಳು, ಹೋಬಳಿ ಕೇಂದ್ರಗಳಲ್ಲಿ ಈಗ ಪರಭಾಷಿಕ ವ್ಯಾಪಾರಿಗಳದ್ದೇ ಆರ್ಭಟ ಜೋರಾಗಿದೆ. ಕನ್ನಡ ಉಳಿಸಿ ಬೆಳೆಸಬೇಕಾದ ಜವಾಬ್ದಾರಿ ಕನ್ನಡಿಗರ ಮೇಲಿದೆ ಎಂದು ಹೇಳಿದರು.

ರಾಜ್ಯದ ಸರ್ಕಾರದ ನಿಯಮಾನುಸಾರದಂತೆ ಕರ್ನಾಟಕದಲ್ಲಿ ಎಲ್ಲಾ ಅಂಗಡಿ ಮುಂಗಟ್ಟುಗಳ ನಾಮ ಫಲಕಗಳಲ್ಲಿ ಶೇ.60% ರಷ್ಟು ಕನ್ನಡ ಭಾಷೆಯಲ್ಲಿ ಹಾಕಬೇಕು ಎಂದು ಸರ್ಕಾರದ ಆದೇಶ, ಸುತ್ತೋಲೆಗಳು, ಕನ್ನಡಿಗರು ಹೋರಾಟಗಳನ್ನು ನಡೆಸಿದ್ದರೂ ಸಹ ಪರಭಾಷಿಕ ಉದ್ಯಮಿಗಳು, ವ್ಯಾಪಾರಿಗಳು, ಉದ್ದಟತನದಿಂದ ವರ್ತಿಸಿ, ಕನ್ನಡವನ್ನು ಕಡೆಗಣಿಸುತ್ತಾ ಬಂದಿದ್ದಾರೆ. ಇನ್ನೂ ಕೆಲವು ಕಾಟಾಚಾರಕ್ಕೆ ಎಲ್ಲೋ ಒಂದು ಮೂಲೆಯಲ್ಲಿ ಪುಟ್ಟದಾಗಿ ಕನ್ನಡದಲ್ಲಿ ಬರೆದು ಇಂಗ್ಲೀಷ್ ಫಲಕಗಳನ್ನು ರಾಜಾರೋಷವಾಗಿ ಪ್ರದೇಶಿಸುತ್ತಿದ್ದಾರೆ ಎಂದು ದೂರಿದರು.

ಜಿಲ್ಲಾ ವ್ಯಾಪ್ತಿಯಲ್ಲಿರುವ ಅಂಗಡಿ-ಮುಂಗಟ್ಟು, ವಾಣಿಜ್ಯ ಮಳಿಗೆ, ಕೈಗಾರಿಕೆ, ವ್ಯಾಪಾರ ಸಂಸ್ಥೆ, ಸಮಾಲೋಚನ ಕೇಂದ್ರ, ಆಸ್ಪತ್ರೆ, ಪ್ರಯೋಗಾಲಯ, ಮನೋರಂಜನಾ ಕೇಂದ್ರ, ಹೋಟೆಲ್‌ಗಳು, ಖಾಸಗಿ ಶಾಲೆಗಳು, ದೇವಾಲಯಗಳು, ಚರ್ಚುಗಳು, ಮಸೀದಿಗಳು ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಹಾಗೂ ಸಾರ್ವಜನಿಕ ಜಾಹಿರಾತು ನೀಡುವ ಫಲಕಗಳು, ಬ್ಯಾನರ್ ಗಳನ್ನು ಕನ್ನಡವನ್ನು ಕಡೆಗಣಿಸುತ್ತಿದ್ದಾರೆ. ಇದು ಫೆ,28ರೊಳಗೆ ಸರಿಹೋಗಬೇಕು, ಇಲ್ಲದಿದ್ದರೆ ಹೋರಾಟದ ಸ್ವರೂಪವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ರಾಜ್ಯದಲ್ಲಿ ಕನ್ನಡ ನಾಮ ಫಲಕಗಳನ್ನು ಕಡ್ಡಾಯಗೊಳಿಸಬೇಕು ಎಂದು ಒತ್ತಾಯಿಸಿ ಇತ್ತೀಚಿಗೆ ವೇದಿಕೆಯಿಂದ ಬೆಂಗಳೂರಿನಲ್ಲಿ ನಡೆಸಿದ ಪ್ರತಿಭಟನೆಯಿಂದ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಹಾಗೂ ಕಾರ್ಯಕರ್ತರ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನು ವಾಪಸ್ ಪಡೆಯಬೇಕು. ಇಲ್ಲದಿದ್ದರೆ ಫೆ.28ರ ನಂತರ ಉಗ್ರ ಹೋರಾಟ ನಡೆಸಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು. ಕರವೇ ನಾರಾಯಣಗೌಡ ಬಣದ ಪ್ರಧಾನ ಕಾರ್ಯದರ್ಶಿ ಮುನಿರಾಜು, ಜಿಲ್ಲಾ ಉಪಾಧ್ಯಕ್ಷ ಡಿಕೆಹಳ್ಳಿ ಪ್ರಭಾಕರಗೌಡ, ಮೆಹಬೂಬ್, ವಡಗೂರು ಶಂಕರ್‌ರೆಡ್ಡಿ, ವಡಗೂರು ಮಂಜುನಾಥ್, ಡಿಕೆಹಳ್ಳಿ ಮುನಿರಾಜು, ಯಾನಂದಹಳ್ಳಿ ಮಂಜುನಾಥ್, ಯಾರಂಘಟ್ಟ ಶಶಿಕುಮಾರ್, ಕೋಲಾರ ನಗರ ಘಟಕ ಅಧ್ಯಕ್ಷ ಗಣೇಶ್, ಸಿ.ಜೆ.ಮುರಳಿ, ಮಾಲೂರು ಪುರಸಭೆ ಮಾಜಿ ಅಧ್ಯಕ್ಷ ಮುರಳೀಧರ್, ಮಾಲೂರು ತಾಲೂಕು ಅಧ್ಯಕ್ಷ ಶ್ರೀನಿವಾಸ್, ನಾರಾಯಣಸ್ವಾಮಿ, ಸಂತೋಷ್, ರಾಮಕೃಷ್ಣಪ್ಪ ಇದ್ದರು.



# ಕರ್ನಾಟಕ ನಾಮಕರಣ ಸುವರ್ಣ ಸಂಭ್ರಮ

**ವಿಜಯಪುರ:** ಪಟ್ಟಣದ ಅಖಿಲ ಕರ್ನಾಟಕ ಮಿತ್ರ ಸಂಘದ ವತಿಯಿಂದ ಫೆಬ್ರವರಿ 24ರ ಶನಿವಾರದಂದು ಬೆಳಗ್ಗೆ 11:30ಕ್ಕೆ ಮಹಾತ್ಮ ಪ್ರೌಢಶಾಲೆಯಲ್ಲಿ 68ನೇ ಕನ್ನಡ ರಾಜ್ಯೋತ್ಸವ, ಕರ್ನಾಟಕ ನಾಮಕರಣ ಸುವರ್ಣ ಸಂಭ್ರಮ ಉತ್ಸವ 2023-24, ಮಾಹಿತಿ ತಂತ್ರಜ್ಞಾನದ ಹಾಗೂ ಗುತ್ತಿಗೆದಾರರ ಮತ್ತು ಸಮಾಜಸೇವಕರ ಉತ್ಸವಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಕರ್ನಾಟಕ ಮಿತ್ರ ಸಂಘದ ರಾಜ್ಯಾಧ್ಯಕ್ಷ ಚಿ.ಮಾ ಸುಧಾಕರ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವರು.



ಸುವರ್ಣ ಸಂಭ್ರಮದ ಉತ್ಸವ ಅಧ್ಯಕ್ಷರಾಗಿ ಶಿಡ್ಲಘಟ್ಟ ಕ್ಷೇತ್ರದ ದಾನಿಗಳಾದ ಎಡಿಬಿ ಪ್ರತಿಷ್ಠಾನದ ಅಧ್ಯಕ್ಷರಾದ ರಾಜೀವ್‌ಗೌಡ, ಮಾಹಿತಿ ಮತ್ತು ತಂತ್ರಜ್ಞಾನದ ಉತ್ಸವಾಧ್ಯಕ್ಷರಾಗಿ ನೇಟೀವ್ ಡ್ರೀಮ್ ಟೆಕ್ನಾಲಜಿಸ್ ಪ್ರೈವೇಟ್ ಲಿಮಿಟೆಡ್ನ ಸಂಸ್ಥಾಪಕ ಪಿ ಆರ್ ಚಂದನ್ ರವರನ್ನು, ಕಾರ್ಮಿಕ ಗುತ್ತಿಗೆದಾರರಾದ ಉತ್ಸವಾಧ್ಯಕ್ಷರಾಗಿ ದೊಡ್ಡಬಳ್ಳಾಪುರ ಕೈಗಾರಿಕಾ ವಲಯದ ದೇವಗಾನಹಳ್ಳಿ ಕ್ಯಾತೇಗೌಡ ರವರನ್ನು, ಸಮಾಜಸೇವಕರ ಉತ್ಸವ ಅಧ್ಯಕ್ಷರನ್ನಾಗಿ ಜಿಕೆವಿಕೆಯ ಕುರಿ ಮತ್ತು ಉಣ್ಣೆ ಉತ್ಪಾದಕ ಸಂಘದ ಮಾಜಿ ಅಧ್ಯಕ್ಷರಾದ ಬಿಕೆ ನಾರಾಯಣಸ್ವಾಮಿ ರವರನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿರುವರು.

ಬೆಳಗ್ಗೆ 9 ಗಂಟೆಗೆ ಅಖಿಲ ಕರ್ನಾಟಕ ಮಿತ್ರ ಸಂಘದ ಗೌರವ ಕಾರ್ಯದರ್ಶಿ ಆರ್ ಮುನಿರಾಜುರವರು ಕನ್ನಡ ಧ್ವಜಾರೋಹಣ ನೆರವೇರಿಸಲಿರುವರು. 9:30ಕ್ಕೆ ಎಲ್ಲಾ ಉತ್ಸವಧ್ಯಕ್ಷಗಳನ್ನು ವಿವಿಧ ಜಾನಪದ ಕಲಾತಂಡಗಳೊಂದಿಗೆ ಪಟ್ಟಣದ ರಾಜಬೀದಿಗಳಲ್ಲಿ ಮೆರವಣಿಗೆಯ ಮೂಲಕ ವೇದಿಕೆಗೆ ಬರಮಾಡಿಕೊಳ್ಳಲಾಗುವುದು.

ಸಹಕಾರ ಪತ್ರಿಕೆಯ ಸಂಪಾದಕರು ಹಾಗೂ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಪಿ ರುದ್ರಪ್ಪ ರವರು ಉದ್ಘಾಟನೆ ನೆರವೇರಿಸಲಿದ್ದು, ಉತ್ಸವ ಅಧ್ಯಕ್ಷರುಗಳಿಗೆ ಗೌರವ ಸಮರ್ಪಣೆ ಅರ್ಪಿಸುವರು. ಅಖಿಲ ಕರ್ನಾಟಕ ಮಿತ್ರ ಸಂಘದ ರಾಜ್ಯಾಧ್ಯಕ್ಷ ಚಿ.ಮಾ ಸುಧಾಕರ್ ಪ್ರಾಸ್ತಾವಿಕ ನುಡಿ ನುಡಿಯಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿಡ್ಲಘಟ್ಟ ತಾಲೂಕು ನಾಗಮಂಗಲ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎನ್ ಸಿ ಮುನವೆಂಕಟ್‌ರಮಣ ವಹಿಸಲಿದ್ದು, ರಾಷ್ಟ್ರಪ್ರಶಸ್ತಿ ವಿಜೇತ ಶಿಕ್ಷಕರಾದ ಎಮ್ ಶಿವಕುಮಾರ್ ರವರು ಪ್ರಶಸ್ತಿ ಪ್ರಧಾನ ಮಾಡಲಿರುವರು. ಮುಖ್ಯ ಅತಿಥಿಗಳಾಗಿ ಅಖಿಲ ಕರ್ನಾಟಕ ಮಿತ್ರ ಸಂಘದ ವಿಎನ್ ಸೂರ್ಯಪ್ರಕಾಶ್, ಕಾರ್ಯಾಧ್ಯಕ್ಷರಾದ ವಿ ವಿಶ್ವನಾಥ್, ಜಿಲ್ಲಾಧ್ಯಕ್ಷರಾದ ಚಂದ್ರಶೇಖರ್ ಹಡಪದ್, ಉಪಾಧ್ಯಕ್ಷರಾದ ಕೆಎಚ್ ಚಂದ್ರಶೇಖರ್ ಭಾಗವಹಿಸಲಿರುವರು. ಕರ್ನಾಟಕ ನಾಮಕರಣ ಸುವರ್ಣ ಮಹೋತ್ಸವದ ಸ್ಮರಣಾರ್ಥ ಹಿರಿಯ ಸ್ಮರಣೀಯರ ಸಾಧಕರ ಹೆಸರಲ್ಲಿ ಪ್ರಶಸ್ತಿಗಳನ್ನು ನೀಡಲಾಗುತ್ತಿದ್ದು, ಸ್ವಾತಂತ್ರ್ಯ ಹೋರಾಟಗಾರರಾದ ಮಳ್ಳೂರು ನಾಗಪ್ಪ ರವರ ಹೆಸರಿನಲ್ಲಿ ರೇಷ್ಮೆ ಕೃಷಿ ಪ್ರಶಸ್ತಿ, ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ಟಿ ಸಿದ್ದಲಿಂಗಯ್ಯ ರವರ ಹೆಸರಿನಲ್ಲಿ ಸಮಾಜ ಸೇವಾ ಪ್ರಶಸ್ತಿ, ಬೂದಿಗೆರೆ ವೈಯಂ. ಗವಿಯಪ್ಪನವರ ಹೆಸರಿನಲ್ಲಿ, ಮಳ್ಳೂರು ಪಾಪಣ್ಣ ರವರ ಹೆಸರಿನಲ್ಲಿ, ಹಾಗೂ ನಮ್ಮ ಬದುಕು ಸಿನಿಮಾ ಸಹಾಯಕ ನಿರ್ದೇಶಕರಾದ ಜಂಗಮಕೋಟೆ ಸತ್ಯನಾರಾಯಣರವರ ಹೆಸರಿನಲ್ಲಿ, ಮಾಜಿ ಪುರಸಭಾ ಉಪಾಧ್ಯಕ್ಷರಾಗಿದ್ದ ಸಿ ಎಚ್ ಬಾಬಾ ಸಾಹೇಬ್ ರವರ ಹೆಸರಿನಲ್ಲಿ ಶಿಕ್ಷಕರ ಪ್ರಶಸ್ತಿ, ರಂಗಭೂಮಿ ಕಲಾವಿದರಾಗಿದ್ದ ಹಾರೋಹಳ್ಳಿ ಎನ್ ರಾಜಗೋಪಾಲ್ ರವರ ಪ್ರಶಸ್ತಿ ಮುಂತಾಗಿ ಹತ್ತು ಹಲವು ಹಿರಿಯರ ಸ್ಮರಣಾರ್ಥ ಪ್ರಶಸ್ತಿಗಳನ್ನು ನೀಡಲಾಗುವುದು ಎಂದು ತಿಳಿಸಿರುವರು.

# ಅರಣ್ಯಾಧಿಕಾರಿಯ ಅವಿವೇಕತನಕ್ಕೆ ಅಮಾಯಕ ಸಾಕು ಕಡವೆ ಬಲಿ..!

**ಚಾಮರಾಜನಗರ:** ಜಿಲ್ಲೆಯ ಹನೂರು ತಾಲ್ಲೂಕಿನ ಪಿ.ಜಿ.ಪಾಳ್ಯ ವನ್ಯಜೀವಿ ವಲಯದಿಂದ ನೂತನವಾಗಿ ಪ್ರಾರಂಭವಾಗಿದ್ದ ಮಲೆ ಮಹದೇಶ್ವರ ವನ್ಯಧಾಮ ಸಫಾರಿಯಲ್ಲಿ ಪ್ರಾಣ ಪ್ರಿಯರ ಆಕರ್ಷಣೆಯಾಗಿದ್ದ ಅಮಾಯಕ ಸಾಕು ಕಡವೆಯೊಂದು ಅರಣ್ಯಾಧಿಕಾರಿಯೊಬ್ಬರ ಅವಿವೇಕತನದ ಪರಮಾವದಿಗೆ ಸಿಲುಕಿ ನೇಣು ಬಿಗಿದುಕೊಂಡ ಸ್ಥಿತಿಯಲ್ಲಿ ಸಾವಿಗೀಡಾಗಿರುವುದು ತಡವಾಗಿ ಬೆಳಕಿಗೆ ಬಂದಿದೆ.

ಎರಡು ಮೂರು ವರ್ಷಗಳ ಹಿಂದೆ ಮಲೆ ಮಹದೇಶ್ವರ ವನ್ಯ ಧಾಮಕ್ಕೆ ಸೇರಿದ ಪಾಲಾರ್ ವನ್ಯ ಜೀವಿ ವಲಯದ ಅರಣ್ಯ ಪ್ರದೇಶದಲ್ಲಿ ತಾಯಿಯಿಂದ ಬೇರ್ಪಟ್ಟಿದ್ದ ಒಂದು ತಿಂಗಳಷ್ಟಿನ ವಯೋಮಾನದ ಗಂಡು ಕಡವೆ ಮರಿಯನ್ನು ಅಲ್ಲಿನ ಅರಣ್ಯ ಇಲಾಖೆ ಸಿಬ್ಬಂದಿ ಅಕ್ಕರೆಯಿಂದ ತಂದು ಪೋಷಿಸಿ ಜತನದಿಂದ ಕಾಪಾಡಿಕೊಂಡಿದ್ದರು. ಪಾಲಾರ್ ಅರಣ್ಯ ಸಿಬ್ಬಂದಿಗಳ ವಸತಿ ಗೃಹದಲ್ಲಿ ಸಿಬ್ಬಂದಿಗಳೊಂದಿಗೆ ಅನ್ನಾಹಾರಗಳನ್ನು ಸೇವಿಸಿ ಅಕ್ಕಪಕ್ಕದ ಕಾಡಿನೊಳಗೆ ಸ್ವಚ್ಛಂದವಾಗಿ ವಿಹರಿಸಿಕೊಂಡು ರಾತ್ರಿ ವಸತಿ ಗೃಹಗಳ ಬಳಿಯೇ ತಂಗುತ್ತಿತ್ತು. ಅರಣ್ಯ ಸಿಬ್ಬಂದಿಗಳ ಪ್ರೀತಿ ಪಾತ್ರವಾಗಿದ್ದ ಅದಕ್ಕೆ ಸಿಬ್ಬಂದಿಗಳು ರಾಕಿ ಎಂದು ನಾಮಕರಣ ಮಾಡಿದ್ದರು. ಅದು ಎಲ್ಲಿಯೇ ಇದ್ದರೂ ರಾಕಿ ಎಂದು ಕರೆದರೆ ಸಾಕು ಓಡೋಡಿ ಬರುತ್ತಿತ್ತು. ಯಾರಿಗೂ ತೊಂದರೆ ಕೊಡದೆ ನಾಡಿನ ಜಾನುವಾರುಗಳ ಜತೆ ಜಾನುವಾರಿನಂತೆ ಓಡಾಡಿಕೊಂಡಿತ್ತು. ಅಲ್ಲಿನ ಅಕ್ಕ ಪಕ್ಕದ ರೈತರ ಜತೆಯೂ ಬೆರೆತು ನಾಡಿನ ಪ್ರಾಣ ಯಂತೆ ದಾರಿಯಲ್ಲಿ ಅಡ್ಡಾಡಿಕೊಂಡಿತ್ತು.

ಹೀಗಿರುವಾಗ ಹಾಗೂ ಹೀಗೂ ಅದು ನಾಡಿನ ಜನರ ನಂಟಿನೊಂದಿಗೆ ಮೂರು ವರ್ಷದ ಪ್ರಾಯಕ್ಕೆ ಬಂದಿತ್ತು. ಇದೀಗ ಮಲೆ ಮಹದೇಶ್ವರ ವನ್ಯಧಾಮದ ವತಿಯಿಂದ ಪಿ.ಜಿ.ಪಾಳ್ಯ ವನ್ಯಜೀವಿ ವಲಯದಲ್ಲಿ ನೂತನವಾಗಿ ಸಫಾರಿ ಪ್ರಾರಂಭಿಸಿದ್ದೇ ಅದರ ಸಾವಿಗೆ ಮುಳುವಾಯಿತೆಂದರೂ ತಪ್ಪಾಗಲಾರದು.

ಇಲ್ಲಿ ವನ್ಯಜೀವಿಗಳು ಕಡಿಮೆ ಸಂಖ್ಯೆಯಲ್ಲಿರುವುದರಿಂದ ಸಫಾರಿಗೆ ಬರುವವರಿಗೆ ಆಕರ್ಷಣೆಯಾಗಿರುತ್ತದೆಂದು ಕಡವೆಯನ್ನು ಪಾಲಾರ್ನಿಂದ ಇಲ್ಲಿನ ಪಿ.ಜಿ.ಪಾಳ್ಯ ಕಳ್ಳಬೇಟೆ ತಡೆ ಶಿಬಿರಕ್ಕೆ ತಂದು ಬಿಡಲಾಯಿತು. ಅದು ಅಲ್ಲಿದ್ದ ಸಂದರ್ಭದಲ್ಲಿ ಇತ್ತೀಚೆಗಷ್ಟೆ ಸಫಾರಿಗೆ ತೆರಳಿದ್ದ ನಮ್ಮ ಕುಟುಂಬ ಅದರೊಟ್ಟಿಗೆ ಫೋಟೋ ವಿಡಿಯೋ ತೆಗೆದುಕೊಂಡು ಖುಷಿ ಪಟ್ಟಿದ್ದ ನೆನಪು ಕಾಡುವಂತಾದ್ದು.



ಸುಮಾರು ಒಂದು ವಾರಗಳ ಕಾಲ ಪಿ.ಜಿ.ಪಾಳ್ಯ ಕಳ್ಳಬೇಟೆ ತಡೆ ಶಿಬಿದಲ್ಲಿದ್ದ ಅದು ಅಲ್ಲಿನ ಸಿಬ್ಬಂದಿಗಳೊಂದಿಗೂ ಹೊಂದಿಕೊಂಡಿತ್ತಲ್ಲದೆ ಸಫಾರಿಗೆ ಬರುವವರ ಬಳಿಯು ಆಹಾರವನ್ನು ಸ್ವೀಕರಿಸಿ ಮನಕ್ಕೆ ಮುದ ನೀಡುತ್ತಿತ್ತು. ಹಾಗೂ ಸ್ಥಳ ಬದಲಾವಣೆ ಆದ್ದರಿಂದ ಅದು ತುಂಟತನದಿಂದ ವರ್ತಿಸುತ್ತಿತ್ತು. ಅದು ಪ್ರಾಯದ ಗಂಡು ಕಡವೆಯಾದ್ದರಿಂದ ವಯೋ ಸಹಜ ಪ್ರಕೃತಿ ಕರೆಗೆ ಓಗೊಟ್ಟು ಸಂಗಾತಿಯ ಹುಡುಕಾಟದಲ್ಲಿ ಎಲ್ಲೆಂದರಲ್ಲಿ ಅಡ್ಡಾಡುತ್ತ ಮದದಿಂದ ಎಲ್ಲೆಲ್ಲಿಗೋ ಓಡಿ ಹೋಗುತ್ತಿದ್ದುದು ಸಿಬ್ಬಂದಿಗಳಿಗೆ ಕೊಂಚ ತಲೆನೋವಾಗಿ ಪರಿಣಮಿಸಿತ್ತು.

ರೈತರ ಜಮೀನುಳಿಗೆ ತೆರಳಿದರೂ ಯಾವುದೇ ಬೆಳೆಗೆ ಹಾನಿ ಮಾಡುವುದಾಗಿ ಮೇಯುವುದಾಗಲಿ ಮಾಡುತ್ತಿರಲಿಲ್ಲ. ಮನುಷ್ಯರು ಸೇವಿಸುವ ಆಹಾರವನ್ನೇ ಆದು ಬಯಸುತ್ತಿದ್ದು ಅನ್ನ ಮುದ್ದೆ ಬಿಸ್ಕೆಟ್ ನೀಡಿದರೆ ತಿಂದು ಬರುತ್ತಿದ್ದಂತಹ ನಿರುಪದ್ರವಿ ಅದಾಗಿತ್ತು. ಹೀಗಿರುವಾಗಿ ಅದು ಒಮ್ಮೆ ಪಿ.ಜಿ.ಪಾಳ್ಯ ಹಾಗೂ ಕುಡುವಾಳೆ ದೊಡ್ಡಿಯ ಮಧ್ಯದ ಕಾಡಂಚಿನ ರೈತ ಸಿದ್ಧಪ್ಪಾಜಿಯವರ ತೋಟಕ್ಕೆ ಹೋಗಿ ಒಂದು ದಿನ ಅವರ ತೋಟದ ಮನೆಯ ಬಳಿ ಅವರು ಕೊಟ್ಟ ಅನ್ನಾಹಾರವನ್ನು ಸೇವಿಸಿ ಅಲ್ಲಿಯೇ ತಂಗಿತ್ತು. ನಂತರ ಮಾಲೀಕರು ಅರಣ್ಯ ಇಲಾಖೆಯವರಿಗೆ ಕರೆ ಮಾಡಿ ಕಡವೆ ಬಂದಿರುವುದನ್ನು ತಿಳಿಸಿದ್ದಾರೆ. ಇದರಿಂದ ಕೋಪಗೊಂಡ ಮಲೆ ಮಹದೇಶ್ವರ ಬೆಟ್ಟ ವನ್ಯಧಾಮದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಸಂತೋಷ್ ಕುಮಾರ್ರವರು ಪಿ.ಜಿ ಪಾಳ್ಯ ವನ್ಯಜೀವಿ ವಲಯದ ಸಿಬ್ಬಂದಿಗಳಿಗೆ ಕಡವೆ ರಾಕಿಯನ್ನು ಎಳೆದೊಯ್ದು ವಡವಾರದ ಕೆರೆ ಬಳಿ ಕಟ್ಟಿ ಹಾಕಿ ಬನ್ನಿ ನೀರು ಕುಡಿಯಲು ಬರುವ ಹುಲಿಯೋ ಚಿರತೆಯೋ ತಿಂದು ಕೊಂಡು ಹೋಗಲಿ ಎಂದು ಕಡಕ್ಕಾಗಿ ಸೂಚನೆ ನೀಡಿದರೆಂಬ ಮಾಹಿತಿ ಲಭ್ಯವಾಗಿದೆ.

ಹಿರಿಯ ಅಧಿಕಾರಿಗಳ ಆಜ್ಞೆಯನ್ನು ಪರಿಪಾಲಿಸಲು ಮುಂದಾದ ಡಿಆರ್ ಎಫ್‌ಓ ಕೃಷ್ಣಪ್ಪ ನೇತೃತ್ವದಲ್ಲಿ ಗಾರ್ಡ್‌ಗಳಾದ ಯಮುನಪ್ಪ, ಚಂದ್ರು, ವಿಠಲ್, ಹಾಗೂ ಹೊರಗುತ್ತಿಗೆ ವಾಚರ್‌ಗಳಾದ ಶಿವು, ಹರೀಶ್, ಮಧು, ನಂದೀಶ್ರವರುಗಳು ರೈತ ಸಿದ್ಧಪ್ಪಾಜಿ ಜಮೀನಿಗೆ ತೆರಳಿ ಅಲ್ಲಿ ಸುರಕ್ಷಿತವಾಗಿದ್ದ ಕಡವೆಯನ್ನು ಕತ್ತಿಗೆ ಹಗ್ಗ ಹಾಕಿ ಕಟ್ಟಿ ಎಳೆತಂದು ಜಮೀನಿನಿಂದ ಮುಂದಿನ ಕಟ್ಟೆಯೊಂದರ ಬಳಿ ಮರಕ್ಕೆ ಕಟ್ಟಿ ಹಾಕಿ ಎಲ್ಲರೂ ಉಪಹಾರ ಸೇವಿಸಲು ಬೇರೆಡೆಗೆ ತೆರಳಿದ್ದ ಸಂದರ್ಭದಲ್ಲಿ ಮರಕ್ಕೆ ಕಟ್ಟಿ ಹಾಕಿದ್ದರಿಂದ ನುಲಿದಾಡಿಕೊಂಡ ಕಡವೆ ಆಯತಪ್ಪಿ ಕಟ್ಟೆಯಿಂದ ಕೆಳಕ್ಕೆ ಜಾರಿ ಬಿದ್ದ ಪರಿಣಾಮ ಕುತ್ತಿಗೆಗೆ ಬಿಗಿದಿದ್ದ ಹಗ್ಗದಿಂದಾಗಿ ನೇಣು ಬಿಗಿದಂತಾಗಿ ಸ್ಥಳದಲ್ಲೇ ಸಾವನ್ನಪ್ಪಿದೆ ಎಂಬ ಮಾಹಿತಿ ಲಭ್ಯವಾಗಿದೆ. ಎಲ್ಲರೂ ಉಪಹಾರ ಮುಗಿಸಿ ತೆರಳಿ ನೋಡುವಷ್ಟರಲ್ಲಿ ಅರಣ್ಯ ಇಲಾಖೆ ಸಿಬ್ಬಂದಿಗಳ ನಿರ್ಲಕ್ಷ್ಯತನದಿಂದ ಕಡವೆ ಇಹ ಲೋಕ ತ್ಯಜಿಸಿದೆ. ನಂತರ ಸದರಿಯವರು ಘಟನೆಯನ್ನು ಉಪ ಸಂರಕ್ಷಣಾಧಿಕಾರಿ ಸಂತೋಷ್ ಕುಮಾರ್ರವರ ಗಮನಕ್ಕೆ ತಂದಿದ್ದಾರೆ. ಅವರು ಮೊದಲೇ ನೀಡಿದ್ದ ಸೂಚನೆಯಂತೆ ಕಡವೆ ಮೃತ ದೇಹವನ್ನು ವಡವಾರದ ಕೆರೆ ಬಳಿ ನೇತು ಹಾಕಿ ಸಿಸಿ ಕ್ಯಾಮೆರಾ ಅಳವಡಿಸಿ ಬರುವಂತೆ ಹೇಳಿ ಕೈ ತೊಳೆದುಕೊಂಡಿರುವುದನ್ನು ನೋಡಿದರೆ ಇವರು ಅರಣ್ಯ ರಕ್ಷಕರೋ ಭಕ್ಷಕರೋ ಎಂಬ ಅನುಮಾನ ಮೂಡಿದೆ. ಇವರ ಸುಪರ್ಧಿಯಲ್ಲಿದ್ದ ಒಂದೇ ಒಂದು ಪ್ರಾಣ ಯನ್ನು ರಕ್ಷಿಸಲಾರದ ಇವರು ಇನ್ನು ಇಡೀ ಅರಣ್ಯದ ವನ್ಯ ಜೀವಿಗಳನ್ನು ರಕ್ಷಿಸುವರೆ..? ಎಂಬ ಸಂಶಯ ಪ್ರಾಣ ಪ್ರಿಯರನ್ನು ಕಾಡತೊಡಗಿದೆ. ಮತ್ತೊಂದು ಮೂಲದ ಪ್ರಕಾರ ಹಿರಿಯ ಅಧಿಕಾರಿಯ ಅಣತಿಯಂತೆ ಅರಣ್ಯ ಇಲಾಖೆಯ ಸಿಬ್ಬಂದಿಗಳೇ ಕಡವೆಯ ಗೊಡವೆಯೇ ಬೇಡವೆಂದು ಪ್ರಪಾತಕ್ಕೆ ತಳ್ಳಿ ಸಾಯಿಸಿದ್ದಾರೆಂಬ ಗುಸು ಗುಸು ಕೇಳಿ ಬರುತ್ತಿದೆ. ಒಟ್ಟಾರೆ ಪ್ರಕರಣ ದಾಖಲಿಸದಿರುವುದು ಹಾಗೂ ಕಡವೆಯ ಮೃತ ದೇಹದ ಮರಣೋತ್ತರ ಪರೀಕ್ಷೆ ನಡೆಸದೆ ಪ್ರಕರಣ ಮುಚ್ಚಿ ಹಾಕಿರುವುದೇ ಅಂಗೈ ಹುಣ್ಣಿಗೆ ಕನ್ನಡಿ ಬೇಕಾಗಿಲ್ಲ ಎಂಬಂತೆ ಅಕ್ರಮಕ್ಕೆ ಸ್ಪಷ್ಟ ನಿದರ್ಶನವಾಗಿದೆ.

ನಿಜಕ್ಕೂ ಅವರು ಕರ್ತವ್ಯ ಪ್ರಜ್ಞೆ ಇರುವವರಾದರೆ ಪ್ರಕರಣ ದಾಖಲಿಸಿ ಪಶು ವೈದ್ಯರಿಂದ ಕಡವೆಯ ಶವದ ಮರಣೋತ್ತರ ಪರೀಕ್ಷೆ ನಡೆಸಿ ವನ್ಯ ಜೀವಿಗೆ ಗೌರವ ಸಲ್ಲಿಸುವ ಕೆಲಸ ಮಾಡಬಹುದಿತ್ತು. ಅದು ಬಿಟ್ಟು ಹೀನಾತಿ ಹೀನಾಯವಾಗಿ ಪಶುವಿಗಿಂತ ಕಡೆಯಾಗಿ ಮೃಗೀಯವಾಗಿ ವರ್ತಿಸಿ ಕಡವೆಯ ಸಾವಿಗೆ ಕಾರಣರಾಗಿರುವ ಎಲ್ಲಾ ತಪ್ಪಿತಸ್ಥರ ವಿರುದ್ಧ ಇಲಾಖಾ ತನಿಖೆ ನಡೆಸಿ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟ ಮಾಡುವುದಾಗಿ ಪರಿಸರ ಪ್ರೇಮಿಗಳಾದ, ಸೆಂಥಿಲ್ ಕುಮಾರ್, ರಾಕೇಶ್, ಲೋಕೇಶ್, ವಿಜಯ್ ಕುಮಾರ್ ಮುಂತಾದವರು ಆಗ್ರಹಿಸಿದ್ದಾರೆ.

# ಸಂಜೆ ಟಿಪ್ಸ್

## ವಿಶ್ವ ಚಿಂತನಾ ದಿನ




ಫೆಬ್ರವರಿ 22 ರಂದು ಆಚರಿಸಲಾಗುವ ವಿಶ್ವ ಚಿಂತನಾ ದಿನವು ಸ್ನೇಹ, ಸಹೋದರತ್ವ ಮತ್ತು ಸಬಲೀಕರಣದ ದಿನವಾಗಿದ್ದು, ಪ್ರಪಂಚದಾದ್ಯಂತದ ಗರ್ಲ್ ಸ್ಕೌಟ್ಸ್ ಮತ್ತು ಗರ್ಲ್ ಗೈಡ್‌ಗಳು ಹುಡುಗಿಯರು ಮತ್ತು ಯುವತಿಯರ ಮೇಲೆ ಪರಿಣಾಮ ಬೀರುವ ಸಮಸ್ಯೆಗಳ ಕುರಿತು ಮಾತನಾಡುತ್ತಾರೆ. ಈ ಘಟನೆಯು ಪ್ರಪಂಚದಾದ್ಯಂತ 10 ಮಿಲಿಯನ್ ಗರ್ಲ್ ಗೈಡ್ಸ್ ಮತ್ತು ಗರ್ಲ್ ಸ್ಕೌಟ್‌ಗಳಿಗೆ ಹಣವನ್ನು ಸಂಗ್ರಹಿಸುತ್ತದೆ ಎಂದು ನಿಮಗೆ ತಿಳಿದಿದೆಯೇ? 2022 ರ ವಿಶ್ವ ಚಿಂತನಾ ದಿನದ ವಿಷಯವು 'ನಮ್ಮ ಪ್ರಪಂಚ, ನಮ್ಮ ಸಮಾನ ಭವಿಷ್ಯ: ಪರಿಸರ ಮತ್ತು ಲಿಂಗ ಸಮಾನತೆ.' ವರ್ಲ್ಡ್ ಅಸೋಸಿಯೇಶನ್ ಆಫ್ ಗರ್ಲ್ ಗೈಡ್ಸ್ ಮತ್ತು ಗರ್ಲ್ ಸ್ಕೌಟ್ಸ್ (ಫಂಉಉಉಖ), ಗ.ಖ.೦. ನ ಗರ್ಲ್ ಸ್ಕೌಟ್ಸ್ ಮತ್ತು ಇತರ ಫಂಉಉಉಖ ಸದಸ್ಯ ಸಂಸ್ಥೆಗಳು 1926 ರಿಂದ ವಿಶ್ವ ಚಿಂತನಾ ದಿನವನ್ನು ಆಚರಿಸುತ್ತಿವೆ. ಇದು ವೈವಿಧ್ಯಮಯ ಜಾಗತಿಕ ಸಹೋದರಿಯ ಭಾಗವಾಗಿರುವುದನ್ನು ಆಚರಿಸುವ ದಿನವಾಗಿದೆ. ವಿಶ್ವ ಚಿಂತನಾ ದಿನದ ಇತಿಹಾಸವು ಒಂದು ಆಕರ್ಷಕ ಕಥೆಯಾಗಿದೆ. 1926 ರಲ್ಲಿ, ಪ್ರಪಂಚದಾದ್ಯಂತದ ಪ್ರತಿನಿಧಿಗಳು ಕ್ಯಾಂಪ್ ಎಡಿತ್ ಮ್ಯಾಸಿಯಲ್ಲಿ ಭೇಟಿಯಾದರು – ಈಗ ಎಡಿತ್ ಮ್ಯಾಸಿ ಕಾನ್ಫರೆನ್ಸ್ ಸೆಂಟರ್ ಎಂದು ಹೆಸರಿಸಲಾಗಿದೆ – 4 ನೇ ವಿಶ್ವ ಸಮ್ಮೇಳನಕ್ಕಾಗಿ ನ್ಯೂಯಾರ್ಕ್‌ನಲ್ಲಿ ಮತ್ತು ಮಾರ್ಗದರ್ಶಿಗಳು ಮತ್ತು ಸ್ಕೌಟ್‌ಗಳಿಗಾಗಿ ಒಂದು ದಿನವನ್ನು ರಚಿಸಲು ನಿರ್ಧರಿಸಿದರು. ಅವರು ಸ್ಕೌಟ್ ಮತ್ತು ಗೈಡ್ ಆಂದೋಲನದ ಸಂಸ್ಥಾಪಕ ಲಾರ್ಡ್ ಬಾಡೆನ್-ಪೊವೆಲ್ ಮತ್ತು ಅವರ ಪತ್ನಿ ಒಲವ್ ಅವರ ಜಂಟಿ ಜನ್ಮದಿನವನ್ನು ಥಿಂಕಿಂಗ್ ಡೇ ಎಂದು ಆಯ್ಕೆ ಮಾಡಿದರು. ನಂತರ 1932 ರಲ್ಲಿ, ಬೆಲ್ಜಿಯನ್ ಪ್ರತಿನಿಧಿಯೊಬ್ಬರು ಹುಡುಗಿಯರು ಸಂಸ್ಥೆಗಾಗಿ ವಿಶ್ವ ಚಿಂತನಾ ದಿನದ ನಿಧಿಯನ್ನು ಸಂಗ್ರಹಿಸಬಹುದು ಮತ್ತು ಅವರ ಧನ್ಯವಾದಗಳನ್ನು ತೋರಿಸಬಹುದು ಎಂದು ಸಲಹೆ ನೀಡಿದರು. ಈ ಸಲಹೆಯನ್ನು ಸ್ವೀಕರಿಸಿ ಲಾರ್ಡ್ ಬಾಡೆನ್-ಪೊವೆಲ್ ಪ್ರಪಂಚದಾದ್ಯಂತದ ಎಲ್ಲಾ ಮಾರ್ಗದರ್ಶಿಗಳು ಮತ್ತು ಗರ್ಲ್ ಸ್ಕೌಟ್‌ಗಳಿಗೆ ಪತ್ರವೊಂದನ್ನು ಬರೆದರು, ಆ ದಿನಗಳಲ್ಲಿ ಒಂದು ರೊಟ್ಟಿಗೆ ಒಂದು ಪೈಸೆ ಸಾಕಾಗುತ್ತಿತ್ತು.1999 ರಲ್ಲಿ, ಡುಬ್ಲೈ ಸಮ್ಮೇಳನದ ಸಮಯದಲ್ಲಿ, ಥಿಂಕಿಂಗ್ ಡೇ ಹೆಸರನ್ನು 'ವಿಶ್ವ ಚಿಂತನಾ ದಿನ' ಎಂದು ಬದಲಾಯಿಸಲಾಯಿತು. ಇಂದು, ಇದು ದೊಡ್ಡ ಜಾಗತಿಕ ಘಟನೆಯಾಗಿ ಬೆಳೆದಿದೆ, ಇದು ಚಳುವಳಿಯ ಸದಸ್ಯರನ್ನು ದೊಡ್ಡ ಸಮಸ್ಯೆಗಳ ಬಗ್ಗೆ ಯೋಚಿಸಲು ಉತ್ತೇಜಿಸುತ್ತದೆ.

## ಶೇಂಗಾ ಚಟ್ನಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಶೇಂಗಾ - 1ಕಪ್, ಹಸಿಮೆಣಸು - 4, ಬೆಳ್ಳುಳ್ಳಿ - 10 ಎಸಳು, ಬೆಲ್ಲ - ಚಿಟಿಕೆ, ಉಪ್ಪು - ರುಚಿಗೆ, ಹುಣಸೆಹಣ್ಣು - ಅರ್ಧ ನಿಂಬೆಗಾತ್ರದ್ದು ಒಗ್ಗರಣೆಗೆ: ಕರಿಬೇವು, ಸಾಸಿವೆ, ಜೀರಿಗೆ, ಎಣ್ಣೆ

### ಮಾಡುವ ವಿಧಾನ

ಶೇಂಗಾವನ್ನು ಪರಿಮಳ ಬರುವವರೆಗೂ ಹುರಿದುಕೊಂಡು ತಣ್ಣಗಾಗಲು ಬಿಡಿ. ನಂತರ ಅದರ ಸಿಪ್ಪೆ ಬೇರ್ಪಡಿಸಿ. ಒಂದು ಪ್ಯಾನ್‌ನಲ್ಲಿ ಅರ್ಧ ಚಮಚ ಎಣ್ಣೆ ಹಾಕಿ ಬಿಸಿಯಾದ ಮೇಲೆ ಹಸಿಮೆಣಸು, ಬೆಳ್ಳುಳ್ಳಿ ಸೇರಿಸಿ ಹುರಿದುಕೊಳ್ಳಿ. ಮಿಕ್ಸಿ ಜಾರಿಗೆ ಹುರಿದು ಸಿಪ್ಪೆ ಬೇರ್ಪಡಿಸಿದ ಶೇಂಗಾ, ಹುರಿದುಕೊಂಡ ಹಸಿಮೆಣಸು, ಬೆಳ್ಳುಳ್ಳಿ, ಬೆಲ್ಲ, ಹುಣಸೆರಸ ಹಾಗೂ ಸ್ವಲ್ಪ ನೀರು ಸೇರಿಸಿ ನುಣ್ಣಗೆ ರುಬ್ಬಿಕೊಳ್ಳಿ. ನಂತರ ಒಗ್ಗರಣೆ ಮಾಡಿ ಇದಕ್ಕೆ ಸೇರಿಸಿ. ಬೇಕಿದ್ದರೆ ಹಸಿ ಈರುಳ್ಳಿಯನ್ನು ಚಿಕ್ಕದಾಗಿ ಹೆಚ್ಚಿ ಸೇರಿಸಿಕೊಳ್ಳಬಹುದು. ದೋಸೆ, ಪೂರಿ, ಇಡ್ಲಿ, ಅನ್ನ, ರೊಟ್ಟಿಗೆ ಇದು ಸಖತ್ ಆಗಿ ಹೊಂದುತ್ತೆ.

## ಟಿಲ್ಲು-2' ಹಾಟ್ ಸೀನ್‌ನಲ್ಲಿ ಅನುಪಮಾ

ಮಾಲಿವುಡ್ ಬೆಡಗಿ ಅನುಪಮಾ ಪರಮೇಶ್ವರನ್ ಚಿತ್ರರಂಗಕ್ಕೆ ಹೆಜ್ಜೆಹಾಕಿದಾಗ ಲಂಗಾ ದಾವಣಿ, ಸೀರೆಯಲ್ಲಿ ಅಭಿನಯಿಸಿ ಅಭಿಮಾನಿಗಳ ಮನಗೆದ್ದಿದ್ದರು. ಆದರೆ ಈ ನಟಿ ಇತ್ತೀಚೆಗೆ ಬೆಳ್ಳಿ ತೆರೆ ಮೇಲೆ



ಸಖತ್ ಬೋಲ್ಡ್ ಆಗಿ ಕಾಣಿಸಿಕೊಳ್ಳುತ್ತಿರುವುದರಿಂದ ಆಕೆಯ ಫ್ಯಾನ್ಸ್ ಬೇಸರ ವ್ಯಕ್ತಪಡಿಸುತ್ತಿದ್ದಾರೆ.

ನಟಿ ಅನುಪಮಾ ಕೇವಲ ಸಿನಿಮಾಗಳಲ್ಲಿ ಮಾತ್ರವಲ್ಲದೇ ಸೋಶಿಯಲ್ ಮೀಡಿಯಾದಲ್ಲೂ ಹಾಟ್ ಹಾಟ್ ಫೋಟೊಶೂಟ್ ನಿಂದ ಎಲ್ಲರ ಗಮನ ಸೆಳೆಯುತ್ತಿದ್ದಾರೆ.

ಬಹುಭಾಷಾ ನಟಿ ಅನುಪಮಾ ಪರಮೇಶ್ವರನ್ 'ಟಿಲ್ಲು-2' ಚಿತ್ರದಲ್ಲಿ ಬಣ್ಣಹಚ್ಚಿದ್ದು, ಈಗಾಗಲೇ ಇದರ ಟ್ರೇಲರ್ ಬಿಡುಗಡೆಯಾಗಿ ಸಖತ್ ಸದ್ದು ಮಾಡ್ತಿದೆ. ಸದ್ಯ ಈಕೆ ಸಿನಿಮಾದಲ್ಲಿ ಹಾಟ್‌ಆಗಿ ಕಾಣಿಸಿಕೊಳ್ಳುವುದರ ಜೊತೆಗೆ ಸಿದ್ದು ಜೊನ್ನಲಗಡ್ಡಯೊಂದಿಗೆ ತುಟಿಗೆ ತುಟಿ ಬೆರೆಸಿರುವಂತೆ ಬಿಂದಾಸ್ ಆಗಿಯೂ ಕಾಣಿಸಿಕೊಂಡಿದ್ದಾರೆ. ಈ ಕಾರಣದಿಂದಲೇ ಚಿತ್ರದ ಝಲಕ್ ವೈರಲ್ ಆಗಿದೆ. ಈ ನಟಿ ಇದಕ್ಕೂ ಮುಂಚೆ 'ರೌಡಿ ಬಾಯ್ಸ್' ಎನ್ನುವ ಸಿನಿಮಾದಲ್ಲಿ ಹಾಟ್ ಆಗಿ ಕಾಣಿಸಿಕೊಂಡಿದ್ದರು.

ಈಗಾಗಲೇ ಟಾಲಿವುಡ್ ಅಂಗಳದಲ್ಲಿ ನಟಿ ಅನುಪಮಾ ಪರಮೇಶ್ವರನ್ 'ಟಿಲ್ಲು'-2 ಚಿತ್ರಕ್ಕಾಗಿ ಭರ್ಜರಿ ಸಂಭಾವನೆ ಪಡೆದುಕೊಂಡಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ಈ ನಟಿಗೆ ಹೆಚ್ಚು ಸಂಭಾವನೆ ಸಿಕ್ಕಿರುವ



ಕಾರಣದಿಂದಲೇ ಗ್ಲಾಮರ್ ಶೋ ಹೆಚ್ಚಾಗಿದೆ ಅನ್ನೋ ಚರ್ಚೆ ಕೂಡ ನಡೀತಿದೆ. ಸದ್ಯ ಈ ಸಿನಿಮಾದ ಟ್ರೇಲರ್ ಹಾಗೂ ಸಾಂಗ್ಸ್ ರಿಲೀಸ್ ಆಗಿ ಸದ್ದು ಮಾಡುತ್ತಿದ್ದು, ಈ ಚಿತ್ರದಲ್ಲಿ ನಟಿಸುವುದಕ್ಕಾಗಿ ಈ ನಟಿಸಲು 2 ಕೋಟಿ ರೂ. ಸಂಭಾವನೆ ಪಡೆದಿದ್ದಾರೆ ಎಂದು ಹೇಳಲಾಗುತ್ತಿದೆ.

ನಟಿ ಅನುಪಮಾ ಪರಮೇಶ್ವರನ್ ಸಾಮಾನ್ಯವಾಗಿ ಒಂದು ಸಿನಿಮಾದಲ್ಲಿ ಬಣ್ಣಹಚ್ಚುವುದಕ್ಕೆ ಒಂದೂವರೆ ಕೋಟಿ ರೂ. ಚಾರ್ಜ್ ಮಾಡುತ್ತಾರಂತೆ. ಆದರೇ 'ಟಿಲ್ಲು-2' ಚಿತ್ರದಲ್ಲಿ ನಟಿಸಿದಕ್ಕೆ ಸಮೀಪ 2 ಕೋಟಿ ರೂ. ಪಡೆದಿದ್ದಾರೆ ಎನ್ನುವ ಮಾತುಗಳು ಕೇಳಿಬರ್ತಿದ್ದು, ಈ ಕಾರಣದಿಂದ ಇಂತಹ ದೃಶ್ಯಗಳಲ್ಲಿ ನಟಿಸಲು ಒಪ್ಪಿಕೊಂಡಿದ್ದಾರೆಂದು ಟಾಲಿವುಡ್ ಮಂದಿ ಹೇಳುತ್ತಿದ್ದಾರೆ. ಈ ನಟಿಯನ್ನು ಈ ರೀತಿ ನೋಡಿದ ಅಭಿಮಾನಿಗಳು ಇಷ್ಟು ಹಾಟ್ ಆಗಿ ಕಾಣಿಸಿಕೊಳ್ಳುವುದು ನಮಗೆ ಇಷ್ಟವಾಗುತ್ತಿಲ್ಲ ಎಂದು ಕಮೆಂಟ್ ಮಾಡುತ್ತಿದ್ದಾರೆ.

## ಬೆಳ್ಳುಳ್ಳಿ ಎಸಳು ತಿನ್ನುವುದರಿಂದ ಪ್ರಯೋಜನ

### ಹೆಲ್ತ್ ಟಿಪ್ಸ್

ಮಕ್ಕಳು ಮತ್ತು ವಯಸ್ಕರು ಬೆಳ್ಳುಳ್ಳಿ ತಿನ್ನುವುದು ಆರೋಗ್ಯಕ್ಕೆ ತುಂಬಾ ಒಳ್ಳೆಯದು. ಆದರೆ ಬೆಳಿಗ್ಗೆ ಬೆಳ್ಳುಳ್ಳಿ ತಿನ್ನುವುದು ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ.

ಕೊಲೆಸ್ಟ್ರಾಲ್ ಅನ್ನು ನಿಯಂತ್ರಿಸುವುದರಿಂದ ಹಿಡಿದು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವವರೆಗೆ ಬೆಳ್ಳುಳ್ಳಿ ಪ್ರಯೋಜನ ನೀಡುತ್ತದೆ. ಹಾಗಾಗಿ ಪ್ರತಿದಿನ ಬೆಳಗ್ಗೆ ಬೆಳ್ಳುಳ್ಳಿ ಎಸಳು ತಿನ್ನುವುದರಿಂದ ಹಲವಾರು ಆರೋಗ್ಯ ಪ್ರಯೋಜನಗಳನ್ನು ಪಡೆಯಬಹುದು.

ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ: ಬೆಳ್ಳುಳ್ಳಿಯಲ್ಲಿ ಆಯಂಟಿ ಬ್ಯಾಕ್ಟೀರಿಯಾ, ಆಯಂಟಿ ಫಂಗಲ್ ಮತ್ತು ಆಯಂಟಿ ವೈರಲ್ ಗುಣಗಳು ಹೇರಳವಾಗಿವೆ. ಶೀತ, ಕೆಮ್ಮು ಮತ್ತು ಜ್ವರದಂತಹ ರೋಗಗಳನ್ನು ತಡೆಯಲು ಸಹಾಯ ಮಾಡುತ್ತದೆ.



ರಕ್ತದೊತ್ತಡವನ್ನು ನಿಯಂತ್ರಿಸುತ್ತದೆ: ಬೆಳ್ಳುಳ್ಳಿಯಲ್ಲಿರುವ ಅಲಿಸಿನ್ ಎಂಬ ಸಂಯುಕ್ತವು ರಕ್ತನಾಳಗಳನ್ನು ಹಿಗ್ಗಿಸುತ್ತದೆ. ಇದರಿಂದ ರಕ್ತದೊತ್ತಡವನ್ನು ಕಡಿಮೆ ಮಾಡುತ್ತದೆ.

ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುತ್ತದೆ: ಬೆಳ್ಳುಳ್ಳಿ ಕೆಟ್ಟ ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡುತ್ತದೆ. ಒಳ್ಳೆಯ ಕೊಲೆಸ್ಟ್ರಾಲ್ ಮಟ್ಟವನ್ನು ಹೆಚ್ಚಿಸುತ್ತದೆ. ಇದು ಹೃದ್ರೋಗದ ಅಪಾಯವನ್ನು ಕಡಿಮೆ ಮಾಡುತ್ತದೆ.

ರಕ್ತದ ಸಕ್ಕರೆಯ ಮಟ್ಟವನ್ನು ನಿಯಂತ್ರಿಸುತ್ತದೆ: ಬೆಳ್ಳುಳ್ಳಿ ಮಧುಮೇಹಿಗಳಲ್ಲಿ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ: ಬೆಳ್ಳುಳ್ಳಿ ಜೀರ್ಣಕಾರಿ ರಸದ ಸ್ರವಿಸುವಿಕೆಯನ್ನು ಹೆಚ್ಚಿಸುತ್ತದೆ. ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ. ಅಜೀರ್ಣ ಮತ್ತು ಮಲಬದ್ಧತೆಯಂತಹ ಸಮಸ್ಯೆಗಳನ್ನು ತಡೆಯಲು ಸಹಾಯ ಮಾಡುತ್ತದೆ.

ಕ್ಯಾನ್ಸರ್ ತಡೆಗಟ್ಟುತ್ತದೆ: ಬೆಳ್ಳುಳ್ಳಿಯಲ್ಲಿರುವ ಆಂಟಿಆಕ್ಸಿಡೆಂಟ್ ಗಳು ಕ್ಯಾನ್ಸರ್ ಕೋಶಗಳ ಬೆಳವಣಿಗೆಯನ್ನು ತಡೆಯುತ್ತದೆ.

ತೂಕ ನಷ್ಟಕ್ಕೆ ಸಹಾಯ ಮಾಡುತ್ತದೆ: ಬೆಳ್ಳುಳ್ಳಿ ದೇಹದ ಕೊಬ್ಬನ್ನು ಕರಗಿಸಲು ಸಹಾಯ ಮಾಡುತ್ತದೆ.

## ಚಾಕೋಲೇಟ್ ಫೇಸ್ ಪ್ಯಾಕ್

### ಬ್ಯೂಟಿ ಟಿಪ್ಸ್

ಚಾಕಲೇಟ್ ಅಂದ್ರೆ ಸಾಮಾನ್ಯವಾಗಿ ಎಲ್ಲರೂ ಇಷ್ಟಪಡ್ತಾರೆ. ಆದ್ರೆ, ಚಾಕಲೇಟ್ ಗಳನ್ನು ಚಪ್ಪರಿಸಿ ತಿನ್ನೋದು ಮಾತ್ರವಲ್ಲ ಅದನ್ನು ಮುಖ, ಮೈ ಕೈಗೆ ಹಚ್ಚಿಕೊಂಡ್ರೆ ಸಾಕಷ್ಟು ಲಾಭವಿದೆ. ಅದರಿಂದ ನಿಮ್ಮ ಚರ್ಮ ಮೃದುವಾಗುತ್ತದೆ. ಈ ಹೊಸ ಬ್ಯೂಟಿ ಟಿಪ್ಸ್ ಟ್ರೈ ಮಾಡಿ.

ಚಾಕಲೇಟ್ ತಿನ್ನೋದ್ರಿಂದ ಮೆದುಳು ಚುರುಕಾಗುತ್ತದೆ ಜೊತೆಗೆ ಹೃದಯದ ಸಮಸ್ಯೆಯೂ ನಿವಾರಣೆಯಾಗುತ್ತದೆ ಅನ್ನೋದು ಈ ಹಿಂದೆಯೇ ಸಂಶೋಧನೆಯಿಂದ ಬೆಳಕಿಗೆ ಬಂದಿತ್ತು. ಈಗ ಚಾಕಲೇಟ್ ನಲ್ಲಿರೋ ಸೌಂದರ್ಯದ ರಹಸ್ಯವನ್ನು ಕೂಡ ತಜ್ಞರು ಬಿಚ್ಚಿಟ್ಟಿದ್ದಾರೆ.

ಚಾಕಲೇಟ್ ನಲ್ಲಿ ಆಯಂಟಿ ಒಕ್ಸಿಡೆಂಟ್ಸ್ ಹೇರಳವಾಗಿರುವುದರಿಂದ ಅದು ಚರ್ಮ ಸುಕ್ಕಾಗದಂತೆ ಕಾಪಾಡುತ್ತದೆ. ಅತ್ಯಂತ ಸೂಕ್ಷ್ಮ ಹಾಗೂ ಡ್ರೈ ಸ್ಕಿನ್ ಗೆ ಕೂಡ ಇದು ಹೇಳಿ ಮಾಡಿಸಿದಂತಿದೆ. ಡಾರ್ಕ್ ಚಾಕಲೇಟ್ ಹಚ್ಚುವುದರಿಂದ ನಿಮ್ಮ ಚರ್ಮ ಮೃದುವಾಗುತ್ತದೆ, ಹೊಳಪು ಪಡೆಯುತ್ತದೆ.

ಚರ್ಮವನ್ನು ಯಾವಾಗಲೂ ಹೈಡ್ರೇಟ್ ಆಗಿಟ್ಟು, ಯುವಿ ಡ್ಯಾಮೇಜ್ ಆಗದಂತೆ ಚಾಕಲೇಟ್ ಕಾಪಾಡಬಲ್ಲದು. ಪಾರ್ಲರ್ ಗಳಲ್ಲಿ ಚಾಕಲೇಟ್ ಫೇಶಿಯಲ್ ಕೂಡ ಹೊಸ ಟ್ರೆಂಡ್. ನಿಮ್ಮ ಮುಖದಲ್ಲಿರುವ ಸುಕ್ಕನ್ನು ಇದು ಮಾಯ ಮಾಡಬಲ್ಲದು. ಅರ್ಧ ಕಪ್ ನಷ್ಟು ಕೋಕಾ ಪೌಡರ್ ಗೆ 2-3 ಚಮಚ ಜೇನುತುಪ್ಪ ಮತ್ತು ಕೆಲವು ಹನಿ ನಿಂಬೆರಸ ಬೆರೆಸಿ.

ಅದನ್ನು ಚೆನ್ನಾಗಿ ಕಲೆಸಿಕೊಂಡು ಫೇಸ್ ಮಾಸ್ಕ್ ನಂತೆ ಹಚ್ಚಿಕೊಳ್ಳಿ. 15-20 ನಿಮಿಷ ಹಾಗೇ ಬಿಟ್ಟು ನಂತರ ಸ್ವಚ್ಛವಾಗಿ ತೊಳೆದುಕೊಳ್ಳಿ. ಹೀಗೆ ಮಾಡುವುದರಿಂದ ನಿಮ್ಮ ಮುಖ ಅಂದವಾಗಿ ಕಾಣುತ್ತದೆ.



## ಅವಿನ್ಯಾ ಇಂಡಸ್ಟ್ರಿಯಲ್ ಮತ್ತು ಲಾಜಿಸ್ಟಿಕ್ ಪಾರ್ಕ್ಸ್

# ಭವಿಷ್ಯಕ್ಕೆ ಹೊಂದಿಕೊಳ್ಳುವ ವೇರ್‌ಹೌಸಿಂಗ್

ಅವಿನ್ಯಾ ಇಂಡಸ್ಟ್ರಿಯಲ್ ಮತ್ತು ಲಾಜಿಸ್ಟಿಕ್ ಪಾರ್ಕ್ಸ್ ಸಂಸ್ಥಾಪಕ ಮತ್ತು ವ್ಯವಸ್ಥಾಪಕ ನಿರ್ದೇಶಕ ಅಭಿಜಿತ್ ವರ್ಮಾ ಅವರೊಂದಿಗೆ ಇತ್ತೀಚೆಗೆ ನಡೆದ ವಿಶೇಷ ಪ್ರಶ್ನೋತ್ತರ ಕಾರ್ಯಕ್ರಮದಲ್ಲಿ ಅವರು, ಕಂಪನಿಯ ಪ್ರಸ್ತುತ ಕಾರ್ಯಾಚರಣೆಗಳು ಮತ್ತು ಭವಿಷ್ಯದ ಬೆಳವಣಿಗೆಯ ಕಾರ್ಯತಂತ್ರಗಳ ಕುರಿತ ಮಾಹಿತಿಗಳನ್ನು ಅನಾವರಣ ಮಾಡಿದರು. ಅವಿನ್ಯಾ ತನ್ನನ್ನು 360-ಡಿಗ್ರಿ, ಡೆವಲಪ್‌ಮೆಂಟ್ ಕಂಪನಿಯಾಗಿ ಗುರುತಿಸಿಕೊಂಡಿದೆ. ಕಂಪನಿಯು ಎಂಜಿನಿಯರಿಂಗ್ ಫ್ಯೂಚರ್-ರೆಡಿ ಇಂಡಸ್ಟ್ರಿಯಲ್ ಮತ್ತು ವೇರ್ ಹೌಸಿಂಗ್ ರಿಯಲ್ ಎಸ್ಟೇಟ್‌ನಲ್ಲಿ ಪರಿಣತಿ ಹೊಂದಿದೆ. ಕಂಪನಿಯು ಸೂಕ್ತ ನಿರ್ಮಾಣ ಮಾದರಿಗಳಿಂದ ಹಿಡಿದು ಫ್ಯೂಚರ್ ರೆಡಿ ಸ್ವತ್ತುಗಳನ್ನು ರಚಿಸುವವರೆಗೆ ಸೇವೆಗಳನ್ನು ಒದಗಿಸುತ್ತದೆ. ನಾವೀನ್ಯತೆ, ತಂತ್ರಜ್ಞಾನ ಮತ್ತು ಸುಸ್ಥಿರತೆಯು ಅವಿನ್ಯಾದ ಪ್ರಮುಖ ಆಧಾರಗಳಾಗಿವೆ. ಕಂಪನಿಯು ಗ್ರಾಹಕರ ಅಗತ್ಯತೆಗಳನ್ನು ಪೂರೈಸುವುದು ಮಾತ್ರವಲ್ಲದೆ ಅವರ ನಿರೀಕ್ಷೆ ಮೀರಿದ ಕೆಲಸ ಮಾಡುತ್ತದೆ. ಅವಿನ್ಯಾವು 2030ರ ವೇಳೆಗೆ 20 ಮಿಲಿಯನ್ ಚದರ ಅಡಿಯ ಕೈಗಾರಿಕಾ ಮತ್ತು ಲಾಜಿಸ್ಟಿಕ್ ಪಾರ್ಕ್‌ಗಳನ್ನು ಅಭಿವೃದ್ಧಿಪಡಿಸುವ ಮಹತ್ವಾಕಾಂಕ್ಷೆಯ ಉದ್ದೇಶವನ್ನು ಹೊಂದಿದೆ. ಅದಕ್ಕಾಗಿ ವಿಶ್ವದರ್ಜೆಯ ಮಾನದಂಡಗಳನ್ನು ಮತ್ತು ಅತ್ಯಾಧುನಿಕ ತಂತ್ರಜ್ಞಾನವನ್ನು ಹೊಂದಿದೆ.



ಪ್ರಸ್ತುತ ತಮಿಳುನಾಡಿನ ಹೊಸೂರು ಮತ್ತು ಕರ್ನಾಟಕದ ದೇವನಹಳ್ಳಿಯಲ್ಲಿನ ಮೂರು ಪ್ರಮುಖ ಯೋಜನೆಗಳಲ್ಲಿ ತೊಡಗಿಸಿಕೊಂಡಿರುವ ಕಂಪನಿಯು ಉದ್ಯಮಕ್ಕೆ ಹೊಸ ಮಾನದಂಡಗಳನ್ನು ಸ್ಥಾಪಿಸಲು ಬದ್ಧವಾಗಿದೆ. ಅಭಿಜಿತ್ ವರ್ಮಾ ಅವಿನ್ಯಾದ ಬೆಳವಣಿಗೆಯ ಕಾರ್ಯತಂತ್ರಗಳ ಕುರಿತು ಮಾತನಾಡುತ್ತಾ, ನಾವೀನ್ಯತೆ, ಕಾರ್ಯಗತಗೊಳಿಸುವಿಕೆ ಮತ್ತು ಶ್ರೇಷ್ಠತೆಯೆಡೆಗಿನ ಕಂಪನಿಯ ಬದ್ಧತೆಯನ್ನು ಒತ್ತಿಹೇಳಿದರು. ಮಹತ್ವದ ಮತ್ತು ಸುಸ್ಥಿರವಾದ ಕೈಗಾರಿಕಾ ಮತ್ತು ವೇರ್ ಹೌಸ್ ಸ್ವತ್ತುಗಳ ರಚನೆಯಲ್ಲಿ ಅವಿನ್ಯಾ, ಗ್ರಾಹಕರ ಭವಿಷ್ಯದ ಆಕಾಂಕ್ಷೆಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತದೆ. ವಿನ್ಯಾಸ ಮತ್ತು ನಿರ್ಮಾಣದಿಂದ ಹಿಡಿದು ದೈನಂದಿನ ಕಾರ್ಯಾಚರಣೆಗಳು ಮತ್ತು ನಿರ್ವಹಣೆಯಲ್ಲಿ ಪರಿಸರದ ಮೇಲಿನ ಪರಿಣಾಮವನ್ನು ಕಡಿಮೆ ಮಾಡಿ, ಸುಸ್ಥಿರತೆ ಸಾಧಿಸುವ ಗುರಿಯನ್ನು ಕಂಪನಿ ಹೊಂದಿದೆ.

ವರ್ಮಾ ಅವರು ಅಸಂಘಟಿತ ವೇರ್ ಹೌಸ್ ಗಳಿಂದ ಹಿಡಿದು ಸಂಗ್ರಹಣೆ ಮತ್ತು ಲಾಜಿಸ್ಟಿಕ್ಸ್ ಹಬ್ ವರೆಗಿನ ಭಾರತದ ವೇರ್ ಹೌಸ್ ಉದ್ಯಮದ ವಿಕಾಸದ ಕುರಿತ ಚಿತ್ರಣವನ್ನು ನೀಡಿದರು. ಅಟೋಮೇಷನ್ ಮೂಲಕ ಗೋದಾಮಿನ ಕಾರ್ಯಾಚರಣೆಗಳನ್ನು ಪರಿವರ್ತಿಸುವುದು, ಡೇಟಾ-ಆಧರಿತ ಒಳನೋಟಗಳು ಮತ್ತು ಅತ್ಯಾಧುನಿಕ ವಿತರಣಾ ಕೇಂದ್ರಗಳು ಮತ್ತು ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವಲ್ಲಿನ ಭಾರತದ ನಾಯಕತ್ವವನ್ನು ಗಟ್ಟಿಯಾಗಿ ಸಾರಿದರು. ನಗರೀಕರಣ, ಯಾಂತ್ರೀಕರಣ, ಡಿಜಿಟಲ್ ರೂಪಾಂತರ, ಬದಲಾಗುತ್ತಿರುವ ಗ್ರಾಹಕರ ಅಭಿರುಚಿಗಳು ಮತ್ತು ಉತ್ಪಾದನೆಯನ್ನು ಉತ್ತೇಜಿಸುವ ಸರ್ಕಾರದ ಉಪಕ್ರಮಗಳು ಈ ಕ್ಷೇತ್ರದ ಬೆಳವಣಿಗೆಗೆ ಗಮನಾರ್ಹವಾಗಿ ಕೊಡುಗೆ ನೀಡುತ್ತವೆ ಎಂಬುದನ್ನು ನಿರೀಕ್ಷಿಸಲಾಗಿದೆ.

# PhonePe :ಡಿಜಿಟಲ್ ಪ್ರಯಾಣದಲ್ಲಿ ಬದಲಾವಣೆಯ ಹರಿಕಾರ

PhonePe ಇಂದು ತನ್ನ Indus Appstore ನ ಗ್ರಾಹಕ ಬಿಡುಗಡೆಯನ್ನು ನವದೆಹಲಿಯ ಭಾರತ್ ಮಂಟಪದಲ್ಲಿ ನಡೆಸಿತು. Indus Appstore ನ ಬಿಡುಗಡೆಯು ಭಾರತದಲ್ಲಿ ಹೆಚ್ಚು ಸ್ಪರ್ಧಾತ್ಮಕ ಮತ್ತು ಸ್ಥಳೀಯ ಮೊಬೈಲ್ ಆ್ಯಪ್ ಸ್ಟೋರ್ ಆರ್ಥಿಕತೆಯನ್ನು ಸೃಷ್ಟಿಸಲು PhonePe ನ ಒಂದು ಪ್ರಯತ್ನವಾಗಿದೆ. ಇದು ಈಗಾಗಲೇ ಜಾಗತಿಕವಾಗಿ ಅತಿದೊಡ್ಡ ಮೊಬೈಲ್ ಆ?ಯಪ್‌ಗಳ ಡೌನ್‌ಲೋಡ್ ಮಾರುಕಟ್ಟೆಯಾಗಿದೆ. ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯ ಸ್ಟಾರ್ಟ್‌ಅಪ್ ಸಂಸ್ಥಾಪಕರು ಮತ್ತು ಟೆಕ್ ಉದ್ಯಮದ ಮುಖಂಡರು ಭಾಗವಹಿಸಿದ್ದರು. ಅಲ್ಲದೇ ಭಾರತದ ಅಭಿವೃದ್ಧಿ ಹೊಂದುತ್ತಿರುವ ಡಿಜಿಟಲ್ ಪರಿಸರ ವ್ಯವಸ್ಥೆಗೆ ಇದು ಎಷ್ಟರಮಟ್ಟಿಗೆ ಮಹತ್ವವನ್ನು ಹೊಂದಿದೆ ಎಂಬುದನ್ನು ಇದು ಪ್ರತಿಬಿಂಬಿಸಿತು.




Indus Appstore ಭಾರತೀಯ ಗ್ರಾಹಕರಿಗೆ 45 ವಿಭಾಗಗಳಲ್ಲಿ 2 ಲಕ್ಷಕ್ಕೂ ಹೆಚ್ಚು ಮೊಬೈಲ್ ಆ್ಯಪ್‌ಗಳು ಮತ್ತು ಗೇಮ್‌ಗಳನ್ನು ಡೌನ್‌ಲೋಡ್ ಮಾಡಲು ಅನುಮತಿಸುತ್ತದೆ. ಬಳಕೆದಾರರು ಈ ಆ್ಯಪ್ ಗಳನ್ನು 12 ಭಾರತೀಯ ಭಾಷೆಗಳಲ್ಲಿ ಅನುಕೂಲಕರ ರೀತಿಯಲ್ಲಿ ಅನ್ವೇಷಿಸಲು ಸಾಧ್ಯವಾಗುತ್ತದೆ. ಇದರಿಂದ 95% ಭಾರತೀಯರ ಭಾಷಾ ಆದ್ಯತೆಗಳನ್ನು ಪೂರೈಸಿದಂತಾಗುತ್ತದೆ. ಹೊಸ ಆ್ಯಪ್‌ಅನ್ವೇಷಣೆಯಲ್ಲಿ ಗ್ರಾಹಕರು ಹೆಚ್ಚು ತೊಡಗಿಸಿಕೊಳ್ಳುವಂತಾಗಲು ಆ್ಯಪ್ ಸ್ಟೋರ್, ಹೊಚ್ಚ ಹೊಸ ಶಾರ್ಟ್- ವೀಡಿಯೊ ಆಧಾರಿತ ಅನ್ವೇಷಣೆಯ ವೈಶಿಷ್ಟ್ಯವನ್ನು ಸಹ ನೀಡುತ್ತದೆ.ಪ್ರಪಂಚದಲ್ಲೇ ಮೊದಲ ಬಾರಿಗೆ, Indus Appstore ಆ್ಯಪ್ ಮತ್ತು ಗೇಮ್ ಡೆವಲಪರ್ ಗಳಿಗೆ ಇನ್-ಆ್ಯಪ್ ಬಿಲ್ಲಿಂಗ್‌ಗಾಗಿ ಯಾವುದೇ ಥರ್ಡ್-ಪಾರ್ಟಿ ಪೇಮೆಂಟ್ ಗೇಟ್‌ವೇ ಅನ್ನು ಆಯ್ಕೆ ಮಾಡಲು ಅನುಮತಿಸುತ್ತದೆ ಹಾಗೂ ಅವರು ಬಾಹ್ಯ ಪೇಮೆಂಟ್ ಗೇಟ್‌ವೇ ಅನ್ನು ಬಳಸಿದರೆ ಅವರಿಗೆ ಯಾವುದೇ ಕಮಿಷನ್ ವಿಧಿಸಲಾಗುವುದಿಲ್ಲ. ಮುಂಬರುವ ದಿನಗಳಲ್ಲಿ, Indus ತನ್ನದೇ ಆದ ಇನ್-ಆ್ಯಪ್ ಬಿಲ್ಲಿಂಗ್ ಮತ್ತು ಕ್ಯಾಟಲಾಗ್ ಸಲ್ಯೂಷನ್ ಗಳನ್ನು ಸಹ ಒದಗಿಸುತ್ತದೆ. ಆದರೆ ಇವು ಆ್ಯಪ್ ಡೆವಲಪರ್‌ಗಳಿಗೆ ಕಟ್ಟುನಿಟ್ಟಾಗಿ ಐಚ್ಛಿಕವಾಗಿರುತ್ತವೆ.

ಇದಲ್ಲದೆ, ಡೆವಲಪರ್ ರಿಜಿಸ್ಟ್ರೇಷನ್‌ಗಳನ್ನು ವೇಗಗೊಳಿಸಲು, ಡೆವಲಪರ್‌ಗಳಿಗೆ ಒಂದು ವರ್ಷದ ಮಟ್ಟಿಗೆ ಜ್ಹೀರೋ ಲಿಸ್ಟಿಂಗ್ ಶುಲ್ಕದ ಸೌಕರ್ಯವನ್ನು ಖಟಿಜಣ ನೀಡುತ್ತಿದೆ.

ಮೊಬೈಲ್ ಆ್ಯಪ್ ಸ್ಟೋರ್ ವಲಯದಲ್ಲಿ ಹೆಚ್ಚು ಮುಕ್ತ ಮಾರುಕಟ್ಟೆ ಪೈಪೋಟಿಯಿಂದ ಭಾರತೀಯ ಸ್ಟಾರ್ಟ್‌ಅಪ್ ಸಮುದಾಯದಲ್ಲಿ ಪ್ರಸ್ತುತ ಬೇಡಿಕೆ ಉಂಟಾಗಿದ್ದು, Indus Appstore ನ ಪ್ರಾರಂಭವು ಹೆಚ್ಚು ಮಹತ್ವದ್ದಾಗಿದೆ. ಕಜಟ್ಲಖಿಕಥಿನ ಸಿಇಒ ಮತ್ತು ಸಂಸ್ಥಾಪಕ ಸಮೀರ್ ನಿಗಮ್ ಅವರು ಮಾತನಾಡಿ, '"Indus Appstore ಯಥಾಸ್ಥಿತಿಗೆ ಸವಾಲು ಹಾಕುತ್ತದೆ. ಮೊಬೈಲ್ ಆ್ಯಪ್‌ಮಾರುಕಟ್ಟೆಯಲ್ಲಿ ಆರೋಗ್ಯಕರ ಸ್ಪರ್ಧೆಯ ಯುಗವನ್ನು ಪ್ರಾರಂಭಿಸುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆರ್ಥಿಕ ಬೆಳವಣಿಗೆ, ವ್ಯವಹಾರದಲ್ಲಿ ಉತ್ತಮ ಅವಕಾಶ, ಯತ್ನ ಕಾರ್ಯಗಳಲ್ಲಿ ಜಯ, ಉದ್ಯೋಗ ಲಾಭ.

**ವೃಷಭ:** ಆರ್ಥಿಕ ಮುಗ್ಗಟ್ಟು, ಮಾತಿನಿಂದ ಸಮಸ್ಯೆ, ಕುಟುಂಬದವರೊಂದಿಗೆ ವಾಗ್ವಾದ, ಶತ್ರು ಕಾಟ. ಸಾಲದ ಚಿಂತೆ

**ಮಿಥುನ:** ಅನಾರೋಗ್ಯ, ನಿದ್ರಾ ಭಂಗ, ತಂದೆಯೊಂದಿಗೆ ಮನಸ್ತಾಪ, ಉದ್ಯೋಗ ನಷ್ಟ, ಪ್ರಯಾಣದಲ್ಲಿ ನಷ್ಟ.

**ಕಟಕ:** ವ್ಯಾಪಾರದಲ್ಲಿ ಮಂದಗತಿಯ ಬೆಳವಣಿಗೆ, ಆಕಸ್ಮಿಕ ಲಾಭ, ಕೋರ್ಟ್ ಕೇಸ್‌ಗಳಲ್ಲಿ ಜಯ, ಅನುಕೂಲ.

**ಸಿಂಹ:** ವ್ಯವಹಾರದಲ್ಲಿ ಗೊಂದಲ, ಸೋಮಾರಿತನ, ಆಲಸ್ಯ, ಸಂಗಾತಿಯಿಂದ ಸಹಕಾರ, ವ್ಯವಹಾರದಲ್ಲಿ ಅನುಕೂಲ.

**ಕನ್ಯಾ:** ಸಾಲಬಾಧೆ, ಶತ್ರು ಉಪಟಳ, ಬಾಡಿಗೆದಾರರಿಂದ ಸಮಸ್ಯೆ, ಆತ್ಮ ಗೌರವಕ್ಕೆ ಧಕ್ಕೆ, ಆರೋಗ್ಯದಲ್ಲಿ ವ್ಯತ್ಯಾಸ.

**ತುಲಾ:** ದಾಂಪತ್ಯ ಕಲಹ, ಮಕ್ಕಳಿಂದ ಬೇಸರ ಮತ್ತು ಕಿರಿಕಿರಿ, ಪ್ರೇಮಿಗಳ ನಡುವೆ ಮನಸ್ತಾಪ, ಅನಿರೀಕ್ಷಿತ ಧನಾಗಮನ.

**ವೃಶ್ಚಿಕ:** ವ್ಯಾಪಾರದಲ್ಲಿ ಲಾಭ, ಯತ್ನ ಕಾರ್ಯಗಳಲ್ಲಿ ಜಯ, ಧಾರ್ಮಿಕ ಕಾರ್ಯಗಳ ಆಲೋಚನೆ, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ಧನಸ್ಸು:** ಸಾಲ ತೀರಿಸುವ ಪ್ರಯತ್ನ, ಉದ್ಯೋಗ ಬಿಡುವ ಯೋಚನೆ, ಸೇವಕರಿಂದ ನಷ್ಟ, ಅನಾರೋಗ್ಯದಿಂದ ಅಲ್ಪ ಚೇತರಿಕೆ

**ಮಕರ:** ಪ್ರೀತಿ-ಪ್ರೇಮದಲ್ಲಿ ಸೋಲು, ಜೂಜು ಮೋಜು ಮಸ್ತಿಯಿಂದ ತೊಂದರೆ, ಉದ್ಯೋಗ ಸಹಾಯದ ನಿರೀಕ್ಷೆ, ಬಾಲಗ್ರಹ ದೋಷಗಳು

**ಕುಂಭ:** ಸ್ಥಿರಾಸ್ತಿ ವಾಹನದಿಂದ ನಷ್ಟ, ಮಾಟ ಮಂತ್ರದಿಂದ ತೊಂದರೆ, ದೃಷ್ಟಿ ದೋಷಗಳು, ಧಾರ್ಮಿಕ ಕಾರ್ಯದಲ್ಲಿ ಅಡೆತಡೆ

**ಮೀನ:** ಆರ್ಥಿಕ ಪರಿಸ್ಥಿತಿ ಸುಧಾರಣೆ, ಖರೀದಿಗಾಗಿ ಅಧಿಕ ಖರ್ಚು, ದೂರ ಪ್ರಯಾಣದಲ್ಲಿ ಅನುಕೂಲ, ಪತ್ರ ವ್ಯವಹಾರದಲ್ಲಿ ಯಶಸ್ಸು.

# ಬಿಳಿಗಿರಿರಂಗನಬೆಟ್ಟ, ಗೌಡಹಳ್ಳಿಯಲ್ಲಿ ಸಂವಿಧಾನ ಜಾಗೃತಿ

**ಚಾಮರಾಜನಗರ:** ಯಳಂದೂರು ತಾಲೂಕಿನ ಪ್ರಸಿದ್ಧ ಬಿಳಿಗಿರಿರಂಗನಬೆಟ್ಟ, ಗೌಡಹಳ್ಳಿ, ಇನ್ನಿತರ ಗ್ರಾಮಗಳಲ್ಲಿ ಸಂವಿಧಾನ ಜಾಗೃತಿ ಜಾಥಾಗೆ ಇಂದು ಸಂಭ್ರಮದ ಸ್ವಾಗತ ದೊರೆಯಿತು.

ಗ್ರಾಮಕ್ಕೆ ಆಗಮಿಸಿದ ಸಂವಿಧಾನ ಜಾಗೃತಿ ಸ್ತಬ್ಧಚಿತ್ರದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ರವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವದಿಂದ ಬರಮಾಡಿಕೊಳ್ಳಲಾಯಿತು.

ಸೋಲಿಗರ ಸಾಂಪ್ರಾದಾಯಿಕ ಗೊರುಕನ ನೃತ್ಯ ಪ್ರದರ್ಶಿಸಲಾಯಿತು. ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷರಾದ ಕೇತಮ್ಮ, ಇನ್ನಿತರ ಮಹಿಳೆಯರು ಉತ್ಸಾಹದಿಂದ ಗೊರುಕನ ನೃತ್ಯಕ್ಕೆ ಹೆಜ್ಜೆ ಹಾಕಿದರು. ಮಕ್ಕಳು, ಯುವಕರು ತಮಟೆ ಸದ್ದಿಗೆ ಕುಣಿದು ಕುಪ್ಪಳಿಸಿದರು.

ವೇದಿಕೆ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಕಮಲಮ್ಮ, ಇನ್ನಿತರ ಸದಸ್ಯರು ಪಾಲ್ಗೊಂಡರು. ಮುಖ್ಯ ಭಾ?ಣಕಾರರಾದ ನಂಜುಂಡಯ್ಯ ಅವರು



ಮಾತನಾಡಿ ಸಂವಿಧಾನ ಜಾರಿಗೆ ಬಂದಿದ್ದರಿಂದ ಸ್ವಾತಂತ್ರ್ಯ ಪೂರ್ವದಲ್ಲಿ ನಿರ್ಲಕ್ಷ್ಯಕ್ಕೆ ಒಳಗಾಗಿದ್ದ ಹಲವು ಸಮುದಾಯಗಳು ಸಾಮಾಜಿಕ, ರಾಜಕೀಯ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಸುಧಾರಣೆ ಕಾಣುವಂತಾಗಿದೆ. ನಮ್ಮ ಸಂವಿಧಾನ ಜಗತ್ತಿನ ಉತ್ತಮ ಸಂವಿಧಾನದಲ್ಲಿ ಒಂದಾಗಿದ್ದು ಸಮಸಮಾಜ ನಿರ್ಮಾಣದ ಆಶಯ ಹೊಂದಿದೆ ಎಂದರು. ಬಳಿಕ ಗೌಡಹಳ್ಳಿ ಗ್ರಾಮಕ್ಕೆ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾಗೆ ಅದ್ದೂರಿ ಸ್ವಾಗತ ನೀಡಲಾಯಿತು. ಮಹಿಳೆಯರು ಕಳಶ ಹಿಡಿದು ಮೆರವಣಿಗೆಯಲ್ಲಿ ಪಾಲ್ಗೊಂಡರು. ಗೊರವರ ಕುಣಿತ, ತಮಟೆ, ನಾದಸ್ವರ, ಇನ್ನಿತರ ಕಲಾತಂಡಗಳು ಮೆರಗು ನೀಡಿದವು.

ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಗಾಯತ್ರಿ, ಉಪಾಧ್ಯಕ್ಷರಾದ ಭಾಗ್ಯ, ಇನ್ನಿತರ ಸದಸ್ಯರು, ಊರಿನ ಮುಖಂಡರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಶಿವಾಲಂಕಾರ್ ಅವರು ಸಂವಿಧಾನ ಕುರಿತು ಉಪನ್ಯಾಸ ನೀಡಿದರು.

## ನೊಬೆಲ್ ಶಾಂತಿ ಪ್ರಶಸ್ತಿಗೆ ಎಲಾನ್ ಮಸ್ಕ್ ಹೆಸರು



ಟೆಸ್ಲಾ ಸಂಸ್ಥಾಪಕ ಎಲಾನ್ ಮಸ್ಕ್ ಹೆಸರು ನೊಬೆಲ್ ಶಾಂತಿ ಪ್ರಶಸ್ತಿಗೆ ನಾಮಿನೇಟ್ ಆಗಿದೆ. ಇದಕ್ಕೆ ಕಾರಣವೇನು ಅಂದ್ರೆ, ಉಕ್ರೇನ್ ಮತ್ತು ರಷ್ಯಾ ವಾರ್ ನಡೆಯುವಾಗ, ಎಲಾನ್ ಮಸ್ಕ್ ಉಕ್ರೇನ್ಗೆ ಸ್ಟಾರ್ ಲಿಂಕ್ ಮೂಲಕ ಇಂಟರ್ನೆಟ್ ಸೇವೆ ನೀಡಿದ್ದರು. ಹೀಗಾಗಿ ನಾರ್ವೆಯ ಸಂಸದರು ಎಲಾನ್ ಮಸ್ಕ್ ಹೆಸರನ್ನು ನೊಬೆಲ್ ಶಾಂತಿ ಪ್ರಶಸ್ತಿಗೆ ನಾಮನಿರ್ದೇಶನ ಮಾಡಿದ್ದಾರೆ. ಸಂಕಷ್ಟದಲ್ಲಿದ್ದ ಉಕ್ರೇನ್ಗೆ ಇಂಟರ್ನೆಟ್ ಸೇವೆ ಒದಗಿಸಿ, ಎಲಾನ್ ಮಸ್ಕ್ ಮಾನವೀಯತೆ ಮೆರೆದಿದ್ದರು. ಉಕ್ರೇನ್ ಜನರು, ಸೈನಿಕರೆಲ್ಲರೂ ಈ ಸೇವೆಯ ಮೂಲಕವೇ, ಎಲ್ಲ ಮಾಹಿತಿಗಳನ್ನು ಕಲೆ ಹಾಕುತ್ತಿದ್ದರು. ತಮ್ಮ ಸಂಬಂಧಿಕರೊಂದಿಗೆ ಸಂಪರ್ಕದಲ್ಲಿದ್ದರು ಎಂದು ಸಂಸದರು ಹೇಳಿದ್ದಾರೆ. ಇನ್ನು ಮುಂದಿನ ತಿಂಗಳು ಮಾರ್ಚ್ನಲ್ಲಿ ನಾಮನಿರ್ದೇಶನವಾದವರ ಹೆಸರುಗಳನ್ನು ಆಯ್ಕೆ ಮಾಡಲಾಗುತ್ತದೆ. ಹಲವು ಸುತ್ತಿನ ಆಯ್ಕೆ ಪ್ರಕ್ರಿಯೆ ಬಳಿಕ, ಫೈನಲ್ ಆಗಿ ಕೆಲವು ಮಹನೀಯರನ್ನು ಆಯ್ಕೆ ಮಾಡಿ, ಅಕ್ಟೋಬರ್ನಲ್ಲಿ ಪ್ರಶಸ್ತಿ ನೀಡಲಾಗುತ್ತದೆ.

# ಕಬ್ಬು ಬೆಳೆಗಾರರಿಗೆ ಕೇಂದ್ರದಿಂದ ಬಂಪರ್: ಪ್ರತಿ ಕ್ವಿಂಟಾಲ್ ಗೆ ಎಫ್ ಆರ್ ಪಿ ಶೇ.8 ರಷ್ಟು ಹೆಚ್ಚಳ

**ನವದೆಹಲಿ:** ಅಕ್ಟೋಬರ್ ನಿಂದ ಆರಂಭವಾಗುವ 2024-25ರ ಋತುವಿನಲ್ಲಿ ಕಾರ್ಖಾನೆಗಳು ಕಬ್ಬು ಬೆಳೆಗಾರರಿಗೆ ಪಾವತಿಸಬೇಕಾದ ಕನಿಷ್ಠ ಬೆಲೆಯನ್ನು ಪ್ರತಿ ಕ್ವಿಂಟಾಲ್ ಗೆ 315 ರೂ.ಗಳಿಂದ 340 ರೂ.ಗೆ ಹೆಚ್ಚಿಸಲು ಸರಕಾರ ನಿರ್ಧರಿಸಿದೆ. 2014 ರಲ್ಲಿ ಅಧಿಕಾರಕ್ಕೆ ಬಂದ ನಂತರ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಘೋಷಿಸಿದ ಕಬ್ಬಿಗೆ ಇದು ಅತ್ಯಧಿಕ ನ್ಯಾಯಯುತ ಮತ್ತು ಲಾಭದಾಯಕ ಬೆಲೆ (ಈಖಿಕ) ಆಗಿದೆ. ಮೋದಿ ಸರ್ಕಾರ ಈಖಿಕಯನ್ನು ಒಂದೇ ಬಾರಿಗೆ ಕ್ವಿಂಟಾಲ್ಗೆ 25 ರೂ.ಗಳಷ್ಟು ಹೆಚ್ಚಿಸಿರುವುದು ಇದು ಎರಡನೇ ಬಾರಿಯಾಗಿದೆ.

ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಕ್ಯಾಬಿನೆಟ್ ಸಮಿತಿ (ಸಿಸಿಇಎ) ಸಭೆಯಲ್ಲಿ ಈಖಿಕ ಹೆಚ್ಚಿಸುವ ನಿರ್ಧಾರ ತೆಗೆದುಕೊಳ್ಳಲಾಗಿದೆ. ಕಬ್ಬನ್ನು ಮುಖ್ಯವಾಗಿ ಮಹಾರಾಷ್ಟ್ರ, ಉತ್ತರ ಪ್ರದೇಶ ಮತ್ತು ಕರ್ನಾಟಕದಲ್ಲಿ ಬೆಳೆಯಲಾಗುತ್ತದೆ. 2024-25ನೇ ಸಾಲಿಗೆ ಕಬ್ಬಿನ ಎಫ್ಆರ್ ಪಿಯನ್ನು ಪ್ರತಿ ಕ್ವಿಂಟಾಲ್ಗೆ 340 ರೂ. ಗಳಂತೆ ಶೇ.10.25 ರಷ್ಟು ಸಕ್ಕರೆ ಚೇತರಿಕೆ ದರದಲ್ಲಿ ಸಿಸಿಇಎ ಅನುಮೋದಿಸಿದೆ ಎಂದು ಮಾಹಿತಿ ಮತ್ತು ಪ್ರಸಾರ ಸಚಿವ ಅನುರಾಗ್ ಠಾಕೂರ್ ಸುದ್ದಿಗಾರರಿಗೆ ತಿಳಿಸಿದರು.

ಇದು ಕಬ್ಬಿನ ಐತಿಹಾಸಿಕ ಬೆಲೆಯಾಗಿದ್ದು, 2023-24ರ ಪ್ರಸಕ್ತ ಋತುವಿನಲ್ಲಿ ಕಬ್ಬಿನ ಎಫ್ಆರ್ ಪಿಗಿಂತ ಶೇಕಡಾ 8ರಷ್ಟು ಹೆಚ್ಚಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ. ಹೊಸ ಎಫ್ಆರ್ಪಿ ಕಬ್ಬಿನ ಎ2+ಎಫ್ಎಲ್ ವೆಚ್ಚಕ್ಕಿಂತ ಶೇಕಡಾ 107 ರಷ್ಟು ಹೆಚ್ಚಾಗಿದೆ. ಇದು ಕಬ್ಬು ಬೆಳೆಗಾರರ ಸಮೃದ್ಧಿಯನ್ನು ಖಚಿತಪಡಿಸುತ್ತದೆ ಎಂದು ಠಾಕೂರ್ ಹೇಳಿದರು. ಭಾರತವು



ವಿಶ್ವದಲ್ಲೇ ಅತಿ ಹೆಚ್ಚು ಕಬ್ಬಿಗೆ ಬೆಲೆ ತೆರುತ್ತಿದೆ ಎಂದು ಸಚಿವರು ಪ್ರತಿಪಾದಿಸಿದರು. ಪರಿಷ್ಕೃತ ಎಫ್ಆರ್ ಪಿ ಅಕ್ಟೋಬರ್ 1, 2024 ರಿಂದ ಜಾರಿಗೆ ಬರಲಿದೆ. ಕೃಷಿ ವೆಚ್ಚ ಮತ್ತು ಬೆಲೆಗಳ ಆಯೋಗದ (ಸಿಎಸಿಪಿ) ಶಿಫಾರಸುಗಳ ಆಧಾರದ ಮೇಲೆ ಎಫ್ ಆರ್ ಪಿಯನ್ನು ನಿರ್ಧರಿಸಲಾಗಿದೆ. ಕೇಂದ್ರ ಸರ್ಕಾರದ ಈ ನಿರ್ಧಾರ 5 ಕೋಟಿಗೂ ಹೆಚ್ಚು ಕಬ್ಬು ಬೆಳೆಗಾರರಿಗೆ (ಕುಟುಂಬ ಸದಸ್ಯರು ಸೇರಿದಂತೆ) ಮತ್ತು ಸಕ್ಕರೆ ಕ್ಷೇತ್ರದಲ್ಲಿ ತೊಡಗಿರುವ ಲಕ್ಷಾಂತರ ಇತರ ವ್ಯಕ್ತಿಗಳಿಗೆ ಪ್ರಯೋಜನವನ್ನು ನೀಡುತ್ತದೆ.

## ಕಾಂಗ್ರೆಸ್ ಬ್ಯಾಂಕ್ ಖಾತೆಯಿಂದ '65 ಕೋಟಿ ರೂ' ವಸೂಲಿ

ನವದೆಹಲಿ : ಆದಾಯ ತೆರಿಗೆ ಇಲಾಖೆಯು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಹೆಸರಿನಲ್ಲಿ ಒಟ್ಟು 115 ಕೋಟಿ ರೂ.ಗಳ ತೆರಿಗೆ ಬಾಕಿಯಲ್ಲಿ 65 ಕೋಟಿ ರೂ.ಗಳನ್ನು ವಸೂಲಿ ಮಾಡಿದೆ. ಮೂಲಗಳ ಪ್ರಕಾರ, ಆದಾಯ ತೆರಿಗೆ ಇಲಾಖೆ ಮಂಗಳವಾರ ಈ ಮೊತ್ತವನ್ನ ಕಾಂಗ್ರೆಸ್ ಪಕ್ಷದ ಬ್ಯಾಂಕ್ ಖಾತೆಯಿಂದ ವಶಪಡಿಸಿಕೊಂಡಿದೆ. ಆದಾಯ ತೆರಿಗೆ ಇಲಾಖೆಯು ಕಾಂಗ್ರೆಸ್ ಪಕ್ಷದ ಖಾತೆಗಳಲ್ಲಿ 115 ಕೋಟಿ ರೂ.ಗಳನ್ನು ಗುರುತಿಸಿದೆ. ಖಾತೆಯಲ್ಲಿ ಬಾಕಿ ಇರುವ ಯಾವುದೇ ಶುಲ್ಕಗಳನ್ನ ವಸೂಲಿ ಮಾಡಲು ಸಾಮಾನ್ಯವಾಗಿ ಸಾಲವನ್ನು ಅನ್ವಯಿಸಲಾಗುತ್ತದೆ. ಇನ್ನು 65 ಕೋಟಿ ರೂ.ಗಳ ವಸೂಲಿಯ ವಿರುದ್ಧ, ಕಾಂಗ್ರೆಸ್ ಪಕ್ಷವು ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿಯನ್ನು ಸಂಪರ್ಕಿಸಿದೆ ಮತ್ತು ಆದಾಯ ತೆರಿಗೆ ಇಲಾಖೆಯ ವಸೂಲಾತಿ ಕ್ರಮದ ವಿರುದ್ಧ ದೂರು ದಾಖಲಿಸಿದೆ. ಕಾಂಗ್ರೆಸ್ ಪಕ್ಷವು ತನ್ನ ವಕೀಲರ ಮೂಲಕ ನೀಡಿದ ದೂರಿನಲ್ಲಿ, ನ್ಯಾಯಪೀಠದ ಮುಂದೆ ನಿಗದಿತ ವಿಚಾರಣೆಯ ಫಲಿತಾಂಶಕ್ಕಾಗಿ ಕಾಯದೆ ಬ್ಯಾಂಕುಗಳಲ್ಲಿ ಬಾಕಿ ಇರುವ ಕೆಲವು ಬಾಕಿಗಳನ್ನ ನಗದೀಕರಿಸುವ ಮೂಲಕ ಆದಾಯ ತೆರಿಗೆ ಇಲಾಖೆ ತನ್ನ ಹಕ್ಕನ್ನು ಜಾರಿಗೊಳಿಸಿದೆ ಎಂದು ಹೇಳಿದೆ.

## ಉಕ್ರೈನ್ ವಿರುದ್ಧದ ಯುದ್ಧದಲ್ಲಿ ಭಾರತೀಯರ ಬಳಕೆ: ವರದಿ

ಉಕ್ರೈನ್ ವಿರುದ್ಧ ಹೋರಾಟ ಮಾಡಲು ರಷ್ಯಾ ಖಾಸಗಿ ಸೈನಿಕರು ಮತ್ತು ಕೈದಿಗಳನ್ನು ಬಳಸಿಕೊಂಡಿರುವುದಾಗಿ ಮಾಧ್ಯಮವೊಂದು ವರದಿ ಮಾಡಿದೆ. ಅಲ್ಲದೆ ರಷ್ಯಾ ಹಲವು ಭಾರತೀಯ ಕಾರ್ಮಿಕರನ್ನು ಬಳಸಿಕೊಂಡಿರುವ ಆಘಾತಕಾರಿ ಅಂಶ ಕೂಡಾ ವರದಿಯಲ್ಲಿ ಬಹಿರಂಗಗೊಂಡಿದೆ. ರಷ್ಯಾವು ಸೇನಾ ಭದ್ರತಾ ಸಹಾಯಕ ಹುದ್ದೆ ಎಂದು ನಂಬಿಸಿ ಭಾರತೀಯ ಏಜೆಂಟ್ ಮೂವರು ಭಾರತೀಯರನ್ನು ರಷ್ಯಾಕ್ಕೆ ಕಳುಹಿಸಿ ವಂಚಿಸಲಾಗಿತ್ತು. ಈ ಮೂವರನ್ನು ರಷ್ಯಾ ಉಕ್ರೈನ್ ವಿರುದ್ಧ ಯುದ್ಧದಲ್ಲಿ ಹೋರಾಡಲು ಬಳಸಿಕೊಂಡಿರುವುದಾಗಿ ತಿಳಿಸಿದೆ. 2023ರ ನವೆಂಬರ್ ಹೊತ್ತಿಗೆ ಅಂದಾಜು 18 ಮಂದಿ ಭಾರತೀಯರನ್ನು ರಷ್ಯಾ ಮತ್ತು ಉಕ್ರೈನ್ ಗಡಿಯ ವಿವಿಧ ಭಾಗಗಳಲ್ಲಿ ನಿಯೋಜಿಸಲಾಗಿತ್ತು. ಅವರಲ್ಲಿ ಒಬ್ಬರು ಯುದ್ಧದಲ್ಲಿ ಸಾವನ್ನಪ್ಪಿರುವುದಾಗಿ ವರದಿಯಲ್ಲಿ ಉಲ್ಲೇಖಿಸಿದೆ. ವಂಚನೆಗೊಳಗಾಗಿರುವ ಹೈದರಾಬಾದ್ ನ ವ್ಯಕ್ತಿಯ ಕುಟುಂಬ ಸದಸ್ಯರೊಬ್ಬರು ಇದೀಗ ಎಐಎಂಐಎಂ ಸಂಸದ ಅಸಾದುದ್ದೀನ್ ಓವೈಸಿಯ ಮೊರೆ ಹೋಗಿದ್ದು, ಈ ನಿಟ್ಟಿನಲ್ಲಿ ಓವೈಸಿ ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಹಾಗೂ ಮಾಸ್ಕೋದಲ್ಲಿರುವ ಭಾರತೀಯ ರಾಯಭಾರ ಕಚೇರಿಗೆ ಪತ್ರ ಬರೆದು, ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ಭಾರತೀಯರು ವಾಪಸ್ ಆಗಲು ನೆರವು ಕಲ್ಪಿಸಿಕೊಡಬೇಕು ಎಂದು ಒತ್ತಾಯಿಸಿದ್ದಾರೆ.



## ಇಂಡಿ ಮೈತ್ರಿ ಕೂಟದ ಜೊತೆ ಹೋಗಲ್ಲ

**ಚೆನ್ನೈ (ತಮಿಳುನಾಡು):** ಮುಂಬರುವ ಲೋಕಸಭಾ ಚುನಾವಣೆ ವೇಳೆ ತಮ್ಮ ಪಕ್ಷ ಇಂಡಿ ಮೈತ್ರಿ ಕೂಟ ಸೇರೋದಿಲ್ಲ ಎಂದು ಸ್ಟಾರ್ ನಟ ಹಾಗೂ ರಾಜಕಾರಣಿ ಕಮಲ್ ಹಾಸನ್ ಸ್ಪಷ್ಟಪಡಿಸಿದ್ದಾರೆ. ಜೊತೆಯಲ್ಲಿ ತಮ್ಮ ಸಾರಥ್ಯದ ಎಂಎನ್ ಎಂ ಪಕ್ಷದ ರಾಜಕೀಯ ನಿಲುವನ್ನೂ ಕಮಲ್ ಹಾಸನ್ ವಿವರಿಸಿದ್ದಾರೆ. ತಮ್ಮ ಪಕ್ಷವು ದೇಶದ ಬಗ್ಗೆ ಸ್ವಾರ್ಥ ರಹಿತವಾಗಿ ಚಿಂತನೆ ಮಾಡುವ ರಾಜಕೀಯ ಪಕ್ಷ ಹಾಗೂ ಮೈತ್ರಿ ಕೂಟಕ್ಕೆ ಬೆಂಬಲ ನೀಡಲು ಬಯಸುತ್ತದೆ ಎಂದಿರುವ ಕಮಲ್ ಹಾಸನ್, ತಾವು ಎಂದಿಗೂ 'ಊಳಿಗಮಾನ್ಯ ರಾಜಕೀಯ' ಮಾಡುವ ಪಕ್ಷದ ಜೊತೆ ಗುರ್ತಿಸಿಕೊಳ್ಳಲು ಇಷ್ಟಪಡೋದಿಲ್ಲ ಎಂದಿದ್ದಾರೆ.

ಕಮಲ್ ಹಾಸನ್ ಅವರ ಮಕ್ಕಳ್ ನೀಧಿ ಮಯ್ಯಮ್ ಪಕ್ಷವು ತನ್ನ 7ನೇ ವರ್ಷಾಚರಣೆಯನ್ನು ಆಚರಿಸಿಕೊಂಡಿತು. ಈ ಕಾರ್ಯಕ್ರಮದಲ್ಲಿ ಮಾತನಾಡಿದ ಕಮಲ್ ಹಾಸನ್, ರಾಜಕೀಯಕ್ಕೆ ಎಂಟ್ರಿ ಕೊಟ್ಟ ತಮಿಳುನಾಡಿನ ಮತ್ತೊಬ್ಬ ಸ್ಟಾರ್ ನಟ ವಿಜಯ್ ಅವರಿಗೂ ಸ್ವಾಗತ ಕೋರಿದರು.

ಈ ವೇಳೆ ಮಾಧ್ಯಮ ಪ್ರತಿನಿಧಿಗಳು ಕಮಲ್ ಹಾಸನ್ ಅವರಿಗೆ ನಿರ್ದಿಷ್ಟವಾಗಿ ಇಂಡಿ ಮೈತ್ರಿ ಕೂಟ ಸೇರುತ್ತೀರಾ ಎಂದೇ ಪ್ರಶ್ನಿಸಿದರು. ಈ ಪ್ರಶ್ನೆಗೆ ಉತ್ತರಿಸಿದ ಕಮಲ್ ಹಾಸನ್, ನಾನು ಈಗಾಗಲೇ ಹೇಳಿದ್ದೇನೆ. ನಾವು ಈಗ ರಾಜಕೀಯ ಪಕ್ಷಗಳನ್ನ ನೋಡುವ ಬದಲು ರಾಷ್ಟ್ರವನ್ನು ನೋಡಬೇಕು, ರಾಷ್ಟ್ರವನ್ನು ಗಮನದಲ್ಲಿ ಇಟ್ಟುಕೊಂಡು ನಿರ್ಧಾರ ಕೈಗೊಳ್ಳಬೇಕು. ದೇಶದ ಬಗ್ಗೆ ಸ್ವಾರ್ಥ ರಹಿತವಾಗಿ ಯೋಚನೆ ಮಾಡುವವರ ಬೆನ್ನಿಗೆ ನಿಲ್ಲಬೇಕು. ಅಂಥವರ ಜೊತೆ ಗುರ್ತಿಸಿಕೊಳ್ಳಲು ಎಂಎನ್ಎಂ ಪಕ್ಷ ನಿರ್ಧರಿಸಿದೆ ಎಂದರು. ಆದರೆ, ಸ್ಪಷ್ಟವಾಗಿ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಲಿಲ್ಲ.



### ಮರಾಠ ಕೋಟಾ: ರಾಜ್ಯ ಹಿಂದುಳಿದ ವರ್ಗಗಳ ಸಮಿತಿಯ ವರದಿಯನ್ನು ಪ್ರಶ್ನಿಸಿ

# ಹೈಕೋರ್ಟ್‌ನಲ್ಲಿ ಅರ್ಜಿ



ಮುಂಬೈ: ನಿವೃತ್ತ ನ್ಯಾಯಮೂರ್ತಿ ಎಸ್‌ಬಿ ಶುಕ್ರೆ ಮತ್ತು ಮಹಾರಾಷ್ಟ್ರ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ (ಒಖಿಅಃಅ) ಇತರ ಸದಸ್ಯರನ್ನು ನೇಮಿಸುವ ಆದೇಶಗಳನ್ನು ರದ್ದುಗೊಳಿಸುವಂತೆ ಕೋರಿ ಬಾಂಬೆ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸಲ್ಲಿಸಲಾಗಿದೆ. ಈ ಆಯೋಗವು ಇತ್ತೀಚೆಗೆ ಮಹಾರಾಷ್ಟ್ರ ಸರ್ಕಾರಕ್ಕೆ ಮರಾಠ ಸಮುದಾಯ ಹಿಂದುಳಿದಿರುವಿಕೆಯನ್ನು ವಿವರಿಸುವ ವರದಿಯನ್ನು ಸಲ್ಲಿಸಿದೆ. ಆಯೋಗವು ರಾಜ್ಯ ಸರ್ಕಾರಕ್ಕೆ ಮಾಡಿರುವ ಶಿಫಾರಸುಗಳಿಗೆ ತಡೆ ನೀಡುವಂತೆಯೂ ಸಾರ್ವಜನಿಕ ಹಿತಾಸಕ್ತಿ ಅರ್ಜಿಯಲ್ಲಿ ಕೋರಲಾಗಿದೆ. ಈ ಶಿಫಾರಸುಗಳ ಆಧಾರದ ಮೇಲೆ ಮಹಾರಾಷ್ಟ್ರ ಕ್ಯಾಬಿನೆಟ್ ಮಂಗಳವಾರ ಕರಡು ಮಸೂದೆಗೆ ತನ್ನ ಅನುಮೋದನೆಯನ್ನು ನೀಡಿದ್ದು, ಮರಾಠರಿಗೆ ಮೀಸಲಾತಿಯ ಬಗ್ಗೆ ಶಾಸನಕ್ಕೆ ದಾರಿ ಮಾಡಿಕೊಟ್ಟಿತು.

ವಕೀಲ ಆಶಿಶ್ ಮಿಶ್ರಾ ಮೂಲಕ ಒಬಿಸಿ ವೆಲ್ಫೇರ್ ಫೌಂಡೇಶನ್ ಸಲ್ಲಿಸಿದ ಮನವಿಯಲ್ಲಿ, ಎಂಎಸ್‌ಸಿಬಿಸಿ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿಯು ಸರಿಯಾದ ಕಾರ್ಯವಿಧಾನವನ್ನು ಅನುಸರಿಸಿಲ್ಲ ಎಂದು ವಾದಿಸಿದೆ. ರಾಜಕೀಯ ಪ್ರಭಾವದಿಂದ ಮರಾಠ ಸಮುದಾಯದ ಸಮೀಕ್ಷೆ ನಡೆಸಲು ನಿರಾಕರಿಸಿದ್ದರಿಂದ ಹಿಂದಿನ ಸದಸ್ಯರು ರಾಜೀನಾಮೆ ನೀಡುವಂತೆ ಒತ್ತಡ ಹೇರಲಾಗಿತ್ತು ಎಂದು ಅದು ಆರೋಪಿಸಿದೆ.

ಒಖಿಅಃಅ ಯ ಅಧ್ಯಕ್ಷರಾದ ನ್ಯಾಯಮೂರ್ತಿ (ನಿವೃತ್ತ) ಶುಕ್ರೆ ಅವರನ್ನು ಉಪವಾಸ ನಿರತ ಮರಾಠ ನಾಯಕ ಮನೋಜ್ ಜಾರಂಗೆ-ಪಾಟೀಲ್ ಅವರೊಂದಿಗೆ ಮಾತುಕತೆ ನಡೆಸಲು ರಾಜ್ಯ ಸರ್ಕಾರವು ನೇಮಿಸಿದೆ.. ಅವರ ಒತ್ತಡದ ಮೇರೆಗೆ, ಮರಾಠ ಸಮುದಾಯಕ್ಕೆ ಕೋಟಾ ಪ್ರಯೋಜನಗಳಿಗಾಗಿ ಶಾಸನವನ್ನು ಪರಿಚಯಿಸಲು ಒಂದು ದಶಕದಲ್ಲಿ ಸರ್ಕಾರವು ತನ್ನ ಮೂರನೇ ಪ್ರಯತ್ನವನ್ನು ಮಾಡುತ್ತಿದೆ. ಸಂಧಾನದ ಸಂದರ್ಭದಲ್ಲಿ, ನ್ಯಾಯಮೂರ್ತಿ ಶುಕ್ರೆ ಮೀಸಲಾತಿಯನ್ನು ಒದಗಿಸುವ ಭರವಸೆ ನೀಡಿದರು ಮತ್ತು ಒಖಿಅಃಅ ಯ ಎಲ್ಲಾ ಹೊಸದಾಗಿ ನೇಮಕಗೊಂಡ ಸದಸ್ಯರು ಮರಾಠಾ ಆಗಿದ್ದಾರೆ ಎಂದು ಮನವಿ ಆರೋಪಿಸಿದೆ.

ಮಂಗಳವಾರ ನಡೆದ ವಿಚಾರಣೆ ವೇಳೆ ಮಹಾರಾಷ್ಟ್ರ ಅಡ್ವೊಕೇಟ್ ಜನರಲ್ ಬೀರೇಂದ್ರ ಸರಾಫ್ ಅವರು ಅರ್ಜಿಯ ಪ್ರತಿಯನ್ನು ತಮಗೆ ನೀಡಿಲ್ಲ ಎಂದು ಸೂಚಿಸಿದರು. ಇದನ್ನು ಕೂಡಲೇ ಮಾಡಲಾಗುವುದು ಎಂದು ಮಿಶ್ರಾ ಭರವಸೆ ನೀಡಿದರು.

ನೇಮಕಾತಿಗಳಿಗೆ ಸರಿಯಾದ ಪ್ರಕ್ರಿಯೆಯ ಕೊರತೆಯಿದೆ. ಆಯೋಗದ ವಸ್ತುನಿಷ್ಠತೆಯ ಬಗ್ಗೆ ಕಳವಳವನ್ನು ಉಂಟುಮಾಡುತ್ತದೆ ಎಂದು ಪಿಐಎಲ್ ??ನಲ್ಲಿ ಹೇಳಲಾಗಿದೆ.

## ರಷ್ಯಾ-ಉಕ್ರೇನ್ ಯುದ್ಧ ಕೊನೆಗೊಳಿಸಲು ಭಾರತ ಮಧ್ಯಸ್ಥಿಕೆಗೆ ಸಿದ್ಧ

ರಷ್ಯಾ-ಉಕ್ರೇನ್ ಯುದ್ಧವನ್ನು ಕೊನೆಗೊಳಿಸಲು ಮಧ್ಯಸ್ಥಿಕೆ ಪಾತ್ರವನ್ನು ವಹಿಸಲು ಭಾರತ ಸಿದ್ಧವಾಗಿದೆ ಎಂದು ವಿದೇಶಾಂಗ ಸಚಿವ ಎಸ್ ಜೈಶಂಕರ್ ಹೇಳಿದ್ದಾರೆ. ಜರ್ಮನ್ ಆರ್ಥಿಕ ಪತ್ರಿಕೆ ಹ್ಯಾಂಡೆಲ್ಸ್ಬ್ಲಾಟ್ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಜೈಶಂಕರ್, ಮಧ್ಯಪ್ರಾಚ್ಯದಲ್ಲಿ ಭಾರತದ ಇಂಧನ ಪೂರೈಕೆದಾರರು ಯುರೋಪಿಗೆ ಪೆಟ್ರೋಲಿಯಂ ಉತ್ಪನ್ನಗಳನ್ನು ಒದಗಿಸಲು ಆದ್ಯತೆ ನೀಡುತ್ತಾರೆ ಎಂದಿದ್ದಾರೆ. ಇದು ಉಕ್ರೇನ್ ಯುದ್ಧದ ನಂತರ ಹೆಚ್ಚಿನ ಬೆಲೆಯನ್ನು ಪಾವತಿಸಿತು ಮತ್ತು ಭಾರತಕ್ಕೆ ರಷ್ಯಾದ ಕಚ್ಚಾತೈಲವನ್ನು ಖರೀದಿಸುವುದನ್ನು ಬಿಟ್ಟು ಬೇರೆ ಆಯ್ಕೆಯಿಲ್ಲ. ಚೀನಾವನ್ನು ಭಾರತದಂತೆಯೇ ಯುರೋಪ್ ನೋಡಬೇಕೆಂದು ಭಾರತ ನಿರೀಕ್ಷಿಸದಂತೆಯೇ, ರಷ್ಯಾದ ಬಗ್ಗೆ ಭಾರತದ ವಿಧಾನವು ಯುರೋಪಿನಂತೆಯೇ ಇರಲು ಸಾಧ್ಯವಿಲ್ಲ ಎಂದು ಯುರೋಪ್ ಸಹ ಅರ್ಥ ಮಾಡಿಕೊಳ್ಳಬೇಕು ಎಂದು ಅವರು ಹೇಳಿದರು. ಭಾರತವು ರಷ್ಯಾದೊಂದಿಗೆ ಸ್ಥಿರ ಮತ್ತು ತುಂಬಾ ಸ್ನೇಹಪರ ಸಂಬಂಧವನ್ನು ಹೊಂದಿದೆ ಮತ್ತು ಮಾಸ್ಕೋ ಎಂದಿಗೂ ನವದೆಹಲಿಯ ಹಿತಾಸಕ್ತಿಗಳಿಗೆ ಧಕ್ಕೆ ತಂದಿಲ್ಲ ಎಂದು ವಿದೇಶಾಂಗ ಮತ್ತೊಂದೆಡೆ, ಉದಾಹರಣೆಗೆ, ಚೀನಾದೊಂದಿಗಿನ ನಮ್ಮ ರಾಜಕೀಯ ಮತ್ತು ಮಿಲಿಟರಿ ಸಂಬಂಧವು ತುಂಬಾ ಜಟಿಲವಾಗಿದೆ ಎಂದು ಅವರು ಪ್ರತಿಪಾದಿಸಿದರು. ಉಕ್ರೇನ್ ಯುದ್ಧದ ಹೊರತಾಗಿಯೂ ರಷ್ಯಾದೊಂದಿಗಿನ ಭಾರತದ ಮಿಲಿಟರಿ ಸಹಕಾರದ ಬಗ್ಗೆ ಮಾತನಾಡಿದ ಜೈಶಂಕರ್, ಅನೇಕ ಪಾಶ್ಚಿಮಾತ್ಯ ದೇಶಗಳು ದೀರ್ಘಕಾಲದಿಂದ ಪಾಕಿಸ್ತಾನಕ್ಕೆ ಸರಬರಾಜುಗಳನ್ನು ಪೂರೈಸಲು ಆಯ್ಕೆ ಮಾಡಿಕೊಂಡಿವೆಯೇ ಹೊರತು ಭಾರತಕ್ಕೆ ಅಲ್ಲ ಎಂದು ತಿಳಿಸಿದ್ದಾರೆ.



## ವಿರಾಟ್ ಕೊಹ್ಲಿ ತಂದೆಯಾಗಿದ್ದಕ್ಕೆ ಪಾಕಿಸ್ತಾನದಲ್ಲಿ ಸಂಭ್ರಮ!

**ಪಾಕಿಸ್ತಾನ:** ಟೀಮ್ ಇಂಡಿಯಾದ ಸ್ಟಾರ್ ಕ್ರಿಕೆಟಿಗ ವಿರಾಟ್ ಕೊಹ್ಲಿ ಎರಡನೇ ಮಗುವಿನ ವಿಚಾರವನ್ನು ಕೇಳಿ ಪಾಕಿಸ್ತಾನದಲ್ಲಿ ಇರುವ ಅಭಿಮಾನಿಗಳು ಸಿಹಿ ಹಂಚಿ ಸಂಭ್ರಮಿಸಿದ್ದಾರೆ.



ವಿರಾಟ್ ಕೊಹ್ಲಿ ಪತ್ನಿ ಅನುಷ್ಕಾ ಶರ್ಮಾ ಫೆ.15ರಂದು ಗಂಡು ಮಗುವಿಗೆ ಜನ್ಮ ನೀಡಿದ್ದರು. ಈ ಸುದ್ದಿ ಕೇಳಿ ಕೊಹ್ಲಿ ಅಭಿಮಾನಿಗಳು ಬಹಳ ಸಂತಸಗೊಂಡಿದ್ದಾರೆ. ಪಾಕಿಸ್ತಾನದಲ್ಲಿಯೂ ಕೊಹ್ಲಿ ತಂದೆಯಾದ ಖುಷಿಯನ್ನು ಅವರ ಅಭಿಮಾನಿಗಳು ಅದ್ದೂರಿಯಾಗಿ ಸಿಹಿ ಹಂಚುವ ಮೂಲಕ ಸಂಭ್ರಮಿಸಿದ್ದಾರೆ. ಈ ವಿಡಿಯೋ ವೈರಲ್ ಆಗಿದೆ. ವೈರಲ್ ಆದ ವಿಡಿಯೋದಲ್ಲಿ ಪಾಕಿಸ್ತಾನದ ಕೊಹ್ಲಿ ಅಭಿಮಾನಿಗಳು ಸಿಹಿ ಹಂಚುವ ಮೂಲಕ ಅಕಾಯ್ ಕೂಡ ವಿರಾಟ್ ಅವರಂತೇ ಗ್ರೇಟೆಸ್ಟ್ ಕ್ರಿಕೆಟಿಗನಾಗಲಿ. ಕೊಹ್ಲಿ ದಾಖಲೆಯನ್ನು ಮುರಿಯಲಿ, ಭಾರತ ಕ್ರಿಕೆಟ್ ತಂಡದಲ್ಲಿ ಮಿನುಗಲಿ ಎಂದು ಹಾರೈಸಿದ್ದಾರೆ. ವಿರಾಟ್ ಹಾಗೂ ಅನುಷ್ಕಾ ದಂಪತಿ ನಿನ್ನೆ ಸಾಮಾಜಿಕ ಜಾಲತಾಣದಲ್ಲಿ ಫೆ. 15ರಂದು ಗಂಡು ಮಗು ಹುಟ್ಟಿರುವ ಬಗ್ಗೆ ತಿಳಿಸಿದ್ದರು. ಇನ್ಸ್ಟಾಗ್ರಾಮ್ನಲ್ಲಿ ತುಂಬು ಸಂತೋಷ ಮತ್ತು ಪ್ರೀತಿ ತುಂಬಿದ ಹೃದಯದಿಂದ ನಾವು ನಮ್ಮ ಮಗ, ವಾಮಿಕಾಳ ಚಿಕ್ಕ ಪುಟ್ಟ ಸಹೋದರ ಅಕಾಯ್ನನ್ನು ಈ ಜಗತ್ತಿಗೆ ಸ್ವಾಗತಿಸಿದ್ದೇವೆ ಎಂದು ತಿಳಿಸುತ್ತಿದ್ದೇವೆ ಎಂದು ಪೋಸ್ಟ್ ಮಾಡಿದ್ದಾರೆ.

## 'ಪ್ಯಾರಸಿಟಮಾಲ್' ಮಿತಿಮೀರಿದ ಸೇವನೆ; ಪಿತ್ತಜನಕಾಂಗದ ವೈಫಲ್ಯ

**ನವದೆಹಲಿ:** ಎಡಿನ್ಬರ್ಗ್ ವಿಶ್ವವಿದ್ಯಾನಿಲಯದ ಇತ್ತೀಚಿನ ಅಧ್ಯಯನದ ಪ್ರಕಾರ, ಸಾಮಾನ್ಯ ನೋವು ನಿವಾರಕವಾದ ಪ್ಯಾರಸಿಟಮಾಲ್ನಿಂದ ಯಕೃತ್ತಿನ ಹಾನಿಯನ್ನು ಉಂಟು ಮಾಡಬಹುದು. ಇದು ಯಕೃತ್ತನ್ನು ಹೇಗೆ ಹಾನಿಗೊಳಿಸುತ್ತದೆ ಎಂಬುದರ ಕುರಿತು ಹೊಸ ಮಾಹಿತಿಯು ಇಲಿಗಳ ಮೇಲೆ ನಡೆಸಿದ ಅಧ್ಯಯನಗಳಿಂದ ಬಹಿರಂಗಗೊಳ್ಳುತ್ತದೆ. ಸಂಶೋಧನೆಗಳು



ಮಿತಿಮೀರಿದ ವಿಷತ್ವದ ಬಗ್ಗೆ ಪ್ರಮುಖ ಮಾಹಿತಿಯನ್ನು ಒದಗಿಸುತ್ತವೆ, ಇದು ಕೆಲವೊಮ್ಮೆ ಮಾರಣಾಂತಿಕ ಮತ್ತು ಗುಣಪಡಿಸಲು ಕಷ್ಟವಾಗುತ್ತದೆ. ಅಂಗಾಂಗ ವೈಫಲ್ಯವು ಔಷಧದ ಋಣಾತ್ಮಕ ಪರಿಣಾಮಗಳನ್ನು ತಗ್ಗಿಸಲು ಚಿಕಿತ್ಸೆಗಳ ಸಂಶೋಧನೆಗೆ ಮಾರ್ಗದರ್ಶನ ನೀಡಲು ಸಹಾಯ ಮಾಡುತ್ತದೆ, ಇದು ತೀವ್ರವಾದ ಯಕೃತ್ತಿನ ವೈಫಲ್ಯಕ್ಕೆ ಪ್ರಮುಖ ಕಾರಣವಾಗಿದೆ. ಎಡಿನ್ಬರ್ಗ್ ವಿಶ್ವವಿದ್ಯಾನಿಲಯದ ಸಂಶೋಧಕರು ಪ್ಯಾರಸಿಟಮಾಲ್ ಮಾನವ ಮತ್ತು ಇಲಿಯ ಅಂಗಾಂಶಗಳಲ್ಲಿ ಯಕೃತ್ತಿನ ಜೀವಕೋಶಗಳ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂಬುದನ್ನು ಅಧ್ಯಯನ ಮಾಡಿದರು. ಅವರ ಸಂಶೋಧನೆಗಳು ಕೆಲವು ಸಂದರ್ಭಗಳಲ್ಲಿ, ಪ್ಯಾರಸಿಟಮಾಲ್ ಯಕೃತ್ತಿನಲ್ಲಿ ನೆರೆಯ ಜೀವಕೋಶಗಳ ಸರಿಯಾದ ಕಾರ್ಯನಿರ್ವಹಣೆಗೆ ಅಗತ್ಯವಾದ ರಚನಾತ್ಮಕ ಜಂಕ್ಷನ್ಗಳೊಂದಿಗೆ ಮಧ್ಯಪ್ರವೇಶಿಸುವ ಮೂಲಕ ಯಕೃತ್ತನ್ನು ಹಾನಿಗೊಳಿಸಬಹುದು ಎಂದು ತೋರಿಸಿದೆ.

## 'ಅಮೆಜಾನ್ ಮಳೆಕಾಡು'ಗಳಲ್ಲಿ ಅತಿದೊಡ್ಡ ಹಾವು' ಪತ್ತೆ

ಅಮೆಜಾನ್ ಮಳೆಕಾಡಿನ ಆಳವನ್ನು ಅನ್ವೇಷಿಸುವ ಸಂಶೋಧಕರು ಬೃಹತ್ ಸರ್ಪವನ್ನು ಕಂಡುಹಿಡಿದಿದ್ದಾರೆ. ಇದು ಹಿಂದಿನ ಎಲ್ಲಾ ದಾಖಲೆಗಳನ್ನು ಮುರಿದಿದೆ. ಈ ಅಭೂತಪೂರ್ವ ಆವಿಷ್ಕಾರವು ಅನಕೊಂಡ ಕುಟುಂಬದಲ್ಲಿ ಹೊಸ ದೈತ್ಯನನ್ನು



ನಮಗೆ ಪರಿಚಯಿಸುತ್ತದೆ. ಅದರ ಸಂಬಂಧಿಕರ ಪ್ರಸಿದ್ಧ ಗಾತ್ರವನ್ನು ಎರಡು ಪಟ್ಟು ಮೀರಿಸುತ್ತದೆ. ಅಮೆಜಾನ್ ಕಾಡಿನ ಹೃದಯಭಾಗದಲ್ಲಿ ನ್ಯಾಷನಲ್ ಜಿಯಾಗ್ರಫಿಕ್ ಎಕ್ಸ್ಪೆಡಿಷನ್ ತಂಡವು ನಡೆಸಿದ ವಾಡಿಕೆಯ ವೀಡಿಯೊ ಚಿತ್ರೀಕರಣದ ಸಮಯದಲ್ಲಿ ವಿಸ್ಮಯಕಾರಿ ಮುಖಾಮುಖಿ ಅನಾವರಣಗೊಂಡಿತು. ಸೊಂಪಾದ ದೃಶ್ಯಾವಳಿಗಳನ್ನು ಸೆರೆಹಿಡಿಯುತ್ತಾ ಕ್ಯಾಮೆರಾ ಉರುಳುತ್ತಿದ್ದಂತೆ, ಅದು ಅನಿರೀಕ್ಷಿತವಾಗಿ ಅಮೆಜಾನ್ ನ ನದಿ ಪಾತ್ರದ ಉದ್ದಕ್ಕೂ ವಿಶ್ರಾಂತಿ ಪಡೆಯುತ್ತಿರುವ ಬೃಹತ್ ಗಾತ್ರದ ಮೇಲೆ ಎಡವಿ ಬಿದ್ದಿತು. ಹಾವಿನ ಅಗಾಧ ಉದ್ದವನ್ನು ಪ್ರದರ್ಶಿಸುವ ಸೆರೆಹಿಡಿಯಲಾದ ತುಣುಕುಗಳು ಸಾಮಾಜಿಕ ಮಾಧ್ಯಮ ಪ್ಲಾಟ್ಫಾರ್ಮ್ಗಳಲ್ಲಿ ಪ್ರೇಕ್ಷಕರನ್ನು ತ್ವರಿತವಾಗಿ ಆಕರ್ಷಿಸಿದವು, ತ್ವರಿತವಾಗಿ ವೈರಲ್ ಆದವು. ದಕ್ಷಿಣ ಹಸಿರು ಅನಕೊಂಡ ಎಂದು ಗುರುತಿಸಲ್ಪಟ್ಟ ಈ ಬೃಹತ್ ಜೀವಿಯು ಜಲಪ್ರದೇಶಗಳಲ್ಲಿ ಅಲೆದಾಡುತ್ತದೆ. ಬೇಟೆ ಮತ್ತು ಪೋಷಣೆಯಲ್ಲಿ ಸುಲಭವಾಗುವಂತೆ ತನ್ನ ಜಲ ಆವಾಸಸ್ಥಾನವನ್ನು ಬಳಸಿಕೊಳ್ಳುತ್ತದೆ ಎಂದು ತಿಳಿದುಬಂದಿದೆ.

## ಕೋವಿಡ್-19 ಲಸಿಕೆ ಪಡೆದವರಿಗೆ ಹೃದಯದ ಸಮಸ್ಯೆಗಳು ಹೆಚ್ಚಳ

ನ್ಯೂಯಾರ್ಕ್ಕೋವಿಡ್ -19 ವ್ಯಾಕ್ಸಿನೇಷನ್ ನಂತರ ವಿವಿಧ ದೇಶಗಳಲ್ಲಿ (ಭಾರತವನ್ನು ಹೊರತುಪಡಿಸಿ) ಲಸಿಕೆ ಪಡೆದ ಜನರಲ್ಲಿ ಹೃದಯ ಸಮಸ್ಯೆಗಳು ಮತ್ತು ಮೆದುಳಿನ ರಕ್ತನಾಳಗಳಲ್ಲಿ ರಕ್ತ ಹೆಪ್ಪುಗಟ್ಟುವಿಕೆಯಂತಹ ಅಡ್ಡಪರಿಣಾಮಗಳು




ಹೊರಹೊಮ್ಮುತ್ತಿವೆ ಎಂದು ಹೊಸ ಅಧ್ಯಯನವೊಂದು ತಿಳಿಸಿದೆ. ವಿಶ್ವ ಆರೋಗ್ಯ ಸಂಸ್ಥೆ ಮತ್ತು ಯುರೋಪಿಯನ್ ಮೆಡಿಸಿನ್ಸ್ ಏಜೆನ್ಸಿ ಕೋವಿಡ್ -19 ಲಸಿಕೆ ಅಡ್ಡಪರಿಣಾಮಗಳ ಬಗ್ಗೆ ಪ್ರಮುಖ ಡೇಟಾವನ್ನು ಸಂಗ್ರಹಿಸಿದೆ. ಜಾಗತಿಕ ಕೋವಿಡ್ ಸುರಕ್ಷತಾ ಯೋಜನೆ. ಈ ಹೆಸರು ಕೋವಿಡ್ ಲಸಿಕೆಗಳ ಕಾರ್ಯಕ್ಷಮತೆಯನ್ನು ನಿರ್ಣಯಿಸಿತು. ಈ ವರದಿಯು ಭಾರತವನ್ನು ಹೊರತುಪಡಿಸಿ ವಿವಿಧ ದೇಶಗಳ 9.9 ಕೋಟಿ ರೋಗಿಗಳಿಂದ ಡೇಟಾವನ್ನು ಸಂಗ್ರಹಿಸಿದೆ. ಅಂಕಿಅಂಶಗಳ ಪ್ರಕಾರ, ಎಂಆರ್ಎನ್ಎ ಲಸಿಕೆ ಕೋವಿಡ್ ಲಸಿಕೆ ಪಡೆದ ಜನರು ಹೃದಯ ಸಮಸ್ಯೆಗಳು ಮತ್ತು ಮೆದುಳಿನ ರಕ್ತನಾಳಗಳಲ್ಲಿ ಹೆಪ್ಪುಗಟ್ಟುವಿಕೆಯಲ್ಲಿ 1.5 ಪಟ್ಟು ಹೆಚ್ಚಳವನ್ನು ಹೊಂದಿದ್ದರು. ವೈದ್ಯಕೀಯ ತಜ್ಞರ ಪ್ರಕಾರ, ಭಾರತದಲ್ಲೂ ಇಂತಹ ಹೆಚ್ಚಿನ ಸಂಖ್ಯೆಯ ಲಸಿಕೆಗಳನ್ನು ತೆಗೆದುಕೊಳ್ಳಲಾಗಿದೆ, ಆದರೆ ಇದರ ಪರಿಣಾಮವು ವೈಜ್ಞಾನಿಕವಾಗಿ ತಿಳಿದಿಲ್ಲ ಎಂದು ಹೇಳಿದ್ದಾರೆ.

## ಭಾರತ್ ಜೋಡೋ ನ್ಯಾಯ ಯಾತ್ರೆಗೆ 5 ದಿನ ವಿರಾಮ



**ದೆಹಲಿ:** ಕಾಂಗ್ರೆಸ್ನ ನಾಯಕ ರಾಹುಲ್ ಗಾಂಧಿ ನೇತೃತ್ವದ ಭಾರತ್ ಜೋಡೋ ನ್ಯಾಯ ಯಾತ್ರೆಗೆ 5 ದಿನಗಳ ಕಾಲ ವಿರಾಮವಿರಲಿದೆ.

ಫೆಬ್ರವರಿ 26ರಿಂದ ಮಾರ್ಚ್ 1ರವರೆಗೆ ನ್ಯಾಯ ಯಾತ್ರೆ ನಡೆಯುವುದಿಲ್ಲ, ಮಾರ್ಚ್ 2ರಿಂದ ಯಾತ್ರೆ ಮತ್ತೆ ಪ್ರಾರಂಭವಾಗಲಿದೆ, ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಈ ಮಾಹಿತಿ ನೀಡಿದ್ದಾರೆ.

ಈ ಐದು ದಿನಗಳಲ್ಲಿ (ಫೆಬ್ರವರಿ 26 ರಿಂದ ಮಾರ್ಚ್ 1 ರವರೆಗೆ) ದೆಹಲಿಯಲ್ಲಿ ಚುನಾವಣೆಗೆ ಸಂಬಂಧಿಸಿದಂತೆ ಹಲವು ಪ್ರಮುಖ ಸಭೆಗಳಿವೆ ಈ ವೇಳೆ ಲೋಕಸಭೆ ಚುನಾವಣೆ ಕುರಿತು ಸಭೆ ನಡೆಸಬೇಕಿದೆ ಎಂದಿದ್ದಾರೆ.

ಈ ಸಭೆಗೆ ರಾಹುಲ್ ಗಾಂಧಿ ಉಪಸ್ಥಿತಿ ಅಗತ್ಯ ಫೆಬ್ರವರಿ 27 ಮತ್ತು 28 ರಂದು ರಾಹುಲ್ ಗಾಂಧಿ ಅವರು ಕೇಂಬ್ರಿಡ್ಜ್ ವಿಶ್ವವಿದ್ಯಾಲಯಕ್ಕೆ ಹೋಗಲಿದ್ದು, ಅಲ್ಲಿ ಎರಡು ಉಪನ್ಯಾಸಗಳನ್ನು ನೀಡಲಿದ್ದಾರೆ. ಮಾರ್ಚ್ 2 ರಿಂದ ನಾವು ಪ್ರಯಾಣವನ್ನು ಪುನರಾರಂಭಿಸುತ್ತೇವೆ ಮತ್ತು ರಾಹುಲ್ ಗಾಂಧಿ ಮಾರ್ಚ್ 5 ರಂದು ಮಹಾಕಾಳೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಲಿದ್ದಾರೆ. ರಾಹುಲ್ ಗಾಂಧಿ ಫೆಬ್ರವರಿ 26 ರಂದು ಇಂಗ್ಲೆಂಡ್ಗೆ ತೆರಳಲಿದ್ದಾರೆ. ಇಂದು ಪ್ರಯಾಣದ 39ನೇ ರಾಹುಲ್ ಗಾಂಧಿಯವರ ಭಾರತ್ ಜೋಡೋ ನ್ಯಾಯ ಯಾತ್ರೆಯು ಪ್ರಸ್ತುತ ಯುಪಿಯಲ್ಲಿದೆ. ಮಂಗಳವಾರ ರಾತ್ರಿ, ರಾಹುಲ್ ಅವರ ನ್ಯಾಯ ಯಾತ್ರೆ ಲಕ್ನೋ ತಲುಪಿದೆ. ಅದೇ ಸಮಯದಲ್ಲಿ, ಇಂದು ಯಾತ್ರೆ ಕಾನ್ಪುರವನ್ನು ತಲುಪಲಿದೆ.

## ಹಿಂದುಳಿದವರಿಗೆ ಉಳಿಗಾಲವಿಲ್ಲ

**ಕಾನ್ಪುರ:** ಪ್ರಧಾನಿ ಮೋದಿ ಪ್ರಸ್ತಾಪಿಸುತ್ತಿರುವ ರಾಮರಾಜ್ಯದಲ್ಲಿ ದಲಿತರು ಹಾಗು ಇತರೆ ಹಿಂದುಳಿದ ವರ್ಗದವರಿಗೆ ಯಾವುದೇ ಸ್ಥಾನಮಾನ ಸಿಗುವುದಿಲ್ಲ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ. ಕಾನ್ಪುರದಲ್ಲಿ ಸಾಗುತ್ತಿರುವ ಭಾರತ್ ಜೋಡೋ ಯಾತ್ರೆಯಲ್ಲಿ ಮಾತನಾಡಿದ ಅವರು, ದೇಶದ ಜನಸಂಖ್ಯೆಯ 90% ಇರುವ ದಲಿತರು, ಬುಡಕಟ್ಟು ಹಾಗು ಹಿಂದುಳಿದವರಿಗೆ ಬೇಕಾದಷ್ಟು ಉದ್ಯೋಗ ಸೃಷ್ಟಿ ಮಾಡದೆ ಮೋದಿ ತಾರತಮ್ಯ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ನಿಮಗೆ ಉದ್ಯೋಗ ನೀಡಲು ಪ್ರಧಾನಿ ಮೋದಿಗೆ ಇಷ್ಟವಿಲ್ಲ



ಎಂದ ಅವರು, ದೇಶದಲ್ಲಿ ನಡೆಯುತ್ತಿರುವ ತಾರತಮ್ಯಕ್ಕೆ ಉದಾಹರಣೆಯಾಗಿ ರಾಮಮಂದಿರ ಪ್ರಾಣಪ್ರತಿಷ್ಠೆಯ ಸಂದರ್ಭವನ್ನು ನೆನಪಿಸುತ್ತ, ಆ ಸಮಾರಂಭದಲ್ಲಿ ದಲಿತರು ಹಾಗು ಬುಡಕಟ್ಟು ಜನಾಂಗದವರಿಗೆ ಜಾಗವಿರಲಿಲ್ಲ. ಬುಡಕಟ್ಟಿಗೆ ಸೇರಿದ ಕಾರಣಕ್ಕೆ ರಾಷ್ಟ್ರಪತಿಗಳಿಗೂ ಆಹ್ವಾನವಿರಲಿಲ್ಲ ಹಾಗು ಮಾಜಿ ರಾಷ್ಟ್ರಪತಿಗಳಿಗೆ ಪ್ರವೇಶವಿರಲಿಲ್ಲ ಎಂದು ಟೀಕಿಸಿದ್ದಾರೆ. ಹಿಂದುಳಿದವರ ಆರ್ಥಿಕ ಸ್ಥಿತಿಯನ್ನು ತಿಳಿಯಲು ಹಾಗು ಅವರ ಯೋಗಕ್ಷೇಮವನ್ನು ಖಚಿತಪಡಿಸಲು ಜಾತಿಗಣತಿ ಅಗತ್ಯ ಎಂದು ರಾಹುಲ್ ಗಾಂಧಿ ಹೇಳಿದರು.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ವಿದೇಶಕ್ಕೆ ಹೋಗಿಲ್ಲ ಅಲ್ಲು ಅರ್ಜುನ್ ಇದರ ಹಿಂದಿದೆ ಮಾಸ್ಟರ್ ಪ್ಲ್ಯಾನ್

ಟಾಲಿವುಡ್ ನಟ ಅಲ್ಲು ಅರ್ಜುನ್ ಅವರು ಇತ್ತೀಚೆಗೆ ವಿದೇಶಕ್ಕೆ ಹಾರಿದ್ದರು. ಅವರು ಅಭಿನಯಿಸುತ್ತಿರುವ 'ಪುಷ್ಪ 2' ಸಿನಿಮಾದ ಶೂಟಿಂಗ್ ಹೈದರಾಬಾದ್ ನಲ್ಲಿ ಭರದಿಂದ ಸಾಗುತ್ತಿದೆ. ಈ ಕೆಲಸವನ್ನು ಬಿಟ್ಟು ಅವರು ವಿದೇಶಕ್ಕೆ ಹೋಗಿ, ಅಲ್ಲಿನ ಫಿಲ್ಮ್ ಫೆಸ್ಟಿವಲ್ ನಲ್ಲಿ ಭಾಗಿ ಆಗಿದ್ದರಿಂದ ಅನೇಕರಿಗೆ ಅಚ್ಚರಿ ಆಗಿತ್ತು. 'ಬರ್ಲಿನ್ ಫಿಲ್ಮ್ ಫಿಸ್ಟಿವಲ್ 'ನಲ್ಲಿ ಅಲ್ಲು ಅರ್ಜುನ್ ಹಾಜರಿ ಹಾಕಿದ್ದು ಯಾಕೆ ಎಂಬ ಬಗ್ಗೆ ಈಗ ಚರ್ಚೆ ನಡೆಯುತ್ತಿದೆ. ಅಂದಹಾಗೆ, ಸುಮ್ ಸುಮ್ಮನೆ ಅವರು ಕೆಲಸ ಬಿಟ್ಟು ಅಲ್ಲಿಗೆ ತೆರಳಿಲ್ಲ. ಅವರು 'ಬರ್ಲಿನ್ ಫಿಲ್ಮ್ ಫಿಸ್ಟಿವಲ್'ಗೆ ತೆರಳಿದ್ದರ ಹಿಂದೆ ಒಂದು ಮಾಸ್ಟರ್ ಪ್ಲ್ಯಾನ್ ಇದೆ ಎಂದು ಹೇಳಲಾಗುತ್ತಿದೆ.

'ಪುಷ್ಪ 2' ಸಿನಿಮಾಗೆ ನಿರ್ದೇಶಕ ಸುಕುಮಾರ್ ಅವರು ಆ ಯಕ್ಷನ್ -ಕಟ್ ಹೇಳುತ್ತಿದ್ದಾರೆ. ಇದು ದೊಡ್ಡ ಮಟ್ಟದಲ್ಲಿ ಮೂಡಿಬರುತ್ತಿದೆ. ನೂರಾರು ಕೋಟಿ ರೂಪಾಯಿ ಬಂಡವಾಳ ಸುರಿಯಲಾಗುತ್ತಿದೆ. ಅದಕ್ಕೆ ಸೂಕ್ತ ಪ್ರತಿಫಲ ಸಿಗಬೇಕು ಎಂದರೆ ವಿದೇಶಿ ಮಾರುಕಟ್ಟೆಯ ಮೇಲೆ ಗಮನ ಹರಿಸಬೇಕು. ಆ ಉದ್ದೇಶದಿಂದಲೇ ಅಲ್ಲು ಅರ್ಜುನ್ ಅವರು ಬರ್ಲಿನ್



ಫಿಲ್ಮ್ ಫೆಸ್ಟಿವಲ್ ಗೆ ತೆರಳಿದ್ದರು ಎಂಬ ಮಾಹಿತಿ ಕೇಳಿಬರುತ್ತಿದೆ.

ಪ್ಯಾನ್ ಇಂಡಿಯಾ ಮಟ್ಟದಲ್ಲಿ ಗುರುತಿಸಿಕೊಂಡಿರುವ ಅಲ್ಲು ಅರ್ಜುನ್ ಅವರು ಈಗ ಜಾಗತಿಕ ಮಟ್ಟದಲ್ಲಿ ಸದ್ದು ಮಾಡಲು ಸಜ್ಜಾಗಿದ್ದಾರೆ. 'ಬರ್ಲಿನ್ ಫಿಲ್ಮ್ ಫೆಸ್ಟಿವಲ್ 'ನಲ್ಲಿ ಭಾಗಿಯಾದ ಅವರು ಅಲ್ಲಿನ ಸಿನಿಪ್ರಿಯರ ಜೊತೆ ಸಂವಾದ ನಡೆಸಿದ್ದಾರೆ. ಅಲ್ಲಿನ ಸಿನಿಮೋತ್ಸವ ಯಾವ ರೀತಿ ಇರುತ್ತದೆ ಎಂಬುದನ್ನು ಅವರು ಗಮನಿಸಿದ್ದಾರೆ. ಕೆಲವು ವಿತರಕರ ಜೊತೆ ಮಾತುಕಥೆ ಕೂಡ ನಡೆಸಿದ್ದಾರೆ ಎನ್ನಲಾಗುತ್ತಿದೆ.

ತೆಲುಗು, ಕನ್ನಡ, ಮಲಯಾಳಂ, ತಮಿಳು ಮತ್ತು ಹಿಂದಿ ಮಾತ್ರವಲ್ಲದೇ ವಿದೇಶದ ಭಾಷೆಗಳಿಗೂ 'ಪುಷ್ಪ 2' ಸಿನಿಮಾವನ್ನು ಡಬ್ ಮಾಡಿ ರಿಲೀಸ್ ಮಾಡುವ ಸಾಧ್ಯತೆ ಇದೆ. ಅದಕ್ಕೆ ಅಲ್ಲಿನ ವಿತರಕರು ಮುಂದೆ ಬರಬೇಕು. ಅವರ ಮನವೊಲಿಸುವ ಸಲುವಾಗಿಯೇ ಅಲ್ಲು ಅರ್ಜುನ್ ಅವರು ಬರ್ಲಿನ್ ಫಿಲ್ಮ್ ಫೆಸ್ಟಿವಲ್ ಗೆ ಹೋಗಿದ್ದು ಎಂದು ಸುದ್ದಿ ಹಬ್ಬಿದೆ. 'ಮೈತ್ರಿ ಮೂವೀ ಮೇಕರ್ಸ್ ' ಸಂಸ್ಥೆಯ ಮೂಲಕ ಈ ಸಿನಿಮಾ ಸಿದ್ಧವಾಗುತ್ತಿದೆ. 'ಪುಷ್ಪ 3' ಸಿನಿಮಾವನ್ನು ಕೂಡ ಪ್ರೇಕ್ಷಕರು ನಿರೀಕ್ಷಿಸಬಹುದು ಎಂದು ಅಲ್ಲು ಅರ್ಜುನ್ ಅವರು ಇತ್ತೀಚೆಗೆ ಹೇಳಿದ್ದಾರೆ. ಅದರಿಂದ ಅಭಿಮಾನಿಗಳಲ್ಲಿನ ಕ್ರೇಜ್ ಹೆಚ್ಚಾಗಿದೆ. 'ಪುಷ್ಪ 2' ಸಿನಿಮಾಗೆ ಶೂಟಿಂಗ್ ನಡೆಯುತ್ತಿದೆ. ಅಲ್ಲು ಅರ್ಜುನ್ ಜೊತೆ ರಶ್ಮಿಕಾ ಮಂದಣ್ಣ, ಫಹಾದ್ ಫಾಸಿಲ್, ಡಾಲಿ ಧನಂಜಯ್ ಮುಂತಾದವರು ನಟಿಸುತ್ತಿದ್ದಾರೆ. ಆಗಸ್ಟ್ 15ರಂದು ಈ ಸಿನಿಮಾ ಬಿಡುಗಡೆ ಆಗಲಿದೆ. ಬಾಕ್ಸ್ ಆಫೀಸ್ ನಲ್ಲಿ ಎಷ್ಟು ಕಲೆಕ್ಷನ್ ಮಾಡಲಿದೆ ಎಂಬ ಕೌತುಕ ಎಲ್ಲರಲ್ಲೂ ಮೂಡಿದೆ.

# 1000 ಗಿಡ ನೆಟ್ಟು ಮಗಳ ಜನ್ಮದಿನ ಆಚರಿಸಿದ ಜೂಹಿ ಚಾವ್ಲಾ

ನಟಿ ಜೂಹಿ ಚಾವ್ಲಾ ಅವರು ಈಗ ಸಿನಿಮಾಗಳ ಆಯ್ಕೆಯಲ್ಲಿ ಸಖತ್ ಚ್ಯೂಸಿ ಆಗಿದ್ದಾರೆ. ಒಂದು ಕಾಲದಲ್ಲಿ ಟಾಪ್ ನಟಿಯರಲ್ಲಿ ಒಬ್ಬರಾಗಿದ್ದ ಅವರು ಈಗ ಸಂಪೂರ್ಣವಾಗಿ ಸಂಸಾರದ ಕಡೆ ಗಮನ ಹರಿಸಿದ್ದಾರೆ. ಇತ್ತೀಚೆಗೆ ಅವರು ಮಗಳ ಜನ್ಮದಿನವನ್ನು ವಿಶೇಷವಾಗಿ ಸೆಲೆಬ್ರೇಟ್ ಮಾಡಿದ್ದಾರೆ ಆ ಮೂಲಕ ಅವರು ಸುದ್ದಿ ಆಗಿದ್ದಾರೆ. ಸಾಮಾನ್ಯವಾಗಿ ಸೆಲೆಬ್ರಿಟಿಗಳ ಮಕ್ಕಳ ಬರ್ತ್ ಡೇ ಎಂದರೆ ಅದ್ದೂರಿತನ ಇರುತ್ತದೆ. ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಆಡಂಭರದ ಪ್ರದರ್ಶನ ಮಾಡಲಾಗುತ್ತದೆ. ಆದರೆ ಜೂಹಿ ಚಾವ್ಲಾ ಅವರು ಅಂಥದ್ದಕ್ಕೆಲ್ಲ ಬ್ರೇಕ್ ಹಾಕಿದ್ದಾರೆ. ಪುತ್ರಿ ಜಾಹ್ನವಿ ಮೆಹ್ತಾ ಹುಟ್ಟುಹಬ್ಬಕ್ಕೆ ಸಾವಿರ ಗಿಡ ನೆಡುವ ಮೂಲಕ ಜೂಹಿ ಚಾವ್ಲಾ ಅವರು ಎಲ್ಲರಿಗೂ ಮಾದರಿ ಆಗಿದ್ದಾರೆ.

ಜೂಹಿ ಚಾವ್ಲಾ ಅವರ ಪುತ್ರಿ ಜಾಹ್ನವಿ ಮೆಹ್ತಾ ಈಗ 23ನೇ ವಸಂತಕ್ಕೆ ಕಾಲಿಟ್ಟಿದ್ದಾರೆ. ಅವರಿಗೆ ಸಿನಿಮಾದಲ್ಲಿ ಆಸಕ್ತಿ ಇಲ್ಲ. ತಾಯಿಯಂತೆ ನಟಿಯಾಗಬೇಕು ಎಂದು ಜಾಹ್ನವಿ ಮೆಹ್ತಾ ಬಯಸಿಲ್ಲ. ಬದಲಿಗೆ ಅವರು ಬರಹಗಾರ್ತಿ ಆಗಬೇಕು ಎಂದು ತೀರ್ಮಾನಿಸಿದ್ದಾರೆ. ಆ ಕಾರಣದಿಂದ ಸ್ಟಾರ್ ಕಿಡ್ ಗಳ ಗುಂಪಿನಲ್ಲಿ ಅವರು ಹೆಚ್ಚು ಕಾಣಿಸಿಕೊಳ್ಳುವುದಿಲ್ಲ. ಈಗ ಅವರ ಹುಟ್ಟುಹಬ್ಬವನ್ನು ಬಹಳ ಅರ್ಥಪೂರ್ಣವಾಗಿ ಆಚರಿಸಲಾಗಿದೆ.

ಹುಟ್ಟುಹಬ್ಬದ ದಿನ ಪೋಷಕರು ಏನು ಗಿಫ್ಟ್ ನೀಡುತ್ತಾರೆ ಎಂಬ ಕುತೂಹಲ ಮಕ್ಕಳಿಗೆ ಇರುತ್ತದೆ. ಒಂದೆರಡು ವರ್ಷಕ್ಕೆ ಹಾಳಾಗುವಂತಹ ಗಿಫ್ಟ್ ನೀಡುವ ಬದಲು, ಜೀವನ ಪೂರ್ತಿ ಜೊತೆಯಾಗಿ ಇರುವಂತಹ ಉಡುಗೊರೆ ನೀಡಲು ಜೂಹಿ ಚಾವ್ಲಾ ನಿರ್ಧರಿಸಿದ್ದಾರೆ. ಮಗಳ ಜನ್ಮದಿನದ ಪ್ರಯುಕ್ತ ಅವರು ಸಾವಿರ



ಗಿಡಗಳನ್ನು ನೆಟ್ಟಿರುವುದಾಗಿ ಹೇಳಿದ್ದಾರೆ. ಆ ಮೂಲಕ ಅವರು ಪರಿಸರ ಪ್ರೇಮ ತೋರಿದ್ದಾರೆ.

'ನನ್ನ ಪುಟ್ಟ ಗೊಂಬೆ ಜಾಹ್ನವಿ ಸಲುವಾಗಿ, ಆಕೆಯ ಜನ್ಮದಿನದಂದು 1000 ಮರಗಳು. ಅವಳು ಮತ್ತು ಅವಳ ಪೀಳಿಗೆಯವರು ಶುದ್ಧವಾದ ಗಾಳಿ ಉಸಿರಾಡಲಿ, ನಕ್ಕು ನಲಿಯಲು ಅಳಿಲು, ಹಕ್ಕಿ, ಚಿಟ್ಟೆಗಳು ಬರಲಿ ಎಂಬ ಹಾರೈಕೆ ಮತ್ತು ಬಯಕೆ ನಮ್ಮದು. ಹ್ಯಾಪಿ ಬರ್ತ್ ಡೇ' ಎಂದು ಜೂಹಿ ಚಾವ್ಲಾ ಅವರು ಪೋಸ್ಟ್ ಮಾಡಿದ್ದಾರೆ. ಮಗಳ ಜೊತೆ ಇರುವ ಫೋಟೋ ಮತ್ತು ವಿಡಿಯೋವನ್ನು ಅವರು ಹಂಚಿಕೊಂಡಿದ್ದಾರೆ. ಇದಕ್ಕೆ ಕಮೆಂಟ್ ಮಾಡಿದ ಅಭಿಮಾನಿಗಳು ಮೆಚ್ಚುಗೆ ಸೂಚಿಸುತ್ತಿದ್ದಾರೆ. ಒಂದು ಕಾಲದಲ್ಲಿ ಜೂಹಿ ಚಾವ್ಲಾ ಅವರು ತುಂಬ ಬ್ಯುಸಿ ನಟಿ ಆಗಿದ್ದರು. ಹಿಂದಿ, ಕನ್ನಡ, ತಮಿಳು, ತೆಲುಗು, ಬೆಂಗಾಲಿ ಮುಂತಾದ ಭಾಷೆಯ ಸಿನಿಮಾಗಳಲ್ಲಿ ನಟಿಸಿ ಫೇಮಸ್ ಆದರು. ಕನ್ನಡದಲ್ಲಿ ಅವರು ನಟಿಸಿದ 'ಪ್ರೇಮಲೋಕ', 'ಕಿಂದರಿ ಜೋಗಿ' ಸಿನಿಮಾಗಳು ಈಗಲೂ ಅಭಿಮಾನಿಗಳ ಫೇವರಿಟ್ ಲಿಸ್ಟ್ ನಲ್ಲಿವೆ.




# 2 ವಾರ ಮೊದಲೇ ಬಿಡುಗಡೆ ಆಗಲಿದೆ ಆಡುಜೀವಿತಂ

ಕಡೆಯೂ ಪೃಥ್ವಿರಾಜ್ ಸುಕುಮಾರನ್ ಅವರ ಅಭಿಮಾನಿಗಳಿಗೆ ಸಿಹಿ ಸುದ್ದಿ ಸಿಕ್ಕಿದೆ. ಬಹಳ ವಿಳಂಬವಾಗಿದ್ದ 'ಆಡುಜೀವಿತಂ' ಸಿನಿಮಾ ಈಗ ಬಿಡುಗಡೆಗೆ ಸಜ್ಜಾಗಿದೆ. ಕೆಲವು ವರ್ಷಗಳ ಹಿಂದೆ ಸೆಟ್ಟೇರಿದ ಈ ಸಿನಿಮಾದ ರಿಲೀಸ್ ತಡವಾಗುತ್ತಲೇ ಇತ್ತು. ಏಪ್ರಿಲ್ 10ರಂದು ಬಿಡುಗಡೆ ಆಗಲಿದೆ ಎಂದು ಈ ಮೊದಲು ತಿಳಿಸಲಾಗಿತ್ತು. ಆದರೆ ಈಗ ನಟ ಪೃಥ್ವಿರಾಜ್ ಅವರು ಗುಡ್ ನ್ಯೂಸ್ ನೀಡಿದ್ದಾರೆ. ಎರಡು ವಾರ ಮುಂಚಿತವಾಗಿಯೇ 'ಆಡುಜೀವಿತಂ' ಸಿನಿಮಾ ತೆರೆಕಾಣಲಿದೆ. ಮಾರ್ಚ್ 28ರಂದು ಈ ಸಿನಿಮಾ ಬಿಡುಗಡೆ ಆಗುವುದು ಖಚಿತ. ಈ ಬಗ್ಗೆ ಚಿತ್ರತಂಡದ ಕಡೆಯಿಂದ ಅಧಿಕೃತ ಮಾಹಿತಿ ಲಭ್ಯವಾಗಿದೆ.

ಹೊಸ ಪೋಸ್ಟರ್ ಗಳ ಮೂಲಕ 'ಆಡುಜೀವಿತಂ' ಸಿನಿಮಾದ ರಿಲೀಸ್ ದಿನಾಂಕದ ಬಗ್ಗೆ ಮಾಹಿತಿ ಹಂಚಿಕೊಳ್ಳಲಾಗಿದೆ. 'ಕಾನ್ಸೆಪ್ಟ್ ಸಿದ್ಧಗೊಂಡು 16 ವರ್ಷದಿಂದ, ಸ್ಕ್ರಿಪ್ ಕೆಲಸ ಶುರುವಾಗಿ 10 ವರ್ಷದಿಂದ, ಶೂಟಿಂಗ್ ಶುರುವಾಗಿ 6 ವರ್ಷದಿಂದ ಆ ಕಾಯುವಿಕೆಯ ಅವಧಿ ಈಗ ಚಿಕ್ಕದಾಗಿದೆ' ಎಂದು ಪೋಸ್ಟರ್ ನಲ್ಲಿ ಬರೆಯಲಾಗಿದೆ. ಈ ಸಿನಿಮಾ ಮಾರ್ಚ್ 28ರಂದು ಹಲವು ಭಾಷೆಗಳಲ್ಲಿ ವಿಶ್ವಾದ್ಯಂತ ಬಿಡುಗಡೆ




ಆಗಲಿದೆ.

'ಆಡುಜೀವಿತಂ' ಸಿನಿಮಾದಲ್ಲಿ ಪೃಥ್ವಿರಾಜ್ ಸುಕುಮಾರನ್ ಅವರು ಪ್ರಮುಖ ಪಾತ್ರ ಮಾಡಿದ್ದಾರೆ. ಅವರ ಗೆಟಪ್ ತುಂಬ ಡಿಫರೆಂಟ್ ಆಗಿದೆ. ಮಲಯಾಳಂನ ಜನಪ್ರಿಯ 'ಆಡುಜೀವಿತಂ' ಕಾದಂಬರಿ ಆಧರಿಸಿ ಈ ಸಿನಿಮಾ ನಿರ್ಮಾಣ ಆಗಿದೆ. ಸತ್ಯ ಘಟನೆಗಳನ್ನು ಆಧರಿಸಿ ಬರೆದ ಈ ಕಾದಂಬರಿ 12 ಭಾಷೆಗಳಿಗೆ ಭಾಷಾಂತರಗೊಂಡಿದೆ. 90ರ ದಶಕದಲ್ಲಿ ಉತ್ತಮ ಭವಿಷ್ಯ ಹುಡುಕಿಕೊಂಡು ಬೇರೆ ದೇಶಕ್ಕೆ ಹೋದ ನಜೀಬ್ ಎಂಬ ಯುವಕನ ಕಹಾನಿಯನ್ನು ಈ ಸಿನಿಮಾ ಒಳಗೊಂಡಿದೆ.

ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಡೈರೆಕ್ಟರ್ ಬ್ಲೆಸ್ಸಿ ಥಾಮಸ್ ಅವರು 'ಆಡುಜೀವಿತಂ' ಸಿನಿಮಾಗೆ ನಿರ್ದೇಶನ ಮಾಡಿದ್ದಾರೆ. ಆ ಕಾರಣದಿಂದ ಬಹಳ ನಿರೀಕ್ಷೆ ಮೂಡಿದೆ. 'ವಿಷ್ಯುವಲ್ ರೊಮ್ಯಾನ್ಸ್ ' ಸಂಸ್ಥೆಯ ಮೂಲಕ ಈ ಸಿನಿಮಾ ನಿರ್ಮಾಣ ಆಗಿದೆ. ಹಾಲಿವುಡ್ ನಟ ಜಿಮ್ಮಿ ಜೀನ್ ಲೂಯಿಸ್ ಅವರು ಈ ಸಿನಿಮಾದಲ್ಲಿ ನಟಿಸಿದ್ದಾರೆ. ಅಮಲಾ ಪೌಲ್ ಮತ್ತು ಪೃಥ್ವಿರಾಜ್ ಅವರು ತೆರೆಹಂಚಿಕೊಂಡಿದ್ದಾರೆ. ಜನಪ್ರಿಯ ಅರಬ್ ನಟರಾದ ತಲಿಬ್ ಅಲ್ ಬಲುಶಿ, ರಿಕ್ ಅಬಿ ಅವರು ಕೂಡ ಪ್ರಮುಖ ಪಾತ್ರಗಳನ್ನು ನಿಭಾಯಿಸಿದ್ದಾರೆ.

ಈ ಸಿನಿಮಾದ ತಾಂತ್ರಿಕ ವಿಭಾಗದಲ್ಲಿ ನುರಿತ ತಂತ್ರಜ್ಞರು ಕೆಲಸ ಮಾಡಿದ್ದಾರೆ. ಆಸ್ಕರ್ ಪ್ರಶಸ್ತಿ ಪುರಸ್ಕೃತರಾದ ಎ.ಆರ್ . ರೆಹಮಾನ್ ಅವರು 'ಆಡುಜೀವಿತಂ' ಸಿನಿಮಾಗೆ ಸಂಗೀತ ನಿರ್ದೇಶನ ಮಾಡಿದ್ದಾರೆ. ರಸೂಲ್ ಪೂಕುಟ್ಟಿ ಅವರು ಸೌಂಡ್ ಡಿಸೈನ್ ಮಾಡಿದ್ದಾರೆ. ಸುನಿಲ್ ಕೆ.ಎಸ್ . ಛಾಯಾಗ್ರಹಣ, ಎ. ಶ್ರೀಕರ್ ಪ್ರಸಾದ್ ಅವರ ಸಂಕಲನ ಈ ಸಿನಿಮಾಗಿದೆ. ಪೃಥ್ವಿರಾಜ್ ಸುಕುಮಾರನ್ ಅವರ ವೃತ್ತಿಜೀವನದಲ್ಲಿ ಇದು ಗಮನಾರ್ಹ ಸಿನಿಮಾ ಆಗಿರಲಿದೆ ಎಂದು ಫ್ಯಾನ್ಸ್ ನಿರೀಕ್ಷಿಸಿದ್ದಾರೆ.

# ಐಪಿಎಲ್‌ನ ಸಾರ್ವಕಾಲಿಕ ಶ್ರೇಷ್ಠ ತಂಡ ಪ್ರಕಟ

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-17 ಆರಂಭಕ್ಕೆ ದಿನಗಣನೆ ಶುರುವಾಗಿದೆ. ಇತ್ತ ಐಪಿಎಲ್ ಕಾವೇರುತ್ತಿದ್ದಂತೆ ಅತ್ತ ಸ್ಟಾರ್ ಸ್ಪೋರ್ಟ್ಸ್ ಚಾನೆಲ್ ಸಾರ್ವಕಾಲಿಕ ಶ್ರೇಷ್ಠ ಐಪಿಎಲ್ ತಂಡವನ್ನು ಪ್ರಕಟಿಸಿದೆ. ಅಂದರೆ ಕಳೆದ 16 ಸೀಸನ್ ಗಳಲ್ಲಿ ಕಾಣಿಸಿಕೊಂಡ ಅತ್ಯುತ್ತಮ ಆಟಗಾರರನ್ನು ಒಳಗೊಂಡ ತಂಡವೊಂದನ್ನು ಸ್ಟಾರ್ ಸ್ಪೋರ್ಟ್ಸ್ ಪ್ಯಾನೆಲ್ ಸದಸ್ಯರಾದ ಲೆಜೆಂಡ್ಸ್ ಮ್ಯಾಥ್ಯೂ ಹೇಡನ್, ವಾಸಿಂ ಅಕ್ರಮ್, ಡೇಲ್ ಸ್ಟೇನ್ ಮತ್ತು ಟಾಮ್ ಮೂಡಿ ಅವರು ಆಯ್ಕೆ ಮಾಡಿದ್ದಾರೆ.

ಒಟ್ಟು 16 ಸದಸ್ಯರನ್ನು ಒಳಗೊಂಡಿರುವ ಈ ತಂಡದ ನಾಯಕರಾಗಿ ಮಹೇಂದ್ರ ಸಿಂಗ್ ಧೋನಿ ಆಯ್ಕೆಯಾಗಿದ್ದಾರೆ. ಹಾಗೆಯೇ ಆರಂಭಿಕರಾಗಿ ಸ್ಥಾನ ಪಡೆದಿರುವುದು ಡೇವಿಡ್ ವಾರ್ನರ್ ಮತ್ತು ರೋಹಿತ್ ಶರ್ಮಾ. ಮೂರನೇ ಕ್ರಮಾಂಕದಲ್ಲಿ ವಿರಾಟ್ ಕೊಹ್ಲಿ ಆಯ್ಕೆಯಾಗಿದ್ದಾರೆ.

ಹಾಗೆಯೇ ಈ ತಂಡದ ಪ್ಲೇಯಿಂಗ್ ಇಲೆವೆನ್ ನಲ್ಲಿ ವಿದೇಶಿ ಆಟಗಾರರಾಗಿ ಎಬಿ ಡಿವಿಲಿಯರ್ಸ್ , ರಶೀದ್ ಖಾನ್, ಡೇವಿಡ್ ವಾರ್ನರ್ ಮತ್ತು ಲಸಿತ್ ಮಾಲಿಂಗ ಆಯ್ಕೆಯಾಗಿದ್ದಾರೆ. ಅಂದರೆ ಆಡುವ ಬಳಗದಲ್ಲಿ ವೆಸ್ಟ್ ಇಂಡೀಸ್ ನ ಯಾವುದೇ ಆಟಗಾರರು ಆಯ್ಕೆಯಾಗಿಲ್ಲ.



ಇನ್ನು ಇಂಪ್ಯಾಕ್ಟ್ ಸಬ್ ಆಟಗಾರರಾಗಿ ಕ್ರಿಸ್ ಗೇಲ್, ಯುಜ್ವೇಂದ್ರ ಚಹಲ್, ಭುವನೇಶ್ವರ್ ಕುಮಾರ್ ಮತ್ತು ಆಂಡ್ರೆ ರಸೆಲ್ ಆಯ್ಕೆಯಾಗಿದ್ದಾರೆ. ಅದರಂತೆ ಐಪಿಎಲ್ ನ ಸಾರ್ವಕಾಲಿಕ ಶ್ರೇಷ್ಠ ತಂಡ ಈ ಕೆಳಗಿನಂತಿದೆ...

**ಸಾರ್ವಕಾಲಿಕ IPL XI:** ಡೇವಿಡ್ ವಾರ್ನರ್, ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ, ಎಬಿ ಡಿವಿಲಿಯರ್ಸ್ , ಸುರೇಶ್ ರೈನಾ, ಎಂಎಸ್ ಧೋನಿ, ಹಾರ್ದಿಕ್ ಪಾಂಡ್ಯ, ರವೀಂದ್ರ ಜಡೇಜಾ, ರಶೀದ್ ಖಾನ್, ಜಸ್ ಪ್ರೀತ್ ಬುಮ್ರಾ, ಲಸಿತ್ ಮಾಲಿಂಗ. ಸ್ಟೀಫನ್ ಫ್ಲೆಮಿಂಗ್ (ಕೋಚ್)

**ಇಂಪ್ಯಾಕ್ಟ್ ಸಬ್ ಆಟಗಾರರು:** ಯುಜ್ವೇಂದ್ರ ಚಹಲ್, ಕ್ರಿಸ್ ಗೇಲ್, ಭುವನೇಶ್ವರ್ ಕುಮಾರ್, ಆಂಡ್ರೆ ರಸೆಲ್.

# ರಾಮನಗರದಲ್ಲಿ ಗಲಾಟೆ ಮಾಡಿಸುತ್ತಿರುವುದೇ ಕುಮಾರಸ್ವಾಮಿ: ಡಿಕೆ ಶಿವಕುಮಾರ್ ವಾಗ್ದಾಳಿ

**ಕನಕಪುರ:** ರಾಮನಗರದಲ್ಲಿ ಗಲಾಟೆ ಮಾಡಿಸುತ್ತಿರುವುದೇ ಜೆಡಿಎಸ್ ಪಕ್ಷ ಮತ್ತು ಅದರ ನಾಯಕ ಹೆಚ್ ಡಿ ಕುಮಾರಸ್ವಾಮಿ ಎಂದು ಡಿಸಿಎಂ ಡಿಕೆ ಶಿವಕುಮಾರ್ ಗಂಭೀರ ಆರೋಪ ಮಾಡಿದ್ದಾರೆ. ವಕೀಲರ ಪ್ರತಿಭಟನೆ, ದಲಿತರ ಪ್ರತಿಭಟನೆ ಹಾಗೂ ಇತರ ಸಂಘರ್ಷಗಳ ಬಗ್ಗೆ ಕನಕಪುರದಲ್ಲಿ ಬುಧವಾರ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್, ಅಲ್ಲಿ (ರಾಮನಗರದಲ್ಲಿ) ನಡೆಯುತ್ತಿರುವ ಎಲ್ಲ ಗಲಾಟೆಗಳಿಗೆ ಕುಮಾರಸ್ವಾಮಿ ಅವರೇ ನೇರ ಕಾರಣ ಎಂದು ಹೇಳಿದ್ದಾರೆ.

ಈ ಮೂಲಕ, ರಾಮನಗರದಲ್ಲಿ ಡಿಕೆ ಸಹೋದರರಿಂದ ಅಶಾಂತಿ ಸೃಷ್ಟಿ ಎಂಬ ಜೆಡಿಎಸ್ ನಾಯಕರ ಆರೋಪಕ್ಕೆ ಅವರು ತಿರುಗೇಟು ನೀಡಿದ್ದಾರೆ.

ರಾಮನಗರ ಪಿಎಸ್ಐ ಸಸ್ಪೆಂಡ್ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಡಿಕೆ ಶಿವಕುಮಾರ್, ನಾನೂ ಕೂಡ ಹೇಳಿದ್ದೆ. ಶಾಸಕರೂ ಕಾನೂನು ಪ್ರಕಾರ ಕೈಗೊಳ್ಳಿ ಎಂದಿದ್ದರು. ಈ ಬಗ್ಗೆ ತನಿಖೆ ಮಾಡಿ ತಪ್ಪಿದ್ರೆ ಕ್ರಮ ತಗೊಳ್ಳಿ ಎಂದು ನಾವು ಅಧಿಕಾರಿಗಳಿಗೆ ಹೇಳಿದ್ದೆವು. ಇಲ್ಲಿ ಯಾರಿಗೂ ಅನ್ಯಾಯ ಆಗಬಾರದು ಅಂತ ಹೇಳಿದ್ದೆ. ಈ ವಿಚಾರದಲ್ಲಿ ಬಿಜೆಪಿ ಜೆಡಿಎಸ್ ನವರು



ರಾಜಕೀಯ ಮಾಡ್ತಿದ್ದಾರೆ. ಅವರಿಗೆ ಬೇರೆ ಕೆಲಸ ಇಲ್ಲ, ಮೊಸರಲ್ಲಿ ಕಲ್ಲು ಹುಡುಕುತ್ತಿದ್ದಾರೆ ಎಂದು ಹೇಳಿದರು.

ಬಿಜೆಪಿಯವರು ಅಶಾಂತಿ ಸೃಷ್ಟಿಸುವುದು ಮಾಮೂಲಿ. ಕೋಮು ವಿಚಾರಗಳನ್ನು ತೆಗೆದುಕೊಂಡು ರಾಜಕೀಯ ಮಾಡುತ್ತಾರೆ. ಬಿಜೆಪಿಯವರಿಗೆ ಅಲ್ಪಸಂಖ್ಯಾತರನ್ನು ಕಂಡರೆ ಆಗುವುದಿಲ್ಲ. ಸ್ಥಳೀಯ ಶಾಸಕ, ಅಧಿಕಾರಿ ಅಲ್ಪಸಂಖ್ಯಾತ ಸಮುದಾಯದವರು ಆಗಿರುವುದರಿಂದ ಬಿಜೆಪಿಯವರು ರಾಜಕೀಯ ಮಾಡುತ್ತಿದ್ದಾರೆ. ಮಂಗಳವಾರ ವಿಧಾನಸಭೆಯಲ್ಲೇ ಹೇಳಿದ್ದರಲ್ಲವೇ, ಮೈನಾರಿಟಿ ಅಧಿಕಾರಿ ಬೇಡ ಎಂಬುದಾಗಿ ಎಂದು ಬಿಜೆಪಿ ಹಾಗೂ ಜೆಡಿಎಸ್ ವಿರುದ್ಧ ಡಿಕೆ ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ರಾಮನಗರದಲ್ಲಿ ವಕೀಲರ ಪ್ರತಿಭಟನೆ ಹಾಗೂ ಒಟ್ಟಾರೆ ಬೆಳವಣಿಗೆ ಸಂಬಂಧ, ಐಜೂರು ಪೊಲೀಸ್ ಠಾಣೆ ಪಿಎಸ್ಐ ತನ್ವೀರ್ ಹುಸೇನ್ ರನ್ನು ಬುಧವಾರ ಬೆಳಗ್ಗೆ ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ. ರಾಮನಗರದ 40 ವಕೀಲರ ವಿರುದ್ಧ ತನ್ವೀರ್ ಹುಸೇನ್ ಎಫ್ ಐಆರ್ ದಾಖಲಿಸಿದ್ದರು. ಎಫ್ಐಆರ್ ರದ್ದು ಮಾಡುವಂತೆ ಆಗ್ರಹಿಸಿ ವಕೀಲರು ಸೋಮವಾರದಿಂದ ಪ್ರತಿಭಟನೆ ನಡೆಸುತ್ತಿದ್ದಾರೆ. ಈ ಪ್ರತಿಭಟನೆ ನಂತರ ರಾಜಕೀಯ ಆಯಾಮ ಪಡೆದುಕೊಂಡಿತ್ತು.

ಲೋಕಸಭಾ ಚುನಾವಣೆಗೆ ತಯಾರಿ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ನಾವು ಕಳೆದ ಚುನಾವಣೆ ಮುಗಿದ ಮರುದಿನದಿಂದಲೇ ಕೆಲಸ ಆರಂಭಿಸಿದ್ದೇವೆ. ನಮ್ಮನ್ನು ಕಟ್ಟಿ ಹಾಕುತ್ತೇವೆ ಎನ್ನುತ್ತಿದ್ದಾರಲ್ಲ, ಕಟ್ಟಿಹಾಕಲಿ ನೋಡೋಣ ಎಂದು ಸವಾಲು ಹಾಕಿದರು.

# 14 ಸ್ಥಾನ ಜಿಗಿದು ಟಾಪ್-20ಯಲ್ಲಿ ಸ್ಥಾನ ಪಡೆದ ಯಶಸ್ವಿ!

ಟೆಸ್ಟ್ ಕ್ರಿಕೆಟ್‌ನಲ್ಲಿ ಮಿಂಚುತ್ತಿರುವ ಟೀಂ ಇಂಡಿಯಾ ಯುವ ಆರಂಭಿಕ ಯಶಸ್ವಿ ಜೈಸ್ವಾಲ್ ಐಸಿಸಿ ಟೆಸ್ಟ್ ರ್‍ಯಾಂಕಿಂಗ್‌ನಲ್ಲಿ 14 ಸ್ಥಾನ ಜಿಗಿದು, ಟಾಪ್-20 ಸ್ಥಾನಗಳಲ್ಲಿ ಸ್ಥಾನ ಗಿಟ್ಟಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

29ನೇ ಸ್ಥಾನದಲ್ಲಿದ್ದ 22 ವರ್ಷದ ಯಶಸ್ವಿ ಜೈಸ್ವಾಲ್ 699 ಅಂಕಗಳೊಂದಿಗೆ 14 ಸ್ಥಾನ ಮೇಲಕ್ಕೆ ಜಿಗಿದು 15ನೇ ಸ್ಥಾನ ಪಡೆದುಕೊಂಡಿದ್ದಾರೆ. 12ನೇ ಸ್ಥಾನದಲ್ಲಿದ್ದ ರಿಷಭ್ ಪಂತ್ 706 ಅಂಕಗಳೊಂದಿಗೆ 14ನೇ ಸ್ಥಾನಕ್ಕೆ ಕುಸಿದಿದ್ದಾರೆ. ಇನ್ನೂ 13ನೇ ಸ್ಥಾನದಲ್ಲಿದ್ದ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ 731 ಅಂಕಗಳೊಂದಿಗೆ 12ನೇ ಸ್ಥಾನ ಭದ್ರಪಡಿಸಿಕೊಂಡಿದ್ದಾರೆ. ಟಾಪ್-10 ಪಟ್ಟಿಯಲ್ಲಿ ಟೀಂ ಇಂಡಿಯಾದ ಮಾಜಿ ನಾಯಕ ವಿರಾಟ್ ಕೊಹ್ಲಿ ಹೊರತುಪಡಿಸಿ ಮತ್ಯಾರು ಸ್ಥಾನ ಗಳಿಸಿಲ್ಲ. 752 ಅಂಕ ಗಳಿಸಿರುವ ವಿರಾಟ್ 7ನೇ ಸ್ಥಾನದಲ್ಲಿದ್ದರೆ, 893 ಅಂಕ ಪಡೆದಿರುವ ಕಿವೀಸ್‌ನ ಕೇನ್ ವಿಲಿಯಮ್ಸನ್ ಅಗ್ರಸ್ಥಾನದಲ್ಲಿದ್ದಾರೆ.

**ಕೊಹ್ಲಿ ದಾಖಲೆ ಮುರಿಯುವ ಸನಿಹ:** ಭಾರತ ಹಾಗೂ ಇಂಗ್ಲೆಂಡ್ ನಡುವಿನ ಟೆಸ್ಟ್ ಪಂದ್ಯಗಳಲ್ಲಿ ಬ್ಯಾಕ್ ಟು ಬ್ಯಾಕ್ ದ್ವಿಶತಕ ಸಿಡಿಸಿ ಮಿಂಚುತ್ತಿರುವ ಜೈಸ್ವಾಲ್ ಸದ್ಯದಲ್ಲೇ ವಿರಾಟ್ ಕೊಹ್ಲಿ ಅವರ ಅಪರೂಪದ ದಾಖಲೆಯೊಂದನ್ನು ಮುರಿಯುವ ಸನಿಹದಲ್ಲಿದ್ದಾರೆ. ಟೆಸ್ಟ್ ಸರಣಿಯೊಂದರಲ್ಲಿ ವೈಯಕ್ತಿಕವಾಗಿ ಗರಿಷ್ಠ ರನ್ ಗಳಿಸಿದ ಟೀಂ



ಇಂಡಿಯಾದ 3ನೇ ಬ್ಯಾಟರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗುವ ಸನಿಹದಲ್ಲಿ ಜೈಸ್ವಾಲ್ ಇದ್ದಾರೆ. ವೈಯಕ್ತಿಕವಾಗಿ ಗರಿಷ್ಠ ರನ್ ಗಳಿಸಿದ ಬ್ಯಾಟರ್‌ಗಳ ಪೈಕಿ 774 ರನ್ ಗಳಿಸಿರುವ ಸುನೀಲ್ ಗವಾಸ್ಕರ್ ಮೊದಲ ಸ್ಥಾನದಲ್ಲಿದ್ದರೆ, ವಿರಾಟ್ ಕೊಹ್ಲಿ 2ನೇ ಸ್ಥಾನದಲ್ಲಿದ್ದಾರೆ. ಈಗಾಗಲೇ 3 ಪಂದ್ಯಗಳಲ್ಲಿ 545 ರನ್ ಗಳಿಸಿರುವ ಯುವ ಆಟಗಾರ ಯಶಸ್ವಿ ಜೈಸ್ವಾಲ್‌ಗೆ ಕೊಹ್ಲಿ ದಾಖಲೆ ಮುರಿಯಲು ಇನ್ನೂ 147 ರನ್‌ಗಳ ಅಗತ್ಯವಿದೆ.

ಬ್ಯಾಟಿಂಗ್‌ನಲ್ಲಿ ಮಿಂಚುತ್ತಿರುವ ಯಶಸ್ವಿ ಜೈಸ್ವಾಲ್ ಸದ್ಯ 2023-25ರ ವಿಶ್ವಟೆಸ್ಟ್ ಚಾಂಪಿಯನ್ ಶಿಪ್ ಅಂಕಪಟ್ಟಿಲ್ಲಿ ಟಾಪ್‌ನಲ್ಲಿದ್ದಾರೆ. ಅತಿಹೆಚ್ಚು ಸ್ಕೋರರ್, ಉತ್ತಮ ಸರಾಸರಿ, ಅತಿಹೆಚ್ಚು ರನ್, ಅತಿಹೆಚ್ಚು ಸ್ಟ್ರೈಕ್‌ರೇಟ್, ಹೆಚ್ಚು ಬಾರಿ 50+ ರನ್ ಗಳಿಸಿದವರು, ಹೆಚ್ಚು ಬಾರಿ ಶತಕ ಸಿಡಿಸಿದವರು, ಹೆಚ್ಚು ಬೌಂಡರಿ, ಸಿಕ್ಸರ್ ಬಾರಿಸಿದವರ ಪಟ್ಟಿಯಲ್ಲೂ ಯಶಸ್ವಿ ಜೈಸ್ವಾಲ್ ಅಗ್ರಸ್ಥಾನದಲ್ಲಿರುವುದು ವಿಶೇಷ.

## ಖಾಸಗಿ ಶಾಲೆಗಳಲ್ಲಿ ನಾಡಗೀತೆ ಕಡ್ಡಾಯವಲ್ಲ ವಿವಾದ

# ಪ್ರಿಂಟ್ ಮಿಸ್ಟೇಕ್ ಎಂದ ತಂಗಡಗಿ

**ಬೆಂಗಳೂರು:** ಖಾಸಗಿ ಶಾಲೆಗಳಲ್ಲಿ ಇನ್ಮುಂದೆ ನಾಡಗೀತೆ ಹಾಡುವುದು ಕಡ್ಡಾಯವಲ್ಲ ಎಂಬರ್ಥದ ಸುತ್ತೋಲೆ ವಿವಾದಕ್ಕೆ ಕಾರಣವಾಗುತ್ತಿದ್ದಂತೆ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ ಸ್ಪಷ್ಟನೆ ನೀಡಿದ್ದಾರೆ. ಒಂದು ಸಣ್ಣ ಪ್ರಿಂಟ್ ಸಮಸ್ಯೆ ಆಗಿದೆ. ನಮಗೆ ಎಲ್ಲ ಶಾಲೆಗಳು ಒಂದೆ. ಆದೇಶ ಮಾಡಬೇಕಾದರೆ ಸರ್ಕಾರಿ ಶಾಲೆ ಅನುದಾನಿತ ಶಾಲೆ ಅಂತ ಪ್ರಿಂಟ್ ಮಿಸ್ಟೇಕ್ ಆಗಿದೆ. ಅದು ಎಲ್ಲ ಶಾಲೆಗಳು ಅಂತ ತಿದ್ದುಪಡಿ ಮಾಡಿಸುತ್ತೇವೆ. ನಮ್ಮ ಸರ್ಕಾರಕ್ಕೆ ಕನ್ನಡ ಬಗ್ಗೆ ಕಾಳಜಿ ಇದೆ. ನಾವು ಬಹಳ ಸ್ಪಷ್ಟವಾಗಿ ಇದ್ದೇವೆ. ಆದೇಶ ಪ್ರತಿಯ ಸಾಧಕ-ಬಾಧಕ ಹೇಳಬೇಕು. ಸಹಜವಾಗಿ ಸುತ್ತೋಲೆ ಒಳಗಡೆ ಸಣ್ಣಪುಟ್ಟ ಸಮಸ್ಯೆ ಆಗಿದೆ, ತಿದ್ದಿಕೊಳ್ಳುತ್ತೇವೆ ಎಂದು ಹೇಳಿದರು.

ಇನ್ನು ನಾಮಫಲಕಗಳಲ್ಲಿ ಶೇ60 ರಷ್ಟು ಕನ್ನಡ ಕಡ್ಡಾಯ ವಿಚಾರವಾಗಿ ಮಾತನಾಡಿದ ಅವರು, ಸದನದಲ್ಲಿ ಚರ್ಚೆ ಆಗಿದೆ. ಕೈಗಾರಿಗೆಗಳಿಗೂ ಹೆಸರು ಹಾಕುವ ಪದ್ಧತಿ ಬರುತ್ತಿದೆ. ವಿಧಾನಸೌಧದ ಮುಂಭಾಗ ಭುವನೇಶ್ವರಿ ದೇವಿ ಪ್ರತಿಮೆ ನಿರ್ಮಾಣ ವಿಚಾರವಾಗಿ ಮಾತನಾಡಿದ ಅವರು, ಅದರ ಬಗ್ಗೆ ಚರ್ಚೆ ಆಗುತ್ತಿದೆ. ವಿಧಾನಸೌಧ ಮುಂಭಾಗದಲ್ಲಿ



ಜಾಗ ಗುರುತಿಸಲಾಗಿದೆ. ಆದಷ್ಟು ಬೇಗ ಇದರ ಬಗ್ಗೆ ಮಾಹಿತಿ ಒದಗಿಸುತ್ತೇವೆ ಎಂದರು.

ರಾಜ್ಯ ಸರ್ಕಾರದ ಸುತ್ತೋಲೆಯಲ್ಲಿ ಏನಿದೆ

ರಾಷ್ಟ್ರ ಕವಿ, ಜ್ಞಾನಪೀಠ ಪುರಸ್ಕೃತ ಡಾ. ಕುವೆಂಪುರವರ 'ಜಯ ಭಾರತ ಜನನಿಯ ತನುಜಾತೆ' ಕವನವನ್ನು 'ನಾಡಗೀತೆ'ಯಾಗಿ ಘೋಷಿಸುವ ಕುರಿತು ಹೊರಡಿಸಲಾದ ಸರ್ಕಾರದ ಆದೇಶ ಹಾಗೂ ಅದಕ್ಕೆ ಫೆಬ್ರವರಿ 1ರಂದು ಮಾಡಲಾದ ತಿದ್ದುಪಡಿ ಪ್ರಕಾರ, 'ಎಲ್ಲಾ ಶಾಲೆಗಳಲ್ಲಿ ನಾಡಗೀತೆಯನ್ನು ದೈನಂದಿನ ಚಟುವಟಿಕೆಗಳು ಆರಂಭವಾಗುವ ಮುನ್ನ ಹಾಗೂ ಸರ್ಕಾರದ ಇಲಾಖೆಗಳು ಹಾಗೂ ನಿಗಮ, ಮಂಡಳಿ, ಪ್ರಾಧಿಕಾರ ಮುಂತಾದ ಅರೆ ಸರ್ಕಾರಿ ಸಂಸ್ಥೆಗಳ ಅಧಿಕೃತ ಕಾರ್ಯಕ್ರಮಗಳನ್ನು ಏರ್ಪಡಿಸುವ ಪ್ರಾರಂಭದಲ್ಲಿ ಹಾಡುವುದು' ಎಂಬುದರ ಬದಲಾಗಿ, 'ಸರ್ಕಾರಿ ಶಾಲೆಗಳು, ಅನುದಾನಿತ ಶಾಲೆಗಳಲ್ಲಿ ನಾಡಗೀತೆಯನ್ನು ದೈನಂದಿನ ಚಟುವಟಿಕೆಗಳು ಆರಂಭವಾಗುವ ಮುನ್ನ ಹಾಗೂ ಸರ್ಕಾರದ ಇಲಾಖೆಗಳು ಹಾಗೂ ನಿಗಮ, ಮಂಡಳಿ, ಪ್ರಾಧಿಕಾರ ಮುಂತಾದ ಅರೆ ಸರ್ಕಾರಿ ಸಂಸ್ಥೆಗಳ ಅಧಿಕೃತ ಕಾರ್ಯಕ್ರಮಗಳನ್ನು ಏರ್ಪಡಿಸುವ ಪ್ರಾರಂಭದಲ್ಲಿ ಹಾಡುವುದು' ಎಂದು ತಿದ್ದಿ ಓದಿಕೊಳ್ಳತಕ್ಕದ್ದು ಎಂಬುದಾಗಿ ರಾಜ್ಯ ಸರ್ಕಾರ ಹೊರಡಿಸಿದ್ದ ಸುತ್ತೋಲೆಯಲ್ಲಿ ಉಲ್ಲೇಖಿಸಲಾಗಿದೆ.

ಈ ಮೇಲಿನ ಸುತ್ತೋಲೆಯಲ್ಲಿ 'ಎಲ್ಲಾ ಶಾಲೆಗಳಲ್ಲಿ ಕಾರ್ಯಕ್ರಮದ ಆರಂಭದಲ್ಲಿ ನಾಡಗೀತೆಯನ್ನು ಹಾಡುವುದು' ಎಂಬುದರ ಬದಲಾಗಿ, 'ಸರ್ಕಾರಿ ಶಾಲೆಗಳು, ಅನುದಾನಿತ ಶಾಲೆಗಳಲ್ಲಿ' ಎಂದು ಬದಲಾಯಿಸಲಾಗಿದೆ. ಹೀಗಾಗಿ ಖಾಸಗಿ ಶಾಲೆಗಳಲ್ಲಿ ನಾಡಗೀತೆ ಹಾಡುವುದು ಕಡ್ಡಾಯವಲ್ಲ ಎಂಬರ್ಥ ಬರುತ್ತದೆ. ಹಾಗೆಂದು, ಖಾಸಗಿ ಶಾಲೆಗಳಲ್ಲಿ ನಾಡಗೀತೆ ಹಾಡಬಾರದು ಎಂದು ಸರ್ಕಾರದ ಸುತ್ತೋಲೆಯಲ್ಲಿ ಉಲ್ಲೇಖಿಸಲಾಗಿಲ್ಲ ಎಂಬುದೂ ಗಮನಾರ್ಹ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com